24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 16 | ನವದೆಹಲಿ | ಬೆಲೆ ₹10 | ಜುಲೈ 12 2026, ಭಾನುವಾರ

# ಮೌನವಾಯಿತು ಗಾನಕೋಗಿಲೆ: ಮೇರುಗಾಯಕಿ ಜಾನಕಿ ವಿಧಿವಶ

**ಮೈಸೂರು, ಜು.11: ವಯೋಸಹಜ ಕಾಯಿಲೆಗಳಿಂದ ಬಳಲುತ್ತಿದ್ದ ಬಹುಭಾಷಾ ಹಿನ್ನೆಲೆ ಗಾಯಕಿ ಎಸ್. ಜಾನಕಿ (88) ಅವರು ಹೃದಯಾಘಾತದಿಂದ ಮೈಸೂರಿನ ಅಪೋಲೋ ಆಸ್ಪತ್ರೆಯಲ್ಲಿ ಶನಿವಾರ ನಿಧನರಾದರು.**

ಕಣ್ಣಿನ ಚಿಕಿತ್ಸೆಗಾಗಿ ವಾರದ ಅವಧಿಗೆಂದು 2019ರಲ್ಲಿ ಮೈಸೂರಿಗೆ ಬಂದಿದ್ದ ಜಾನಕಿ ಅವರು, ಸಮೀಪದ ಮಹದೇವಪುರದ ತೊಟ್ಟಿಮನೆಯಲ್ಲಿ ತಂಗಿದ್ದರು. ತೊಟ್ಟಿಮನೆಯ ಅಂದಕ್ಕೆ ಮನಸೋತು ಅದೇ ಮನೆಯಲ್ಲಿ ಇಬ್ಬರು ಪುತ್ರರು ಹಾಗೂ ಕೆಲಸದವರೊಂದಿಗೆ ಕೆಲಕಾಲ ನೆಲೆಸಿದ್ದರು. ಈ ವರ್ಷದ ಜನವರಿಯಲ್ಲಿ ಪುತ್ರ ಮುರಳಿಕೃಷ್ಣ ಅವರ ನಿಧನದಿಂದ ಜಾನಕಿ ಅವರು ದುಃಖಕ್ಕೀಡಾಗಿದ್ದರು. ನಂತರ ಮೈಸೂರಿನ ಬೋಗಾದಿಯ ಮನೆಯಲ್ಲಿ ವಾಸಿಸುತ್ತಿದ್ದರು.

1938ರ ಏಪ್ರಿಲ್ 23ರಂದು ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಪಲ್ಲಪಟ್ಲ ಗ್ರಾಮದಲ್ಲಿ ಜನಿಸಿದ ಜಾನಕಿ ಅಮ್ಮ, ಬಾಲ್ಯದಿಂದಲೇ ಸಂಗೀತದ ಕಡೆಗೆ ಅಪಾರ ಆಕರ್ಷಣೆ ಹೊಂದಿದ್ದರು. ಶಾಸ್ತ್ರೀಯ ಸಂಗೀತಗಾರರಾದ ಪೈಡಿಸ್ವಾಮಿ ಅವರಿಂದ ಸಂಗೀತದ ಆರಂಭಿಕ ಪಾಠಗಳನ್ನು ಕಲಿತರು. ಸಂಗೀತ ಕ್ಷೇತ್ರದಲ್ಲಿ ದೊಡ್ಡ ಸಾಧನೆ ಮಾಡಬೇಕೆಂಬ ಕನಸಿನೊಂದಿಗೆ ಜಾನಕಿ ಅವರು 20ನೇ ವಯಸ್ಸಿನಲ್ಲೇ ಅಂದಿನ ಮದ್ರಾಸ್ (ಈಗಿನ ಚೆನ್ನೈ) ನಗರಕ್ಕೆ ಹೆಜ್ಜೆ ಇಟ್ಟರು. ಅಲ್ಲಿಂದ ಆರಂಭವಾದ ಅವರ ಗಾಯನ ಪಯಣ ಭಾರತೀಯ ಚಿತ್ರರಂಗದ ಇತಿಹಾಸದಲ್ಲಿ ದಾಖಲೆ ಬರೆಯಿತು.

### ಮೈಸೂರಿನ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದ ಗಾನಕೋಗಿಲೆ

### 20 ಭಾಷೆಗಳಲ್ಲಿ 48 ಸಾವಿರ ಹಾಡುಗಳ ಗಾಯನ



1957ರಲ್ಲಿ ಪ್ರಸಿದ್ಧ ಸಂಗೀತ ನಿರ್ದೇಶಕ ಟಿ. ಚಲಪತಿರಾವ್ ಅವರ ತಮಿಳು ಚಿತ್ರ ವಿಧಿಯಿನ್ ವಿಳಯಾಟ್ಟು ಜಾನಕಿ ಅವರು ಹಾಡಿದ ಪ್ರಥಮ ಚಿತ್ರ. ಮುಂದೆ ತೆಲುಗಿನ ಚಿತ್ರ ಎಂ.ಎಲ್.ಎ, ಕನ್ನಡದ ಕೃಷ್ಣಗಾರುಡಿ ಇವೆಲ್ಲಾ ಒಂದಾದ ನಂತರ ಒಂದು ಎಂದು ಹರಿದು ಬರಲು ಪ್ರಾರಂಭವಾದವು. ಮಲಯಾಳಂ ಚಿತ್ರಗಳಲ್ಲಿ ಕೂಡಾ ಹಾಡಲು ಪ್ರಾರಂಭಿಸಿದರು.

ಎಸ್. ಜಾನಕಿ ಅವರ ಕಂಠಸಿರಿಗೆ ಯಾವುದೇ ಭಾಷೆಯ ಗಡಿ ಇರಲಿಲ್ಲ. ಕನ್ನಡ, ತೆಲುಗು, ತಮಿಳು, ಮಲಯಾಳಂ, ಹಿಂದಿ, ಸಂಸ್ಕೃತ, ಒಡಿಶಾ, ತುಳು, ಉರ್ದು, ಪಂಜಾಬಿ, ಬಂಗಾಳಿ ಹಾಗೂ ಕೊಂಕಣಿ ಸೇರಿದಂತೆ 20ಕ್ಕೂ ಹೆಚ್ಚು ಭಾರತೀಯ ಭಾಷೆಗಳಲ್ಲಿ ಅವರು ಹಾಡಿದ್ದಾರೆ. ತಮ್ಮ ಸುದೀರ್ಘ ವೃತ್ತಿಜೀವನದಲ್ಲಿ ಬರೋಬ್ಬರಿ 48 ಸಾವಿರಕ್ಕೂ ಹೆಚ್ಚು ಗೀತೆಗಳಿಗೆ ಧ್ವನಿಯಾಗುವ ಮೂಲಕ ಇಡೀ ದೇಶದ ಮನೆಮನ ಗೆದ್ದಿದ್ದರು.

ಎಸ್.ಜಾನಕಿ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರಪತಿ ದ್ರೌಪದಿ ಮುರ್ಮು, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಜಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ಎಲ್ಲ ಕ್ಷೇತ್ರಗಳ ಅಸಂಖ್ಯ ಗಣ್ಯರು, ಮಹಾಮಾನ್ಯರು, ಕಂಬನಿ ಮಿಡಿದಿದ್ದಾರೆ.

### ಪ್ರಶಸ್ತಿ – ಪುರಸ್ಕಾರ

ಕನ್ನಡ ಚಿತ್ರರಂಗದಲ್ಲಿ ಅವರು ಹಾಡಿದ ಸದಾಹಸಿರು ಗೀತೆಗಳಿಗೆ ಕರ್ನಾಟಕ ಸರ್ಕಾರವು ಹಲವು ಬಾರಿ ಅತ್ಯುತ್ತಮ ಹಿನ್ನೆಲೆ ಗಾಯಕಿ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಿದೆ. ಎಸ್. ಜಾನಕಿ ಅವರಿಗೆ 4 ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ, 33 ವಿವಿಧ ರಾಜ್ಯ ಚಲನಚಿತ್ರ ಪ್ರಶಸ್ತಿ, ಗೌರವ ಡಾಕ್ಟರೇಟ್, ತಮಿಳುನಾಡು ರಾಜ್ಯ ಸರ್ಕಾರದಿಂದ ಕಲೈಮಾಮಣಿ ಪ್ರಶಸ್ತಿ, ಕರ್ನಾಟಕ ಸರ್ಕಾರದಿಂದ ರಾಜ್ಯೋತ್ಸವ ಪ್ರಶಸ್ತಿ ಹಾಗೂ 2013ರಲ್ಲಿ ಪದ್ಮಭೂಷಣ ಪ್ರಶಸ್ತಿ ಸಿಕ್ಕಿದೆ.

### ಕನ್ನಡ ಚಿತ್ರರಂಗದಲ್ಲಿ ಜಾನಕಿ ಅಮ್ಮನ ಸಾಧನೆ

70–80ರ ದಶಕದಲ್ಲಿ ಜಾನಕಿ ಅವರು ಸಾಕಷ್ಟು ಹಾಡುಗಳನ್ನು ಹಾಡಿದರು. ಅವರಷ್ಟು ಜನಪ್ರಿಯತೆ ಪಡೆದ ಮತ್ತೊಬ್ಬರು ಕನ್ನಡದಲ್ಲಿ ಇರಲಿಲ್ಲ. ವರನಟ ಡಾ. ರಾಜ್‌ಕುಮಾರ್ ಹಾಗೂ ಎಸ್. ಜಾನಕಿ ಅವರ ಕಾಂಬಿನೇಷನ್ ಕನ್ನಡ ಚಿತ್ರರಂಗದ ಗೋಲ್ಡನ್ ಎರಾ. 'ಎಲ್ಲೆಲ್ಲಿ ನೋಡಲಿ ನಿನ್ನನ್ನೇ ಕಾಣುವೆ' ಮತ್ತಿತರ ನೂರಾರು ಸದಾಹಸಿರು ಯುಗಳ ಗೀತೆಗಳನ್ನು ಜಾನಕಿ ಹಾಡಿದ್ದಾರೆ. ಗಾನಗಂಧರ್ವ ಎಸ್ಪಿ ಬಾಲಸುಬ್ರಹ್ಮಣ್ಯಂ ಮತ್ತು ಎಸ್. ಜಾನಕಿ ಅವರ ಧ್ವನಿಯಲ್ಲಿ ಮೂಡಿಬಂದ ರೋಮ್ಯಾಂಟಿಕ್ ಹಾಡುಗಳು ಇಂದಿಗೂ ಯುವಕರ ನೆಚ್ಚಿನ ಹಾಡುಗಳಾಗಿವೆ. ವಿಶೇಷವಾಗಿ ಕನ್ನಡ ಚಿತ್ರರಂಗದಲ್ಲಿ ಅವರ ಸ್ಪಷ್ಟ ಉಚ್ಚಾರಣೆ ಮತ್ತು ಧ್ವನಿ ಬದಲಾವಣೆಯ ಚಾತುರ್ಯ ಕನ್ನಡಿಗರು ಅವರನ್ನು ತಮ್ಮದೇ ರಾಜ್ಯದ ಗಾಯಕಿ ಎನ್ನುವಂತೆ ಅಪ್ಪಿಕೊಳ್ಳುವಂತೆ ಮಾಡಿತ್ತು. ಪೂಜಿಸಲೆಂದೇ ಹೂಗಳ ತಂದೆ, ಗಗನವು ಎಲ್ಲೋ, ಒಮ್ಮೆ ನಿನ್ನನ್ನು, ನಂಬಿದೆ ನಿನ್ನ, ಬರೆದೆ ನೀನು, ನಗಿಸಲು ನೀನು ಇದು ಕನ್ನಡದಲ್ಲಿ ಹಾಡಿದ ಜನಪ್ರಿಯ ಗೀತೆಗಳಲ್ಲಿ ಕೆಲವಷ್ಟೇ.ಎಸ್. ಜಾನಕಿ ಅವರಿಗೆ ಇದ್ದ ವಿಶೇಷ ಶಕ್ತಿಯೆಂದರೆ ಅದು ಧ್ವನಿ ಬದಲಾವಣೆ. ಸಣ್ಣ ಮಗುವಿನ ಧ್ವನಿಯಿಂದ ಹಿಡಿದು ಪ್ರೌಢ ಮಹಿಳೆಯ ಧ್ವನಿಯವರೆಗೆ, ಕೇವಲ ಗಾಯನದ ಮೂಲಕವೇ ನಟನೆಯ ಭಾವನೆಗಳನ್ನು ತರುತ್ತಿದ್ದ ಅದ್ಭುತ ಗಾಯಕಿಯಾಗಿದ್ದರು.

## ಸಿಎಂ ಡಿ.ಕೆ.ಶಿವಕುಮಾರ್ ಸಾಂತ್ವನ

### ಸರಕಾರಿ ಗೌರವಗಳೊಂದಿಗೆ ಅಂತಿಮ ಸಂಸ್ಕಾರಕ್ಕೆ ಸೂಚನೆ

**ಬೆಂಗಳೂರು, ಜು. 11:** ಮೈಸೂರಿನಲ್ಲಿ ನಿಧನರಾಗಿರುವ ಗಾನಕೋಗಿಲೆ ಎಸ್ ಜಾನಕಿ ಅವರ ಕುಟುಂಬ ಸದಸ್ಯರಿಗೆ ಸಿಎಂ ಡಿ.ಕೆ.ಶಿವಕುಮಾರ್ ಅವರು ಶನಿವಾರ ರಾತ್ರಿ ದೂರವಾಣಿ ಕರೆ ಮಾಡಿ ಸಾಂತ್ವನ ಹೇಳಿದರು.

ಮೇರುಗಾಯಕಿ ಜಾನಕಿ ಅವರ ಪಾರ್ಥಿವ ಶರೀರದ ಅಂತಿಮ ಸಂಸ್ಕಾರವನ್ನು ಸಕಲ ಸರಕಾರಿ ಗೌರವಗಳೊಂದಿಗೆ ನೆರವೇರಿಸಲು ಮುಖ್ಯಮಂತ್ರಿ ಸೂಚನೆ ನೀಡಿದ್ದಾರೆ.

ಸರಕಾರದ ಪರವಾಗಿ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಸಚಿವ ಯತೀಂದ್ರ ಸಿದ್ದರಾಮಯ್ಯ ಅವರನ್ನು ನಿಯೋಜಿಸಲಾಗಿದೆ.

### ಇಂದು ಸಂಜೆ ಅಂತ್ಯಕ್ರಿಯೆ

ಎಚ್.ಡಿ. ಕೋಟೆಯ ಕಣೇನಹುಂಡಿಯಲ್ಲಿರುವ ಸಾಕುಮಗ ನವೀನ್ ಅವರ ಫಾರ್ಮ್‌ಹೌಸ್‌ನಲ್ಲಿ ಭಾನುವಾರ ಸಂಜೆ ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಲಿದೆ.

## ಸಚಿವ ವಿ.ಸೋಮಣ್ಣ ಕಂಬನಿ

ಗಾನ ನಿಲ್ಲಿಸಿದ ಗಾನ ಕೋಗಿಲೆ ಎಸ್. ಜಾನಕಿ ಅವರಿಗೆ ರೈಲ್ವೆ ಮತ್ತು ಜಲಶಕ್ತಿ ಸಚಿವ ವಿ. ಸೋಮಣ್ಣ ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಭಗವಂತ ಶ್ರೀಯುತರ ಆತ್ಮಕ್ಕೆ ಸದ್ಗತಿ ಕರುಣಿಸಲಿ. ಕುಟುಂಬಸ್ಥರು ಹಾಗೂ ಅಪಾರ ಸಂಖ್ಯೆಯ ಅಭಿಮಾನಿಗಳಲ್ಲಿ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಸೋಮಣ್ಣ ಪ್ರಾರ್ಥಿಸಿದ್ದಾರೆ..

# ಕಷ್ಟ ಹೇಳಿಕೊಂಡು ಬರುವವರಿಗೆ ಮಾನವೀಯತೆಯಿಂದ ಸ್ಪಂದಿಸಿ

### ಕಾನೂನು ಚೌಕಟ್ಟಿನಲ್ಲಿ ಪರಿಹಾರ, ಅಲೆದಾಡಿಸಬೇಡಿ: ಡಿ.ಕೆ. ಶಿವಕುಮಾರ್



**ಬೆಂಗಳೂರು, ಜು.11:** ಕಷ್ಟ ಹೇಳಿಕೊಂಡು ಬರುವ ಜನರಿಗೆ ಮಾನವೀಯತೆಯಿಂದ ಸ್ಪಂದಿಸಿ, ಕಾನೂನು ಚೌಕಟ್ಟಿನಲ್ಲಿ ಅವರ ಸಮಸ್ಯೆಗೆ ಪರಿಹಾರ ಒದಗಿಸಿ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.

ರಾಜ್ಯ ಸರ್ಕಾರಿ ನೌಕರರ ಸಂಘ ವತಿಯಿಂದ ಅರಮನೆ ಮೈದಾನದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿ, ಜನರು ದೇವರ ಬಳಿ ತಮಗೆ ಬೇಕಾಗಿರುವುದನ್ನು ಪ್ರಾರ್ಥಿಸಲು ದೇವಾಲಯಗಳಿಗೆ ಹೋಗುತ್ತಾರೆ. ಅದೇ ರೀತಿ ಕಷ್ಟಗಳಿಗೆ ಪರಿಹಾರ ಪಡೆಯಲು ಸರ್ಕಾರಿ ನೌಕರರು, ಶಾಸಕರು ಹಾಗೂ ಮಂತ್ರಿಗಳ ಬಳಿ ಬರುತ್ತಾರೆ. ನಾವು ಎಷ್ಟು ಶ್ರದ್ಧೆಯಿಂದ ಅವರ ಸೇವೆ ಮಾಡುತ್ತೇವೆ ಎಂಬುದು ಮುಖ್ಯ. ನೀವೆಲ್ಲರೂ ವಿಶ್ವರೂಪ ದರ್ಶನದ ಪ್ರತಿಮೆ ನೀಡಿ ನನಗೆ ಸನ್ಮಾನ ಮಾಡಿದ್ದೀರಿ. ಪರಮೇಶ್ವರ್ ಅವರಿಗೆ ಬುದ್ಧನ ಪ್ರತಿಮೆ ನೀಡಿದ್ದೀರಿ. ವಿಶ್ವರೂಪ ದರ್ಶನ ಬರುವುದು ಧರ್ಮದ ಪರವಾದ ಯುದ್ಧಕ್ಕೆ ನಿಂತಾಗ. ದುರ್ಯೋಧನ ಯುದ್ಧ ಮಾಡುವ ಮುನ್ನ ತಾಯಿಯ ಆಶೀರ್ವಾದ ಪಡೆಯಲು ಹೋದಾಗ ಆ ತಾಯಿ ಎಲ್ಲಿ ಧರ್ಮ ಇರುತ್ತದೆಯೋ ಅಲ್ಲಿ ಗೆಲುವು ಇದ್ದೇ ಇರುತ್ತದೆ ಎಂದು ಆಶೀರ್ವಾದ ಮಾಡುತ್ತಾಳೆ. ಅರ್ಜುನ ಯುದ್ಧದ ನಡುವೆ ತನ್ನ ಅಸ್ತ್ರವನ್ನು ಇಳಿಸಿದಾಗ ಶ್ರೀಕೃಷ್ಣ ಪರಮಾತ್ಮ ವಿಶ್ವರೂಪ ದರ್ಶನ ತೋರುತ್ತಾನೆ ಎಂದರು. ನೊಂದು ಬಂದ ಜನರಿಗೆ ಸರಿಯಾದ ರೀತಿಯಲ್ಲಿ ಸೇವೆ ಮಾಡುವುದು ನಮ್ಮ ನಿಮ್ಮ ಕರ್ತವ್ಯ. ನೀವೆಲ್ಲರೂ ಕರ್ನಾಟಕದ ರಾಯಭಾರಿಗಳು. ನೀವು ಸಾರ್ವಜನಿಕರ ಬದುಕಿನಲ್ಲಿ ಸೇವೆ ಮಾಡುತ್ತಿದ್ದೀರಿ. ಈ ಅಧಿಕಾರ ಕೇವಲ ನನ್ನದಲ್ಲ, ನಿಮ್ಮೆಲ್ಲರದ್ದು. ಹುದ್ದೆಯಿಂದ ಯಾರೂ ದೊಡ್ಡವರಾಗಲು ಸಾಧ್ಯವಿಲ್ಲ. ಆ ಹುದ್ದೆಗೆ ಯಾವ ರೀತಿ ಗೌರವ ಕಾಪಾಡುತ್ತೇವೆ ಎಂಬುದು ಮುಖ್ಯ. ಪದವಿ ಮನುಷ್ಯನ ಹಿಂದೆ ಇರುತ್ತದೆ. ಆದರೆ ಮನುಷ್ಯತ್ವದ ಗುಣ ನಮ್ಮ ಮುಂದೆ ಕಾಣಲು ಅವಕಾಶವಿದೆ ಎಂದು ತಿಳಿಸಿದರು.

ಜನಸಾಮಾನ್ಯರ ನೋವು ಬಗೆಹರಿಸಲು ಪ್ರಜಾಸೇವೆ ಎಂಬ ಪ್ರತ್ಯೇಕ ಸಚಿವಾಲಯ ಪ್ರಾರಂಭಕ್ಕೆ ತೀರ್ಮಾನಿಸಲಾಗಿದೆ. ಎಲ್ಲಾ ಮಂತ್ರಿಗಳು ಮೊದಲನೇ ಹಾಗೂ ಮೂರನೇ ಶನಿವಾರ ಒಂದೊಂದು ತಾಲ್ಲೂಕು ಕಚೇರಿಗೆ ಹೋಗಿ ಅಲ್ಲಿನ ಜನರ ಸಮಸ್ಯೆ ಆಲಿಸಬೇಕು. ಜನರ ಮನೆ ಬಾಗಿಲಿಗೆ ಸರ್ಕಾರವನ್ನು ಕೊಂಡೊಯ್ಯಲು ಈ ತೀರ್ಮಾನ ಮಾಡಲಾಗಿದೆ. ನೀವುಗಳು ಯಾವಾಗ ಜನರ ಸಮಸ್ಯೆಯನ್ನು ಪ್ರಾಮಾಣಿಕವಾಗಿ ಬಗೆಹರಿಸುತ್ತೀರಾ ಆಗ ಯಶಸ್ಸು ಸಾಧಿಸಲು ಸಾಧ್ಯ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು. ಜನರ ಸಮಸ್ಯೆ ಬಗೆಹರಿಸಲು ಮಾರ್ಗ ಹುಡುಕಬೇಕೇ ಹೊರತು, ಕೊಂಕು ಹುಡುಕಿ ಅವರನ್ನು ತಿರುಗಿಸಬಾರದು. ಬಡ ಜನರಿಗೆ ಯಾವ ರೀತಿ ಸಹಾಯ ಮಾಡಬಹುದು ಎಂಬುದನ್ನು ಗಮನದಲ್ಲಿಟ್ಟುಕೊಂಡು ಸೇವೆ ಮಾಡಿ. ನೀವು ನಾವೆಲ್ಲ ಸೇರಿ ಒಟ್ಟಾಗಿ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿ ಕರೆ ನೀಡಿದರು.

### ನಮ್ಮ – ನಿಮ್ಮ ಒಪ್ಪಂದಕ್ಕೆ ಸ್ವಾಮೀಜಿಗಳೇ ಸಾಕ್ಷಿ

ನಮ್ಮ ಜೊತೆ ನೀವಿರಿ, ನಿಮ್ಮ ಜೊತೆ ನಾವಿರುತ್ತೇವೆ. ನನ್ನ ಹಾಗೂ ಪರಮೇಶ್ವರ್ ಅವರ ಮುಂದೆ ಬೇಡಿಕೆಗಳನ್ನು ಇಟ್ಟಿದ್ದೀರಿ ಅದರ ಬಗ್ಗೆ ಸಮಿತಿಯ ವರದಿ ಬಂದ ಮೇಲೆ ಸಂಪುಟದಲ್ಲಿ ಚರ್ಚೆ ನಡೆಸಿ ನಂತರ ನಿಮ್ಮ ಜೊತೆಯೂ ಚರ್ಚೆ ನಡೆಸಲಾಗುವುದು. ನಮ್ಮ ಕೈಯಲ್ಲಿ ಏನು ಸಹಾಯ ಆಗುವುದೋ ಅದನ್ನು ಮಾಡುತ್ತೇವೆ.ಓಪಿಎಸ್/ಎನ್‌ಪಿಎಸ್ ಬಗ್ಗೆ ನಮಗೆ ಗಮನವಿದೆ. ನಾನು ಹಾಗೂ ಪರಮೇಶ್ವರ್ ಅವರು ನಿಮ್ಮ ಜೊತೆ ಇರುತ್ತೇವೆ ಎಂದು ಮಾತು ಕೊಡುತ್ತೇನೆ. ನಮ್ಮ ನಡುವಿನ ಈ ಒಪ್ಪಂದಕ್ಕೆ ನಿರ್ಮಲಾನಂದನಾಥ ಹಾಗೂ ಸಿದ್ದಲಿಂಗ ಸ್ವಾಮೀಜಿಗಳೇ ಸಾಕ್ಷಿ. ಪರಮೇಶ್ವರ್ ಅವರ ಬಳಿ ಬಾಂಡ್ ಪೇಪರ್ ಇದೆ. ಎಲ್ಲರೂ ಸೇರಿ ಇದಕ್ಕೆ ಸಹಿ ಹಾಕಬೇಕು. ಅದರಲ್ಲಿ ಮುಂದಿನ ಬಾರಿಗೆ ನಿಮ್ಮ– ನಮ್ಮ ಸರ್ಕಾರ ಒಟ್ಟಿಗೆ ಕೆಲಸ ಮಾಡಬೇಕು. ಯಾವುದೇ ಹೆಚ್ಚು ಕಡಿಮೆ ಆಗುವುದಿಲ್ಲ ತಾನೇ ಎಂದು ಹೇಳಿದರು.

## ಫೆ.28ರ ಹತ್ಯೆಗೆ ಪ್ರತೀಕಾರ ಮೊಜ್ತಾಬಾ ಖಮೇನಿ ಶಪಥ

**ಟೆಹರಾನ್, ಜು.11:** ಆಯತೊಲ್ಲಾ ಅಲಿ ಖಮೇನಿ ಸೇರಿ ಅಮೆರಿಕ–ಇಸ್ರೇಲ್ ನಡೆಸಿದ ಜಂಟಿ ದಾಳಿಯಲ್ಲಿ ಫೆ.28ರಂದು ಹತರಾದ ಎಲ್ಲಾ ಹುತಾತ್ಮರ ರಕ್ತಕ್ಕೆ ಪ್ರತೀಕಾರ ತೀರಿಸಿಕೊಳ್ಳುತ್ತೇವೆ ಎಂದು ಇರಾನ್ ಸರ್ವೋಚ್ಚ ನಾಯಕ ಮೊಜ್ತಾಬಾ ಖಮೇನಿ ಪ್ರತಿಜ್ಞೆ ಮಾಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಸಂದೇಶ ಹಂಚಿಕೊಂಡಿದ್ದು, ತಂದೆಯ ಸಾವಿಗೆ ಪ್ರತೀಕಾರ ತೀರಿಸಿಕೊಳ್ಳುವುದು ಇಡೀ ರಾಷ್ಟ್ರದ ಬೇಡಿಕೆಯಾಗಿದೆ. ಅದು ಖಂಡಿತವಾಗಿಯೂ ನಡೆದೇ ತೀರುತ್ತದೆ ಎಂದು ಘೋಷಿಸಿದ್ದಾರೆ. ಇರಾನ್‌ನ ಸೇಡು "ಅನಿವಾರ್ಯವಾಗಿ ನಡೆಯಲೇಬೇಕು. ಈ ವಿಷಯವು ಅವರ ವೈಯಕ್ತಿಕ ಅಸ್ತಿತ್ವ ಅಥವಾ ಇತರ ಅಧಿಕಾರಿಗಳ ಅಸ್ತಿತ್ವವನ್ನು ಅವಲಂಬಿಸಿಲ್ಲ. ನಾವು ಇದ್ದರೂ ಇಲ್ಲದಿದ್ದರೂ ಅದು ನಿಜವಾಗುತ್ತದೆ ಎಂದು ಖಮೇನಿ ಬರೆದುಕೊಂಡಿದ್ದಾರೆ.



# ಒನ್ ನೇಷನ್, ಒನ್ ಎಲೆಕ್ಷನ್: ಕಾಂಗ್ರೆಸ್‌ನಿಂದ ಅಪಪ್ರಚಾರ



■ **ದೇಶದ ಒಕ್ಕೂಟ ವ್ಯವಸ್ಥೆಗೆ ಧಕ್ಕೆ ಎಂಬ ಹೇಳಿಕೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ವಾಗ್ದಾಳಿ**

**ಗದಗ, ಜು.11:** ಒನ್ ನೇಷನ್, ಒನ್ ಎಲೆಕ್ಷನ್ (ಒಂದು ದೇಶ, ಒಂದು ಚುನಾವಣೆ) ಜಾರಿಗೆ ಬಂದರೆ ದೇಶದ ಫೆಡರಲ್ ಅಥವಾ ಒಕ್ಕೂಟ ವ್ಯವಸ್ಥೆ ಹಾಳಾಗುತ್ತದೆ ಎನ್ನುವುದೆಲ್ಲಾ ಸಂಪೂರ್ಣ ಅರ್ಥವಿಲ್ಲದ ಸಂಗತಿ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಯೋಜನೆಯ ಜಾರಿ ಪ್ರಕ್ರಿಯೆ ಹಾಗೂ ಇದರ ವಿರುದ್ಧ ಕಾಂಗ್ರೆಸ್ ಪಕ್ಷ ಮತ್ತು ರಾಹುಲ್ ಗಾಂಧಿ ಅಪಪ್ರಚಾರ ಮಾಡುತ್ತಿದ್ದಾರೆ ಎಂದು ತೀವ್ರ ವಾಗ್ದಾಳಿ ನಡೆಸಿದರು.

ಒನ್ ನೇಷನ್, ಒನ್ ಎಲೆಕ್ಷನ್ ಜಾರಿ ಪ್ರಕ್ರಿಯೆಯ ಕುರಿತು ಮಾಹಿತಿ ನೀಡಿದ ಅವರು, ಸದ್ಯ ಈ ವಿಷಯಕ್ಕೆ ಸಂಬಂಧಿಸಿದಂತೆ ಜಂಟಿ ಸಂಸದೀಯ ಸಮಿತಿಯ (ಜೆಪಿಸಿ) ವರದಿಯನ್ನು ಮೊದಲು ಲೋಕಸಭಾ ಸ್ಪೀಕರ್‌ಗೆ ಸಲ್ಲಿಕೆ ಮಾಡಬೇಕಾಗುತ್ತದೆ. ಸ್ಪೀಕರ್ ಅವರಿಗೆ ವರದಿ ಸಲ್ಲಿಕೆಯಾದ ಬಳಿಕವಷ್ಟೇ ಅದು ಸರ್ಕಾರದ ಕೈ ಸೇರಲಿದೆ. ತದನಂತರ ಕೇಂದ್ರ ಸರ್ಕಾರವು ಆ ವರದಿಯನ್ನು ಸಮಗ್ರವಾಗಿ ಪರಿಶೀಲನೆ ನಡೆಸಲಿದ್ದು, ಆ ಬಳಿಕವಷ್ಟೇ ಮುಂದಿನ ಅಂತಿಮ ತೀರ್ಮಾನಗಳನ್ನು ಕೈಗೊಳ್ಳಲಾಗುತ್ತದೆ ಎಂದು ಪ್ರಕ್ರಿಯೆಯನ್ನು ವಿವರಿಸಿದರು.

ಕಾಂಗ್ರೆಸ್ ಮಾಡುತ್ತಿರುವ ಒಕ್ಕೂಟ ವ್ಯವಸ್ಥೆಯ ಧಕ್ಕೆ ಆರೋಪವನ್ನು ತಳ್ಳಿಹಾಕಿದ ಜೋಶಿ, ಕೇಂದ್ರ ಸರ್ಕಾರವು ರಾಜ್ಯಗಳ ಅಧಿಕಾರವನ್ನು ಕಸಿದುಕೊಂಡರೆ ಮಾತ್ರ ಫೆಡರಲ್ ವ್ಯವಸ್ಥೆಗೆ ಧಕ್ಕೆ ಉಂಟಾಗುತ್ತದೆ. ಆದರೆ, ಸಂವಿಧಾನದತ್ತವಾಗಿ ರಾಜ್ಯಗಳಿಗೆ ಸಿಕ್ಕಿರುವ ಅಧಿಕಾರಗಳು ಮತ್ತು ಹಕ್ಕುಗಳು ಹಾಗೇ ಇರುತ್ತವೆ. ಹೀಗಿದ್ದೂ ಒಕ್ಕೂಟ ವ್ಯವಸ್ಥೆ ಹಾಳಾಗುತ್ತದೆ ಎಂದು ಕಾಂಗ್ರೆಸ್ ಪಕ್ಷದವರು ಹಾಸ್ಯಾಸ್ಪದ ಹಾಗೂ ಸತ್ಯಕ್ಕೆ ದೂರವಾದ ಮಾತು ಎಂದು ಕಿಡಿಕಾರಿದರು.

ಇದೇ ವೇಳೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಕೂಡ ಕಿಡಿಕಾರಿದ್ದಾರೆ. ರಾಹುಲ್ ಗಾಂಧಿ ಅವರು ಪಕ್ಷದಲ್ಲಿ ಇರೋದರಿಂದಲೇ ಕಾಂಗ್ರೆಸ್ ಸ್ಥಿತಿ ಇಂದು ಹೀಗಾಗಿದೆ. ಅವರು ಯಾವಾಗಲೂ ಅತ್ಯಂತ ಬಾಲಿಶವಾಗಿ ಮಾತನಾಡುತ್ತಾರೆ. ಕಾಂಗ್ರೆಸ್‌ನಲ್ಲಿ ಯಾರಾದರೂ ಉಳಿದ ನಾಯಕರು ಲಾಜಿಕಲ್ ಆಗಿ ಅಥವಾ ಅರ್ಥಗರ್ಭಿತವಾಗಿ ಮಾತನಾಡಲು ಹೋದರೆ, ಅವರನ್ನು ಪಕ್ಷದಲ್ಲಿ ಮೂಲೆಗುಂಪು ಮಾಡಲಾಗುತ್ತದೆ. ರಾಹುಲ್ ಗಾಂಧಿ ಅವರು ಹೇಗೆ ಮಾತನಾಡುತ್ತಾರೋ, ಉಳಿದವರೂ ಸಹ ಅದೇ ರಾಗ ಆಡಬೇಕು ಎನ್ನುವ ಸ್ಥಿತಿ ಅಲ್ಲಿ ನಿರ್ಮಾಣವಾಗಿದೆ ಎಂದು ಟೀಕಿಸಿದರು.

### ಕಾಂಗ್ರೆಸ್‌ಗೆ ಅಸ್ತಿತ್ವವಿಲ್ಲ ಎಂದರೆ ಪ್ರಧಾನಿ ಹೇಗೆ ಕಾರಣ?

ಇಡೀ ದೇಶದಲಿ ಬಿಜೆಪಿಗೆ ನ್ಯಾಷನಲ್ ಪ್ರೆಸೆನ್ಸ್ (ರಾಷ್ಟ್ರೀಯ ಅಸ್ತಿತ್ವ) ಇದೆ, ಇದರಿಂದ ಒನ್ ನೇಷನ್ ಒನ್ ಎಲೆಕ್ಷನ್ ತಂದರೆ ಬಿಜೆಪಿಗೆ ಅನುಕೂಲವಾಗುತ್ತದೆ ಎಂದು ಕಾಂಗ್ರೆಸ್‌ನವರು ಅಳುತ್ತಿದ್ದಾರೆ. ದೇಶದಲ್ಲಿ ನಿಮಗೆ ರಾಷ್ಟ್ರೀಯ ಅಸ್ತಿತ್ವ ಇಲ್ಲದೇ ಹೋದರೆ ಅದಕ್ಕೆ ಪ್ರಧಾನಿ ನರೇಂದ್ರ ಮೋದಿಯವರು ಕಾರಣವೇ. ಅದು ನಿಮ್ಮ ರಾಹುಲ್ ಗಾಂಧಿಯವರ ತಪ್ಪು. ಇಲ್ಲಿರುವ ಕಾಂಗ್ರೆಸ್ ಮಂತ್ರಿಗಳಿಗೆ ಹಾಗೂ ರಾಜ್ಯಾಧ್ಯಕ್ಷರಿಗೆ ತಾವು ಏನು ಮಾತನಾಡುತ್ತಿದ್ದೇವೆ ಎನ್ನುವ ಕನಿಷ್ಠ ಪ್ರಜ್ಞೆಯೂ ಇಲ್ಲ ಎಂದು ಪ್ರಲ್ಹಾದ ಜೋಶಿ ಲೇವಡಿ ಮಾಡಿದರು. ದೇಶದಲ್ಲಿ ಅಸಹಿಷ್ಣುತೆ ಹಾಗೂ ಪ್ರಜಾಪ್ರಭುತ್ವ ವಿರೋಧಿ ನೀತಿಗಳು ಆರಂಭವಾಗಿದ್ದು ಪಂಡಿತ ಜವಾಹರಲಾಲ್ ನೆಹರು ಅವರ ಕಾಲದಲ್ಲೇ. ಅದನ್ನು ಮುಂದುವರಿಸಿದ ಇಂದಿರಾ ಗಾಂಧಿಯವರು ರಾಜ್ಯ ಸರ್ಕಾರಗಳನ್ನು ತಮ್ಮ ಮನಬಂದಂತೆ ವಿಸರ್ಜನೆ ಮಾಡಲು ತೀವ್ರ ಯತ್ನ ನಡೆಸಿದ್ದರು. ಆದರೆ, ಇತಿಹಾಸ ಪ್ರಸಿದ್ಧ ಎಸ್.ಆರ್. ಬೊಮ್ಮಾಯಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್‌ನ ಒಂಬತ್ತು ಜನ ನ್ಯಾಯಾಧೀಶರ ಪೀಠವು ಐತಿಹಾಸಿಕ ತೀರ್ಪು ನೀಡಿದ ಬಳಿಕವಷ್ಟೇ ಕಾಂಗ್ರೆಸ್‌ನವರು ಹಿಂದೆ ಸರಿದರು. ಇಲ್ಲದಿದ್ದರೆ ತಮ್ಮ ಮನಸ್ಸಿಗೆ ಬಂದಾಗಲೆಲ್ಲಾ ಚುನಾವಣೆ ಮಾಡುತ್ತಿದ್ದರು. ಪಕ್ಷವನ್ನು ಗಟ್ಟಿಯಾಗಿ ಕಟ್ಟುವುದು ಆಯಾ ಪಾರ್ಟಿಯ ಕೆಲಸ. ನೀವು ಬೇಕಿದ್ದರೆ ರಾಹುಲ್ ಗಾಂಧಿ ನೇತೃತ್ವದಲ್ಲೇ ಪಕ್ಷ ಕಟ್ಟಿ ಜನಾಭಿಪ್ರಾಯ ಗಳಿಸಿ, ಅದಕ್ಕೆ ನಮ್ಮದೇನು ಅಭ್ಯಂತರವಿಲ್ಲ ಎಂದು ಪ್ರಲ್ಹಾದ ಜೋಶಿ ಸವಾಲು ಹಾಕಿದರು.

"ಶರಣರ ಬರವೆಮಗೆ ಪ್ರಾಣ ಜೀವಾಳವಯ್ಯಾ"

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, (ರಿ.) ಮೈಸೂರು

Akhila Bharata Sharana Sahitya Parishath (Regd.), Mysore

ದೆಹಲಿ ಪ್ರದೇಶ ಶರಣ ಸಾಹಿತ್ಯ ಪರಿಷತ್ತು, ನವದೆಹಲಿ

Dehali Pradesha Sharana Sahitya Parishath, New Delhi



Cordially invite you to the Birth Anniversary of Dr. F.G.Halakatti, the father of Vachana Literature

ವಚನ ಸಾಹಿತ್ಯ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ ಜಯಂತ್ಯುತ್ಸವಕ್ಕೆ ತಮಗೆಲ್ಲರಿಗೂ ಸ್ವಾಗತ

ದಿನಾಂಕ 12-07-2026 ಭಾನುವಾರ, ಮಧ್ಯಾಹ್ನ 4:00 ಗಂಟೆಗೆ | Date 12-07-2026, Sunday, 4.00 p.m.

ಸ್ಥಳ : ವಿಚಾರ ಸಂಕಿರಣ ಭವನ, ದೆಹಲಿ ಕರ್ನಾಟಕ ಸಂಘ, ಆರ್.ಕೆ. ಪುರಂ, ನವದೆಹಲಿ

Venue : Seminar Hall, Delhi Karnataka Sangha, R.K. Puram, New Delhi

ದಿವ್ಯ ಸಾನಿಧ್ಯ : ಪೂಜ್ಯ ಶ್ರೀ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಸುತ್ತೂರು ಸಾಂಸ್ಕೃತಿಕ ಕೇಂದ್ರ, ಸಾಕೇತ್, ನವದೆಹಲಿ

ಮುಖ್ಯ ಅತಿಥಿಗಳು : ಶ್ರೀ ಕಿರಿತ್ ಜವಳಿ, ವಕೀಲರು, ಸುಪ್ರಿಂಕೋರ್ಟ್, ನವದೆಹಲಿ

: ಡಾ. ಅಶ್ವಿನಿ ಬಾಳಪ್ಪನವರ, ಪ್ರಾಧ್ಯಾಪಕರು, ಮೌಲಾನಾ ಆಜಾದ್ ದಂತ ವೈದ್ಯಕೀಯ ಸಂಸ್ಥೆ, ನವದೆಹಲಿ

ಅಧ್ಯಕ್ಷತೆ : ಶ್ರೀ ಚಂದ್ರಶೇಖರ ಎನ್. ಪಿ., ಅಧ್ಯಕ್ಷರು, ಅಭಾಶಸಾಪ, ನವದೆಹಲಿ

ಸ್ವಾಗತ : ಶ್ರೀ ಶಿವಪ್ಪ ಎಂ., ಪ್ರಧಾನ ಕಾರ್ಯದರ್ಶಿ, ಅಭಾಶಸಾಪ, ನವದೆಹಲಿ

ಪ್ರಾಸ್ತವಿಕ ನುಡಿ : ಶ್ರೀಮತಿ ಸುಜಾತ ನಿಂಬಾಳ, ಅಧ್ಯಕ್ಷರು, ಕದಳಿ ವೇದಿಕೆ

ನಿರೂಪಣೆ : ಶ್ರೀ ರಾಜಕುಮಾರ್ ನೀಲೂರ, ಉಪಾಧ್ಯಕ್ಷರು, ಅಭಾಶಸಾಪ, ನವದೆಹಲಿ

ತಾಂತ್ರಿಕ ನಿರ್ವಹಣೆ : ಶ್ರೀ ರಾಜಶೇಖರ್ ಪಾಟೀಲ್, ಕೋಶಾಧ್ಯಕ್ಷರು, ಅಭಾಶಸಾಪ, ನವದೆಹಲಿ

ವಂದನಾರ್ಪಣೆ : ಶ್ರೀ ಎಚ್.ಎಸ್. ತೇಲಿ, ಜಂಟಿ ಕಾರ್ಯದರ್ಶಿ, ಅಭಾಶಸಾಪ, ನವದೆಹಲಿ

ಸಾಂಸ್ಕೃತಿಕ ಕಾರ್ಯಕ್ರಮಗಳು

ದೆಹಲಿ ಮತ್ತು ಎನ್‌ಸಿಆರ್ ನಲ್ಲಿನ ಕನ್ನಡ ಮಕ್ಕಳು, ಕಲಾವಿದರು ಹಾಗೂ ಕನ್ನಡೇತರ ಕಲಾವಿದರಿಂದ ವಚನ ಗಾಯನ, ವಾಚನ ಹಾಗೂ ನೃತ್ಯ


ದಾಸೋಹ ಪ್ರಸಾದ ರಾತ್ರಿ 7.00 ಗಂಟೆಗೆ

ಸರ್ವರಿಗೂ ಆದರದ ಸ್ವಾಗತ

ಅಧ್ಯಕ್ಷರು, ಪದಾಧಿಕಾರಿಗಳು ಮತ್ತು ಸದಸ್ಯರು, ಕಾರ್ಯಕಾರಿ ಸಮಿತಿ

ದೆಹಲಿ ಪ್ರದೇಶ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ, ನವದೆಹಲಿ

## ನಿತ್ಯ ಪಂಚಾಂಗ 12.07.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ,
ಉತ್ತರಾಯಣ-ದಕ್ಷಿಣಾಯಣ ಗ್ರೀಷ್ಮ ಋತು,
ಚಾಂದ್ರಮಾನ, ನಿಜ ಜ್ಯೇಷ್ಠ – ಆಷಾಡ ಮಾಸ

ನಿಜ ಜ್ಯೇಷ್ಠ ಬಹುಳ, ತ್ರಯೋದಶಿ,
ಮೃಗಶಿರ ನಕ್ಷತ್ರ, ಪ್ರದೋಷ, ಮಾಸಶಿವರಾತ್ರಿ,
ನಿವೃತ್ತನಾಥ ಪುಣ್ಯ ದಿನ,
ಜಗದ್ಗುರು ಶ್ರೀವಿದ್ಯಾರಣ್ಯ ಆರಾದನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 12.00 |
| ಮಂಗಳ | ಮ. 3.25–4.59 | 9.00–10.30 | 12.00– 1.30 |
| ಬುಧ | ಮ.12.16–1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42– 12.16 | 3.00– 4.30 | 7.30– 9.00 |
| ಶನಿ | ಬೆ. 9.07– 10.41 | 1.30– 3.00 | 6.00– 7.30 |

# ದಸರಾ ಉತ್ಸವದಲ್ಲಿ ಕಂಬಳ ಸೇರ್ಪಡೆಗೆ ಎಚ್.ಡಿ.ಕೆ. ವಿರೋಧ

**ಮೈಸೂರು, ಕರಾವಳಿ ಭಾಗದ ಜನರಿಗೆ ನೋವುಂಟು ಮಾಡುವ ಉದ್ದೇಶವಿಲ್ಲ**

**ಬೆಂಗಳೂರು, ಜು.11:** ಪರಂಪರಾಗತವಾಗಿ ತನ್ನದೇ ಆದ ವೈಶಿಷ್ಟ್ಯದಿಂದ ಕಂಗೊಳಿಸುತ್ತಿರುವ ಮೈಸೂರು ದಸರಾ ಉತ್ಸವದಲ್ಲಿ ಕಂಬಳವನ್ನು ಸೇರಿಸುವ ಅಗತ್ಯವಿಲ್ಲ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಇದುವರೆಗೆ ನಡೆದುಕೊಂಡು ಬಂದಿರುವ ದಸರಾ ಉತ್ಸವಕ್ಕೆ ಧಕ್ಕೆ ತರುವ ಪ್ರಯತ್ನ ಖಂಡಿತಾ ಬೇಡ ಎಂದಿದ್ದಾರೆ. ಕಂಬಳವು ಕರಾವಳಿ ಭಾಗದ ಸಾಂಸ್ಕೃತಿಕ ಶ್ರೇಷ್ಠತೆ ಮತ್ತು ನಂಬಿಕೆಯ ಪ್ರತೀಕ. ಭೌಗೋಳಿಕವಾಗಿ ಆ ಭಾಗಕ್ಕೆ ಮಾತ್ರ ಸರಿಹೊಂದುವ ಆಚರಣೆಯೂ ಆಗಿದೆ. ಅದನ್ನು ಮೈಸೂರಿಗೆ ತಂದು ದೈವಿಕ ಹಿನ್ನೆಲೆಯ ಆ ಪರಂಪರೆ, ಪಾವಿತ್ರ್ಯತೆಗೆ ಧಕ್ಕೆ ತರುವುದನ್ನು ಒಪ್ಪಲಾಗದು ಎಂದು ಹೇಳಿದ್ದಾರೆ. ಕರಾವಳಿ ಪ್ರದೇಶ ಹಸಿರು ಮತ್ತು ನೀರಿನ ಸಂಗಮ. ಇಂತಹ ಪ್ರಾಕೃತಿಕ ಹಿನ್ನೆಲೆಯಲ್ಲಿ ಕಂಬಳವನ್ನು ಕಣ್ತುಂಬಿ ಕೊಳ್ಳುವುದೇ ಧನ್ಯತೆಯ ಅನುಭವ ಎನ್ನುವುದು ನನ್ನ ಭಾವನೆ. ಹೀಗಾಗಿ ಮೈಸೂರು ಮತ್ತು ಕರಾವಳಿ ಭಾಗದ ಜನರಿಗೆ ನೋವುಂಟು ಮಾಡುವುದು ಬೇಕಿಲ್ಲ ಎಂದು ತಿಳಿಸಿದ್ದಾರೆ.

# ಭೂಪರಿವರ್ತನೆ ಆಗದ ಎಚ್‌ಎಂಟಿ ಭೂಮಿ ಅರಣ್ಯವಾಗಿಯೇ ಉಳಿಯುತ್ತದೆ

**ಜಾಗದ ಮೇಲಿನ ಹಕ್ಕು ಸರ್ಕಾರಕ್ಕಿದೆಯೇ ಹೊರತು, ಸಂಸ್ಥೆಗಲ್ಲ: ಸಚಿವ ಈಶ್ವರ್ ಖಂಡ್ರೆ ಸ್ಪಷ್ಟನೆ**



**ಬೆಂಗಳೂರು, ಜು.11:** ಅರಣ್ಯೇತರ ಉದ್ದೇಶಕ್ಕೆ ಭೂಪರಿವರ್ತನೆ ಆಗದ ಎಚ್‌ಎಂಟಿ ಭೂಮಿ ಅರಣ್ಯವಾಗೇ ಉಳಿಯುತ್ತದೆ, ಇದರ ಮೇಲೆ ರಾಜ್ಯ ಸರ್ಕಾರಕ್ಕೆ ಹಕ್ಕಿದೆಯೇ ಹೊರತು ಎಚ್‌ಎಂಟಿಗಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸ್ಪಷ್ಟಪಡಿಸಿದ್ದಾರೆ.

ವಿಕಾಸಸೌಧದ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಅಭಿವೃದ್ಧಿಯಲ್ಲಿ ರಾಜಕೀಯ ಮಾಡುವವನೂ ನಾನಲ್ಲ, ಕುಮಾರಸ್ವಾಮಿ ಅವರ ಮೇಲೆ ವೈಯಕ್ತಿಕ ದ್ವೇಷವೂ ಇಲ್ಲ. ಆದರೆ ಎಚ್.ಎಂ.ಟಿ. ಅರಣ್ಯ ಭೂಮಿಯನ್ನು ರಾಜ್ಯ ಸರ್ಕಾರಕ್ಕೆ ಮರಳಿ ಪಡೆದು ಅಲ್ಲಿ ಲಾಲ್‌ಬಾಗ್, ಕಬ್ಬನ್‌ಪಾರ್ಕ್‌ಗಿಂತ ದೊಡ್ಡ ಉದ್ಯಾನ ನಿರ್ಮಿಸಿ ಉತ್ತರ ಬೆಂಗಳೂರಿಗರಿಗೆ ಅತ್ಯಗತ್ಯವಾದ ಶ್ವಾಸತಾಣ ಉಳಿಸಲು ನಿರ್ಧರಿಸಿದ್ದ ನಾನು ಪರಿಸರ ಆಸಕ್ತನಾಗಿ ಕುಮಾರಸ್ವಾಮಿ ಅವರ ಆರೋಪಕ್ಕೆ ಉತ್ತರ ಕೊಡುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದರು.

ಎಚ್.ಎಂ.ಟಿ. ಜಮೀನಿನ ಪ್ರಕರಣ ನ್ಯಾಯಾಲಯದಲ್ಲಿದೆ ಎಂದೂ ಎಚ್‌ಡಿಕೆ ಹೇಳಿದ್ದಾರೆ. ಜೊತೆಗೆ ಎಚ್.ಎಂ.ಟಿ. ಭೂಮಿ ಮೇಲೆ ಸರ್ಕಾರಕ್ಕಿಲ್ಲ ಹಕ್ಕು ಎಂದಿದ್ದಾರೆ. ಈ ತೀರ್ಪು ಕೊಡಬೇಕಾದ್ದು ನ್ಯಾಯಾಧೀಶರೇ ಹೊರತು ಕುಮಾರಸ್ವಾಮಿ ಅವರಲ್ಲ. ಸುಪ್ರೀಂಕೋರ್ಟ್ ಹಲವು ತೀರ್ಪುಗಳಲ್ಲಿ ಒಂದು ಬಾರಿ ಅರಣ್ಯ ಎಂದು ಘೋಷಣೆ ಆದ ಭೂಮಿ ಅನ್ಯ ಉದ್ದೇಶಕ್ಕೆ ಕಾನೂನುಬದ್ಧವಾಗಿ ಪರಿವರ್ತನೆ ಆಗದಿದ್ದರೆ ಅರಣ್ಯವಾಗೇ ಉಳಿಯುತ್ತದೆ ಎಂದು ಹೇಳಿದೆ. ಜೊತೆಗೆ ಪರಿಸರದ ಹಕ್ಕುಗಳು, ಭೂ ಒಡೆತನದ ಹಕ್ಕಿಗಿಂತ ಮಿಗಲಾದ್ದು ಎಂದು ಸ್ಪಷ್ಟಪಡಿಸಿದೆ. ಈ ನಿಟ್ಟಿನಲ್ಲಿ ಅರಣ್ಯೇತರ ಉದ್ದೇಶಕ್ಕೆ ಪರಿವರ್ತನೆ ಆಗದ ಎಚ್.ಎಂ.ಟಿ. ಅರಣ್ಯ ಭೂಮಿ, ಅರಣ್ಯವಾಗೇ ಉಳಿಯುತ್ತದೆ. ರಾಜ್ಯ ಸರ್ಕಾರದ ಆಸ್ತಿಯಾಗೇ ಇರುತ್ತದೆ ಎಂದರು.

ಈ ಮಧ್ಯೆ ಬೆಂಗಳೂರು ನಗರ ಡಿಸಿಎಫ್ ನೋಟಿಸ್ ನೀಡಿದ್ದಾರೆ ಎಂದು ಕುಮಾರಸ್ವಾಮಿ ಅವರು ತಮ್ಮ ಅಧಿಕೃತ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಆದರೆ, ಅದು ನೋಟಿಸ್ ಅಲ್ಲ. ಅರೆ ನ್ಯಾಯಿಕ ಪ್ರಾಧಿಕಾರದ ಆದೇಶ. ಮಾಜಿ ಮುಖ್ಯಮಂತ್ರಿಯವರಿಗೆ ಇಷ್ಟೂ ಮಾಹಿತಿ ಇಲ್ಲವೇ ಎಂದು ನನಗೆ ವ್ಯಥೆಯಾಗುತ್ತಿದೆ ಎಂದು ಈಶ್ವರ ಖಂಡ್ರೆ ವ್ಯಂಗ್ಯವಾಡಿದರು.

ಎ.ಸಿ. ಕೋರ್ಟ್, ಡಿ.ಸಿ. ಕೋರ್ಟ್‌ನಲ್ಲಿ ನಡೆಯುವಂತೆಯೇ ಡಿಸಿಎಫ್ ನ್ಯಾಯಾಲಯದಲ್ಲಿ ಕೂಡ ಕರ್ನಾಟಕ ಅರಣ್ಯ ಕಾಯಿದೆ 1963ರ ಸೆಕ್ಷನ್ 64 ಎ ಅಡಿ ಅಂದರೆ ಒತ್ತುವರಿ ತೆರವು ಪ್ರಕ್ರಿಯೆ ನಡೆದಿದೆ, ಎಚ್.ಎಂ.ಟಿ.ಯವರಿಗೆ ದಾಖಲೆ ಸಲ್ಲಿಸಲು ಅವಕಾಶ ನೀಡಿದ ಬಳಿಕ, ಸೂಕ್ತ ದಾಖಲೆ ಒದಗಿಸದ ಹಿನ್ನೆಲೆಯಲ್ಲಿ ಈ ಆದೇಶ ಮಾಡಿದ್ದಾರೆ. ಆದೇಶದ ಬಗ್ಗೆ ಇವರಿಗೆ ತಕರಾರಿದ್ದರೆ ಕಾನೂನುರೀತ್ಯ ಸಿ.ಎಫ್. ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲಿ ನಂತರ ಹೈಕೋರ್ಟ್ ಗೆ ಹೋಗಲಿ ಎಂದರು.

ಎಚ್‌ಎಂಟಿ ಭೂಮಿ ಅರಣ್ಯ ಎಂದು ಕೇಂದ್ರ ಸರ್ಕಾರವೇ ಅಧಿಕೃತವಾಗಿ ಒಪ್ಪಿಕೊಂಡಿದೆ. 2018ರಲ್ಲಿ ಕುಮಾರಸ್ವಾಮಿ ಅವರೇ ಮುಖ್ಯಮಂತ್ರಿ ಆಗಿದ್ದಾಗ, ಅಂದಿನ ಮುಖ್ಯ ಕಾರ್ಯದರ್ಶಿ ಟಿ.ಎಂ. ವಿಜಯಭಾಸ್ಕರ್ ಅವರು ಎಚ್.ಎಂ.ಟಿ. ಭೂಮಿ ಮಾರಾಟ ಮಾಡಲು ಎನ್.ಒ.ಸಿ. ನೀಡುವಂತೆ ಕೋರಿ ಕೇಂದ್ರ ಅರಣ್ಯ, ಪರಿಸರ, ಹವಾಮಾನ ಬದಲಾವಣೆ ಸಚಿವಾಲಯದ ಕಾರ್ಯದರ್ಶಿ ಸಿ.ಕೆ. ಮಿಶ್ರಾ ಅವರಿಗೆ ಪತ್ರ ಬರೆದಿದ್ದಾರೆ. ಇದಕ್ಕೆ 2018 ನವೆಂಬರ್ 1ರಂದು ಪ್ರತ್ಯುತ್ತರ ಬರೆದಿರುವ ಸಿ.ಕೆ. ಮಿಶ್ರಾ ಅವರು, 1980ರ ಅಕ್ಟೋಬರ್ 25ರಲ್ಲಿದ್ದಂತೆ ಎಚ್‌ಎಂಟಿ ಭೂಮಿ ಅರಣ್ಯ ಆಗಿದ್ದು, ಅರಣ್ಯ ಸಂರಕ್ಷಣಾ ಕಾಯಿದೆ 1980 ಅನ್ವಯಿಸುತ್ತದೆ. ಹೀಗಾಗಿ ನಿರಾಕ್ಷೇಪಣಾ ಪತ್ರ ಕೊಡಲು ಬರುವುದಿಲ್ಲ ಎಂದು ಸ್ಪಷ್ಟಪಡಿಸಿದೆ ಎಂದು ಈಶ್ವರ ಖಂಡ್ರೆ ದಾಖಲೆ ಪ್ರದರ್ಶಿಸಿದರು.

### ಕೆಐಒಸಿಎಲ್‌ನಲ್ಲಿ ಜಂಟಿ ಸರ್ವೇ ಮಾಡಿದ್ದೇಕೆ?

ತಮಗೆ ಬಂದಿರುವ ಮಾಹಿತಿ ಪ್ರಕಾರ, 2025 ಡಿಸೆಂಬರ್ 19 ಮತ್ತು 20ರಂದು ಒಂದು ಖಾಸಗಿ ಉಕ್ಕು ಕಾರ್ಖಾನೆಯ ಮಾಲೀಕರು, ಉನ್ನತ ಅಧಿಕಾರಿಗಳ ಜೊತೆ ದೇವದಾರಿ ಅರಣ್ಯ ಬ್ಲಾಕ್‌ಗೆ ಮತ್ತು ಮಂಗಳೂರು ಘಟಕಕ್ಕೆ ಹಾಗೂ 22ರಂದು ಕೆ.ಐ.ಒ.ಸಿ.ಎಲ್. ಬ್ಲಾಸ್ಟ್ ಫರ್ನಿಷ್ ಪ್ಲಾಂಟ್‌ಗೆ ಹೋಗಿ ಜಂಟಿ ಸರ್ವೆ ಮಾಡಿದ್ದಾರೆ. ಏಕೆ ಮಾಡಿದ್ದಾರೆ ಎಂದು ಪ್ರಶ್ನಿಸಿದ ಈಶ್ವರ ಖಂಡ್ರೆ, ನೀವು ಕೇಂದ್ರ ಸಚಿವರಾಗಿದ್ದೀರಿ, ಆದರೂ ಕರ್ನಾಟಕದವರು ಎಂಬುದನ್ನು ಮರೆಯಬೇಡಿ. ಕರ್ನಾಟಕದ ಜಲ, ನೆಲ, ಅರಣ್ಯ ಕಾಪಾಡಿ. ಶ್ವಾಸತಾಣ ಉಳಿಸಿ. ಬಿಡದಿಯ ಪರಿಸರದ ಬಗ್ಗೆ ಇರುವ ಕಾಳಜಿಯನ್ನೇ ಎಚ್.ಎಂ.ಟಿ. ಭೂಮಿ ಮತ್ತು ದೇವದಾರಿ ಭೂಮಿಗೂ ತೋರಿಸಿ ಎಂದು ಈಶ್ವರ ಖಂಡ್ರೆ ಆಗ್ರಹಿಸಿದ್ದಾರೆ.

# ದೆಹಲಿ ಕನ್ನಡ ಶಿಕ್ಷಣ ಸಂಸ್ಥೆ: ಸಂಗೀತ ಮೂಲಸೌಕರ್ಯ ಅಭಿವೃದ್ಧಿಗೆ ಆನಂದಮೂರ್ತಿ ಅವರಿಂದ 5 ಲಕ್ಷ ರೂ. ದೇಣಿಗೆ



**ನವದೆಹಲಿ, ಜು.11:** ದೆಹಲಿ ಕನ್ನಡಿಗ ಆನಂದ ಮೂರ್ತಿ ಅವರು ದೆಹಲಿ ಕನ್ನಡ ಹಿರಿಯ ಪ್ರೌಢಶಾಲೆಯ ವಿದ್ಯಾರ್ಥಿಗಳ ಸಂಗೀತ ಪ್ರತಿಭೆಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದ 5 ಲಕ್ಷ ರೂ. ಗಳನ್ನು ದೇಣಿಗೆ ನೀಡಲು ಉದಾರವಾಗಿ ಮುಂದಾಗಿದ್ದಾರೆ. ಈ ದೇಣಿಗೆಯನ್ನು ಶಾಲೆಗೆ ಅಗತ್ಯವಿರುವ ವಿವಿಧ ಸಂಗೀತ ವಾದ್ಯಗಳು, ಆಡಿಯೋ ಹಾಗೂ ವೀಡಿಯೋ ಉಪಕರಣಗಳನ್ನು ಖರೀದಿಸಲು ಬಳಸಲಾಗುತ್ತದೆ.

ಈ ಹಿನ್ನೆಲೆಯಲ್ಲಿ ಇಂದು ಶ್ರೀ ಆನಂದ ಮೂರ್ತಿ ಹಾಗೂ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆಯ ನಡುವೆ ಪರಸ್ಪರ ಒಪ್ಪಂದ ಪತ್ರಕ್ಕೆ ಸಹಿ ಮಾಡಲಾಯಿತು.

ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ (ಪ್ರಭಾರ) ಡಾ. ಅವನೀಂದ್ರನಾಥರಾವ್, ಗೌರವ ಖಜಾಂಚಿ ಹಾಗೂ ಪ್ರಭಾರ ಕಾರ್ಯದರ್ಶಿ ಕಾಶಿನಾಥ ಬಿರಾದಾರ್, ಆಡಳಿತ ಮಂಡಳಿಯ ಸದಸ್ಯ ಹರಿಪ್ರಿಯಾ ಎಸ್. ಹಾಗೂ ಡಾ. ಅಶೋಕ್ ಗೋನಾಲ್ ಉಪಸ್ಥಿತರಿದ್ದರು.

ಒಪ್ಪಂದದ ಪ್ರಕಾರ, ಈ ಉಪಕರಣಗಳನ್ನು ಮುಖ್ಯವಾಗಿ ಶಾಲೆಯ ವಿದ್ಯಾರ್ಥಿಗಳ ಸಂಗೀತ ಶಿಕ್ಷಣ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಬಳಸಲಾಗುತ್ತದೆ. ಜೊತೆಗೆ, ಅಗತ್ಯವಿದ್ದಲ್ಲಿ ದೆಹಲಿ ಎನ್‌ಸಿಆರ್‌ನ ಕನ್ನಡ ಸಂಘಟನೆಗಳು ಹಾಗೂ ಕನ್ನಡಿಗರು ಆಯೋಜಿಸುವ ಸಾಂಸ್ಕೃತಿಕ ಮತ್ತು ಸಂಗೀತ ಕಾರ್ಯಕ್ರಮಗಳಿಗೆ ಸಹ ತಾತ್ಕಾಲಿಕವಾಗಿ ನೀಡಲಾಗುತ್ತದೆ. ಕಾರ್ಯಕ್ರಮ ಮುಗಿದ ನಂತರ ಅವುಗಳನ್ನು ಸುರಕ್ಷಿತವಾಗಿ ಶಾಲೆಗೆ ಹಿಂದಿರುಗಿಸಲಾಗುತ್ತದೆ. ದೆಹಲಿ ಕನ್ನಡ ಶಿಕ್ಷಣ ಸಂಸ್ಥೆ ಹಾಗೂ ದೆಹಲಿಯ ಸಮಸ್ತ ಕನ್ನಡಿಗರ ಪರವಾಗಿ ಆನಂದಮೂರ್ತಿ ಅವರ ಈ ಉದಾರ, ದೂರದೃಷ್ಟಿಯ ಮತ್ತು ವಿದ್ಯಾರ್ಥಿ ಸ್ನೇಹಿ ಕೊಡುಗೆಗೆ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸಲಾಗುತ್ತದೆ. ಈ ದೇಣಿಗೆಯು ವಿದ್ಯಾರ್ಥಿಗಳಲ್ಲಿ ಸಂಗೀತ ಕಲೆ ಬೆಳೆಯಲು ಹಾಗೂ ಕನ್ನಡದ ಸಾಂಸ್ಕೃತಿಕ ಪರಂಪರೆಯನ್ನು ಮತ್ತಷ್ಟು ಶ್ರೀಮಂತಗೊಳಿಸಲು ಮಹತ್ತರ ಕೊಡುಗೆಯಾಗಲಿದೆ ದೆಹಲಿ ಕನ್ನಡ ಶಿಕ್ಷಣ ಸಂಸ್ಥೆ ತಿಳಿಸಿದೆ.

# ಸಾಧಕ ವಿಂಗ್ ಕಮಾಂಡರ್ ಸಯ್ಯದ್ ಅಬಿದ್ ಅಲಿಗೆ ಸನ್ಮಾನ



**ಬೆಂಗಳೂರು, ಜು.11:** ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್. ಮಂಜುನಾಥ್ ಅವರು ಭಾರತೀಯ ವಾಯುಪಡೆಯಲ್ಲಿ ಸುಮಾರು 35 ವರ್ಷಗಳ ಕಾಲ ಅತ್ಯುನ್ನತ ಸೇವೆ ಸಲ್ಲಿಸಿರುವ ಹಾಗೂ ರಾಷ್ಟ್ರಪತಿ ಭವನದ ಔಪಚಾರಿಕ ಸಮಾರಂಭಗಳ ಉಸ್ತುವಾರಿಯಾಗಿ ಎಂಟು ವರ್ಷಗಳ ಕಾಲ ಕರ್ತವ್ಯ ನಿರ್ವಹಿಸಿರುವ ಸಾಧಕ ವಿಂಗ್ ಕಮಾಂಡರ್ ಸಯ್ಯದ್ ಅಬಿದ್ ಅಲಿ ಅವರನ್ನು ಆತ್ಮೀಯವಾಗಿ ಭೇಟಿ ಮಾಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 12 ವರ್ಷಗಳ ಸುಶಾಸನ, ಅಭಿವೃದ್ಧಿ ಪಥ ಹಾಗೂ ಐತಿಹಾಸಿಕ ಸಾಧನೆಗಳನ್ನು ಒಳಗೊಂಡ ವಿಶೇಷ ಪುಸ್ತಕಗಳನ್ನು ಡಾ.ಸಿ.ಎನ್. ಮಂಜುನಾಥ್ ಅವರು ವಿಂಗ್ ಕಮಾಂಡರ್ ಸಯ್ಯದ್ ಅಬಿದ್ ಅಲಿ ಅವರಿಗೆ ಗೌರವಪೂರ್ವಕವಾಗಿ ನೀಡಿ, ಆತ್ಮೀಯ ಭೇಟಿಯ ವೇಳೆ ದೇಶಸೇವೆ, ರಾಷ್ಟ್ರಭಕ್ತಿ ಹಾಗೂ ಉತ್ತಮ ಆಡಳಿತದ ಕುರಿತು ಪರಸ್ಪರ ವಿಚಾರ ವಿನಿಮಯ ಹಂಚಿಕೊಂಡರು.

# ಅಕ್ರಮ ಬಾಂಗ್ಲಾವಾಸಿಗಳು ಕಾಂಗ್ರೆಸ್‌ಗೆ ಓಟ್ ಬ್ಯಾಂಕ್: ಆರ್.ಅಶೋಕ್ ಗಂಭೀರ ಆರೋಪ

**ಮೈಸೂರು, ಜು.11:** ಡಿ.ಕೆ. ಶಿವಕುಮಾರ್ ಅವರು ಮುಖವಾಡದ ಸಿಎಂ ಆಗಿದ್ದಾರೆ. ಊರಿಗೆಲ್ಲ, ರಾಜ್ಯಕ್ಕೆಲ್ಲ ನಾಮ ಹಾಕುತ್ತಾರೆ. ಅವರಿಗೆ ಬಾಂಗ್ಲಾದೇಶವರು ಓಟ್ ಬ್ಯಾಂಕ್ ಆಗಿದ್ದಾರೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಆರೋಪಿಸಿದ್ದಾರೆ. ಮೈಸೂರಿನ ಜಿ.ಕೆ. ಗ್ರೌಂಡ್ಸ್‌ನಲ್ಲಿ ಮೈಸೂರಿನ ಕಾಯಕ ಸಮುದಾಯಗಳ ಒಕ್ಕೂಟದಿಂದ ಹಮ್ಮಿಕೊಂಡಿದ್ದ ವಿಧಾನ ಪರಿಷತ್‌ನ ನೂತನ ಸದಸ್ಯ ರಘು ಆರ್ ಕೌಟಿಲ್ಯ ಅವರ ಅಭಿನಂದನೆ ಹಾಗೂ ಭಾರತೀಯ ಜನತಾ ಪಕ್ಷಕ್ಕೆ ಕೃತಜ್ಞತಾ ಸಮಾವೇಶದಲ್ಲಿ ಅವರು ಮಾತನಾಡಿ, ಎಸ್‌ಐಆರ್‌ನಲ್ಲಿ ಎಲ್ಲರೂ ಭಾಗವಹಿಸಬೇಕಿದೆ. ದೇಶದ ಮತದಾರರ ಪಟ್ಟಿಯಲ್ಲಿ ಹೆಸರು ಉಳಿಯಬೇಕು. ನಮ್ಮ ದೇಶದಲ್ಲಿ ಲಕ್ಷಾಂತರ ಬಾಂಗ್ಲಾದೇಶ ಮತ್ತು ಪಾಕಿಸ್ತಾನಿಯರು ಇದ್ದಾರೆ. ಸರಕಾರದ ಸೌಲಭ್ಯಗಳನ್ನು ಪಡೆಯುತ್ತಿದ್ದಾರೆ ಎಂದು ಹೇಳಿದರು. ಮಮತಾ ಬ್ಯಾನರ್ಜಿ ಅವರು ಮೂರು ಸಾವಿರಕ್ಕೆ ಬಾಂಗ್ಲಾದೇಶದವರಿಗೆ ಎಲ್ಲ ಸೌಲಭ್ಯ ನೀಡಿದ್ದರು. ಕರ್ನಾಟಕದಲ್ಲಿ ಬಾಂಗ್ಲಾದೇಶದವರನ್ನು ಮತಪಟ್ಟಿಗೆ ಸೇರಿಸಲು ಹುನ್ನಾರ ನಡೆಯುತ್ತಿದೆ. ಅದಕ್ಕೆಂದೇ ಶಾಶ್ವತ ನಿವಾಸಿ ಪತ್ರ ನೀಡಲು ಸರ್ಕಾರ ಮುಂದಾಗಿದೆ. ಇದನ್ನು ಕೂಡಲೇ ಸ್ಥಗಿತಗೊಳಿಸಬೇಕು ಎಂದು ಆಗ್ರಹಿಸಿದರು. ಕೇಂದ್ರ ಸರಕಾರಕ್ಕೆ ಮಾತ್ರ ಪೌರತ್ವ ನೀಡುವ ಅಧಿಕಾರ ಹೊಂದಿದೆ ಎಂದರು.

ವಿಧಾನ ಪರಿಷತ್ತಿನ ವಿರೋಧಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಮಾತನಾಡಿ, ಮೈಸೂರಿಗೆ ಮೆರುಗು ತಂದವರು ಕೃಷ್ಣರಾಜೇಂದ್ರ ಒಡೆಯರ್ ಅವರು. ಅವರ ಕುಟುಂಬವನ್ನು ಎಂದೂ ಮರೆಯಲಾಗದು. ಕಾಯಕ ಸಮುದಾಯಗಳು ಶ್ರಮಜೀವಿಗಳು. ಕಾಯಕವಿಲ್ಲದೆ ಜೀವನ ಇಲ್ಲ. ಆದ್ದರಿಂದ ಆಡಳಿತ ಮಾಡುವ ಸರಕಾರಗಳು ಕಾಯಕ ಸಮುದಾಯಕ್ಕೆ ಕೆಲಸ ಕೊಡಬೇಕು ಎಂದರು.

# ಕೃತಕ ಬುದ್ಧಿಮತ್ತೆ ಆಧಾರಿತ ಪ್ರಬುದ್ಧ ಆಡಳಿತದತ್ತ ಕರ್ನಾಟಕ: ಸಚಿವ ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಜು.11:** ರಾಜ್ಯ ಸರ್ಕಾರ ಪ್ರಬುದ್ಧ ಇ–ಆಡಳಿತದ ಮುಂದಿನ ಹಂತವಾದ ಕೃತಕ ಬುದ್ಧಿಮತ್ತೆ ಆಧಾರಿತ ಆಡಳಿತದತ್ತ ಹೆಜ್ಜೆ ಇಡುತ್ತಿದೆ. ಭವಿಷ್ಯದ ಅಗತ್ಯಗಳಿಗನುಗುಣವಾಗಿ ಎಐ ಕೌಶಲಗಳನ್ನು ಅಭಿವೃದ್ಧಿಪಡಿಸುವುದು ಹಾಗೂ ತಂತ್ರಜ್ಞಾನ ವಲಯದೊಂದಿಗೆ ಸಹ–ಸೃಷ್ಟಿ ಸಹಭಾಗಿತ್ವವನ್ನು ಹೊಂದುವುದಕ್ಕೆ ಸರ್ಕಾರ ಆದ್ಯತೆ ನೀಡಿದೆ ಎಂದು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಆಂಥ್ರೋಪಿಕ್ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾದ ಐರಿನಾ ಘೋಷ್ ಅವರು ಸಚಿವರನ್ನು ಭೇಟಿ ಮಾಡಿ, ಕರ್ನಾಟಕದ ಎಐ ಮುನ್ನೋಟ ಹಾಗೂ ಜಾಗತಿಕ ಸಹಕಾರದ ಅವಕಾಶಗಳ ಕುರಿತು ಚರ್ಚಿಸಿದ ಸಂದರ್ಭದಲ್ಲಿ ಈ ವಿಷಯ ಹಂಚಿಕೊಂಡಿದ್ದಾರೆ.

ಎಐ ತಂತ್ರಜ್ಞಾನವನ್ನು ಬಳಸಿಕೊಂಡು ಹೆಚ್ಚು ಸ್ಪಂದನಶೀಲ, ದಕ್ಷ ಹಾಗೂ ನಾಗರಿಕ ಕೇಂದ್ರಿತ ವ್ಯವಸ್ಥೆಗಳನ್ನು ನಿರ್ಮಿಸುವ ಮೂಲಕ ಕರ್ನಾಟಕವನ್ನು ಡಿಜಿಟಲ್ ಆಡಳಿತದಲ್ಲಿ ಮುಂಚೂಣಿಗೆ ತರುವ ಕುರಿತು ಉಭಯ ನಾಯಕರು ಸಮಾಲೋಚನೆ ನಡೆಸಿದರು.

ರಾಜ್ಯದ ಕೃತಕ ಬುದ್ಧಿಮತ್ತೆ ದೂರದೃಷ್ಟಿಯು ಅತ್ಯಾಧುನಿಕ ಸಾಮರ್ಥ್ಯಗಳ ವೃದ್ಧಿ, ನಮ್ಮ ನವೋದ್ಯಮ ಪರಿಸರದ ಬಲವರ್ಧನೆ ಹಾಗೂ ಸಾರ್ವಜನಿಕ ಸೇವೆಗಳನ್ನು ಸುಧಾರಿಸಲು ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವುದರ ಮೇಲೆ ಕೇಂದ್ರೀಕೃತವಾಗಿದೆ. ಆಂಥ್ರೋಪಿಕ್ ಸಂಸ್ಥೆಯೊಂದಿಗಿನ ಈ ಸಮಾಲೋಚನೆಯು ಕೌಶಲ ಅಭಿವೃದ್ಧಿ, ಸಂಶೋಧನೆ ಹಾಗೂ ಎಐ ಆಧಾರಿತ ಆಡಳಿತ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅರ್ಥಪೂರ್ಣ ಸಹಭಾಗಿತ್ವಕ್ಕೆ ದಾರಿ ಮಾಡಿಕೊಟ್ಟಿದೆ.

ಇದು ದೀರ್ಘಾವಧಿಯಲ್ಲಿ ಸಾರ್ವಜನಿಕ ಹಿತಾಸಕ್ತಿ ಕಾಯುವ ಸುಸ್ಥಿರ ಮಾದರಿಗಳನ್ನು ರೂಪಿಸಲು ನೆರವಾಗಲಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ಸರ್ಕಾರ ಹಾಗೂ ಜಾಗತಿಕ ತಂತ್ರಜ್ಞಾನ ಕಂಪನಿಗಳು ಒಟ್ಟಾಗಿ ಭವಿಷ್ಯದ ಅಗತ್ಯಗಳಿಗೆ ತಕ್ಕಂತೆ ಹೊಸ ಉತ್ಪನ್ನ, ಸೇವೆ ಅಥವಾ ಪರಿಹಾರಗಳನ್ನು ಜಂಟಿಯಾಗಿ ರೂಪಿಸುವ ನಿಟ್ಟಿನಲ್ಲಿ ಈ ಸಭೆಯು ಮಹತ್ವದ ಮೈಲಿಗಲ್ಲಾಗಿದೆ. ಈ ಉನ್ನತ ಮಟ್ಟದ ಸಭೆಯಲ್ಲಿ ಕರ್ನಾಟಕ ನಾವೀನ್ಯತೆ ಹಾಗೂ ತಂತ್ರಜ್ಞಾನ ಸೊಸೈಟಿ ವ್ಯವಸ್ಥಾಪಕ ನಿರ್ದೇಶಕ ಡಾ. ಅವಿನಾಶ್ ಮೆನನ್ ರಾಜೇಂದ್ರನ್ ಉಪಸ್ಥಿತರಿದ್ದರು.

### ಚರ್ಚೆಯ ಮುಖ್ಯಾಂಶಗಳು

**ದತ್ತಾಂಶ ಆಧಾರಿತ ಬುದ್ಧಿವಂತ ಆಡಳಿತ:** ಆಧುನಿಕ ತಂತ್ರಜ್ಞಾನ ಮತ್ತು ಎಐ ಬಳಸಿ, ಲಭ್ಯವಿರುವ ನಿಖರವಾದ ದತ್ತಾಂಶಗಳ ಆಧಾರದ ಮೇಲೆ ಕ್ಷಿಪ್ರ ನಿರ್ಧಾರ ಕೈಗೊಳ್ಳುವ ಮತ್ತು ನಾಗರಿಕರಿಗೆ ತ್ವರಿತವಾಗಿ ಸೇವೆ ಒದಗಿಸುವ ವ್ಯವಸ್ಥೆ ರೂಪಿಸುವ ಕುರಿತು ಚರ್ಚೆ ನಡೆಸಲಾಗಿದೆ.

**ನಾವೀನ್ಯತೆ ಪರಿಸರಕ್ಕೆ ಉತ್ತೇಜನ:** ರಾಜ್ಯದಲ್ಲಿ ಕೃತಕ ಬುದ್ಧಿಮತ್ತೆ ಸಂಶೋಧನೆ, ನವೋದ್ಯಮ ಹಾಗೂ ಉದ್ಯಮಶೀಲತೆಯನ್ನು ಮತ್ತಷ್ಟು ಬಲಪಡಿಸಲು ಶ್ರೇಷ್ಠತಾ ಕೇಂದ್ರಗಳು ಮತ್ತು ಇನ್‌ಕ್ಯುಬೇಟರ್‌ಗಳನ್ನು ಸ್ಥಾಪಿಸುವ ಸಾಧ್ಯತೆಗಳ ಪರಿಶೀಲನೆ ನಡೆಸಿದರು.

**ಸಾರ್ವಜನಿಕ ಹಿತರಕ್ಷಣೆ ಮತ್ತು ದತ್ತಾಂಶ ಬಳಕೆ:** ಸಾರ್ವಜನಿಕ ವಲಯದಲ್ಲಿ ಈಗಾಗಲೇ ಇರುವ ದತ್ತಾಂಶಗಳನ್ನು ಜನರ ಹಿತ ರಕ್ಷಣೆಗೆ ಮತ್ತು ನಾಗರಿಕ ಸೇವೆಗಳನ್ನು ಇನ್ನಷ್ಟು ಜನಸ್ನೇಹಿಯಾಗಿಸಲು ಎಐ ಮೂಲಕ ಮರುರೂಪಿಸಲು ಆದ್ಯತೆ ನೀಡಲಾಗಿದೆ.

**ಡೀಪ್‌ಟೆಕ್ ಮತ್ತು ಸಹ–ಸೃಷ್ಟಿ ಸಹಯೋಗ:** ಮಾರ್ಗದರ್ಶನ ಹಾಗೂ ಸಹ–ಸೃಷ್ಟಿ ಮಾದರಿಯ ಮೂಲಕ ರಾಜ್ಯದ ಡೀಪ್‌ಟೆಕ್ ನವೋದ್ಯಮಗಳು ಮತ್ತು ಜಾಗತಿಕ ಸಾಮರ್ಥ್ಯ ಕೇಂದ್ರಗಳ ನಡುವೆ ಬಲವಾದ ಸಹಯೋಗ ಏರ್ಪಡಿಸುವುದು.

# ಡಿಸಿಎಂ ಪರಮೇಶ್ವರ್, ಸಚಿವ ಪ್ರಿಯಾಂಕ್ ಖರ್ಗೆ ಕಾರ್ಯವೈಖರಿಗೆ ಶೋಭಾ ಕರಂದ್ಲಾಜೆ ಟೀಕೆ



**ಬೆಂಗಳೂರು, ಜು.11:** ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಆರ್‌ಎಸ್‌ಎಸ್ ಸಚಿವರು ಹಾಗೂ ಡಿಸಿಎಂ ಜಿ. ಪರಮೇಶ್ವರ್ ಅವರನ್ನು ಗೊತ್ತಿಲ್ಲ ಸಚಿವರು ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಲೇವಡಿ ಮಾಡಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಇಲಾಖೆಯ ಕೆಲಸಗಳಿಗಿಂತ ದಿನನಿತ್ಯ ಆರ್‌ಎಸ್‌ಎಸ್ ಸಂಘಟನೆಯನ್ನು ಟೀಕಿಸುವುದೇ ಮುಖ್ಯ ಕೆಲಸವಾಗಿದೆ. ತಮಗೆ ವಹಿಸಿರುವ ಖಾತೆಯನ್ನು ಮರೆತು ಆರ್‌ಎಸ್‌ಎಸ್ ಬಗ್ಗೆಯೇ ಸದಾ ಮಾತನಾಡುವುದರಿಂದ ಅವರು ಕಾಂಗ್ರೆಸ್ ಸರ್ಕಾರದ ಪ್ರತ್ಯೇಕ "ಆರ್‌ಎಸ್‌ಎಸ್ ಸಚಿವರಂತೆ" ವರ್ತಿಸುತ್ತಿದ್ದಾರೆ ಎಂದು ಲೇವಡಿ ಮಾಡಿದ್ದಾರೆ.

ಮತ್ತೊಂದೆಡೆ, ರಾಜ್ಯದ ಕಾನೂನು ಸುವ್ಯವಸ್ಥೆ ಮತ್ತು ಗಂಭೀರ ವಿಷಯಗಳ ಕುರಿತು ಮಾಧ್ಯಮಗಳು ಪ್ರಶ್ನಿಸಿದಾಗಲೆಲ್ಲಾ ಡಿಸಿಎಂ ಜಿ. ಪರಮೇಶ್ವರ್ ಅವರು ಬೇಜವಾಬ್ದಾರಿಯಿಂದ ಉತ್ತರಿಸುತ್ತಾರೆ. ಸದಾ "ಗೊತ್ತಿಲ್ಲ, ಮಾಹಿತಿ ಇಲ್ಲ" ಎನ್ನುವ ಕಾರಣಕ್ಕೆ ಅವರನ್ನು "ಗೊತ್ತಿಲ್ಲ ಸಚಿವರು" ಎಂದು ಕಟುವಾಗಿ ಟೀಕಿಸಿದ್ದಾರೆ. ರಾಜ್ಯ ಸರ್ಕಾರದ ಆಡಳಿತ ವೈಫಲ್ಯ ಹಾಗೂ ಕಾಂಗ್ರೆಸ್ ನಾಯಕರ ಆರ್‌ಎಸ್‌ಎಸ್ ವಿರೋಧಿ ನಿಲುವುಗಳ ವಿರುದ್ಧ ಬಿಜೆಪಿ ಹಮ್ಮಿಕೊಂಡಿರುವ ರಾಜಕೀಯ ಹೋರಾಟದ ಭಾಗವಾಗಿ ಈ ಹೇಳಿಕೆ ಹೊರಬಿದ್ದಿದೆ. ಈ ಮೂಲಕ ಸಚಿವರ ಕಾರ್ಯವೈಖರಿಯನ್ನು ವಿರೋಧ ಪಕ್ಷವು ತೀವ್ರವಾಗಿ ಖಂಡಿಸಿದೆ.

# ಬರ ಪರಿಸ್ಥಿತಿ ನಿರ್ವಹಣೆಯಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲ: ಸಂಸದ ಬೊಮ್ಮಾಯಿ ಆಕ್ರೋಶ

**ಸಿಎಂ ಸಭೆ-ಸಮಾರಂಭ ಬಿಟ್ಟು ಬರ ತಾಲೂಕುಗಳ ಕಡೆ ಗಮನಕೊಡಲಿ: ಬೊಮ್ಮಾಯಿ ಸಲಹೆ**



**ಗದಗ, ಜು.11:** ರಾಜ್ಯದಲ್ಲಿ ತಲೆದೋರಿರುವ ಭೀಕರ ಬರಗಾಲದ ಸಂದರ್ಭದಲ್ಲಿ ರೈತರ ಕೈಹಿಡಿಯಬೇಕಾದ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಬೇಜವಾಬ್ದಾರಿಯಿಂದ ವರ್ತಿಸುತ್ತಿದೆ" ಮುಖ್ಯಮಂತ್ರಿಗಳು ಸಭೆ ಸಮಾರಂಭ ಬಿಟ್ಟು ಬರ ತಾಲೂಕುಗಳ ಕಡೆ ಗಮನಕೊಡಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ಗದಗಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ, ಮುಂಬೈ ಕರ್ನಾಟಕದ ಬಹುತೇಕ ಬಯಲು ಸೀಮೆ ಪ್ರದೇಶಗಳು ಭೀಕರ ಬರಗಾಲಕ್ಕೆ ತುತ್ತಾಗಿವೆ. ಕರಾವಳಿ ಮತ್ತು ಮಲೆನಾಡಿನ ಕೆಲವು ತಾಲೂಕುಗಳಲ್ಲಿ ಮಾತ್ರ ಮಳೆಯಾಗಿದೆ. ಅದನ್ನು ನೆಪವಾಗಿಟ್ಟುಕೊಂಡು ಮುಖ್ಯಮಂತ್ರಿಗಳು "ನೋಡಿಕೊಂಡು ಬರ ಘೋಷಣೆ ಮಾಡುತ್ತೇವೆ" ಎಂದು ಗಾಂಭೀರ್ಯವಿಲ್ಲದ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಟೀಕಿಸಿದರು.

**ಕೃಷಿ ಇಲಾಖೆಯೇ ನಿಷ್ಕ್ರಿಯ**

ರಾಜ್ಯದ ಶೇ.50ಕ್ಕೂ ಹೆಚ್ಚು ತಾಲೂಕುಗಳಲ್ಲಿ ಭೀಕರ ಬರಗಾಲವಿದ್ದರೂ, ಸರ್ಕಾರದ ಬಳಿ ಯಾವುದೇ ಆಕ್ಷನ್ ಪ್ಲಾನ್ ಇಲ್ಲ. ಪ್ರಸ್ತುತ ರಾಜ್ಯದಲ್ಲಿ ಕೃಷಿ ಇಲಾಖೆಯೂ ಇಲ್ಲ, ಕೃಷಿ ಸಚಿವರೂ ಇಲ್ಲದಂತಾಗಿದೆ. ಮುಂಗಾರು ವಿಫಲವಾದಾಗ ಪರ್ಯಾಯ ಬೆಳೆ ಯೋಜನೆ ರೂಪಿಸಬೇಕಿತ್ತು. ಆದರೆ, ರೈತರಿಗೆ ಇಲಾಖೆಯಿಂದ ಯಾವುದೇ ಸಲಹೆ ಅಥವಾ ಮಾರ್ಗದರ್ಶನ ಸಿಗುತ್ತಿಲ್ಲ. ರೈತರು ಬೀಜ, ಗೊಬ್ಬರಕ್ಕೆ ಬಂಡವಾಳ ಹಾಕಿ ಈಗ ತೀವ್ರ ಹತಾಶರಾಗಿದ್ದಾರೆ ಎಂದರು.

**ಮುಖ್ಯಮಂತ್ರಿಗಳಿಗೆ ಆಗ್ರಹ:**

ರಾಜ್ಯ ಸರ್ಕಾರ ಹಾಗೂ ಮುಖ್ಯಮಂತ್ರಿ ಕೇವಲ ಸಭೆ–ಸಮಾರಂಭಗಳನ್ನು ಮಾಡುವುದನ್ನು ಬಿಟ್ಟು, ತಕ್ಷಣವೇ ಬರಪೀಡಿತ ತಾಲೂಕುಗಳಿಗೆ ಮೊದಲ ಆದ್ಯತೆ ನೀಡಬೇಕು. ತಳಮಟ್ಟದ ವಾಸ್ತವಕ್ಕೆ ತಕ್ಕಂತೆ ಕಾರ್ಯಯೋಜನೆ ರೂಪಿಸಿ, ಸಂಕಷ್ಟದಲ್ಲಿರುವ ರೈತರಿಗೆ ಸೂಕ್ತ ಪರಿಹಾರ ವಿತರಿಸಲು ಮುಂದಾಗಬೇಕು ಎಂದು ಬೊಮ್ಮಾಯಿ ಆಗ್ರಹಿಸಿದರು.

**ಗದಗ ಜಿಲ್ಲೆ ಸಂಪೂರ್ಣ ಬರ**

ಇಡೀ ಗದಗ ಜಿಲ್ಲೆಯಾದ್ಯಂತ ಭೀಕರ ಬರಗಾಲ ಆವರಿಸಿದ್ದು, ಯಾವುದೇ ತಾಲೂಕಿನಲ್ಲೂ ವಾಡಿಕೆಯಂತೆ ಮಳೆಯಾಗಿಲ್ಲ. ಜಿಲ್ಲೆಯಲ್ಲಿ ಕೇವಲ ಶೇ.30ರಷ್ಟು ಮಾತ್ರ ಬಿತ್ತನೆಯಾಗಿದ್ದು, ಮುಂಗಾರು ಸಂಪೂರ್ಣವಾಗಿ ವಿಫಲವಾಗಿದೆ. ಜಿಲ್ಲೆಯಲ್ಲಿ ಇಷ್ಟೊಂದು ಗಂಭೀರ ಪರಿಸ್ಥಿತಿ ಇದ್ದರೂ ಸಹ ಜಿಲ್ಲಾ ಆಡಳಿತವಾಗಲಿ ಅಥವಾ ರಾಜ್ಯ ಸರ್ಕಾರವಾಗಲಿ ಈ ಕಡೆ ತಿರುಗಿಯೂ ನೋಡಿಲ್ಲ. ಬರಗಾಲದ ಕುರಿತು ಪ್ರಾಥಮಿಕ ವರದಿಯನ್ನು ತರಿಸಿಕೊಳ್ಳುವ ಕನಿಷ್ಠ ಕೆಲಸವನ್ನೂ ಸರ್ಕಾರ ಮಾಡಿಲ್ಲ ಎಂದು ತರಾಟೆಗೆ ತೆಗೆದುಕೊಂಡರು.

"ನಿಯಮಾವಳಿ ಪ್ರಕಾರ ಮೊದಲು ಪ್ರಾಥಮಿಕ ವರದಿ ಪಡೆದು, ಅದರ ಆಧಾರದ ಮೇಲೆ ಅಧಿಕಾರಿಗಳನ್ನು ಕಳುಹಿಸಿ ಜಂಟಿ ಸಮೀಕ್ಷೆ ನಡೆಸಬೇಕು. ನಂತರ ಬರಗಾಲ ಪೀಡಿತ ಪ್ರದೇಶ ಎಂದು ಘೋಷಿಸಿ, ರೈತರಿಗೆ ತಕ್ಷಣ ಪರಿಹಾರ ವಿತರಿಸುವ ಕಾರ್ಯ ಪ್ರಾರಂಭಿಸಬೇಕು. ಕೇಂದ್ರ ಸರ್ಕಾರ ನೀಡಿರುವ ಎನ್‌ಡಿಆರ್‌ಎಫ್ ನಿಧಿ ರಾಜ್ಯ ಸರ್ಕಾರ ಹಾಗೂ ಜಿಲ್ಲಾ ಮಟ್ಟದ ಕೋಶದಲ್ಲಿ ಸಾಕಷ್ಟು ಲಭ್ಯವಿದೆ. ಅದನ್ನು ಕೂಡಲೇ ಬಿಡುಗಡೆ ಮಾಡಿ ರೈತರಿಗೆ ನೆರವಾಗಬೇಕು ಮತ್ತು ಕುಡಿಯುವ ನೀರಿನ ಸಮಸ್ಯೆ ಇರುವ ಕಡೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಬೊಮ್ಮಾಯಿ ಒತ್ತಾಯಿಸಿದರು.

ಗದಗ ನಗರದಲ್ಲಿ ಸಾಕಷ್ಟು ನೀರು ಲಭ್ಯವಿದ್ದಾಗಲೂ ಹಲವು ವಾರ್ಡ್‌ಗಳಿಗೆ 10 ರಿಂದ 15 ದಿನಗಳಿಗೊಮ್ಮೆ ನೀರು ಸಿಗುತ್ತಿಲ್ಲ. ಇನ್ನು ಮಳೆ ಕೊರತೆಯಾಗಿರುವ ಪ್ರಸ್ತುತ ಸಂದರ್ಭದಲ್ಲಿ ಬರುವ ದಿನಗಳಲ್ಲಿ ನೀರಿನ ಬಿಕ್ಕಟ್ಟು ಮತ್ತಷ್ಟು ಹೆಚ್ಚಾಗಲಿದೆ. ಸರ್ಕಾರ ಜನರ ಸಂಕಷ್ಟಕ್ಕೆ ಸ್ಪಂದಿಸುವುದನ್ನು ಬಿಟ್ಟು ಬೇರೆ ವಿಷಯಗಳಲ್ಲಿ ನಿರತವಾಗಿದೆ ಎಂದು ಅವರು ಆರೋಪಿಸಿದರು. ಇದೇ ವೇಳೆ ಇತ್ತೀಚೆಗೆ ಬೆಳಗಾವಿಯಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಪರಮೇಶ್ವರ್ ಅವರು ನಡೆಸಿದ ಪ್ರಗತಿ ಪರಿಶೀಲನಾ ಸಭೆಯನ್ನು ಟೀಕಿಸಿದ ಬೊಮ್ಮಾಯಿ, "ಅವರು ಅಲ್ಲಿ ಏನು ಪರಿಶೀಲನೆ ನಡೆಸಿದ್ದಾರೆ ಗದಗ ಜಿಲ್ಲೆಯ ಬಗ್ಗೆ ಏನು ಹೇಳಿದ್ದಾರೆ ಬರಗಾಲದಿಂದ ಮಳೆಯಿಲ್ಲದೆ ಕಷ್ಟಪಡುತ್ತಿರುವ ಜಿಲ್ಲೆಗಳ ಸಮಸ್ಯೆಗಳ ಬಗ್ಗೆ ಅಲ್ಲಿ ಯಾವುದೇ ಚರ್ಚೆ ನಡೆದಿಲ್ಲ. ಕೇವಲ ಆರೇಳು ಜಿಲ್ಲೆಗಳನ್ನು ಒಟ್ಟಿಗೆ ಸೇರಿಸಿ ಪ್ರಗತಿ ಪರಿಶೀಲನೆ ಹೆಸರಿನಲ್ಲಿ ಜಾತ್ರೆ ಮಾಡಲಾಗಿದೆಯೇ ಹೊರತು, ವಿಭಾಗ ಮಟ್ಟದಲ್ಲಿ ಸಭೆ ನಡೆಸುವುದರಿಂದ ತಳಮಟ್ಟದ ವಾಸ್ತವ ಸ್ಥಿತಿ ಯಾರಿಗೂ ತಿಳಿಯಲು ಸಾಧ್ಯವಿಲ್ಲ" ಎಂದು ರಾಜ್ಯ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

**ಜಿಲ್ಲಾ ಉಸ್ತುವಾರಿ ಸಚಿವರ ಗೈರುಹಾಜರಿಗೆ ಆಕ್ಷೇಪ**

ಜಿಲ್ಲೆಗೆ ಉಸ್ತುವಾರಿ ಸಚಿವರನ್ನು ನೇಮಕ ಮಾಡಿ 15 ದಿನಗಳಾಗುತ್ತಾ ಬಂದರೂ, ಅವರು ಇದುವರೆಗೂ ಇತ್ತ ತಿರುಗಿಯೂ ನೋಡಿಲ್ಲ. ಬರ ಪರಿಸ್ಥಿತಿಯ ಕುರಿತು ಯಾವುದೇ ಪರಿಶೀಲನೆ ನಡೆಸಿಲ್ಲ. ನಾವೇ ಖುದ್ದಾಗಿ ಜಿಲ್ಲಾಧಿಕಾರಿಗಳ ಬಳಿ ಎರಡು ಬಾರಿ ಚರ್ಚಿಸಿ, ಬರಗಾಲ ಘೋಷಣೆಗೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಇದು ಅತ್ಯಂತ ಬೇಜವಾಬ್ದಾರಿ ಸರ್ಕಾರ. ಕಷ್ಟದ ಕಾಲದಲ್ಲಿ ಜನರೊಂದಿಗೆ ನಿಲ್ಲುವುದೇ ಸರ್ಕಾರದ ಜೀವಂತಿಕೆಯ ಲಕ್ಷಣ. ಆದರೆ, ಇಂತಹ ಸಂಕಷ್ಟದ ಸಮಯದಲ್ಲಿ ಜಿಲ್ಲಾಡಳಿತವಾಗಲಿ ಅಥವಾ ಸರ್ಕಾರವಾಗಲಿ ಯಾವುದೇ ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ. ಗದಗ ಜಿಲ್ಲೆಯ ಮಟ್ಟಿಗಂತೂ ಈ ಸರ್ಕಾರ ಸತ್ತಂತಿದೆ ಎಂದು ಆರೋಪಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಬಿಪಿ, ಮಧುಮೇಹ, ಹೃದ್ರೋಗ ಮತ್ತಿತರ ಕಾಯಿಲೆಗಳ ಔಷಧಗಳ ಚಿಲ್ಲರೆ ಮಾರಾಟ ದರ ಇಳಿಕೆ

## ಗರಿಷ್ಠ ದರ ನಿಗದಿಪಡಿಸಿ ಕೇಂದ್ರ ಸರ್ಕಾರದ ರಾಷ್ಟ್ರೀಯ ಔಷಧ ಬೆಲೆ ಪ್ರಾಧಿಕಾರ ಆದೇಶ

**ನವದೆಹಲಿ, ಜು.11:** ಹತ್ತಾರು ಮಾತ್ರೆಗೆ ನೂರಾರು ರೂಪಾಯಿ ವೆಚ್ಚ ಮಾಡುವ ಜನರಿಗೆ ಕೇಂದ್ರ ಸರ್ಕಾರ ಸಿಹಿಸುದ್ದಿ ನೀಡಿದೆ. ಕೇಂದ್ರ ಸರ್ಕಾರದ ರಾಷ್ಟ್ರೀಯ ಔಷಧ ಬೆಲೆ ಪ್ರಾಧಿಕಾರವು ಮಧುಮೇಹ, ಅಧಿಕ ರಕ್ತದೊತ್ತಡ, ಹೃದ್ರೋಗ, ಸೋಂಕುಗಳು, ಕಣ್ಣಿನ ಅಸ್ವಸ್ಥತೆಗಳು, ಉಸಿರಾಟದ ಕಾಯಿಲೆಗಳು ಸೇರಿ ಹಲವು ಕಾಯಿಲೆಗಳ ಔಷಧಿಗಳ ಚಿಲ್ಲರೆ ಮಾರಾಟ ದರವನ್ನು ಕಡಿಮೆ ಮಾಡಿ ಆದೇಶಿಸಿದೆ.

ರಾಸಾಯನಿಕ ಮತ್ತು ರಸಗೊಬ್ಬರ ಸಚಿವಾಲಯದ ಅಧೀನ ಸಂಸ್ಥೆಯಾದ ರಾಷ್ಟ್ರೀಯ ಔಷಧ ಬೆಲೆ ಪ್ರಾಧಿಕಾರ (ಎನ್‌ಪಿಪಿಎ) 2013ರ ಔಷಧಗಳ (ಬೆಲೆ ನಿಯಂತ್ರಣ) ಆದೇಶ ಅಡಿಯಲ್ಲಿ, ವಿವಿಧ ದೀರ್ಘಕಾಲೀನ ಕಾಯಿಲೆಗಳ ಚಿಕಿತ್ಸೆಗೆ ಬಳಸುವ 39 ಅಗತ್ಯ ಔಷಧಿಗಳ ಚಿಲ್ಲರೆ ಬೆಲೆಯ ಗರಿಷ್ಠ ಮಿತಿಯನ್ನು ನಿಗದಿಪಡಿಸಿ ಆದೇಶ ಹೊರಡಿಸಿದೆ. ಇದರಿಂದ ಅಗತ್ಯ ಔಷಧಿಗಳ ಬೆಲೆ ಸ್ವಲ್ಪ ಇಳಿಕೆಯಾಗಲಿದೆ.

ಔಷಧ ದರ ನಿಯಂತ್ರಣ ಪ್ರಕಾರ ಯಾವುದೇ ಫಾರ್ಮಾ ಕಂಪನಿಗಳು ಇದಕ್ಕಿಂತ ಹೆಚ್ಚಿನ ದರ ವಿಧಿಸುವಂತಿಲ್ಲ. ಅದರಂತೆ, ಮಧುಮೇಹ (ಶುಗರ್) ಮತ್ತು ರಕ್ತದೊತ್ತಡ (ಬಿಪಿ)ದಂತಹ ಜೀವಮಾನ ಪರ್ಯಂತ ತೆಗೆದುಕೊಳ್ಳಬೇಕಾದ




### ಹೆಚ್ಚು ಹಣ ವಸೂಲಿ ಮಾಡಿದರೆ ಏನು?

ಔಷಧ ಬೆಲೆ ನಿಯಂತ್ರಣ ಆದೇಶ ಮತ್ತು ಅಗತ್ಯ ಸರಕುಗಳ ಕಾಯ್ದೆಯಂತೆ ಔಷಧ ಕಂಪನಿಗಳು ತಮಗೆ ಬೇಕಾದಂತೆ ಬೆಲೆಗಳನ್ನು ವಿಧಿಸಲು ಸಾಧ್ಯವಿಲ್ಲ. ಯಾವುದೇ ಔಷಧ ಕಂಪನಿಗಳು ನಿಗದಿತ ಬೆಲೆಗಿಂತ ಹೆಚ್ಚಿನ ಬೆಲೆಯನ್ನು ವಿಧಿಸಿದರೆ, ಗ್ರಾಹಕರಿಂದ ಸಂಗ್ರಹಿಸಿದ ಹೆಚ್ಚುವರಿ ಮೊತ್ತವನ್ನು ಬಡ್ಡಿಯೊಂದಿಗೆ ಮರುಪಾವತಿಸಬೇಕಾಗುತ್ತದೆ ಎಂದು ಸರ್ಕಾರ ಎಚ್ಚರಿಸಿದೆ.

ಔಷಧಿಗಳ ಮೇಲಿನ ದರ ಮಿತಿಯಿಂದಾಗಿ ಸಾಮಾನ್ಯ ಕುಟುಂಬಗಳ ತಿಂಗಳ ವೈದ್ಯಕೀಯ ವೆಚ್ಚವು ಗಣನೀಯವಾಗಿ ಕಡಿಮೆಯಾಗಲಿದೆ.

### ಯಾವ ಔಷಧ, ಎಷ್ಟು ಬೆಲೆ ನಿಗದಿ

- ☐ ಮಧುಮೇಹ ಸಂಬಂಧಿತ ಎಂಪಾಗ್ಲಿಫ್ಲೋಜಿನಾ, ಸಿಟಾಗ್ಲಿಪ್ಟಿನ್ ಮತ್ತು ಮೆಟ್ಫಾರ್ಮಿನ್ ಹೈಡ್ರೋಕ್ಲೋರೈಡ್ ಮಾತ್ರೆಗಳ ಬೆಲೆಗಳು ಅವುಗಳ ಸಾಮರ್ಥ್ಯಕ್ಕೆ (ಎಂಜಿ) ಅನುಗುಣವಾಗಿ 14.88 ರೂ.ನಿಂದ 17.17 ರೂ.ವರೆಗೆ ನಿಗದಿ ಮಾಡಲಾಗಿದೆ.
- ☐ ರಕ್ತದೊತ್ತಡ ಸಂಬಂಧಿತ ಆಮ್ಲೋಡಿಪೈನ್ + ಬಿಸೊಪ್ರೊಲೊಲ್ + ಟೆಲ್ಮಿಸಾರ್ಟನ್ ಮಾತ್ರೆಯ ಬೆಲೆ 14.74 ರೂ.
- ☐ ಕಣ್ಣಿನ ಸೋಂಕು ಸಂಬಂಧಿತ ನೆಪಾಫೆನಾಕ್ + ಮೊಕ್ಸಿಫ್ಲೋಕ್ಸಾಸಿನ್ ಕಣ್ಣಿನ ಡ್ರಾಪ್ಸ್ ಪ್ರತಿ ಮಿಲಿ ಲೀಟರ್‌ಗೆ 68.64 ರೂ.
- ☐ ಹೃದ್ರೋಗ ಸಂಬಂಧಿತ ಕ್ಲೋಪಿಡೋಗ್ರೆಲ್ + ಆಸ್ಪಿರಿನ್ + ಅಟೊರ್ವಸ್ಟಾಟಿನ್ ಮಾತ್ರೆಯ ಬೆಲೆ 6.37 ರೂ.
- ☐ ಕ್ಯಾಲ್ಸಿಯಂ ಮತ್ತು ವಿಟಮಿನ್ ಡಿ3 ಪ್ರತಿ ಮಾತ್ರೆಯ ಗರಿಷ್ಠ ಬೆಲೆಯನ್ನು 8.93 ರೂ.
- ☐ ನಾಯಿ ಕಡಿತಕ್ಕೆ ನೀಡುವ ಆಂಟಿ-ರೇಬಿಸ್ ಇಮ್ಯುನೊಗ್ಲೋಬ್ಯುಲಿನ್ ಇಂಜೆಕ್ಷನ್ ದರ 119.48 ರೂ.
- ☐ ಹೃದಯಾಘಾತದ ಸಂದರ್ಭದಲ್ಲಿ ರಕ್ತ ಹೆಪ್ಪುಗಟ್ಟುವಿಕೆಯನ್ನು ತಡೆಯಲು ಬಳಸುವ ಪ್ರಾಣರಕ್ಷಕ 'ಟೆನೆಕ್ಟೆಪ್ಲೇಸ್' (50 ಎಂಜಿ) ಇಂಜೆಕ್ಷನ್ ಬೆಲೆ 60,238.27 ರೂ.

# ಎಂ.ಪಿ. ಪ್ರಕಾಶ್ ಅಜಾತಶತ್ರು, ಮೌಲ್ಯಾಧಾರಿತ ರಾಜಕಾರಣಿ

## 86ನೇ ಜನ್ಮದಿನದ ಕಾರ್ಯಕ್ರಮದಲ್ಲಿ ಮಾಜಿ ಸಿಎಂ ಸಿದ್ದರಾಮಯ್ಯ ಬಣ್ಣನೆ

## ಸಜ್ಜನ ರಾಜಕಾರಣಿಯ ಪುತ್ಥಳಿ ಅನಾವರಣ

**ವಿಜಯನಗರ, ಜು.11:** ಇಂದು ಎಂ.ಪಿ. ಪ್ರಕಾಶ್ ಅವರ 86ನೇ ಜನ್ಮ ದಿನೋತ್ಸವ. ಅವರು ನಮ್ಮನ್ನು ಅಗಲಿ 15 ವರ್ಷಗಳು ಕಳೆದಿವೆ. ಅವರ ಅಗಲಿಕೆ ಕುಟುಂಬಕ್ಕೆ ಮಾತ್ರವಲ್ಲ, ಇಡೀ ಕರ್ನಾಟಕ ರಾಜ್ಯವೇ ಒಬ್ಬ ಪ್ರಾಮಾಣಿಕ, ಮೌಲ್ಯಾಧಾರಿತ ಮತ್ತು ಜನಪರ ನಾಯಕನನ್ನು ಕಳೆದುಕೊಂಡಿದೆ ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಬೇಸರ ವ್ಯಕ್ತಪಡಿಸಿದರು.

ಎಂ.ಪಿ. ಪ್ರಕಾಶ್ ಜನ್ಮ ದಿನೋತ್ಸವದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿ, ಎಂ.ಪಿ. ಪ್ರಕಾಶ್ ಅವರ ಅಗಲಿಕೆಯಿಂದ ಕರ್ನಾಟಕವು ಒಬ್ಬ ಸಜ್ಜನ, ಮೌಲ್ಯಾಧಾರಿತ ಹಾಗೂ ಅಜಾತಶತ್ರುವಿನಂತಹ ಅಪರೂಪದ ರಾಜಕಾರಣಿಯನ್ನು ಕಳೆದು ಕೊಂಡಿದೆ. ಜೀವನದುದ್ದಕ್ಕೂ ಸಿದ್ಧಾಂತಗಳಿಗೆ ಬದ್ಧರಾಗಿ ಜನಸೇವೆಯನ್ನೇ ಧ್ಯೇಯವಾಗಿಸಿ ಕೊಂಡು ಅವರು ರಾಜಕೀಯದಲ್ಲಿ ಹೋರಾಟ ನಡೆಸಿದರು ಎಂದು ಸ್ಮರಿಸಿದರು. ಅವರೊಂದಿಗೆ ಶಾಸನಸಭೆಯಲ್ಲಿ ಸೇವೆ ಸಲ್ಲಿಸಿದ ದಿನಗಳನ್ನು ನೆನಪಿಸಿಕೊಂಡರು.

ಎಂ.ಪಿ. ಪ್ರಕಾಶ್ ಅವರು ಅಪಾರ ಜ್ಞಾನ ಹೊಂದಿದ್ದ ಬುದ್ಧಿವಂತ ರಾಜಕಾರಣಿಯಾಗಿದ್ದರು. ರಾಜಕೀಯ ಕ್ಷೇತ್ರದಲ್ಲಿ ಅವರಷ್ಟು ಅಧ್ಯಯನಶೀಲರು ಮತ್ತು ಓದಿನ ಆಸಕ್ತಿ ಹೊಂದಿದ್ದ ನಾಯಕರು ವಿರಳ. ಬಿಡುವಿನ ಸಮಯ ಸಿಕ್ಕಾಗಲೆಲ್ಲಾ ಪುಸ್ತಕಗಳನ್ನು ಓದುವ ಹವ್ಯಾಸವನ್ನು ಅವರು ಬೆಳೆಸಿಕೊಂಡಿದ್ದರು. ಅದರಿಂದಲೇ ವಿವಿಧ ವಿಷಯಗಳಲ್ಲಿ ಆಳವಾದ ಜ್ಞಾನವನ್ನು ಸಂಪಾದಿಸಿ, ವೈಚಾರಿಕತೆ ಮತ್ತು ವೈಜ್ಞಾನಿಕ ಮನೋಭಾವವನ್ನು ಮೈಗೂಡಿಸಿ ಕೊಂಡಿದ್ದರು. ಇಂತಹ ಸಜ್ಜನ ರಾಜಕಾರಣಿಯ ಪುತ್ಥಳಿಯನ್ನು ನನ್ನ ಕೈಯಿಂದ ಅನಾವರಣ ಗೊಳಿಸಿರುವುದು ಸಂತೋಷದ ವಿಚಾರ ಎಂದರು.

ಎಂ.ಪಿ. ಪ್ರಕಾಶ್ ಅವರು ಎಂದಿಗೂ ಜಾತಿ ಆಧಾರಿತ ರಾಜಕೀಯವನ್ನು ಮಾಡಲಿಲ್ಲ. ಒಂದು ವೇಳೆ ಜಾತಿಯನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಂಡಿದ್ದರೆ, ಇಂದಿನ ರಾಜಕೀಯ ಪರಿಸ್ಥಿತಿಯಲ್ಲಿ ಇನ್ನೂ ಉನ್ನತ ಸ್ಥಾನಕ್ಕೇರಬಹುದಾಗಿತ್ತು. ಅದೇ ರೀತಿ ರಾಜಕೀಯ ಲಾಭಕ್ಕಾಗಿ ಸ್ವಾಮೀಜಿಗಳನ್ನು ದುರುಪಯೋಗಪಡಿಸಿಕೊಳ್ಳುವ ಪ್ರವೃತ್ತಿಯಿಂದಲೂ ಅವರು ದೂರವಿದ್ದರು ಎಂದು ಸಿದ್ದರಾಮಯ್ಯ ಹೇಳಿದರು.

ಇಂಜಿನಿಯರಿಂಗ್ ಕಾಲೇಜಿಗೆ ಎಂ.ಪಿ. ಪ್ರಕಾಶ್ ಹೆಸರಿಡಲು ಸರ್ಕಾರಕ್ಕೆ ಪತ್ರ ಬರೆಯುವೆ

ಹೂವಿನ ಹಡಗಲಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಗೆ ಎಂ.ಪಿ. ಪ್ರಕಾಶ್ ಅವರ ಹೆಸರನ್ನು ನಾಮಕರಣ ಮಾಡುವಂತೆ ನಾನೂ ಸಹ ಸರ್ಕಾರಕ್ಕೆ ಪತ್ರ ಬರೆಯುತ್ತೇನೆ. ಆ ಮೂಲಕ ಅವರ ಹೆಸರು ಶಾಶ್ವತವಾಗಿ ಉಳಿಯಲಿದೆ. ನಾನು ಮೈಸೂರು ದಸರಾ ಉತ್ಸವವನ್ನು ಆಯೋಜಿಸುತ್ತಿದ್ದ ಸಂದರ್ಭದಲ್ಲಿ, ಹಂಪಿ ಉತ್ಸವವನ್ನೂ ಆರಂಭಿಸೋಣ ಎಂಬ ಸಲಹೆಯನ್ನು ನೀಡಿ, ಅದಕ್ಕಾಗಿ ನನ್ನಿಂದ ಅನುದಾನ ಮಂಜೂರು ಮಾಡಿಸಿಕೊಂಡು, ಮೊದಲ ಬಾರಿಗೆ ಹಂಪಿ ಉತ್ಸವವನ್ನು ಯಶಸ್ವಿಯಾಗಿ ಆಯೋಜಿಸಿದವರು ಎಂ.ಪಿ. ಪ್ರಕಾಶ್ ಅವರೇ ಎಂದು ಅವರು ಸ್ಮರಿಸಿದರು. ಎಂ.ಪಿ. ಪ್ರಕಾಶ್ ಅವರು ತಮ್ಮ ಆದರ್ಶಗಳು, ಸೇವೆ ಮತ್ತು ವ್ಯಕ್ತಿತ್ವದ ಮೂಲಕ ಜನಮಾನಸದಲ್ಲಿ ಎಂದೆಂದಿಗೂ ಜೀವಂತವಾಗಿರುತ್ತಾರೆ ಎಂಬ ದೃಢ ನಂಬಿಕೆ ನನಗಿದೆ ಎಂದು ಸಿದ್ದರಾಮಯ್ಯ ಹೇಳಿದರು.

### ಕನಕಭವನ ವೀಕ್ಷಿಸಿದ ಮಾಜಿ ಸಿಎಂ ಸಿದ್ದರಾಮಯ್ಯ

**ಹೂವಿನಹಡಗಲಿ, ಜು.11:** ಸರ್ಕಾರದ ವಿಶೇಷ ಅನುದಾನದಲ್ಲಿ ನಿರ್ಮಾಣಗೊಂಡಿರುವ ಕನಕ ಭವನವನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹೊರಗಿನಿಂದಲೇ ವೀಕ್ಷಿಸಿ ಸಂತಸ ವ್ಯಕ್ತಪಡಿಸಿದರು. ತಾಲ್ಲೂಕು ಕ್ರೀಡಾಂಗಣ ಹಿಂಭಾಗದ ಹೆಲಿಪ್ಯಾಡ್‌ನಲ್ಲಿ ಸಿದ್ದರಾಮಯ್ಯ ಇಳಿಯುತ್ತಿದ್ದಂತೆ ಅಪಾರ ಅಭಿಮಾನಿಗಳು ಜೈಕಾರ ಹಾಕಿದರು. ನೂರಾರು ಕಾರ್ಯಕರ್ತರು ಬೈಕ್ ರ‍್ಯಾಲಿ ಮೂಲಕ ಅವರನ್ನು ಕನಕ ಭವನಕ್ಕೆ ಬರಮಾಡಿಕೊಂಡರು. ಮಂಡಿ ನೋವು ಕಾರಣದಿಂದ ಮೆಟ್ಟಿಲುಗಳನ್ನು ಏರಿ ಕನಕ ಭವನ ಪ್ರವೇಶಿಸಲು ನಿರಾಕರಿಸಿ, ಹೊರಗಿನಿಂದಲೇ ಭವ್ಯ ಕಟ್ಟಡವನ್ನು ವೀಕ್ಷಿಸಿದರು. ಕನಕ ಭವನದಲ್ಲಿ ಸಿದ್ಧತೆ ಮಾಡಿಕೊಂಡಿದ್ದ ಅಭಿನಂದನಾ ಕಾರ್ಯಕ್ರಮ ಭವನದ ಮುಂಭಾಗದಲ್ಲೇ ನಡೆಯಿತು. ಸಮಾಜದ ಮುಖಂಡರು ಕಂಬಳಿ ಹೊದಿಸಿ ಸತ್ಕರಿಸಿದರು.

# ಎಸ್‌ಐಆರ್ ಪ್ರಕ್ರಿಯೆಯಲ್ಲಿ ಜನರಿಗೆ ಅನುಕೂಲ ಮಾಡಿಕೊಡಲು ಕಾಯಂ ನಿವಾಸ ಪ್ರಮಾಣಪತ್ರ

## ಎಲ್ಲ ವಿಚಾರದಲ್ಲೂ ಬಿಜೆಪಿಯಿಂದ ರಾಜಕಾರಣ: ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್



**ಬೆಂಗಳೂರು, ಜು.11:** ಚುನಾವಣಾ ಆಯೋಗದವರು ಎಸ್‌ಐಆರ್ ಪ್ರಕ್ರಿಯೆಯಲ್ಲಿ 13 ದಾಖಲೆಯನ್ನು ಕೇಳುತ್ತಾರೆ. ಅದರಲ್ಲಿ ನೀವು ಸ್ವಂತ ಮನೆಯಲ್ಲಿ ಇದ್ದೀರಾ ಎಂಬ ಪ್ರಶ್ನೆಯೂ ಇದೆ. ಹಾಗಾಗಿ ಖಾಯಂ ನಿವಾಸ ಪ್ರಮಾಣಪತ್ರವನ್ನು ನೀಡಲು ಕ್ರಮ ವಹಿಸುವುದಾಗಿ ಉಪಮುಖ್ಯ ಮಂತ್ರಿ ಡಾ.ಜಿ.ಪರಮೇಶ್ವರ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈವರೆಗೆ ಕೇಂದ್ರ ಸರ್ಕಾರ ಯಾವುದೇ ಪ್ರಮಾಣಪತ್ರಗಳನ್ನು ನೀಡಿಲ್ಲ. ಜಾತಿ ಪ್ರಮಾಣಪತ್ರವನ್ನು ಕೂಡ ರಾಜ್ಯ ಸರ್ಕಾರವೇ ನೀಡಿದೆ. ನಾವು ಆಧಾರ್ ಕಾರ್ಡ್ ಮತ್ತು ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಖಾಯಂ ನಿವಾಸ ಪ್ರಮಾಣಪತ್ರ ನೀಡುತ್ತೇವೆ. ಅದರಲ್ಲಿ ತಪ್ಪೇನಿದೆ ಎಲ್ಲದರಲ್ಲೂ ಬಿಜೆಪಿ ರಾಜಕಾರಣ ಮಾಡುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈಗಾಗಲೇ ಸುಮಾರು 50ರಿಂದ 60 ಸಾವಿರ ವಿದ್ಯಾರ್ಥಿಗಳಿಗೆ ಜಾತಿ ಪ್ರಮಾಣಪತ್ರ ಇಲ್ಲದೆ ಸಿಇಟಿ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆ ಬರೆಯಲು ಸಮಸ್ಯೆಯಾಗಿದೆ. ಈಗ ನಾವು ಖಾಯಂ ಪ್ರಮಾಣ ಪತ್ರದಲ್ಲಿ ಜಾತಿಯನ್ನು ಉಲ್ಲೇಖಿಸಿದರೆ ಪರೀಕ್ಷೆ ಬರೆಯುವ ಮಕ್ಕಳಿಗೆ ಅನುಕೂಲ ವಾಗುತ್ತದೆ. ಬಿಜೆಪಿಗರು ಎಲ್ಲವನ್ನೂ ರಾಜಕೀಯ ದೃಷ್ಟಿಯಿಂದ ನೋಡುವುದು ಸರಿಯಲ್ಲ ಎಂದು ಹೇಳಿದರು.

ಬಾಂಗ್ಲಾದೇಶದವರಿಗೂ ಖಾಯಂ ನಿವೇಶನ ಪತ್ರ ನೀಡಲಾಗುತ್ತಿದೆ ಎಂಬ ಬಿಜೆಪಿ ಆರೋಪ ಸತ್ಯಕ್ಕೆ ದೂರವಾದದ್ದು. ಬಾಂಗ್ಲಾದೇಶದ ಪ್ರಶ್ನೆಯೇ ಇಲ್ಲಿ ಬರುವುದಿಲ್ಲ. ಇದು ರಾಷ್ಟ್ರೀಯ ಸಮಸ್ಯೆ. ರಾಜ್ಯ ಸರ್ಕಾರ ಬಾಂಗ್ಲಾದೇಶವರಿಗೆ ಪೌರತ್ವ ಕೊಡಲು ಆಗುತ್ತದೆಯೇ ಒಂದು ವೇಳೆ ಬಾಂಗ್ಲಾದೇಶದವರು ನಮ್ಮ ದೇಶದವರನ್ನು ಮದುವೆಯಾದರೆ, ಆಗ ಅದಕ್ಕೊಂದು ನಿಬಂಧನೆಯಿದೆ. ಅದು ಬಿಟ್ಟು ಬಾಂಗ್ಲಾದೇಶದವರಿಗಾಗಲಿ ಅಥವಾ ಬೇರೆ ದೇಶದವರಿಗಾಗಲಿ ಪೌರತ್ವವನ್ನು ರಾಜ್ಯ ಸರ್ಕಾರ ಕೊಡಲು ಆಗುವುದಿಲ್ಲ ಎಂದು ಈ ವೇಳೆ ಸ್ಪಷ್ಟಪಡಿಸಿದರು.

ಎಸ್‌ಐಆರ್ ಪ್ರಕ್ರಿಯೆ ನಡೆಯುತ್ತಿರುವಾಗಲೇ ಜಿಬಿಎ ಚುನಾವಣೆ ಮಾಡಬಹುದು. ಆದರೆ ಚುನಾವಣಾ ಆಯೋಗ ಅದಕ್ಕೆ ಅನುಮತಿ ನೀಡುವುದಿಲ್ಲ. ವಿಶೇಷ ಅನುಮತಿ ನೀಡಿದರೆ ನಾವು ಚುನಾವಣೆಯನ್ನು ಮಾಡಲು ಸಿದ್ಧರಿದ್ದೇವೆ ಎಂದರು. ಇ-ಪೌತಿ, ಹಕ್ಕುಪತ್ರಗಳ ಕೆಲಸಗಳಿಗೆ ವೇಗ ನೀಡಲು ಜುಲೈ 12, ಭಾನುವಾರ ಎಲ್ಲಾ ಉಪ ನೋಂದಣಿ ಕಚೇರಿಗಳು ಕಾರ್ಯನಿರ್ವ ಹಿಸುವಂತೆ ಆದೇಶಿಸಲಾಗಿದೆ ಎಂದ ಅವರು, ಸಚಿವ ಸಂಪುಟ ವಿಸ್ತರಣೆಯ ಬಗ್ಗೆ ಹೈಕಮಾಂಡ್ ತೀರ್ಮಾನಿಸು ವುದಾಗಿ ತಿಳಿಸಿದರು.

# ಪ್ರತಿ ತಿಂಗಳ 2ನೇ ಭಾನುವಾರ ಪರಿಶಿಷ್ಟ ಜಾತಿ, ಪಂಗಡ ದಿನ

## ಪೊಲೀಸ್ ಇಲಾಖೆಯಲ್ಲಿನ ಎಸ್‌ಸಿ/ಎಸ್‌ಟಿ ಸಿಬ್ಬಂದಿ ಕುಂದುಕೊರತೆ, ಕಲ್ಯಾಣಕ್ಕೆ ಕ್ರಮ

## ಡಿಜಿ ಮತ್ತು ಐಜಿಪಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶನ



**ಬೆಂಗಳೂರು, ಜು.11:** ರಾಜ್ಯದ ವಿವಿಧ ಪೊಲೀಸ್ ಘಟಕಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪಂಗಡದ ಅಧಿಕಾರಿ ಹಾಗೂ ಸಿಬ್ಬಂದಿ ಸೇವಾ ಸಂಬಂಧಿತ ಸಮಸ್ಯೆಗಳು, ಕುಂದುಕೊರತೆಗಳು ಮತ್ತು ಕಲ್ಯಾಣಕ್ಕೆ ಸಂಬಂಧಿಸಿದ ವಿಷಯಗಳಿಗೆ ಆದ್ಯತೆ ನೀಡುವ ನಿಟ್ಟಿನಲ್ಲಿ, ಪ್ರತಿ ತಿಂಗಳ ಎರಡನೇ ಭಾನುವಾರದಂದು "ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ದಿನ"ವನ್ನು ಕಡ್ಡಾಯವಾಗಿ ಆಚರಿಸಿ ಕುಂದುಕೊರತೆಗಳ ಆಲಿಕೆ ಸಭೆಗಳನ್ನು ನಿಯಮಿತವಾಗಿ ನಡೆಸುವಂತೆ ರಾಜ್ಯದ ಎಲ್ಲಾ ಪೊಲೀಸ್ ಘಟಕಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಲಾಗಿದೆ ಎಂದು ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಈ ಕುರಿತು ಮಹಾನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರಿಗೆ (ಡಿಜಿ ಮತ್ತು ಐಜಿಪಿ) ನಿರ್ದೇಶನ ನೀಡಿರುವ ಸಚಿವರು, ಈ ಸಂಬಂಧ ಸಭೆ ನಡೆಸುವಂತೆ ಎಲ್ಲಾ ಪೊಲೀಸ್ ಆಯುಕ್ತಾಲಯಗಳು, ಜಿಲ್ಲಾ ಪೊಲೀಸ್ ಕಚೇರಿಗಳು, ಸಶಸ್ತ್ರ ಮೀಸಲು ಪಡೆಗಳು, ವಿಶೇಷ ಪೊಲೀಸ್ ಘಟಕಗಳು ಹಾಗೂ ಇತರೆ ಎಲ್ಲಾ ಪೊಲೀಸ್ ಸಂಸ್ಥೆಗಳಿಗೆ ಸೂಚಿಸಲಾಗಿತ್ತು. ಆದರೆ, ಹಲವು ಕಡೆಗಳಲ್ಲಿ ಈ ಸಭೆಗಳು ನಿಯಮಿತವಾಗಿ ನಡೆಯುತ್ತಿಲ್ಲ ಎಂಬ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆ. ಸಮಸ್ಯೆಗಳನ್ನು ಆಲಿಸಿ ತ್ವರಿತವಾಗಿ ಪರಿಹರಿಸುವ ಉದ್ದೇಶದಿಂದ ರೂಪಿಸಲಾಗಿರುವ ಈ ವ್ಯವಸ್ಥೆ ಪರಿಣಾಮಕಾರಿಯಾಗಿ ಜಾರಿಯಾಗುವುದು ಅತ್ಯಂತ ಅಗತ್ಯವಾಗಿದೆ ಎಂದು ಸಚಿವರು ಹೇಳಿದ್ದಾರೆ.

ಪ್ರತಿ ಸಭೆಯಲ್ಲಿ ಸ್ವೀಕರಿಸಲಾದ ಮನವಿ, ದೂರುಗಳು ಹಾಗೂ ಅವುಗಳ ಕುರಿತು ಕೈಗೊಂಡ ಕ್ರಮಗಳ ವಿವರಗಳನ್ನು ದಾಖಲಿಸಿ ನಿರ್ವಹಿಸಬೇಕು. ತಕ್ಷಣವೇ ಪರಿಹರಿಸಬಹುದಾದ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಇತ್ಯರ್ಥ ಪಡಿಸಬೇಕು. ಸರ್ಕಾರದ ಅಥವಾ ನೀತಿ ಮಟ್ಟದ ನಿರ್ಧಾರ ಅಗತ್ಯವಿರುವ ವಿಷಯಗಳನ್ನು ವಿಳಂಬವಿಲ್ಲದೆ ಸಂಬಂಧಪಟ್ಟ ಪ್ರಾಧಿಕಾರಕ್ಕೆ ಶಿಫಾರಸು ಮಾಡಬೇಕು ಎಂದು ಸಚಿವರು ನಿರ್ದೇಶನ ನೀಡಿದ್ದಾರೆ.

ಎಸ್‌ಸಿ/ಎಸ್‌ಟಿ ಸಮುದಾಯದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರ ಸೇವಾ ಹಿತಾಸಕ್ತಿ, ಕಲ್ಯಾಣ ಹಾಗೂ ನ್ಯಾಯಯುತ ಆಡಳಿತವನ್ನು ಖಚಿತಪಡಿಸುವ ನಿಟ್ಟಿನಲ್ಲಿ ಈ ಸಭೆಗಳು ಅತ್ಯಂತ ಮಹತ್ವದ್ದಾಗಿದ್ದು, ರಾಜ್ಯದ ಎಲ್ಲ ಪೊಲೀಸ್ ಘಟಕಗಳು ಪ್ರತಿ ತಿಂಗಳ ಎರಡನೇ ಭಾನುವಾರದಂದು ಯಾವುದೇ ಕಾರಣಕ್ಕೂ ತಪ್ಪದೇ ಸಭೆ ನಡೆಸಬೇಕು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕಟ್ಟುನಿಟ್ಟಾಗಿ ಸೂಚಿಸಿದ್ದಾರೆ.

# ಅಕ್ಟೋಬರ್, ನವೆಂಬರ್‌ನಲ್ಲಿ ಪಂಚಾಯಿತಿ ಚುನಾವಣೆ: ಸಚಿವ ಈಶ್ವರ ಖಂಡ್ರೆ

**ಬೆಂಗಳೂರು, ಜು.11:** ರಾಜ್ಯದ ಬಹುತೇಕ ಪಂಚಾಯಿತಿಗಳ ಆಡಳಿತಾವಧಿ ಮುಗಿದಿದ್ದು, ಅಕ್ಟೋಬರ್ ಅಥವಾ ನವೆಂಬರ್‌ನಲ್ಲಿ ಚುನಾವಣೆ ನಡೆಯಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.



ವಿಕಾಸಸೌಧದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವು ಪಂಚಾಯತಿಗಳ ಮೇಲ್ದರ್ಜೆಯಿಂದಾಗಿ ಕ್ಷೇತ್ರ ಪುನರ್ ವಿಂಗಡಣೆ ಮಾಡಬೇಕಾಗಿ ಬಂದಿದ್ದು, ಈ ತಿಂಗಳ ಅಂತ್ಯ ಅಥವಾ ಮುಂದಿನ ತಿಂಗಳಲ್ಲಿ ಈ ಪ್ರಕ್ರಿಯೆ ಮುಗಿಸಿ, ಮೀಸಲಾತಿ ನಿರ್ಧರಿಸಿ ರಾಜ್ಯ ಚುನಾವಣೆ ಆಯೋಗಕ್ಕೆ ಸಲ್ಲಿಸಲಾಗುವುದು. ಆಯೋಗ 45 ದಿನಗಳಲ್ಲಿ ಚುನಾವಣೆ ನಡೆಸುತ್ತದೆ ಎಂದರು. ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬದ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ರಾಜ್ಯದಲ್ಲಿ ಎಸ್.ಐ.ಆರ್. ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಎಲ್ಲಾ ಸರ್ಕಾರಿ ಸಿಬ್ಬಂದಿ ಆ ಕಾರ್ಯದಲ್ಲಿ ನಿರತರಾಗಿದ್ದಾರೆ. ಹೀಗಾಗಿ ಕಾಲಾವಕಾಶ ಕೇಳಲಾಗಿದೆ ಎಂದು ತಿಳಿಸಿದರು.

### ಮನೆ ಮನೆಗೆ ಇ-ಸ್ವತ್ತು:

ಇನ್ನು ಇ-ಸ್ವತ್ತಿಗೆ ಸಂಬಂಧಿಸಿದಂತೆ ಗ್ರಾಮೀಣ ಪ್ರದೇಶದಲ್ಲಿ ಸಮಸ್ಯೆ ಇದ್ದು, ಸಾಕಷ್ಟು ದೂರುಗಳು ಬರುತ್ತಿವೆ. ಈ ನಿಟ್ಟಿನಲ್ಲಿ ಎಸ್.ಐ.ಆರ್. ಪ್ರಕ್ರಿಯೆ ಮುಗಿದ ನಂತರ, ಈ ವ್ಯವಸ್ಥೆಯನ್ನು ಮತ್ತಷ್ಟು ಸರಳೀಕರಿಸಿ, ಎಲ್ಲ ಗ್ರಾಮೀಣ ಪ್ರದೇಶದ ಆಸ್ತಿ ಮಾಲಿಕರಿಗೆ ಯಾವುದೇ ತೊಡಕಾಗದಂತೆ ಮನೆ ಬಾಗಿಲಿಗೇ ಇ-ಸ್ವತ್ತು ನೀಡಲು ಕ್ರಮ ವಹಿಸಲಾಗುವುದು ಎಂದರು.ಬಿ ಖರಾಬು ಜಮೀನು ಬಳಸಿಕೊಂಡು ಲೇಔಟ್ ನಿರ್ಮಿಸಿದ್ದರೆ ಅಲ್ಲಿ ಇ-ಸ್ವತ್ತು ನೀಡಲಾಗುವುದಿಲ್ಲ. ಇದಕ್ಕೆ ಕಂದಾಯ ಇಲಾಖೆಯ ಸಚಿವರೊಂದಿಗೆ ಸಭೆ ನಡೆಸಬೇಕಾಗುತ್ತದೆ ಎಂದರು.

# ಮಾದಕವಸ್ತು ನಿಯಂತ್ರಣದಲ್ಲಿ ಕರ್ನಾಟಕ ಪೊಲೀಸ್ ಇಲಾಖೆಯ ಸಾಧನೆ ಶ್ಲಾಘನೀಯ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್



**ಬೆಂಗಳೂರು, ಜು.11:** ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಹಾಗೂ ಮಾದಕ ವಸ್ತುಗಳ ನಿಯಂತ್ರಣದಲ್ಲಿ ಕರ್ನಾಟಕ ಪೊಲೀಸ್ ಇಲಾಖೆ ಅತ್ಯುತ್ತಮ ಕಾರ್ಯನಿರ್ವಹಣೆ ಮಾಡುತ್ತಿದ್ದು, ದೇಶಕ್ಕೇ ಮಾದರಿಯಾಗಿ ಹೊರಹೊಮ್ಮಿದೆ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಹೇಳಿದರು.

ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮುಂಭಾಗದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ರಾಜ್ಯದ ಜಿಲ್ಲಾ ಪೊಲೀಸ್ ಘಟಕಗಳಿಗೆ 32 ಅತ್ಯಾಧುನಿಕ ಮೊಬೈಲ್ ಫೊರೆನಿಕ್ಸ್ ವ್ಯಾನ್‌ಗಳು, 75 ಬೊಲೆರೋ ವಾಹನಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಹಸಿರು ನಿಶಾನೆ ತೋರುವ ಮೂಲಕ ನೂತನ ವಾಹನಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಗಡಿಯಲ್ಲಿ ಸೈನಿಕರು ದೇಶದ ರಕ್ಷಣೆಯ ಹೊಣೆ ಹೊತ್ತಿದ್ದರೆ, ಗಡಿಯೊಳಗೆ ಆಡಳಿತ ಮತ್ತು ಪೊಲೀಸ್ ವ್ಯವಸ್ಥೆ ನಾಗರಿಕರ ನೆಮ್ಮದಿ ಹಾಗೂ ಕಾನೂನು ಪಾಲನೆಗೆ ಭದ್ರತೆ ಒದಗಿಸುತ್ತಿದೆ ಎಂದು ತಿಳಿಸಿದರು.

ಕಳೆದ ಒಂದು ವರ್ಷದಲ್ಲಿ ರಾಜ್ಯ ಪೊಲೀಸ್ ಇಲಾಖೆ 375 ಕೋಟಿ ರೂ. ಮೌಲ್ಯದ ಮಾದಕ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ಇತ್ತೀಚೆಗೆ ದಾಖಲೆ ಪ್ರಮಾಣದ ಮಾದಕ ವಸ್ತುಗಳನ್ನು ಜಪ್ತಿ ಮಾಡುವ ಮೂಲಕ ಗಮನಾರ್ಹ ಸಾಧನೆ ಮಾಡಿದೆ. ಈ ಕಾರ್ಯದಲ್ಲಿ ತೊಡಗಿದ್ದ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ರಾಜ್ಯದ ಜನತೆ ಹಾಗೂ ಸರ್ಕಾರದ ಪರವಾಗಿ ಅಭಿನಂದಿಸುವುದಾಗಿ ಹೇಳಿದರು.

ಇದುವರೆಗೆ ಸುಮಾರು 1,500 ಡ್ರಗ್ ಪೆಡ್ಲರ್‌ಗಳನ್ನು ಬಂಧಿಸಿರುವುದು ಇಲಾಖೆಯ ಮತ್ತೊಂದು ಮಹತ್ವದ ಸಾಧನೆಯಾಗಿದೆ. ಗೋವಾ, ಮಹಾರಾಷ್ಟ್ರ ಮತ್ತು ಕೇರಳ ರಾಜ್ಯದ ಗಡಿಗಳನ್ನು ಹೊಂದಿರುವ ಕರ್ನಾಟಕದಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಣೆಯನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ರಾಜ್ಯದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಯ ದಕ್ಷತೆ, ನಿಷ್ಠೆ ಮತ್ತು ಜಾಗರೂಕತೆಯಿಂದ ಕರ್ನಾಟಕ ಪೊಲೀಸ್ ಇಲಾಖೆಗೆ ರಾಷ್ಟ್ರ ಮಟ್ಟದಲ್ಲಿ ಉತ್ತಮ ಹೆಸರು ಬಂದಿದೆ. ಹಗಲು-ಇರುಳೆನ್ನದೆ ಶ್ರಮಿಸುತ್ತಿರುವ ಪೊಲೀಸ್ ಸಿಬ್ಬಂದಿಯ ಮನೋಬಲ ಕುಗ್ಗಿಸುವ ಯಾವುದೇ ಕ್ರಮಕ್ಕೆ ಸರ್ಕಾರ ಅವಕಾಶ ನೀಡುವುದಿಲ್ಲ. ಕಾನೂನು ಚೌಕಟ್ಟಿನೊಳಗೆ ರಾಜ್ಯದ ಹಿತಾಸಕ್ತಿ ಕಾಪಾಡಲು ಕೈಗೊಳ್ಳುವ ನ್ಯಾಯಸಮ್ಮತ ಕ್ರಮಗಳಿಗೆ ಸರ್ಕಾರ ಸದಾ ಬೆಂಬಲವಾಗಿ ನಿಲ್ಲಲಿದೆ ಎಂದು ಭರವಸೆ ನೀಡಿದರು.

ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ್ ಎಸ್ ಹೊರಟ್ಟಿ, ಶಿವಜಿನಗರದ ವಿಧಾನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ್ ಅರ್ಷದ್, ಒಳಾಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಟಾರಿಯಾ, ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು, ಪೊಲೀಸ್ ಪಡೆಯ ಮುಖ್ಯಸ್ಥ ಡಾ. ಎಂ.ಎ.ಸಲೀಂ, ಅಪರಾಧ ಮತ್ತು ತಾಂತ್ರಿಕ ಸೇವೆಗಳು ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರಾದ ಪಿ. ಹರಿಶೇಖರನ್, ಸಂಪರ್ಕ, ಲಾಜಿಸ್ಟಿಕ್ ಮತ್ತು ಆಧುನೀಕರಣದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಎಸ್. ಮುರುಗನ್ ಮತ್ತು ನ್ಯಾಯ ವಿಜ್ಞಾನ ಪ್ರಯೋಗಾಲಯದ ಡಿಐಜಿಪಿ ಮತ್ತು ನಿರ್ದೇಶಕಿ ಡಾ. ದಿವ್ಯಾ ವಿ. ಗೋಪಿನಾಥ್, ಬೆಂಗಳೂರು ನಗರ ಪೊಲೀಸ್ ಆಯುಕ್ತರಾದ ಸೀಮಾಂತ್ ಕುಮಾರ ಸಿಂಗ್ ರವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಮುಜರಾಯಿ ದೇಗುಲಗಳಲ್ಲಿ ಸಿಸಿ ಕ್ಯಾಮರಾ

ರಾಜ್ಯದ ಮುಜರಾಯಿ ದೇವಸ್ಥಾನಗಳಲ್ಲಿ ಭದ್ರತೆ ಹೆಚ್ಚಿಸುವ ನಿಟ್ಟಿನಲ್ಲಿ ಕಾಣಿಕೆ ಹುಂಡಿಗಳ ನಿರ್ವಹಣೆಯಿಂದ ಬ್ಯಾಂಕ್‌ಗೆ ಹಣ ಜಮಾ ಮಾಡುವವರೆಗೆ ಎಲ್ಲ ಪ್ರಕ್ರಿಯೆಗಳು ಸಿಸಿಟಿವಿ ಮತ್ತು ವಿಡಿಯೊ ದಾಖಲಾತಿಯ ವ್ಯಾಪ್ತಿಯಲ್ಲಿ ಇರಬೇಕು. ದೇವಸ್ಥಾನಗಳ ಭದ್ರತಾ ವ್ಯವಸ್ಥೆಯನ್ನು ಸ್ಥಳೀಯ ಪೊಲೀಸ್ ಠಾಣೆಗಳೊಂದಿಗೆ ನೇರ ಸಂಪರ್ಕಕ್ಕೆ ತರಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ತಿಳಿಸಿದರು. ಅಪರಾಧ ನಡೆದ ಬಳಿಕ ತನಿಖೆ ನಡೆಸುವುದಕ್ಕಿಂತ ಅಪರಾಧ ನಡೆಯುವ ಮುನ್ನವೇ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದು ಅತ್ಯಂತ ಮುಖ್ಯ. ಜನರ ನಂಬಿಕೆಯನ್ನು ಉಳಿಸಿಕೊಳ್ಳುವ ಹೊಣೆ ಸರ್ಕಾರ ಮತ್ತು ಆಡಳಿತದ ಮೇಲಿದೆ ಆದ್ದರಿಂದ ಸರ್ಕಾರಿ ದೇವಸ್ಥಾನಗಳ ಜೊತೆಗೆ ಖಾಸಗಿ ದೇವಸ್ಥಾನಗಳು ಮತ್ತು ಮಠ-ಮಾನ್ಯಗಳೂ ಭದ್ರತೆ ಕುರಿತು ಹೆಚ್ಚಿನ ಜಾಗೃತಿ ಮತ್ತು ಎಚ್ಚರಿಕೆ ವಹಿಸಬೇಕು ಎಂದು ಡಿ.ಕೆ. ಶಿವಕುಮಾರ್ ಕರೆ ನೀಡಿದರು.

# ದೂರದೃಷ್ಟಿಯ ನಾಯಕ ನಾಡಪ್ರಭು ಕೆಂಪೇಗೌಡರ ಆದರ್ಶಗಳು ಪ್ರತಿಯೊಬ್ಬರಿಗೂ ಸ್ಫೂರ್ತಿದಾಯಕ




## ಸಮಗ್ರ ಅಭಿವೃದ್ಧಿಯ ಬೆಂಗಳೂರಿನ ನಿರ್ಮಾತೃ ಕೆಂಪೇಗೌಡರು : ಸಂಸದ ಡಾ. ಸಿ.ಎನ್. ಮಂಜುನಾಥ್

ಇಂದು ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಉತ್ತರಹಳ್ಳಿಯ ಸಾಧನಾ ಕಾಲೇಜು ಸಮೀಪದ ಕೆಂಪೇಗೌಡ ವೃತ್ತದಲ್ಲಿ, ಶ್ರೀ ಕೆಂಪೇಗೌಡ ಯುವ ಸಮಿತಿ ವತಿಯಿಂದ ಆಯೋಜಿಸಲಾದ 517ನೇ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ. ಸಿ.ಎನ್. ಮಂಜುನಾಥ್ ಅವರು ಭಾಗವಹಿಸಿ ನಾಡಪ್ರಭು ಶ್ರೀ ಕೆಂಪೇಗೌಡರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ ಗೌರವ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ಡಾ. ಮಂಜುನಾಥ್ ಅವರು, "ನಾಡಪ್ರಭು ಶ್ರೀ ಕೆಂಪೇಗೌಡರು ಕೇವಲ ಬೆಂಗಳೂರಿನ ನಿರ್ಮಾತೃ ಮಾತ್ರವಲ್ಲ, ದೂರದೃಷ್ಟಿಯ ಆಡಳಿತಗಾರ, ಅಪ್ರತಿಮ ನಗರ ಯೋಜಕ ಹಾಗೂ ಶ್ರೇಷ್ಠ ಇಂಜಿನಿಯರ್ ಆಗಿದ್ದರು. ಅವರು ಯಾವುದೇ ಜಾತಿ, ಮತ, ಸಮುದಾಯಕ್ಕೆ ಸೀಮಿತರಾಗದೆ ಎಲ್ಲರನ್ನು ಒಗ್ಗೂಡಿಸಿ ಸಮಾನತೆಯ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು" ಎಂದು ಹೇಳಿದರು.

"ಕೆರೆ-ಕಟ್ಟೆಗಳು, ಮಾರುಕಟ್ಟೆಗಳು, ದೇವಸ್ಥಾನಗಳು, ರಸ್ತೆ ವ್ಯವಸ್ಥೆ ಹಾಗೂ ನಗರದ ಸಮಗ್ರ ಅಭಿವೃದ್ಧಿಗೆ ಅಡಿಪಾಯ ಹಾಕಿದ ಕೆಂಪೇಗೌಡರ ದೂರದೃಷ್ಟಿಯ ಫಲವೇ ಇಂದು ಬೆಂಗಳೂರು ವಿಶ್ವಮಟ್ಟದಲ್ಲಿ ಗುರುತಿಸಿಕೊಂಡಿದೆ. ಅವರು ನಿರ್ಮಿಸಿದ ಅಭಿವೃದ್ಧಿಯ ಪರಿಕಲ್ಪನೆ ಇಂದಿಗೂ ಪ್ರಸ್ತುತವಾಗಿದ್ದು, ಮುಂದಿನ ಪೀಳಿಗೆಗೆ ದಾರಿದೀಪವಾಗಿದೆ" ಎಂದು ಅವರು ಅಭಿಪ್ರಾಯಪಟ್ಟರು.

"ನಾಡಪ್ರಭು ಶ್ರೀ ಕೆಂಪೇಗೌಡರ ಆದರ್ಶಗಳು, ಅಭಿವೃದ್ಧಿ ದೃಷ್ಟಿಕೋನ, ಸಮಾನತೆ ಮತ್ತು ಸರ್ವಜನ ಹಿತದ ಚಿಂತನೆಗಳು ಪ್ರತಿಯೊಬ್ಬರ ಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ಮೌಲ್ಯಗಳಾಗಿವೆ. ಅವರ ತತ್ವ-ಆದರ್ಶಗಳನ್ನು ಅನುಸರಿಸುವ ಮೂಲಕ ಮತ್ತಷ್ಟು ಅಭಿವೃದ್ಧಿ ಹೊಂದಿದ, ಸುಭದ್ರ ಹಾಗೂ ಸಮೃದ್ಧ ಬೆಂಗಳೂರನ್ನು ನಿರ್ಮಿಸುವ ಸಂಕಲ್ಪವನ್ನು ನಾವು ಕೈಗೊಳ್ಳಬೇಕು" ಎಂದು ಸಂಸದರು ಕರೆ ನೀಡಿದರು.

ಈ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕ ಎಂ. ಕೃಷ್ಣಪ್ಪ ಅವರು, ಬಿಬಿಎಂಪಿ ಮಾಜಿ ಕಾರ್ಪೊರೇಟರ್ ಹನುಮಂತು ಹಾಗೂ ರಮೇಶ್ ರಾಜು, ಕೆಂಪೇಗೌಡ ಯುವ ಸಮಿತಿಯ ಪದಾಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು, ಗಣ್ಯರು ಹಾಗೂ ಅಪಾರ ಸಂಖ್ಯೆಯ ಸಾರ್ವಜನಿಕರು ಉಪಸ್ಥಿತರಿದ್ದರು.

# ಪಶ್ಚಿಮ ಬಂಗಾಳದಲ್ಲಿ ಯುಸಿಸಿ ಕರಡು ಮಸೂದೆ ಪರಿಶೀಲನೆಗೆ ಸಮಿತಿ ರಚನೆ


**ಕೊಲ್ಕತ್ತಾ, ಜು.11:** ಪಶ್ಚಿಮ ಬಂಗಾಳ ಸರ್ಕಾರವು ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಕರಡು ಮಸೂದೆಯನ್ನು ಪರಿಶೀಲಿಸಿ ಅಂತಿಮರೂಪ ನೀಡಲು ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ರಂಜನಾ ಪ್ರಕಾಶ್ ದೇಸಾಯಿ ಅವರ ಅಧ್ಯಕ್ಷತೆಯಲ್ಲಿ 9 ಸದಸ್ಯರ ತಜ್ಞರ ಸಮಿತಿಯನ್ನು ರಚಿಸಿದೆ. ಈ ಕುರಿತು ರಾಜ್ಯ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

ಸಮಿತಿಯು ಯುಸಿಸಿ ಕರಡು ಮಸೂದೆಯ ಕಾನೂನು, ಸಾಮಾಜಿಕ ಹಾಗೂ ಆಡಳಿತಾತ್ಮಕ ಅಂಶಗಳನ್ನು ಸಮಗ್ರವಾಗಿ ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಶಿಫಾರಸು ಮಾಡಲಿದೆ. ಪರಿಶೀಲನೆ ಪೂರ್ಣಗೊಂಡ ಬಳಿಕ ಅಂತಿಮ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಲಿದೆ.

ಸರ್ಕಾರವು ಮುಂಬರುವ ಆಗಸ್ಟ್ ವಿಧಾನಸಭಾ ಅಧಿವೇಶನದಲ್ಲೇ ಯುಸಿಸಿ ಮಸೂದೆಯನ್ನು ಮಂಡಿಸುವ ಉದ್ದೇಶ ಹೊಂದಿದೆ. ಆದರೆ, ರಾಜ್ಯದ ಆದಿವಾಸಿ ಸಮುದಾಯಗಳನ್ನು ಈ ಮಸೂದೆಯ ವ್ಯಾಪ್ತಿಯಿಂದ ಹೊರಗಿಡುವ ಪ್ರಸ್ತಾವವಿದೆ.

ಯುಸಿಸಿ ಜಾರಿಗೆ ಸಂಬಂಧಿಸಿದಂತೆ ದೇಶದ ವಿವಿಧ ರಾಜ್ಯಗಳಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ನಡುವೆಯೇ ಪಶ್ಚಿಮ ಬಂಗಾಳ ಸರ್ಕಾರದ ಈ ಕ್ರಮ ಮಹತ್ವ ಪಡೆದಿದೆ. ಕರಡು ಮಸೂದೆಯನ್ನು ತಜ್ಞರ ಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಪರಿಷ್ಕರಿಸಿದ ಬಳಿಕವೇ ವಿಧಾನಸಭೆಯಲ್ಲಿ ಮಂಡಿಸಲಾಗುವುದು ಎಂದು ಸರ್ಕಾರ ತಿಳಿಸಿದೆ.

# ಕೆಂಪುಕೋಟೆಗೆ ಬಾಂಬ್ ಬೆದರಿಕೆ: ತೀವ್ರ ಶೋಧದ ಬಳಿಕ ಹುಸಿಕರೆ ಎಂದು ದೃಢ



**ನವದೆಹಲಿ, ಜು.11:** ದೆಹಲಿಯಲ್ಲಿರುವ ಐತಿಹಾಸಿಕ ಕೆಂಪುಕೋಟೆಗೆ ಬಾಂಬ್ ಇಟ್ಟು ಸ್ಫೋಟಿಸುವುದಾಗಿ ಬೆದರಿಕೆ ಕರೆ ಬಂದ ಹಿನ್ನೆಲೆ ಆತಂಕದ ಸನ್ನಿವೇಶ ನಿರ್ಮಾಣವಾಯಿತು. ಪೊಲೀಸರು ಮತ್ತು ಭದ್ರತಾ ಸಂಸ್ಥೆಗಳು ನಡೆಸಿದ ಸುದೀರ್ಘ ತಪಾಸಣೆಯ ಬಳಿಕ ಈ ಬೆದರಿಕೆ ಹುಸಿ ಎಂದು ದೃಢಪಟ್ಟಿದೆ.

ಮುಂಬೈ ಪೊಲೀಸ್ ಕಂಟ್ರೋಲ್ ರೂಂಗೆ ಅಪರಿಚಿತ ವ್ಯಕ್ತಿಯೊಬ್ಬ ಕರೆ ಮಾಡಿ, ದೆಹಲಿಯ ಕೆಂಪುಕೋಟೆಯಲ್ಲಿ ಬಾಂಬ್ ಸ್ಫೋಟಗೊಳ್ಳಲಿದೆ ಎಂದು ತಿಳಿಸಿದ್ದಾನೆ. ತಕ್ಷಣವೇ ಈ ಮಾಹಿತಿಯನ್ನು ಮುಂಬೈ ಪೊಲೀಸರು ದೆಹಲಿ ಪೊಲೀಸ್ ಕಂಟ್ರೋಲ್ ರೂಂಗೆ ರವಾನಿಸಿದ್ದು, ಬಳಿಕ ದೆಹಲಿ ಪೊಲೀಸರು ಸ್ಥಳದಲ್ಲಿ ಭದ್ರತೆಯನ್ನು ಬಿಗಿಗೊಳಿಸಿದರು.

ಬೆದರಿಕೆ ಮಾಹಿತಿ ಸಿಕ್ಕ ತಕ್ಷಣ ಕೆಂಪುಕೋಟೆ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಪೊಲೀಸರು, ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನದಳದ ಸಹಾಯದಿಂದ ಸಮಗ್ರ ತಪಾಸಣೆ ನಡೆಸಿದರು. ಹಲವು ಗಂಟೆಗಳ ಕಾಲ ನಡೆದ ಪರಿಶೀಲನೆಯಲ್ಲಿ ಯಾವುದೇ ಸ್ಫೋಟಕ ವಸ್ತು ಪತ್ತೆಯಾಗಿಲ್ಲ.

ಪರಿಶೀಲನೆ ಪೂರ್ಣಗೊಂಡ ಬಳಿಕ ಈ ಬೆದರಿಕೆ ಕರೆ ಹುಸಿಯಾಗಿತ್ತು ಎಂದು ಪೊಲೀಸರು ಸ್ಪಷ್ಟಪಡಿಸಿದ್ದಾರೆ. ಕರೆ ಮಾಡಿದ ವ್ಯಕ್ತಿಯನ್ನು ಪತ್ತೆಹಚ್ಚಲು ತನಿಖೆ ಮುಂದುವರಿದಿದ್ದು, ಪ್ರಕರಣ ದಾಖಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗಿದೆ.

# ರಾಮಮಂದಿರ ದೇಣಿಗೆ ಕಳವಿನಿಂದ ಅವಮಾನ: ನೃಪೇಂದ್ರ ಮಿಶ್ರಾ

**ಅಯೋಧ್ಯೆ, ಜು.11:** ಅಯೋಧ್ಯೆ ರಾಮಮಂದಿರನ ಲೂಟಿಯು ನಮಗೆ ಅವಮಾನ ಉಂಟು ಮಾಡಿದೆ, ನಿರಾಶೆಯಾಗಿದೆ. ಈ ಘಟನೆಯಿಂದ ಯೋಜನೆಗೆ ಸಂಬಂಧಿಸಿದ ಪ್ರತಿಯೊಬ್ಬರೂ ಅವಮಾನಿತರಾಗಿದ್ದಾರೆ ಎಂದು ರಾಮಮಂದಿರ ನಿರ್ಮಾಣ ಸಮಿತಿಯ ಅಧ್ಯಕ್ಷ ನೃಪೇಂದ್ರ ಮಿಶ್ರಾ ಶನಿವಾರ ಹೇಳಿದ್ದಾರೆ.

ರಾಮಮಂದಿರ ನಿರ್ಮಾಣ ಸಮಿತಿಯ ಎರಡನೇ ದಿನದ ಸಭೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಮಿಶ್ರಾ, ಈ ಆಪಾದಿತ ಕಳ್ಳತನ ಪ್ರಕರಣವು ರಾಮಮಂದಿರದ ಖ್ಯಾತಿಗೆ ಕಳಂಕ ತಂದಿದೆ. ಆದರೆ ಇದೇ ರೀತಿಯ ಘಟನೆಗಳು ನಡೆಯದಂತೆ ತಡೆಗಟ್ಟಲು ನಿರ್ವಹಣಾ ವ್ಯವಸ್ಥೆಯನ್ನು ಬಲಪಡಿಸಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಹಾಗೆಯೇ, ಇದು ನಾಚಿಕೆಗೇಡಿನ ಸಂಗತಿ. ನಾವು ಕ್ಷಮೆಯಾಚಿಸುವುದು ಮಾತ್ರವಲ್ಲದೆ, ಈ ಘಟನೆಯಿಂದ ನಾವು ಅವಮಾನಿತರಾಗಿದ್ದೇವೆ. ನಿರಾಶೆಗೆ ಒಳಗಾಗಿದ್ದೇವೆ. ಈ ವಿಷಯವು ಈಗ ದೇವಾಲಯದ ಆಡಳಿತ ಮಂಡಳಿಯ ವ್ಯಾಪ್ತಿಗೆ ಬಂದಿದೆ. ನಾವು ಮತ್ತೆ ಹೀಗಾಗದಂತೆ ನೋಡಿಕೊಳ್ಳುತ್ತೇವೆ ಎಂದು ಭರವಸೆ ನೀಡಿದರು.

ಇನ್ನು ಈ ಸಂದರ್ಭದಲ್ಲೇ ದೇವಾಲಯ ಟ್ರಸ್ಟ್‌ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯನ್ನು ನೇಮಿಸುವುದಕ್ಕೆ ತಮ್ಮ ಬೆಂಬಲವನ್ನು ಪುನರುಚ್ಚರಿಸಿದರು. ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿಯನ್ನು ಸೂಕ್ತ ಅಭ್ಯರ್ಥಿಯನ್ನು ಶಿಫಾರಸು ಮಾಡಲು ರಚಿಸಲಾಗಿದೆ ಎಂದು ಹೇಳಿದರು. ಟ್ರಸ್ಟ್ ಮಹಿಳೆಯನ್ನು ಸಿಇಒ ಆಗಿ ನೇಮಿಸಬಹುದೆಂಬ ಊಹಾಪೋಹಗಳಿಗೆ ಪ್ರತಿಕ್ರಿಯಿಸಿದ ಮಿಶ್ರಾ, ಟ್ರಸ್ಟ್ ನಿರ್ಧಾರ



ತೆಗೆದುಕೊಳ್ಳುವ ಮೊದಲು ಸಮಿತಿಯು ತನ್ನ ಶಿಫಾರಸುಗಳನ್ನು ಸಲ್ಲಿಸುತ್ತದೆ ಎಂದರು.

ಇನ್ನು ದೇಣಿಗೆ ಕಳ್ಳತನದ ವಿವಾದದ ನಡುವೆ ರಾಮಮಂದಿರ ಟ್ರಸ್ಟ್‌ನ ಪ್ರಧಾನ ಕಾರ್ಯದರ್ಶಿ ಚಂಪತ್ ರಾಯ್ ಮತ್ತು ಟ್ರಸ್ಟಿ ಅನಿಲ್ ಮಿಶ್ರಾ ರಾಜೀನಾಮೆ ನೀಡಿದ್ದು, ಅದನ್ನು ಅಂಗೀಕರಿಸಲಾಗಿದೆ. ಇದೀಗ ದೇವಾಲಯದ ನಿರ್ವಹಣಾ ವ್ಯವಸ್ಥೆಯನ್ನು ಬಲಪಡಿಸುವ ಕ್ರಮಗಳನ್ನು ಚರ್ಚಿಸಲು ಟ್ರಸ್ಟ್ ಜುಲೈ 22ರಂದು ಮತ್ತೆ ಸಭೆ ಸೇರಲಿದೆ. ಆದರೆ ಈ ಸಭೆಯ ಕಾರ್ಯಸೂಚಿಯ ಬಗ್ಗೆ ತನಗೆ ತಿಳಿದಿಲ್ಲ ಎಂದು ನಿರ್ಮಾಣ ಸಮಿತಿ ಮುಖ್ಯಸ್ಥರಾಗಿರುವ ನೃಪೇಂದ್ರ ಮಿಶ್ರಾ ಹೇಳಿಕೊಂಡಿದ್ದಾರೆ.

ಇನ್ನು ಅಯೋಧ್ಯೆ ರಾಮಮಂದಿರದ ದೇಣಿಗೆ ಹಣ ದುರುಪಯೋಗ ಮತ್ತು ಕಳ್ಳತನದ ಆರೋಪಗಳು ಮುನ್ನೆಲೆಗೆ ಬಂದಾಗಲೇ ನೃಪೇಂದ್ರ ಅವರ ವಿರುದ್ಧ ಆಕ್ರೋಶ ವ್ಯಕ್ತವಾಗಿತ್ತು. ನೃಪೇಂದ್ರ ಮಿಶ್ರಾ ರಾಮಮಂದಿರ ನಿರ್ಮಾಣ ಕಾರ್ಯದ ಉಸ್ತುವಾರಿ ಹೊತ್ತವರಾಗಿ ಈ ಹಗರಣವನ್ನು ತಡೆಯಲು ವಿಫಲರಾಗಿದ್ದಾರೆ. ಮೇಲ್ವಿಚಾರಣೆಯಲ್ಲಿ ಲೋಪವಾಗಿದೆ ಎಂದು ಪ್ರತಿಪಕ್ಷ ನಾಯಕರು ಟೀಕಿಸಿದ್ದಾರೆ.

## ಬದ್ರಿನಾಥ ದೇವಸ್ಥಾನದ ದೇಣಿಗೆ ದುರ್ಬಳಕೆ ಆರೋಪ: ತನಿಖೆಗೆ ಸಮಿತಿ ರಚನೆ

**ಡೆಹ್ರಾಡೂನ್, ಜು.11:** ಬದ್ರಿನಾಥ ದೇವಸ್ಥಾನದಲ್ಲಿ ಭಕ್ತರ ದೇಣಿಗೆ ಮತ್ತು ಕಾಣಿಕೆಗಳ ದುರ್ಬಳಕೆ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಉತ್ತರಾಖಂಡ ಸರ್ಕಾರವು ಉನ್ನತ ಮಟ್ಟದ ಮೂರು ಸದಸ್ಯರ ತನಿಖಾ ಸಮಿತಿಯನ್ನು ರಚಿಸಿದೆ. ದೇವಾಲಯದ ದೇಣಿಗೆ ನಿರ್ವಹಣೆಯಲ್ಲಿ ಅಕ್ರಮ ನಡೆದಿದೆ ಎಂಬ ದೂರುಗಳು ಮತ್ತು ಸಾರ್ವಜನಿಕ ವಲಯದಲ್ಲಿ ವ್ಯಕ್ತವಾದ ಆತಂಕದ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಸರ್ಕಾರ ರಚಿಸಿರುವ ಸಮಿತಿಯು ದೇಣಿಗೆಗಳ ಸಂಗ್ರಹ, ಲೆಕ್ಕಪತ್ರ ನಿರ್ವಹಣೆ ಹಾಗೂ ಅವುಗಳ ಬಳಕೆಗೆ ಸಂಬಂಧಿಸಿದ ಎಲ್ಲ ಆರೋಪಗಳನ್ನು ಪರಿಶೀಲಿಸಲಿದೆ. ತನಿಖೆ ಪೂರ್ಣಗೊಂಡ ಬಳಿಕ ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಲಿದ್ದು, ಅದರ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ. ಈ ಪ್ರಕರಣದಲ್ಲಿ ಈಗಾಗಲೇ ಬದ್ರಿನಾಥ–ಕೇದಾರನಾಥ ದೇವಸ್ಥಾನ ಸಮಿತಿ ಒಬ್ಬ ಸಿಬ್ಬಂದಿಯನ್ನು ಅಮಾನತುಗೊಳಿಸಿದೆ. ದೇವಾಲಯ ಸಮಿತಿಯು ಆರಂಭದಲ್ಲಿ ನಾಲ್ಕು ಸದಸ್ಯರ ಆಂತರಿಕ ತನಿಖಾ ಸಮಿತಿಯನ್ನು ರಚಿಸಿದ್ದರೂ, ಅದರ ಬಗ್ಗೆ ಅಸಮಾಧಾನ ವ್ಯಕ್ತವಾದ ಹಿನ್ನೆಲೆಯಲ್ಲಿ ಸರ್ಕಾರ ಸ್ವತಂತ್ರವಾಗಿ ಉನ್ನತ ಮಟ್ಟದ ತನಿಖೆಗೆ ಆದೇಶಿಸಿದೆ. ಆರೋಪಗಳು ಸತ್ಯವೆಂದು ದೃಢಪಟ್ಟರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಕೊಲ್ಲೂರು ಮೂಕಾಂಬಿಕೆ ದರ್ಶನ ಪಡೆದ ಕೇರಳಂ ಸಿಎಂ ವಿ.ಡಿ.ಸತೀಶನ್



**ಬೈಂದೂರು (ಉಡುಪಿ), ಜು.11:** ಕೇರಳ ಮುಖ್ಯಮಂತ್ರಿ ವಿ.ಡಿ. ಸತೀಶನ್ ಅವರು ಶನಿವಾರ ಮುಂಜಾನೆ ಕೊಲ್ಲೂರಿನ ಮೂಕಾಂಬಿಕಾ ದೇವಾಲಯಕ್ಕೆ ಭೇಟಿ ನೀಡಿ, ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಮುಖ್ಯಮಂತ್ರಿ ಅವರು ದೇವಾಲಯಕ್ಕೆ ಆಗಮಿಸಿ, ಮುಂಜಾನೆಯ ಪೂಜಾ ವಿಧಿವಿಧಾನಗಳಲ್ಲಿ ಭಾಗವಹಿಸಿದರು.

ಬಳಿಕ ಅಧಿದೇವತೆ ಮೂಕಾಂಬಿಕಾ ದೇವಿಯ ದರ್ಶನ ಪಡೆದರು. ದರ್ಶನದ ನಂತರ ದೇವಾಲಯದ ಆಡಳಿತ ಮಂಡಳಿ ಮುಖ್ಯಮಂತ್ರಿ ಅವರನ್ನು ಗೌರವಿಸಿ ಸನ್ಮಾನಿಸಿತು. ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಬಳಿಕ ವಿ.ಡಿ. ಸತೀಶನ್ ಅವರು ಕೊಲ್ಲೂರು ಮೂಕಾಂಬಿಕಾ ದೇವಾಲಯಕ್ಕೆ ಭೇಟಿ ನೀಡುತ್ತಿರುವುದು ಇದೇ ಮೊದಲ ಬಾರಿ. ಮೂಕಾಂಬಿಕಾ ದೇವಿಯ ಪರಮ ಭಕ್ತರಾಗಿರುವ ಅವರು ಈ ಹಿಂದೆ ಹಲವು ಬಾರಿ ದೇವಾಲಯಕ್ಕೆ ಭೇಟಿ ನೀಡಿದ್ದರು. ಮುಖ್ಯಮಂತ್ರಿಯವರ ಭೇಟಿ ಹಿನ್ನೆಲೆಯಲ್ಲಿ ದೇವಾಲಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಮತ್ತು ಭದ್ರತಾ ಸಿಬ್ಬಂದಿ ಉಪಸ್ಥಿತರಿದ್ದರು. ಅವರ ದರ್ಶನವು ಸುಗಮವಾಗಿ ನಡೆಯುವಂತೆ ಅಗತ್ಯ ಎಲ್ಲ ವ್ಯವಸ್ಥೆಗಳನ್ನು ಕಲ್ಪಿಸಲಾಗಿತ್ತು.

# ಪೋಕ್ಸೊ ಪ್ರಕರಣ ದಾಖಲಿಸಿದ್ದಕ್ಕೆ ಪ್ರತೀಕಾರ: ಜಾಮೀನು ಪಡೆದು ಸಂತ್ರಸ್ತ ಯುವತಿ ಸೇರಿ ಆರು ಮಂದಿ ಹತ್ಯೆ ಮಾಡಿದ ಆರೋಪಿ

**ಹೈದರಾಬಾದ್, ಜು.11:** ತನ್ನ ವಿರುದ್ಧ ಪೋಕ್ಸೋ ಪ್ರಕರಣ ದಾಖಲಾದ ಹಿನ್ನಲೆ ಕೋಪಗೊಂಡ ಯುವಕನೊಬ್ಬ ಆರು ಮಂದಿಯ ಹತ್ಯೆ ಮಾಡಿರುವ ಘಟನೆ ತೆಲಂಗಾಣದ ರಂಗಾರೆಡ್ಡಿ ಜಿಲ್ಲೆಯ ಶಾಬಾದ್ ಮಂಡಲದಲ್ಲಿ ನಡೆದಿದೆ. ಆರೋಪಿ ಯನ್ನು 28 ವರ್ಷದ ರಾಜ್‌ಕುಮಾರ್ ಎಂದು ಗುರುತಿಸಿದೆ. ಪ್ರಕರಣದ ಬಳಿಕ ಜಾಮೀನು ಪಡೆದು ಜೈಲಿನಿಂದ ಹೊರಬಂದು ಈ ಕೃತ್ಯ ಎಸಗಿದ್ದಾನೆ.ಮೊದಲು ತನ್ನ ಹೆಂಡತಿ ಮತ್ತು ಇಬ್ಬರು ಚಿಕ್ಕ ಮಕ್ಕಳನ್ನು ಹತ್ಯೆ ಮಾಡಿದ್ದಾನೆ. ಬಳಿಕ ಲೈಂಗಿಕ ಕಿರುಕುಳ ನೀಡಿದ್ದ 17 ವರ್ಷದ ಬಾಲಕಿಯನ್ನು ಮತ್ತು ಆಕೆಯ ತಾಯಿ ಮತ್ತು ಅಜ್ಜಿಯೊಂದಿಗೆ ಕ್ರೂರವಾಗಿ ಕೊಂದಿದ್ದಾನೆ. ಪೊಲೀಸರ ಪ್ರಕಾರ, ಆರೋಪಿಯು ಮೊದಲು ತನ್ನ ಪತ್ನಿ ಪಾರ್ವತಿ ಸರಿತಾ (30), ಮತ್ತು ಆತನ ಪುತ್ರರಾದ ಪರೀಕ್ಷಿತ್ (3) ಮತ್ತು ದೈವೀಕ್ಷಿತ್ (2) ಅವರನ್ನು ತನ್ನ ಮನೆಯಲ್ಲಿಯೇ ಚಾಕುವಿನಿಂದ ಹಲ್ಲೆ ಮಾಡಿ ಕೊಂದನು. ಬಳಿಕ ಪೋಕ್ಸೋ ಪ್ರಕರಣದಲ್ಲಿ ಬಲಿಯಾದ 17 ವರ್ಷದ ಬಾಲಕಿಯ ಮನೆಗೆ ಹೋಗಿ ಆಕೆಯ ತಾಯಿ ಚಿತ್ಯಾಲ ಲಕ್ಷ್ಮಿ (45) ಮತ್ತು ಅಜ್ಜಿ ಚಿತ್ಯಾಲ ರುಕ್ಕಮ್ಮ (65) ಅವರನ್ನು ಕೊಂದನು. ನಂತರ ಅವನು ಬಾಲಕಿಯನ್ನು ಗ್ರಾಮದ ಹೊರವಲಯದಲ್ಲಿರುವ ಕೊಳಕ್ಕೆ ಕರೆದೊಯ್ದು, ಲೈಂಗಿಕ ದೌರ್ಜನ್ಯ ಎಸಗಿ ಅಪ್ರಾಪ್ತ ಬಾಲಕಿಯನ್ನು ಕೊಂದಿದ್ದಾನೆ ಎಂದು ಪ್ರಾಥಮಿಕ ತನಿಖೆಗಳು ಬಹಿರಂಗಪಡಿಸಿವೆ. ಮೇ ತಿಂಗಳ ಅಂತ್ಯದಲ್ಲಿ ಅಪ್ರಾಪ್ತ ವಯಸ್ಕ ಬಾಲಕಿ ರಾಜ್‌ಕುಮಾರ್ ವಿರುದ್ಧ ಪ್ರಕರಣ ದಾಖಲಿಸಿದ್ದಳು. ನಂತರ ಆರೋಪಿ ಪರಾರಿಯಾಗಿದ್ದರಿಂದ ಅವನು ಜೈಲಿಗೆ ಹೋಗಲಿಲ್ಲ. ಆರೋಪಗಳು ಏಳು ವರ್ಷಗಳಿಗಿಂತ ಕಡಿಮೆ ಅವಧಿಯ ಜೈಲು ಶಿಕ್ಷೆಯನ್ನು ಒಳಗೊಂಡಿದ್ದರಿಂದ, ಅವನು ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನು ಪಡೆದು ಮನೆಗೆ ಮರಳಿದನು. ಪೊಲೀಸರು ಘಟನೆಯ ತನಿಖೆ ನಡೆಸುತ್ತಿದ್ದು, ಕೊಲೆಗಳ ಹಿಂದಿನ ಉದ್ದೇಶ ಪೋಕ್ಸೊ ಪ್ರಕರಣವಾಗಿರಬಹುದೇ ಎಂಬ ಸಾಧ್ಯತೆಯನ್ನು ಪರಿಶೀಲಿಸುತ್ತಿದ್ದಾರೆ. ಮೂಲಗಳ ಪ್ರಕಾರ, ಈ ಘೋರ ಅಪರಾಧದ ನಂತರ, ಆರೋಪಿ ತನ್ನ ಕುಟುಂಬ ಸದಸ್ಯರಿಗೆ ಕರೆ ಮಾಡಿ, ಆರು ಜನರನ್ನು ಕೊಲೆ ಮಾಡಿರುವುದಾಗಿ ತಿಳಿಸಿ, ಆತ್ಮಹತ್ಯೆ ಮಾಡಿಕೊಳ್ಳುವುದಾಗಿ ಹೇಳಿದ್ದಾನೆ. ಈವರೆಗೂ ಆತನ ಸುಳಿವು ಪತ್ತೆಯಾಗಿಲ್ಲ.

# ತುಟಿ ಗಾಯಕ್ಕೆ ಅರಿವಳಿಕೆ ನೀಡಿ ಚಿಕಿತ್ಸೆ 18 ತಿಂಗಳ ಮಗು ದಾರುಣ ಸಾವು



**ತಿರುವನಂತಪುರ, ಜು.11:** ಆಟವಾಡುತ್ತಿದ್ದಾಗ ಬಿದ್ದು ತುಟಿಗೆ ಗಾಯ ಮಾಡಿಕೊಂಡಿದ್ದ 18 ತಿಂಗಳ (ಒಂದೂವರೆ ವರ್ಷದ) ಮಗುವಿಗೆ ಹೊಲಿಗೆ ಹಾಕಲು ಅರಿವಳಿಕೆ ನೀಡಿದ ಬಳಿಕ ಮಗು ಮೃತಪಟ್ಟಿರುವ ದಾರುಣ ಘಟನೆ ಕೇರಳದ ಕಣ್ಣೂರಿನಲ್ಲಿ ನಡೆದಿದೆ. ವೈದ್ಯಕೀಯ ನಿರ್ಲಕ್ಷ್ಯದ ಆರೋಪದ ಮೇಲೆ ಅರಿವಳಿಕೆ ತಜ್ಞೆಯ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಮೃತ ಮಗುವನ್ನು ಕಣ್ಣೂರು ಜಿಲ್ಲೆಯ ಎರಾಮಮ್–ಕುಟ್ಟೂರ್ ಗ್ರಾ.ಪಂ.ವ್ಯಾಪ್ತಿಯ ಮತಮಂಗಲಂನ ಟಿ. ಸೂರಜ್ ಮತ್ತು ವಿಜಿಷಾ ದಂಪತಿಯ ಏಕೈಕ ಪುತ್ರ ದೇವಾಂಶ್ ಶೌರ್ಯ ಎಂದು ಗುರುತಿಸಲಾಗಿದೆ. ವಿವಾಹವಾಗಿ 8 ವರ್ಷಗಳ ಸುದೀರ್ಘ ಕಾಯುವಿಕೆಯ ಬಳಿಕ ಈ ಮಗು ಜನಿಸಿತ್ತು. ಜುಲೈ 5 ರಂದು ಮನೆಯ ಅಂಗಳದಲ್ಲಿ ಆಟವಾಡುತ್ತಿದ್ದಾಗ ಬಿದ್ದು ಮಗುವಿನ ತುಟಿಗೆ ಗಾಯವಾಗಿತ್ತು. ತಕ್ಷಣವೇ ಪೋಷಕರು ಮಗುವನ್ನು ಪಯ್ಯನ್ನೂರಿನ ಬೇಬಿ ಮೆಮೋರಿಯಲ್ ಆಸ್ಪತ್ರೆಗೆ ಕರೆದೊಯ್ದಿದ್ದರು. ಅಲ್ಲಿನ ವೈದ್ಯರು ಗಾಯಕ್ಕೆ ಹೊಲಿಗೆ ಹಾಕಲು ಅರಿವಳಿಕೆ ನೀಡುವಂತೆ ಸೂಚಿಸಿದ್ದರು.


ಪೋಷಕರ ದೂರಿನ ಪ್ರಕಾರ, ಅರಿವಳಿಕೆ ನೀಡಿದ ತಕ್ಷಣ ಮಗು ಪ್ರಜ್ಞೆ ತಪ್ಪಿದೆ. ಸ್ಥಿತಿ ಗಂಭೀರವಾದ ಹಿನ್ನೆಲೆಯಲ್ಲಿ ಮಗುವನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಣ್ಣೂರಿನಲ್ಲಿರುವ ಬೇಬಿ ಮೆಮೋರಿಯಲ್ ಆಸ್ಪತ್ರೆಯ ಘಟಕಕ್ಕೆ ಸ್ಥಳಾಂತರಿಸಿ, ಐಸಿಯುನಲ್ಲಿ ವೆಂಟಿಲೇಟರ್ ವ್ಯವಸ್ಥೆಯಲ್ಲಿ ಇರಿಸಲಾಗಿತ್ತು. ಆದರೆ, ಐದು ದಿನಗಳ ಕಾಲ ಸಾವು ಬದುಕಿನ ನಡುವೆ ಹೋರಾಡಿದ ಮಗು, ಶುಕ್ರವಾರ ರಾತ್ರಿ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದೆ. ಅತಿಯಾದ ಪ್ರಮಾಣದಲ್ಲಿ ಅರಿವಳಿಕೆ ನೀಡಿದ್ದೇ ಮಗುವಿನ ಮೆದುಳು ಹಾನಿಗೊಳಗಾಗಿ ಸಾವನ್ನಪ್ಪಲು ಕಾರಣ ಎಂದು ಮಗುವಿನ ಸಂಬಂಧಿಕರು ಆರೋಪಿಸಿದ್ದಾರೆ. ಮಗುವಿನ ಸಂಬಂಧಿ ಕೆ. ರಾಜೀವನ್ ಎಂಬುವವರು ನೀಡಿದ ದೂರಿನ ಆಧಾರದ ಮೇಲೆ, ಪಯ್ಯನ್ನೂರು ಪೊಲೀಸರು ಪಯ್ಯನ್ನೂರಿನ ಬೇಬಿ ಮೆಮೋರಿಯಲ್ ಆಸ್ಪತ್ರೆಯ ಅರಿವಳಿಕೆ ತಜ್ಞೆ ಡಾ. ಅಂಜಲಿ ಪೊದುವಾಳ್ ವಿರುದ್ಧ ಭಾರತೀಯ ನ್ಯಾಯ ಸಂಹಿತೆಯ ಸೆಕ್ಷನ್ 125ರ (ಮಾನವನ ಜೀವ ಅಥವಾ ವೈಯಕ್ತಿಕ ಸುರಕ್ಷತೆಗೆ ಅಪಾಯವನ್ನುಂಟುಮಾಡುವ ನಿರ್ಲಕ್ಷ್ಯದ ಕೃತ್ಯ) ಅಡಿ ಪ್ರಕರಣ ದಾಖಲಿಸಿದ್ದಾರೆ. ಈ ಕಾಯ್ದೆಯಡಿ ಗರಿಷ್ಠ ಮೂರು ತಿಂಗಳ ಜೈಲು ಶಿಕ್ಷೆ ವಿಧಿಸಲು ಅವಕಾಶವಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಪರೀಕ್ಷಾ ಅಕ್ರಮ ವಿರೋಧಿಸಿ ಜು.20ಕ್ಕೆ ಸಂಸತ್ ಚಲೋ: ವಾಂಗ್ಚುಕ್

**ನವದೆಹಲಿ, ಜು.11:** ದೆಹಲಿಯ ಜಂತರ್ ಮಂತರ್‌ನಲ್ಲಿ ಪರೀಕ್ಷಾ ಅಕ್ರಮಗಳ ವಿರುದ್ಧ ನಡೆಯುತ್ತಿರುವ ಪ್ರತಿಭಟನೆ ಈಗ ಇಡೀ ದೇಶದ ಗಮನ ಸೆಳೆದಿದೆ. ಕಾಕ್ರೋಚ್ ಜನತಾ ಪಕ್ಷ (ಸಿಜೆಪಿ) ಹಮ್ಮಿಕೊಂಡಿರುವ ಈ ಹೋರಾಟ ಶನಿವಾರ 22ನೇ ದಿನಕ್ಕೆ ಕಾಲಿಟ್ಟಿದೆ.

ಜೂನ್ 28ರಂದು ಈ ಆಂದೋಲನಕ್ಕೆ ಕೈಜೋಡಿಸಿದ ಖ್ಯಾತ ಶಿಕ್ಷಣತಜ್ಞ ಹಾಗೂ ಹವಾಮಾನ ಕಾರ್ಯಕರ್ತ ಸೋನಮ್ ವಾಂಗ್ಚುಕ್ ಅವರ ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಈಗ 14ನೇ ದಿನ ತಲುಪಿದೆ. ಹಗಲಿರುಳು ದೇಶದ ಭವಿಷ್ಯಕ್ಕಾಗಿ ಧರಣಿ ಕುಳಿತಿರುವ ವಾಂಗ್ಚುಕ್ ಅವರ ಆರೋಗ್ಯದ ಸ್ಥಿತಿ ಸದ್ಯ ಕಳವಳಕಾರಿಯಾಗಿದೆ. ವೈದ್ಯಕೀಯ ವರದಿಗಳ ಪ್ರಕಾರ, ಉಪವಾಸ ಆರಂಭಿಸಿದಾಗಿನಿಂದ ಅವರು ಬರೋಬ್ಬರಿ 7.5 ಕೆಜಿ ತೂಕ ಕಳೆದುಕೊಂಡಿದ್ದಾರೆ ಎಂದು ಹೇಳಲಾಗುತ್ತಿದೆ.

ಶುಕ್ರವಾರ ತಮ್ಮ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ವೀಡಿಯೊ ಒಂದನ್ನು



ಹಂಚಿಕೊಂಡಿರುವ ಸೋನಮ್ ವಾಂಗ್ಚುಕ್, ತಮಗೆ ದಣಿವಾಗಿದ್ದರೂ ಹೋರಾಟದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇಂದು ನನ್ನ ಉಪವಾಸದ 13ನೇ ದಿನ. ನಿನ್ನೆಯಿದ್ದಷ್ಟು ಶಕ್ತಿ ಇವತ್ತಿಲ್ಲ, ಸ್ವಲ್ಪ ಸುಸ್ತಾಗುತ್ತಿದೆ. ಉಪವಾಸದ ದಿನಗಳಲ್ಲಿ ಇದು ಸಹಜ, ಎಂದಿದ್ದಾರೆ.

ಇದೇ ವೇಳೆ ತಮಗೆ ಸಿಗುತ್ತಿರುವ ಅತಿಯಾದ ಪ್ರಶಂಸೆಯ ಬಗ್ಗೆ ಬೇಸರ ವ್ಯಕ್ತಪಡಿಸಿದ ಅವರು, ಸಾಮಾಜಿಕ ಜಾಲತಾಣಗಳಲ್ಲಿ ಜನ ನನ್ನನ್ನು 21ನೇ ಶತಮಾನದ ಗಾಂಧಿ ಅಥವಾ ಆಧುನಿಕ ಗಾಂಧಿ ಎಂದು ಕರೆಯುತ್ತಿದ್ದಾರೆ.

ಇನ್ನೂ ಕೆಲವರು ನನ್ನನ್ನು ಸೂಪರ್ ಹೀರೋ ತರ ನೋಡುತ್ತಿದ್ದಾರೆ. ಆದರೆ ಇಂತಹ ಪ್ರತಿಕ್ರಿಯೆಗಳು ನನಗೆ ಮುಜುಗರ ತರುತ್ತವೆ. ನಾನು ಗಾಂಧಿಯೂ ಅಲ್ಲ, ಹೀರೋ ಕೂಡ ಅಲ್ಲ. ದೇಶದ ಒಬ್ಬ ಸಾಮಾನ್ಯ ನಾಗರಿಕನಾಗಿ ನನ್ನ ಜವಾಬ್ದಾರಿಯನ್ನು ನಿಭಾಯಿಸಲು ಪ್ರಯತ್ನಿಸುತ್ತಿದ್ದೇನೆ, ಅಷ್ಟೇ, ಎಂದು ಹೇಳಿದ್ದಾರೆ.ದೇಶದಲ್ಲಿ ಇತ್ತೀಚೆಗೆ ನಡೆದ ಪರೀಕ್ಷಾ ಅಕ್ರಮಗಳು ಮತ್ತು ಪೇಪರ್ ಲೀಕ್ ದಂಧೆಯಿಂದ ಬೇಸತ್ತು ಹಲವು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿರುವುದನ್ನು ವಾಂಗ್ಚುಕ್ ತೀವ್ರವಾಗಿ ಖಂಡಿಸಿದರು. ಒಂದು ವೇಳೆ ಆತ್ಮಹತ್ಯೆ ಮಾಡಿಕೊಂಡ ಆ ವಿದ್ಯಾರ್ಥಿಗಳಲ್ಲಿ ನಿಮ್ಮ ಸ್ವಂತ ತಂಗಿ ಅಥವಾ ಮಗಳು ಇದ್ದಿದ್ದರೆ ನೀವು ಸುಮ್ಮನೆ ಕೂರುತ್ತಿದ್ದಿರಾ, ಇಲ್ಲ ತಾನೇ ಅಂತಹ ಪರಿಸ್ಥಿತಿ ಬರುವವರೆಗೂ ಕಾಯಬೇಡಿ. ಅನ್ಯಾಯದ ವಿರುದ್ಧ ಈಗಲೇ ಧ್ವನಿ ಎತ್ತಿ, ಎಂದು ಜನಸಾಮಾನ್ಯರಿಗೆ ಕರೆ ನೀಡಿದರು.

ಜುಲೈ 20 ರಿಂದ ಸಂಸತ್ತಿನ ಮಳೆಗಾಲದ ಅಧಿವೇಶನ ಆರಂಭವಾಗಲಿದ್ದು, ಅಂದು ಸಂಸತ್ತಿಗೆ ಬೃಹತ್ ಶಾಂತಿಯುತ ಮೆರವಣಿಗೆ ನಡೆಸಲು ಪ್ರತಿಭಟನಾಕಾರರು ಸಜ್ಜಾಗಿದ್ದಾರೆ. ಈ ಬಗ್ಗೆ ಮಾತನಾಡಿದ ವಾಂಗ್ಚುಕ್, ನಮ್ಮ ಹಾಗೆ ನೀವು 24 ದಿನಗಳ ಕಾಲ ಉಪವಾಸ ಇರಬೇಕಾಗಿಲ್ಲ. ಚೆನ್ನಾಗಿ ಊಟ ಮಾಡಿಕೊಂಡೇ ಬನ್ನಿ. ಆದರೆ ಜುಲೈ 20ರಂದು ನಮ್ಮೊಂದಿಗೆ ಕೈಜೋಡಿಸಿ. ಒಂದು ವೇಳೆ ನಿಮಗೆ ದೆಹಲಿಗೆ ಬರಲು ಸಾಧ್ಯವಾಗದಿದ್ದರೆ, ನೀವು ಎಲ್ಲಿದ್ದೀರೋ ಅಲ್ಲೇ ಒಂದು ದಿನ ಉಪವಾಸ ಮಾಡಿ ನಿಮ್ಮ ಬೆಂಬಲದ ಸಂದೇಶವನ್ನು ಹಂಚಿಕೊಳ್ಳಿ, ಎಂದು ಜನರಲ್ಲಿ ವಿನಂತಿಸಿದ್ದಾರೆ.

# ಆ.28; ಮುಂಬಯಿಯಲ್ಲಿ ಶ್ರೀವಿಶ್ವೇಶ ಯಕ್ಷಜ್ಞಾನ ಸಭಾ ಉದ್ಘಾಟನೆ

## ತ್ರಿದಿನ ತಾಳಮದ್ದಲೆ ಸರಣಿ ಶ್ರೀ ವಿಶ್ವೇಶ ಜ್ಞಾನಸತ್ರ


**ಮುಂಬಯಿ, ಜು.11:** ಕೃಷ್ಣೈಕ್ಯ ಶ್ರೀ ಪೇಜಾವರ ಮಠಾಧೀಶರಾದ ಶ್ರೀ ವಿಶ್ವೇಶ ತೀರ್ಥ ಶ್ರೀಪಾದರ ಅಭಿಮಾನಿ ಶಿಷ್ಯರಾಗಿ ಮುಂಬಯಿಯಲ್ಲಿ ನೆಲೆಸಿರುವ ಕಲಾಪೋಷಕರು ಒಂದಾಗಿ, ಯಕ್ಷಗಾನದ ವಾಚಿಕ ವೈಭವವನ್ನು ಪಸರಿಸುವ ಸಲುವಾಗಿ "ಶ್ರೀ ವಿಶ್ವೇಶ ಯಕ್ಷಜ್ಞಾನ ಸಭಾ" ಎಂಬ ನೂತನ ಸಂಘಟನೆಯನ್ನು ಸ್ಥಾಪಿಸುತ್ತಿದ್ದಾರೆ. ಈ ಸಂಸ್ಥೆಯ ಮೊಟ್ಟಮೊದಲ ಹೆಜ್ಜೆಯಾಗಿ, ಸಂಸ್ಥೆಯ ಉದ್ಘಾಟನೆಯೊಂದಿಗೆ ಮೂರು ದಿನಗಳ ಭವ್ಯ "ಶ್ರೀ ವಿಶ್ವೇಶ ಜ್ಞಾನಸತ್ರ" ತಾಳಮದ್ದಲೆ ಸರಣಿಯನ್ನು ಆಯೋಜಿಸಲಾಗಿದೆ. ದಕ್ಷಿಣ ಮತ್ತು ಉತ್ತರ ಕನ್ನಡ ಜಿಲ್ಲೆಗಳ ಪ್ರಸಿದ್ಧ ಅರ್ಥಧಾರಿಗಳ ಕೂಡುವಿಕೆಯಲ್ಲಿ ತ್ರಿದಿನಗಳ ಕಾಲ ವಿಭಿನ್ನ ಪ್ರಸಂಗಗಳು ಮುಂಬಯಿಯ ವಿವಿಧ ಸ್ಥಳಗಳಲ್ಲಿ ಜರುಗಲಿವೆ.

ಇದೇ ಬರುವ ಆಗಸ್ಟ್ 28ನೇ ಶುಕ್ರವಾರ ಅಪರಾಹ್ನ 3:30 ಗಂಟೆಗೆ ಶ್ರೀ ಪೇಜಾವರ ಮಠ, ಸಾಂತಾಕ್ರೂಜ್, ಮುಂಬಯಿ ಇಲ್ಲಿ ಸಂಸ್ಥೆಯ ಹಾಗೂ ತಾಳಮದ್ದಲೆ ಸರಣಿಯ ಭವ್ಯ ಉದ್ಘಾಟನೆ ನಡೆಸಲಾಗುವುದು. ನಂತರ

ಪ್ರಣಯ ಪರಿತ್ಯಕ್ತೆ ಪ್ರಸಂಗ ಜರುಗಲಿದೆ. ಆಗಸ್ಟ್ 29ನೇ ಶನಿವಾರ ಅಪರಾಹ್ನ 3:30 ಗಂಟೆಗೆ ನವೋದಯ ಇಂಗ್ಲಿಷ್ ಹೈಸ್ಕೂಲ್ ಸಭಾಗೃಹ, ಶಿವಾಜಿನಗರ, ಮುಲುಂಡ್ ಪಶ್ಚಿಮ ಇಲ್ಲಿ ವೈಕುಂಠ ಧಾಮ ಪ್ರಸಂಗ ಹಾಗೂ ಆಗಸ್ಟ್ 30ನೇ ಭಾನುವಾರ ಅಪರಾಹ್ನ 1:30 ಗಂಟೆಗೆ ದಿ. ಕೋಸ್ಟಲ್ ತವಾ ರೆಸಾರ್ಟ್‌ನ ಸಭಾಗೃಹ, ರಾಷ್ಟ್ರೀಯ ಹೆದ್ದಾರಿ ಸಮೀಪ ಭಿವಂಡಿ ಇಲ್ಲಿ ಸಮಾರೋಪ ಸಮಾರಂಭ ಮತ್ತು ರಾಜತಂತ್ರ ಪ್ರಸಂಗ ಜರುಗಲಿದೆ. ಕಲಾ ಜಗತ್ತಿನ ದಿಗ್ಗಜರ ಒಕ್ಕೂಟ ಈ ಜ್ಞಾನಸತ್ರದಲ್ಲಿ ಕರಾವಳಿ ಮತ್ತು ಘಟ್ಟದ ಮೇಲಿನ ಪ್ರಸಿದ್ಧ ವಿದ್ವಾಂಸರು ಹಾಗೂ ಸ್ಥಳೀಯ ಪ್ರತಿಭೆಗಳು ಭಾಗವಹಿಸಲಿದ್ದಾರೆ.

**ಪ್ರಸಿದ್ಧ ಅರ್ಥಧಾರಿಗಳು:**

ವಾಸುದೇವ ರಂಗಾಭಟ್ ಮಧೂರು (ಆಟಕೂಟಗಳಿಂದ ಕಲಾಭಿಮಾನಿಗಳ ಮನ್ನಣೆ ಗಳಿಸಿರುವ ಇವರು, ಪ್ರಕೃತ ಶ್ರೀ ಹನುಮಗಿರಿ ಮೇಳದ ಪ್ರಧಾನ ಕಲಾವಿದರು. ಕಾನೂನು ಪದವೀಧರರಾಗಿದ್ದು, ಸಂಘಟಕ ರಾಗಿಯೂ ಗುರುತಿಸಿಕೊಂಡಿದ್ದಾರೆ). ವಿದ್ವಾನ್ ಡಾ। ಸಂಕದಗುಂಡಿ ಗಣಪತಿ ಭಟ್ಟ (ಮೂಲತಃ ಉತ್ತರ ಕನ್ನಡದವರಾಗಿದ್ದು, ಪ್ರಸ್ತುತ ಮೈಸೂರು ನಿವಾಸಿ. ಸಂಸ್ಕೃತ ವಿದ್ವತ್ ಪದವೀಧರರಾದ ಇವರು ವೃತ್ತಿಯಿಂದ ಉಪನ್ಯಾಸಕರು. "ರಾಮಾಯಣದಲ್ಲಿ ಧರ್ಮಶಾಸ್ತ್ರೀಯ ಅಂಶಗಳು" ಎಂಬ ವಿಷಯದಲ್ಲಿ ಡಾಕ್ಟರೇಟ್ ಪಡೆದಿದ್ದು, ಪ್ರಸ್ತುತ ಅರ್ಥಧಾರಿಯಾಗಿ ಪ್ರಸಿದ್ಧಿಯ ಶಿಖರದಲ್ಲಿದ್ದಾರೆ.




ಹರೀಶ ಬಳಂತಿ ಮುಗರು (ಮೂಲತಃ ಕೃಷಿಕರಾದ ಇವರು ಶ್ರೀ ಹನುಮಗಿರಿ ಮೇಳದ ಪ್ರಬಂಧಕರು. ಅರ್ಥಗಾರಿಕೆಯ ಜೊತೆಗೆ ಹವ್ಯಾಸಿಯಾಗಿ ಭಾಗವತಿಕೆಯ ಅನುಭವ ಹೊಂದಿದ್ದು, ಬೆಳೆಯುವ ಪ್ರತಿಭೆಗಳಿಗೆ ಮಾರ್ಗದರ್ಶಕರಾಗಿದ್ದಾರೆ). ಸುರೇಶ್ ಶೆಟ್ಟಿ ನಂದ್ರೊಳ್ಳಿ (ಮುಂಬಯಿಯಲ್ಲಿ ಸದ್ಯ ನೆಲೆಸಿರುವ ಇವರು, ಉದಯೋನ್ಮುಖ ಪ್ರತಿಭೆಯಾಗಿದ್ದು, ಕಲಾವಿದರಾಗಿ ಹಾಗೂ ಸಂಘಟನಾ ಸಹಾಯಿಯಾಗಿ ಈ ತಂಡದ ಜೊತೆಗಿದ್ದಾರೆ).

ಹಿಮ್ಮೇಳ ವಾದಕರಲ್ಲಿ ಭಾಗವತಿಕೆಯಲ್ಲಿ ಉಭಯ ತಿಟ್ಟುಗಳಲ್ಲಿ ಸರಾಗವಾಗಿ ಹಾಡಬಲ್ಲ ಪರಿಣತರಾದ ಹಿರಿಯ, ಅನುಭವಿ ಭಾಗವತರಾದ ಪೊಲ್ಯ ಲಕ್ಷ್ಮೀನಾರಾಯಣ ಶೆಟ್ಟಿ ಇವರು ಈ ಸರಣಿಯಲ್ಲಿ ಅಪೂರ್ವವಾಗಿ ಬಡಗು ಶೈಲಿಯ ಭಾಗವತಿಕೆಯಿಂದ ನಮ್ಮನ್ನು ರಂಜಿಸ ಲಿದ್ದಾರೆ. ಪ್ರತಿಭಾವಂತ ಭಾಗವತರಾದ ಮಹೇಂದ್ರ ಶೆಟ್ಟಿ ನಂದ್ರೊಳ್ಳಿ ಹಾಗೂ ರಾಘವೇಂದ್ರ ಭಟ್ ಮಾಳ ಇವರು ಭಾಗವತಿಕೆಯಲ್ಲಿ ಪೊಲ್ಯದವರಿಗೆ ಸಾಥ್ ನೀಡಲಿದ್ದರೆ. ಇವರಿಬ್ಬರೂ ಈಗಾಗಲೇ ಮಹಾನಗರದ ಹಲವೆಡೆಗಳಲ್ಲಿ ತಮ್ಮ ಪ್ರತಿಭೆಯಿಂದ ಪ್ರಸಿದ್ಧರಾದವರು.

ಹಿಮ್ಮೇಳದಲ್ಲಿ ಪ್ರಸಿದ್ಧ ಮದ್ದಳೆಗಾರ ಎ.ಪಿ.ಪಾಠಕ್ ಮದ್ದಲೆಗಾರರಾಗಿ ಭಾಗವಹಿಸಲಿದ್ದು, ಬಹುತೇಕ ಎಲ್ಲಾ ಹಿರಿಕಿರಿಯರೊಂದಿಗೆ ಸಹಾವಾದಕರಾಗಿ ಅನೇಕ ದಶಕಗಳ ಅನುಭವ ಸಂಪನ್ನರು. ಯಕ್ಷಗಾನದ ಸರ್ವಾಂಗಗಳನ್ನೂ ಬಲ್ಲ ಇವರು ಮಂಟಪ ಪ್ರಭಾಕರ ಉಪಾಧ್ಯರ ಏಕವ್ಯಕ್ತಿ ಪ್ರದರ್ಶನಗಳ ಮೂಲಕವಾಗಿಯೂ ಗಮನಾರ್ಹರು. ಚೆಂಡೆವಾದಕರಾಗಿ ಶ್ರೀನಿವಾಸ ಪ್ರಭು ಕುಂದಾಪುರ ಭಾಗವಹಿಸಲಿದ್ದು, ಇವರು ತಮ್ಮ ಆಕರ್ಷಕ ವಾದನ ಪರಿಣತಿಯಿಂದಾಗಿ ಅನೇಕ ವೃತ್ತಿ ಮೇಳಗಳಲ್ಲಿ ಸಂಚರಿಸಿದವರು.

ಈ ಸಂಘಟನೆ ಹಾಗೂ ಸರಣಿಗೆ ಅನುಗ್ರಾಹಕ ಶಕ್ತಿಯಾಗಿರುವವರು ಪ್ರಕೃತ ಶ್ರೀ ಪೇಜಾವರ ಮಠಾಧೀಶ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದರು. ಹಿಂದಿರುವ ಸಂಕಲ್ಪ ಶಕ್ತಿ ಸೀತಾರಾಮ ಅಳ್ವ, ಮಾಳ ರಾಘವೇಂದ್ರ ಭಟ್ ಇವರದ್ದು. ಮಿಜಾರು ಸೀತಾರಾಮ ಆಳ್ವ ಅವರು ಮೂಡಬಿದ್ರೆಯ ಶೈಕ್ಷಣಿಕ ಕ್ರಾಂತಿಯ ಹರಿಕಾರರಾದ ಡಾ। ಎಂ. ಮೋಹನ ಆಳ್ವ ಅವರ ಸೋದರರಾಗಿದ್ದು, ಉದ್ಯಮಿಗಳಾದ ಇವರು ಕಲಾಪೋಷಕರಾಗಿ, ದಾನಿಗಳಾಗಿ ಪ್ರಸಿದ್ಧರು. ಮಾಳ ರಾಘವೇಂದ್ರ ಭಟ್ಟರು ಪ್ರಸಿದ್ಧ ವೈದಿಕ ವಿದ್ವಾಂಸ ಮಾಳ ಶ್ರೀನಿವಾಸ ಭಟ್ಟರ ಸುಪುತ್ರ. ಹೋಟೆಲ್



ಉದ್ಯಮಿಯಾಗಿರುವ ಇವರು ಆಕರ್ಷಕ ಕಂಠಮಾಧುರ್ಯ ಹೊಂದಿರುವ ಯುವ ಭಾಗವತರೂ ಹೌದು. ಇವರೀರ್ವರು ಸುರೇಶ ಶೆಟ್ಟಿ ನಂದ್ರೊಳ್ಳಿ ಅವರ ಸಾಂಗತ್ಯದಲ್ಲಿ ಈ ವಿಭಿನ್ನ ,ವಿಶಿಷ್ಟ ಉಪಕ್ರಮಕ್ಕೆ ಮುಂದಾಗುತ್ತಿದ್ದಾರೆ. ಮುಂಬೈ ಮಹಾನಗರದ ಸಮಸ್ತ ಕಲಾಭಿಮಾನಿಗಳು, ದಾನಿಗಳು ಮತ್ತು ಕಲಾಪೋಷಕರು ಈ ಮೂರೂ ದಿನಗಳ "ಶ್ರೀವಿಶ್ವೇಶ ಜ್ಞಾನಸತ್ರ" ತಾಳಮದ್ದಲೆ ಸರಣಿಗೆ ಸರ್ವವಿಧದ ಪ್ರೋತ್ಸಾಹ ಹಾಗೂ ಉತ್ತೇಜನ ನೀಡುವರೆಂಬ ಭರವಸೆಯನ್ನು ಸಂಘಟಕರು ಹೊಂದಿದ್ದಾರೆ.

# ಜಮೀರ್ ಅಹ್ಮದ್ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ರಾಜ್ಯಪಾಲರಿಗೆ ಲೋಕಾಯುಕ್ತ ಮನವಿ




ಬೆಂಗಳೂರು, ಜು.11: ಅಕ್ರಮ ಆಸ್ತಿ ಗಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಹಾಗೂ ಕಾಂಗ್ರೆಸ್ ಮುಖಂಡ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರಿಗೆ ಕಾನೂನು ಸಂಕಷ್ಟ ಎದುರಾಗಿದೆ. ಜಮೀರ್ ಅಹ್ಮದ್ ವಿರುದ್ಧ ಕಾನೂನು ಕ್ರಮ ಜರುಗಿಸಲು (ಪ್ರಾಸಿಕ್ಯೂಷನ್) ಅನುಮತಿ ನೀಡುವಂತೆ ಲೋಕಾಯುಕ್ತ ಸಂಸ್ಥೆಯು ರಾಜ್ಯಪಾಲರಿಗೆ ಅಧಿಕೃತವಾಗಿ ಮನವಿ ಮಾಡಿದೆ.

ಜಮೀರ್ ಅಹ್ಮದ್ ಖಾನ್ ಅವರು ತಮ್ಮ ಆದಾಯದ ಮೂಲಗಳಿಗಿಂತ 25 ಕೋಟಿ ರೂಪಾಯಿಗೂ ಅಧಿಕ ಮೊತ್ತದ ಅಕ್ರಮ ಆಸ್ತಿ ಸಂಪಾದಿಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಬಹುಕೋಟಿ ಐಎಂಎ ವಂಚನೆ ಪ್ರಕರಣದ ತನಿಖೆಯ ವೇಳೆ ಜಮೀರ್ ಅವರ ಈ ಅಕ್ರಮ ಆಸ್ತಿ ಗಳಿಕೆ ಪ್ರಕರಣ ಬೆಳಕಿಗೆ ಬಂದಿತ್ತು. ಇಡಿ ದಾಳಿಯಿಂದ ಲೋಕಾಯುಕ್ತ ತನಿಖೆಯವರೆಗೆ..2018: ಐಎಂಎ ಕಂಪನಿ ವಂಚನೆ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಜಮೀರ್ ಅಹ್ಮದ್ ಖಾನ್ ಅವರ ನಿವಾಸ ಮತ್ತು ಕಚೇರಿಗಳ ಮೇಲೆ ದಾಳಿ ನಡೆಸಿತ್ತು. ಜಮೀರ್ ಅವರ ಅಕ್ರಮ ಆಸ್ತಿ ಸಂಪಾದನೆ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಅಂದಿನ ಭ್ರಷ್ಟಾಚಾರ ನಿಗ್ರಹ ದಳಕ್ಕೆ ಇಡಿ ಅಧಿಕಾರಿಗಳು ಸೂಚನೆ ನೀಡಿದ್ದರು. ರಾಜ್ಯದಲ್ಲಿ ಎಸಿಬಿ ರದ್ದಾದ ಬಳಿಕ, ಈ ಪ್ರಕರಣದ ಸಂಪೂರ್ಣ ತನಿಖೆಯ ಜವಾಬ್ದಾರಿಯನ್ನು ಲೋಕಾಯುಕ್ತ ಸಂಸ್ಥೆ ವಹಿಸಿಕೊಂಡು ತನಿಖೆ ಮುಂದುವರಿಸಿತ್ತು.

ಲೋಕಾಯುಕ್ತ ಅಧಿಕಾರಿಗಳು ಸುದೀರ್ಘ ತನಿಖೆ ನಡೆಸಿದ್ದು, ಜಮೀರ್ ಅಹ್ಮದ್ ವಿರುದ್ಧ ಅಕ್ರಮ ಆಸ್ತಿ ಗಳಿಕೆಗೆ ಸಂಬಂಧಿಸಿದಂತೆ ಸಾಕಷ್ಟು ಬಲವಾದ ಪುರಾವೆಗಳನ್ನು ಕಲೆಹಾಕಿದ್ದಾರೆ. ಸದ್ಯ ಸಾವಿರಾರು ಪುಟಗಳ ತನಿಖಾ ವರದಿ ಮತ್ತು ಸಾಕ್ಷ್ಯಾಧಾರಗಳ ದಾಖಲೆಗಳನ್ನು ಲೋಕಾಯುಕ್ತವು ರಾಜ್ಯಪಾಲರಿಗೆ ಸಲ್ಲಿಸಿದೆ.ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯಡಿ ಜಮೀರ್ ಅಹ್ಮದ್ ಖಾನ್ ವಿರುದ್ಧ ವಿಶೇಷ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಲು ಲೋಕಾಯುಕ್ತ ಸಜ್ಜಾಗಿದೆ. ಆದರೆ, ಕಾನೂನು ಪ್ರಕಾರ ಜನಪ್ರತಿನಿಧಿಗಳ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಸಲು ರಾಜ್ಯಪಾಲರ ಪೂರ್ವಾನುಮತಿ ಕಡ್ಡಾಯವಾಗಿದೆ. ಹೀಗಾಗಿ ಲೋಕಾಯುಕ್ತವು ರಾಜ್ಯಪಾಲರ ನಿರ್ಧಾರಕ್ಕಾಗಿ ಕಾಯುತ್ತಿದ್ದು, ಅನುಮತಿ ಸಿಕ್ಕ ತಕ್ಷಣವೇ ಕೋರ್ಟ್‌ಗೆ ಚಾಜ್‌ಶೀಟ್ ಸಲ್ಲಿಕೆಯಾಗಲಿದೆ.

## ಕಾದು ನೋಡೋಣ: ಪ್ರಿಯಾಂಕ್ ಖರ್ಗೆ



**ಮಾಜಿ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಪ್ರಾಸಿಕ್ಯೂಷನ್‌ಗೆ ಲೋಕಾಯುಕ್ತದಿಂದ ರಾಜ್ಯಪಾಲರ ಅನುಮತಿ ಕೋರಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ಈ ವಿಷಯದಲ್ಲಿ ಕಾನೂನು ಏನು ಹೇಳುತ್ತದೆ ಎಂಬುದನ್ನು ಮೊದಲು ನೋಡಬೇಕು. ಹಿಂದೆ ಇಂತಹ ಘಟನೆಗಳು ಹೇಗೆ ನಡೆದಿವೆ ಎಂಬುದನ್ನು ಈಗಾಗಲೇ ನೋಡಿದ್ದೇವೆ. ಈ ದೇಶದಲ್ಲಿ ಯಾರೂ ಕೂಡ ಕಾನೂನಿಗಿಂತ ಮಿಗಿಲಲ್ಲ. ಮುಂದೆ ಏನಾಗಲಿದೆ ಎಂಬುದನ್ನು ಕಾದು ನೋಡೋಣ ಎಂದರು.**

# ಮೊದಲ ಪತ್ನಿ ಜೀವಂತವಿರುವಾಗ ಎರಡನೇ ವಿವಾಹವಾದರೆ ಅಸಿಂಧು: ಹೈಕೋರ್ಟ್ ವಿಭಾಗೀಯ ಪೀಠ ತೀರ್ಪು




**ಬೆಂಗಳೂರು, ಜು.11:** ಮೊದಲ ಪತ್ನಿ ಜೀವಂತವಾಗಿರುವಾಗ ಅಥವಾ ನ್ಯಾಯಾಲಯದಲ್ಲಿ ವಿಚ್ಛೇದನ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನ ನಡೆಯುವ ಯಾವುದೇ ಎರಡನೇ ವಿವಾಹವು ಕಾನೂನುಬದ್ಧವಾಗಿ ಅಸಿಂಧುವಾಗಲಿದೆ ಇಂತಹ ಮದುವೆಗಳನ್ನು ರದ್ದುಪಡಿಸಲು ಪ್ರತ್ಯೇಕವಾಗಿ ನ್ಯಾಯಾಲಯದಲ್ಲಿ ದಾವೆ ಹೂಡುವ ಅಗತ್ಯವೇ ಇರುವುದಿಲ್ಲ ಎಂದು ಕರ್ನಾಟಕ ಹೈಕೋರ್ಟ್‌ನ ವಿಭಾಗೀಯ ಪೀಠ ಮಹತ್ವದ ತೀರ್ಪು ನೀಡಿದೆ.

ತುಮಕೂರಿನ ಕುವೆಂಪು ನಗರದ ನಿವಾಸಿ ಮಹಿಳೆಯೊಬ್ಬರು ಸಲ್ಲಿಸಿದ್ದ ಎರಡು ಪ್ರತ್ಯೇಕ ಮರುಪರಿಶೀಲನಾ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಡಿ.ಕೆ. ಸಿಂಗ್ ಮತ್ತು ನ್ಯಾಯಮೂರ್ತಿ ಟಿ.ಎಂ. ನದಾಫ್ ಅವರಿದ್ದ ಹೈಕೋರ್ಟ್ ವಿಭಾಗೀಯ ಪೀಠವು ಈ ಆದೇಶವನ್ನು ಹೊರಡಿಸಿದೆ. ಅಲ್ಲದೆ, "ಇಬ್ಬರ ಮದುವೆ ಅಸಿಂಧು ಎಂದು ಒಪ್ಪಿಕೊಂಡ ಮೇಲೆಯೂ, ವಿವಾಹ ರದ್ದತಿಗಾಗಿ ಅರ್ಜಿದಾರರು ಪ್ರತ್ಯೇಕ ಸಿವಿಲ್ ಪ್ರಕರಣ ದಾಖಲಿಸಿಕೊಳ್ಳಬಹುದು ಎಂದು ತುಮಕೂರಿನ ಕೌಟುಂಬಿಕ ನ್ಯಾಯಾಲಯ ನೀಡಿದ್ದ ನಿರ್ದೇಶನವು ಕಾನೂನುಬಾಹಿರ ಎಂದು ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿದೆ.

**ಪ್ರಕರಣದ ಹಿನ್ನೆಲೆ:** ತುಮಕೂರು ಮೂಲದ ವ್ಯಕ್ತಿಯೊಬ್ಬರು ಅರ್ಜಿದಾರ ಮಹಿಳೆಯನ್ನು 2018ರ ನವೆಂಬರ್ 21ರಂದು ಎರಡನೇ ವಿವಾಹವಾಗಿದ್ದರು. ಆದರೆ, ಈ ಮದುವೆಯಾಗುವ ಮೊದಲೇ ಆ ವ್ಯಕ್ತಿಗೆ ಮತ್ತೊಬ್ಬ ಮಹಿಳೆಯೊಂದಿಗೆ ಮೊದಲ ವಿವಾಹ ನಡೆದಿತ್ತು ಹಾಗೂ ಆ ವೈವಾಹಿಕ ಬಂಧ ಚಾಲ್ತಿಯಲ್ಲಿತ್ತು. ತದನಂತರ, ಆ ವ್ಯಕ್ತಿ 2019ರ ಜೂನ್ 13ರಂದು ತನ್ನ ಮೊದಲ ಪತ್ನಿಗೆ ಕಾನೂನುಬದ್ಧವಾಗಿ ವಿಚ್ಛೇದನ ನೀಡಿದ್ದನು. ಮೊದಲ ಪತ್ನಿಗೆ ವಿಚ್ಛೇದನ ನೀಡಿದ ಕೇವಲ ಮೂರೇ ದಿನಗಳಲ್ಲಿ, ಅಂದರೆ 2019ರ ಜೂನ್ 16ರಂದು ತಾನು ಅರ್ಜಿದಾರ ಮಹಿಳೆಯನ್ನು ಎರಡನೇ ವಿವಾಹವಾಗಿದ್ದೇನೆ ಎಂದು ತೋರಿಸಲು ಪತಿ ಸುಳ್ಳು ದಾಖಲೆಗಳನ್ನು ಸೃಷ್ಟಿಸಲು ಯತ್ನಿಸಿದ್ದನು. ಆದರೆ, ನಂತರದ ದಿನಗಳಲ್ಲಿ ಈ ದಂಪತಿಗಳ ನಡುವೆ ಭಿನ್ನಾಭಿಪ್ರಾಯ ಉಂಟಾಗಿ, ಇಬ್ಬರೂ ಪರಸ್ಪರ ವಿಚ್ಛೇದನ ಕೋರಿ ತುಮಕೂರಿನ ಕೌಟುಂಬಿಕ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು.ತುಮಕೂರಿನ ಕೌಟುಂಬಿಕ ನ್ಯಾಯಾಲಯವು ವಿಚಾರಣೆ ನಡೆಸಿ, "ಪತಿಯ ಮೊದಲ ಪತ್ನಿ ಜೀವಂತವಾಗಿದ್ದಾಗಲೇ 2018ರ ನವೆಂಬರ್ 21ರಂದು ಈ ಎರಡನೇ ಮದುವೆ ನಡೆದಿರುವುದು ಸತ್ಯ. ಹೀಗಾಗಿ ಈ ಮದುವೆ ಅಸಿಂಧು" ಎಂದು ಒಪ್ಪಿಕೊಂಡಿತ್ತು. ಆದರೆ, ವಿಚ್ಛೇದನ ಅರ್ಜಿಗಳು ಕಾನೂನುಬದ್ಧವಾಗಿ ಮಾನ್ಯವಲ್ಲ ಎಂದು ತಿಳಿಸಿ, ಮದುವೆ ರದ್ದತಿಗಾಗಿ ಅರ್ಜಿದಾರರು ಪ್ರತ್ಯೇಕ ಸಿವಿಲ್ ಪ್ರಕರಣ ದಾಖಲಿಸಬಹುದು ಎಂದು ಕೌಟುಂಬಿಕ ನ್ಯಾಯಾಲಯ ನಿರ್ದೇಶನ ನೀಡಿತ್ತು.

ಕೌಟುಂಬಿಕ ನ್ಯಾಯಾಲಯದ ಈ ಆದೇಶವನ್ನು ಪ್ರಶ್ನಿಸಿ ಮತ್ತು ತಮಗೆ ನ್ಯಾಯ ಕೊಡಿಸುವಂತೆ ಕೋರಿ ಮಹಿಳೆ ಹೈಕೋರ್ಟ್ ಮೆಟ್ಟಿಲೇರಿದ್ದರು. ಇದೀಗ ಹೈಕೋರ್ಟ್ ಕೌಟುಂಬಿಕ ನ್ಯಾಯಾಲಯದ ನಿರ್ದೇಶನವನ್ನು ತಳ್ಳಿಹಾಕಿ, ಪ್ರತ್ಯೇಕ ದಾವೆಯ ಅಗತ್ಯವಿಲ್ಲದೇ ಇಂತಹ ಮದುವೆಗಳು ಸ್ವಯಂಚಾಲಿತವಾಗಿ ಅಸಿಂಧುಗೊಳ್ಳುತ್ತವೆ ಎಂದು ಆದೇಶಿಸಿದೆ.

### ಪಿಎಸ್‌ಐ ನೇಮಕಾತಿ ಅಕ್ರಮ ಪ್ರಕರಣ

# ಐಪಿಎಸ್ ಅಧಿಕಾರಿ ಅಮೃತ್‌ಪಾಲ್ ವಿರುದ್ಧ ಇಲಾಖಾ ತನಿಖೆಗೆ ಸರ್ಕಾರ ಗ್ರೀನ್‌ಸಿಗ್ನಲ್



**ಬೆಂಗಳೂರು, ಜು.11:** ರಾಜ್ಯದ ಪೊಲೀಸ್ ನೇಮಕಾತಿ ಇತಿಹಾಸದಲ್ಲೇ ಅತ್ಯಂತ ದೊಡ್ಡ ಹಗರಣವೆಂದು ಗುರುತಿಸಲ್ಪಟ್ಟ 545 ಪಿಎಸ್‌ಐ ನೇಮಕಾತಿ ಅಕ್ರಮ ಪ್ರಕರಣವು, ನಾಲ್ಕು ವರ್ಷಗಳ ಸುದೀರ್ಘ ಅವಧಿಯ ಬಳಿಕ ಮತ್ತೊಮ್ಮೆ ರಾಜ್ಯ ರಾಜಕೀಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಅಮಾನತ್ತಿನಲ್ಲಿರುವ ಹಿರಿಯ ಐಪಿಎಸ್ ಅಧಿಕಾರಿ, ಎಡಿಜಿಪಿ ಅಮೃತ್ ಪಾಲ್ ವಿರುದ್ಧ ಇಲಾಖಾ ತನಿಖೆಗೆ ರಾಜ್ಯ ಸರ್ಕಾರ ಗ್ರೀನ್ ಸಿಗ್ನಲ್ ನೀಡಿದ್ದು, ಇದು ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಮಹತ್ವದ ನಡೆಯಾಗಿ ಪರಿಣಮಿಸಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅನುಮೋದನೆಯೊಂದಿಗೆ ಈ ತನಿಖೆಗೆ ಚಾಲನೆ ದೊರೆತಿದೆ.

ಅಖಿಲ ಭಾರತ ಸೇವೆ ನಿಯಮಗಳಡಿ ಅಮೃತ್ ಪಾಲ್ ಅವರಿಗೆ ನೋಟಿಸ್ ಜಾರಿ ಮಾಡಲಾಗಿದ್ದು, ನೇಮಕಾತಿ ಅಕ್ರಮದ ವೇಳೆ ಅವರು ಎಸಗಿದ ಲೋಪಗಳು ಮತ್ತು ಭ್ರಷ್ಟಾಚಾರದ ಆರೋಪಗಳ ಕುರಿತು ವಿಚಾರಣೆಗೆ ಹಾಜರಾಗಿ ಹೇಳಿಕೆ ನೀಡಲು ಸೂಚಿಸಲಾಗಿದೆ. ಪಿಎಸ್‌ಐ ಹಗರಣವು ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದ್ದರೂ, ಸದ್ಯದ ಕಾಂಗ್ರೆಸ್ ಸರ್ಕಾರ ಈ ವಿಷಯವನ್ನು ಮರೆತಿಲ್ಲ ಎಂಬುದನ್ನು ಈ ನಡೆ ತೋರಿಸುತ್ತದೆ. ಅಮೃತ್‌ಪಾಲ್ ಅವರಂತಹ ಉನ್ನತ ಐಪಿಎಸ್ ಅಧಿಕಾರಿಯೊಬ್ಬರ ವಿರುದ್ಧ ನೇರ ಇಲಾಖಾ ತನಿಖೆಗೆ ಆದೇಶಿಸುವುದು ಸರ್ಕಾರದ ಪಾರದರ್ಶಕತೆಯ ನಿಲುವನ್ನು ಬಿಂಬಿಸುವ ಪ್ರಯತ್ನವಾಗಿದೆ. ಪ್ರತಿಪಕ್ಷಗಳು ಸರ್ಕಾರದ ಆಡಳಿತದ ಬಗ್ಗೆ ಟೀಕೆಗಳನ್ನು ಮಾಡುತ್ತಿರುವ ಹೊತ್ತಲ್ಲೇ, ಇಂತಹ ಹಳೆಯ ಹಗರಣಗಳನ್ನು ಕೆದಕಿ ತನಿಖೆ ಚುರುಕುಗೊಳಿಸುವುದು ರಾಜಕೀಯವಾಗಿ ಕಾಂಗ್ರೆಸ್‌ಗೆ ಬಲ ನೀಡುವ ತಂತ್ರವಾಗಿದೆ. ಇದು ಹಿಂದಿನ ಸರ್ಕಾರದ ಅವಧಿಯಲ್ಲಿನ ಭ್ರಷ್ಟಾಚಾರವನ್ನು ಮುನ್ನೆಲೆಗೆ ತಂದು, ಪ್ರತಿಪಕ್ಷಗಳನ್ನು ರಕ್ಷಣಾತ್ಮಕ ಧೋರಣೆಗೆ ತಳ್ಳುವ ರಾಜಕೀಯ ಅಸ್ತ್ರವಾಗಿದೆ. ಅಮೃತ್ ಪೌಲ್ ಅವರು ಜಾಮೀನಿನ ಮೇಲೆ ಹೊರಗಿದ್ದರೂ, ಇಲಾಖಾ ತನಿಖೆಯು ಅವರ ಸೇವೆಯ ಅಂತ್ಯ ಅಥವಾ ಕಠಿಣ ಶಿಸ್ತುಕ್ರಮಕ್ಕೆ ದಾರಿ ಮಾಡಿಕೊಡಬಹುದು.

ಹಗರಣದಲ್ಲಿ ಭಾಗಿಯಾದ ಉನ್ನತ ಅಧಿಕಾರಿಗಳಿಗೆ ಕಠಿಣ ಸಂದೇಶ ರವಾನಿಸುವುದು ಮತ್ತು ತನಿಖೆಯನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವುದು ಈಗ ಸರ್ಕಾರದ ಮುಂದಿರುವ ಪ್ರಮುಖ ಸವಾಲಾಗಿದೆ.

ಪಿಎಸ್‌ಐ ಹಗರಣದ ಈ ಹೊಸ ತಿರುವು ರಾಜ್ಯದ ಆಡಳಿತ ಯಂತ್ರ ಮತ್ತು ಪೊಲೀಸ್ ಇಲಾಖೆಯ ವರ್ಚಸ್ಸಿನ ಮೇಲೆ ನೇರ ಪರಿಣಾಮ ಬೀರಲಿದೆ. ಡಿ.ಕೆ.ಶಿವಕುಮಾರ್ ಅವರ ಈ ನಡೆ, ಮುಂಬರುವ ದಿನಗಳಲ್ಲಿ ತನಿಖೆಯನ್ನು ಯಾವ ದಿಕ್ಕಿನಲ್ಲಿ ಕೊಂಡೊಯ್ಯುತ್ತದೆ ಮತ್ತು ಇದರ ರಾಜಕೀಯ ಪರಿಣಾಮಗಳು ಏನಿರಲಿವೆ ಎಂಬುದು ಕುತೂಹಲ ಮೂಡಿಸಿದೆ.ಸರ್ಕಾರದ ಈ ಕ್ರಮವು ಆರೋಪಿಗಳಿಗೆ ಕಾನೂನಿನ ಭಯವನ್ನು ಹುಟ್ಟಿಸುವುದರ ಜೊತೆಗೆ, ತನಿಖೆಯ ವೇಗವನ್ನು ಹೆಚ್ಚಿಸುವ ನಿರೀಕ್ಷೆಯಿದೆ.

# ನಟ ಶಿವರಾಜ್‌ಕುಮಾರ್ ಭೇಟಿ ಮಾಡಿದ ಆನಂದ್ ಗೌಡ



ಬೆಂಗಳೂರು: ಕನ್ನಡ ಚಿತ್ರರಂಗದ ಖ್ಯಾತ ನಟ, ಹ್ಯಾಟ್ರಿಕ್ ಹೀರೋ ಶಿವರಾಜ್‌ಕುಮಾರ್ ಅವರಿಗೆ ವಿಜಯನಗರ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿ ಎ.ಜಿ. ಆನಂದ್ ಗೌಡ ಅವರು ಶುಭಾಶಯ ಕೋರಿದರು.

ಕನ್ನಡ ಸಿನಿಮಾರಂಗದಲ್ಲಿ ಹಲವು ದಶಕಗಳಿಂದ ತನ್ನದೇ ಆದ ಛಾಪು ಮೂಡಿಸಿರುವ ಶಿವರಾಜ್‌ಕುಮಾರ್ ಅವರು ಅನೇಕ ಯಶಸ್ವಿ ಚಿತ್ರಗಳ ಮೂಲಕ ಅಭಿಮಾನಿಗಳ ಹೃದಯ ಗೆದ್ದಿದ್ದಾರೆ. ಆನಂದ, ರಥಸಪ್ತಮಿ, ಓಂ ಸೇರಿದಂತೆ ಹಲವು ಚಿತ್ರಗಳು ಅವರ ಅಭಿನಯ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದು, ಹ್ಯಾಟ್ರಿಕ್ ಹೀರೋ ಎಂಬ ಬಿರುದನ್ನು ಅವರಿಗೆ ತಂದುಕೊಟ್ಟಿವೆ. ವಿಭಿನ್ನ ಪಾತ್ರಗಳಲ್ಲಿ ಕಾಣಿಸಿಕೊಂಡು, ಪ್ರತಿಯೊಂದು ಪಾತ್ರಕ್ಕೂ ಜೀವ ತುಂಬುವ ಅವರ ಅಭಿನಯ ಶೈಲಿ ಕನ್ನಡ ಚಿತ್ರರಂಗದಲ್ಲಿ ವಿಶಿಷ್ಟ ಸ್ಥಾನವನ್ನು ನಿರ್ಮಿಸಿದೆ.

ಈ ಹಿನ್ನೆಲೆಯಲ್ಲಿ, ಶಿವರಾಜ್‌ಕುಮಾರ್ ಅವರು ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಉತ್ತಮ ಚಿತ್ರಗಳನ್ನು ನೀಡುತ್ತಾ, ಕನ್ನಡ ಸಿನಿಮಾರಂಗದ ಕೀರ್ತಿಯನ್ನು ಹೆಚ್ಚಿಸಲಿ ಎಂದು ಎ.ಜಿ. ಆನಂದ್ ಗೌಡ ಹಾರೈಸಿದರು. ಅವರ ಸರಳತೆ, ಶಿಸ್ತು ಮತ್ತು ಕಲೆಯ ಮೇಲಿನ ಸಮರ್ಪಣೆ ಯುವಪೀಳಿಗೆಗೆ ಮಾದರಿಯಾಗಿದೆ ಎಂದು ಅವರು ಹೇಳಿದರು.

ಶಿವರಾಜ್‌ಕುಮಾರ್ ಅವರು ತಮ್ಮ ಅಭಿನಯದ ಮೂಲಕ ಮಾತ್ರವಲ್ಲದೆ, ಸಮಾಜಮುಖಿ ಚಟುವಟಿಕೆಗಳಲ್ಲಿಯೂ ತೊಡಗಿಸಿಕೊಂಡು ಜನಮನ ಗೆದ್ದಿದ್ದಾರೆ. ಇಂತಹ ಸಾಧಕನಿಗೆ ಶುಭಾಶಯ ಕೋರುವ ಅವಕಾಶ ದೊರೆತಿರುವುದು ಹೆಮ್ಮೆಯ ಸಂಗತಿ ಎಂದು ಆನಂದ್ ಗೌಡ ಅಭಿಪ್ರಾಯಪಟ್ಟರು.

# 4723 ಹುದ್ದೆಗಳ ಭರ್ತಿಗೆ ಕೆಇಎಯಿಂದ ಅರ್ಜಿ ಆಹ್ವಾನ



**ಬೆಂಗಳೂರು, ಜು.11:** ವಿವಿಧ ಇಲಾಖೆಗಳ ಒಟ್ಟು 4,723 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರತ್ಯೇಕ ಅಧಿಸೂಚನೆಗಳನ್ನು ಹೊರಡಿಸಿದೆ.

ಇದರಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳೂ ಸೇರಿವೆ ಎಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನ ತಿಳಿಸಿದ್ದಾರೆ.

ಗ್ರಾಮ ಆಡಳಿತ ಅಧಿಕಾರಿಯ 572, ಸರ್ವೆ ಇಲಾಖೆಯ 750 ಭೂಮಾಪಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುವ ಶಾಲೆಗಳ 1,087 ಶಿಕ್ಷಕರು ಹಾಗೂ 2,314 ಕೆಎಸ್‌ಆರ್‌ಪಿ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಅವರು ವಿವರಿಸಿದ್ದಾರೆ. ಕಲ್ಯಾಣ ಕರ್ನಾಟಕ ವೃಂದಕ್ಕೆ ಸಂಬಂಧಿಸಿದಂತೆ ಎಲ್ಲ ಇಲಾಖೆಗಳ ಹುದ್ದೆಗಳಿಗೂ ಪ್ರತ್ಯೇಕ ಅಧಿಸೂಚನೆ ಹೊರಡಿಸಲಾಗಿದೆ ಎಂದು ಅವರು ವಿವರಿಸಿದ್ದಾರೆ.

ಕೆಲವು ಹುದ್ದೆಗಳಿಗೆ ಸಂಬಂಧಿಸಿದಂತೆ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಇಂದಿನಿಂದಲೇ ಆರಂಭವಾಗಿದೆ. ಅರ್ಹರು ಅಧಿಸೂಚನೆಯನ್ನು ಒಮ್ಮೆ ಓದಿ, ಅನ್ವಯವಾಗುವ ಹುದ್ದೆಗಳಿಗೆ ಅರ್ಜಿಗಳನ್ನು ಸಲ್ಲಿಸಬಹುದು.

ಅಧಿಸೂಚನೆಯಲ್ಲೇ ಪರೀಕ್ಷಾ ದಿನಾಂಕಗಳನ್ನು ಪ್ರಕಟಿಸಿದ್ದು ಆ ಪ್ರಕಾರ ಸಿದ್ಧತೆ ಮಾಡಿಕೊಳ್ಳಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಇರುವ ಕೊನೆ ದಿನಾಂಕವನ್ನು ನೋಡಿಕೊಂಡು ನಿಗದಿತ ದಿನದೊಳಗೆ ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸಬೇಕು ಎಂದು ಅವರು ಸಲಹೆ ನೀಡಿದ್ದಾರೆ. ನೇಮಕಾತಿ ಕುರಿತ ಹೆಚ್ಚಿನ ಮಾಹಿತಿಗೆ ಕೆಇಎ ವೆಬ್ ಸೈಟ್‌ಗೆ ಭೇಟಿ ನೀಡಲು ಅವರು ಸಲಹೆ ನೀಡಿದ್ದಾರೆ.

# ಸುದ್ದಿ ತಲುಪಿಸುವ ಜತೆಗೆ ಮೌಲ್ಯ ಕಾಪಾಡಿಕೊಳ್ಳಿ: ಪತ್ರಕರ್ತರಿಗೆ ನಿರ್ಮಲಾನಂದನಾಥ ಸ್ವಾಮೀಜಿ ಕರೆ

**ಪತ್ರಿಕಾ ದಿನಾಚರಣೆಯಲ್ಲಿ ಹಿರಿಯ ಪತ್ರಕರ್ತರಿಗೆ ಸನ್ಮಾನ**



**ಬೆಂಗಳೂರು, ಜು.11:** ಮಹಾಭಾರತ ಕಾಲದಿಂದ ವರದಿಗಾರಿಕೆ ಇತ್ತು, ಅಂದಿನ ಕಾಲದಲ್ಲಿ ಪತ್ರಕರ್ತರನ್ನು ವಾರ್ತಾಕಾರರು ಎಂದು ಸಂಬೋಧಿಸಲಾಗುತ್ತಿತ್ತು ಎಂದು ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹೇಳಿದ್ದಾರೆ.

ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ, ವಿಜಯನಗರದ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಶನಿವಾರ ಆಯೋಜಿಸಿದ್ದ 'ಪತ್ರಿಕಾ ದಿನ' ಹಾಗೂ ಹಿರಿಯ ಪತ್ರಕರ್ತರ ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಗಳು, ಮಹಾಭಾರತ ಕಾಲದಲ್ಲಿ ವಾರ್ತಾಕಾರರನ್ನು ಕರೆದು ಜನರಿಗೆ ಸುದ್ದಿ ತಲುಪಿಸಲಾಗುತ್ತಿತ್ತು. ಈಗಿನ ಕಾಲದಲ್ಲಿ ಸುದ್ದಿ ತಲುಪಿಸುವ ಜತೆಗೆ ಪತ್ರಕರ್ತರು ಮೌಲ್ಯ ಕಾಪಾಡಿಕೊಳ್ಳಬೇಕು. ಇದೀಗ ತಂತ್ರಜ್ಞಾನ ಸಂಪೂರ್ಣ ಬದಲಾಗಿದ್ದು, ಕೃತಕ ಬುದ್ಧಿಮತ್ತೆ (ಎಐ) ಜತೆಗೆ ಸ್ಪರ್ಧಿಸಬೇಕಿದೆ. ಪತ್ರಕರ್ತರು ಎಐ ಕಾಲಕ್ಕೆ ತಕ್ಕಂತೆ ಆಧುನೀಕರಣಗೊಳ್ಳಬೇಕು. ಡಿ.ವಿ.ಗುಂಡಪ್ಪ ಮಹಾನ್ ದಾರ್ಶನಿಕ. ಅವರು ಸ್ಥಾಪಿಸಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಶುಭವಾಗಲಿ ಎಂದು ಶ್ರೀಗಳು ಹಾರೈಸಿದರು.

**ಪತ್ರಕರ್ತರ ಸಂಘಕ್ಕೆ ಕಟ್ಟಡ ಕೊಡಿಸುವ ಭರವಸೆ**

ಗ್ರೇಟರ್ ಬೆಂಗಳೂರು ಪ್ರಾಧಿಕಾರ(ಜಿಬಿಎ) ವ್ಯಾಪ್ತಿಯಲ್ಲಿ ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಕಟ್ಟಡ ಕೊಡಿಸುವ ಕೆಲಸವನ್ನು ಮಾಡಲಿದ್ದೇನೆ. ಸಿಎ ನಿವೇಶನ ಇದ್ದರೆ ಸಂಘದವರು ಅರ್ಜಿ ಹಾಕಿದರೆ ಸಿಎಂ ಡಿ.ಕೆ. ಶಿವಕುಮಾರ್ ಅವರ ಬಳಿ ಮಾತನಾಡಿ ಇದನ್ನು ಮಾಡಿಸಿಕೊಡುತ್ತೇನೆ ಎಂದು ಸಚಿವ ರಾಮಲಿಂಗಾರೆಡ್ಡಿ, ಭರವಸೆ ನೀಡುವ ಮೂಲಕ ಸಂಘದ ಬೇಡಿಕೆಗಳಿಗೆ ಸ್ಪಂದಿಸಿದರು. ಇದಕ್ಕೂ ಮುನ್ನ ರಾಜ್ಯದ ಎಲ್ಲ ಜಿಲ್ಲಾ ಸಂಘಗಳು ಆಯಾ ಜಿಲ್ಲೆಯಲ್ಲಿ ಸ್ವಂತ ಕಚೇರಿ ಹೊಂದಿವೆ. ಆದರೆ, ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಈವರೆಗೆ ಸ್ವಂತ ಕಚೇರಿ ನಿರ್ಮಿಸಲು ಸ್ಥಳ ಅಥವಾ ಕಟ್ಟಡ ನೀಡಬೇಕು. ನಿಯತಕಾಲಿಕೆ ಪತ್ರಿಕೆಗಳಿಗೆ ಕನಿಷ್ಠ 10 ಸಾವಿರ ರೂ. ಜಾಹೀರಾತು ನೀಡಬೇಕು ಎಂದು ಸಂಘದವರು ಸಚಿವರಿಗೆ ಮನವಿ ಮಾಡಿದರು.

**ವೃತ್ತಿನಿಷ್ಠೆ ಮರೆಯಬೇಡಿ**

ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಮುದ್ರಣ, ಎಲೆಕ್ಟ್ರಾನಿಕ್ ಮಾಧ್ಯಮಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಇದರಿಂದ ಜನರಿಗೆ ಇನ್ನಷ್ಟು ವಿಶ್ವಾಸ ಬರಲಿದೆ. ಹಿಂದೆ ಪತ್ರಿಕೆಗಳ ಸಂಖ್ಯೆ ಕಡಿಮೆ ಇತ್ತು. ಆದರೆ, ಇಂದಿನ ದಿನಮಾನಗಳಲ್ಲಿ ಪತ್ರಿಕೆ ಮತ್ತು ನ್ಯೂಸ್ ಚಾನಲ್‌ಗಳ ಸಂಖ್ಯೆ ಜಾಸ್ತಿಯಾಗಿವೆ. ಪತ್ರಿಕೋದ್ಯಮದಲ್ಲಿ ಸಾಕಷ್ಟು ಪೈಪೋಟಿ ಇದೆ. ಇದರ ನಡುವೆ ಪತ್ರಕರ್ತರು ವೃತ್ತಿನಿಷ್ಠೆ ಮರೆಯಬಾರದು. ವಸ್ತುನಿಷ್ಠ ವರದಿಗಳನ್ನು ಪ್ರಕಟಿಸಲು ಹೆಚ್ಚಿನ ಆದ್ಯತೆ ನೀಡುವಂತಾಗಬೇಕು ಎಂದರು.

ವಿಜಯವಾಣಿ ಸಹಾಯಕ ಸಂಪಾದಕ ಪ್ರಭುದೇವ್ ಶಾಸ್ತ್ರಿಮಠ್ ಸೇರಿ ಹಿರಿಯ ಪತ್ರಕರ್ತರನ್ನು ಸನ್ಮಾನಿಸಲಾಯಿತು. ಇದಕ್ಕೂ ಮುನ್ನ ಕೇಂದ್ರ ಸಚಿವ ವಿ.ಸೋಮಣ್ಣ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ವಿಜಯನಗರ ಶಾಖಾ ಮಠದ ಶ್ರೀ ಸೌಮ್ಯನಾಥ ಸ್ವಾಮೀಜಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಅಧ್ಯಕ್ಷ ಶಿವಾನಂದ ತಗಡೂರು, ಬೆಂಗಳೂರು ನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಸೋಮಶೇಖರ್ ಗಾಂಧಿ ಸೇರಿ ಕಾರ್ಯಕಾರಿ ಸಮಿತಿ ಸದಸ್ಯರು ಮತ್ತು ಪತ್ರಕರ್ತರು ಉಪಸ್ಥಿತರಿದ್ದರು.

### ಯಲಹಂಕದ ಎಬಿಪಿಇಆರ್‌ನಲ್ಲಿ ಕೃತಕ ಬುದ್ಧಿಮತ್ತೆ ಆಧಾರಿತ

# ಔಷಧೋದ್ಯಮದ ಶಿಕ್ಷಣ–ಸಂಶೋಧನೆ ಕುರಿತ ರಾಷ್ಟ್ರೀಯ ಸಮ್ಮೇಳನ




**ಬೆಂಗಳೂರು, ಜು.11:** ಯಲಹಂಕದ ಆದಿತ್ಯ ಇನ್‌ಸ್ಟಿಟ್ಯೂಟ್ ಆಫ್ ಫಾರ್ಮಸಿ ಎಜುಕೇಷನ್ ಅಂಡ್ ರಿಸರ್ಚ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಇಂಡಿಯನ್ ಫಾರ್ಮಸಿ ಕೌನ್ಸಿಲ್ ಹಾಗೂ ರಾಜ್ಯ ಫಾರ್ಮಸಿ ಕೌನ್ಸಿಲ್ ಸಹಯೋಗದಲ್ಲಿ ಆಯೋಜಿಸಿದ್ದ ಔಷಧಶಾಸ್ತ್ರ ಶಿಕ್ಷಣದಲ್ಲಿ ಕೃತಕ ಬುದ್ಧಿಮತ್ತೆ ಮೂಲಕ ಅತ್ಯಾಧುನಿಕ ಸಂಶೋಧನೆ ಮತ್ತು ನಾವೀನ್ಯತೆ ಕುರಿತ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನ ಯಶಸ್ವಿಯಾಗಿ ನಡೆಯಿತು.

ಆದಿತ್ಯ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್‌ನ ಸಂಸ್ಥಾಪಕ ಅಧ್ಯಕ್ಷ ಡಾ. ಬಿ.ಎ. ವಿಶ್ವನಾಥ್, ಬೆಂಗಳೂರಿನ ಫ್ಲೋ ಕೆಮಿಕಲ್ಸ್ ಸಂಸ್ಥೆಯ ಅಧ್ಯಕ್ಷ ಡಾ.ಅಂಜನ್ ರಾಯ್, ಡಾ. ಪ್ರಿಯಾ ವಿಶ್ವನಾಥ್, ಉಪಾಧ್ಯಕ್ಷರು ಡಾ. ಆದಿತ್ಯ ವಿಶ್ವನಾಥ್ ಸಮ್ಮೇಳನಕ್ಕೆ ಚಾಲನೆ ನೀಡಿದರು.

ದೇಶದ ವಿವಿಧ ಪ್ರತಿಷ್ಠಿತ ಔಷಧೋದ್ಯಮ ಹಾಗೂ ಶೈಕ್ಷಣಿಕ ಸಂಸ್ಥೆಗಳ ತಜ್ಞರು ಭಾಗವಹಿಸಿ, ಕೃತಕ ಬುದ್ಧಿಮತ್ತೆ ಆಧಾರಿತ ಔಷಧ ಶಿಕ್ಷಣ, ಔಷಧ ಸಂಶೋಧನೆ, ಔಷಧ ಅನ್ವೇಷಣೆ, ಆರೋಗ್ಯ ಸೇವೆ ಹಾಗೂ ಸಂಶೋಧನಾ ಕ್ಷೇತ್ರಗಳಲ್ಲಿನ ನವೀನ್ಯತೆ ಕುರಿತು ತಾಂತ್ರಿಕ ಉಪನ್ಯಾಸಗಳು ನೀಡಿದರು. ಸಂಶೋಧನಾ ಪ್ರಬಂಧಗಳನ್ನು ಮಂಡಿಸಿದರು.

ಫ್ಲೋ ಕೆಮಿಕಲ್ಸ್ ಅಧ್ಯಕ್ಷ ಡಾ. ಅಂಜನ್ ರಾಯ್ ಮಾತನಾಡಿ, ಕೃತಕ ಬುದ್ಧಿಮತ್ತೆಯು ಔಷಧೋದ್ಯಮದಲ್ಲಿ ಮಹತ್ತರ ಬದಲಾವಣೆ ತರುತ್ತಿದ್ದು, ಔಷಧ ಅನ್ವೇಷಣೆ, ರೋಗಿಗಳ ಆರೈಕೆ, ಸಂಶೋಧನೆ ಹಾಗೂ ದತ್ತಾಂಶ ಆಧಾರಿತ ಆರೋಗ್ಯ ಸೇವೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿಸುತ್ತಿದೆ. ವಿದ್ಯಾರ್ಥಿಗಳು ಎಐ ಡಿಜಿಟಲ್ ತಂತ್ರಜ್ಞಾನ ಹಾಗೂ ಸಂಶೋಧನಾ ಕೌಶಲ್ಯಗಳಲ್ಲಿ ಪರಿಣತಿ ಪಡೆದು ಜಾಗತಿಕ ಮಟ್ಟದಲ್ಲಿ ಸ್ಪರ್ಧಾತ್ಮಕತೆ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಡಾ. ಬಿ.ಎ. ವಿಶ್ವನಾಥ್ ಮಾತನಾಡಿ, ಭವಿಷ್ಯದ ಆರೋಗ್ಯ ಮತ್ತು ಔಷಧ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆಯ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ವಿದ್ಯಾರ್ಥಿಗಳು ಹಾಗೂ ಅಧ್ಯಾಪಕರು ಕೃತಕ ಬುದ್ಧಿಮತ್ತೆ ಆಧಾರಿತ ಶಿಕ್ಷಣ ಮತ್ತು ಸಂಶೋಧನೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.

ತಜ್ಞರು ವಿದ್ಯಾರ್ಥಿಗಳಿಗೆ ಎಐ ಆಧಾರಿತ ಔಷಧೋದ್ಯಮದ ತಂತ್ರಜ್ಞಾನ, ಸಂಶೋಧನಾ ಅವಕಾಶಗಳು ಹಾಗೂ ಭವಿಷ್ಯದ ವೃತ್ತಿ ಸಾಧ್ಯತೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಈ ರಾಷ್ಟ್ರೀಯ ಸಮ್ಮೇಳನವು ವಿದ್ಯಾರ್ಥಿಗಳಲ್ಲಿ ಸಂಶೋಧನಾ ಮನೋಭಾವ ಬೆಳೆಸುವ ಶೈಕ್ಷಣಿಕ ಸಂಸ್ಥೆಗಳು ಮತ್ತು ಕೈಗಾರಿಕೆಗಳ ನಡುವಿನ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುವ ಮಹತ್ವದ ಸಮ್ಮೇಳನ ಇದಾಗಿತ್ತು.

# ತಾಯಿ, ಅಜ್ಜಿ, ಸೋದರಮಾವನನ್ನು ಕೊಲೆಗೈದು ಆತ್ಮಹತ್ಯೆ ಮಾಡಿಕೊಂಡ ಮಗ



**ಬೆಂಗಳೂರು, ಜು.11:** ಕೆ.ಆರ್.ಪುರದಲ್ಲಿ ನಡೆದಿದ್ದ ಕುಟುಂಬದ ಮೂವರ ಕೊಲೆ ಮಾಸುವ ಮುನ್ನವೇ ಶನಿವಾರ ಬೆಳ್ಳಂಬೆಳಗ್ಗೆ ಅಂತಹದೇ ರೀತಿಯ ಮತ್ತೊಂದು ಕೊಲೆ ನಗರದಲ್ಲಿ ನಡೆದಿದೆ. ತಾಯಿ ಹಾಗೂ ಅಜ್ಜಿ ಮತ್ತು ಸೋದರ ಮಾವನನ್ನು ಮಚ್ಚಿನಿಂದ ಕೊಚ್ಚಿ ಭೀಕರವಾಗಿ ಕೊಲೆ ಮಾಡಿದ ಮನೆ ಮಗ ನಂತರ ತಾನೂ ಆತ್ಮಹತ್ಯೆ ಮಾಡಿಕೊಂಡಿರುವ ಹೃದಯವಿದ್ರಾವಕ ಘಟನೆ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಕೊಟ್ಟಿಗೆ ಪಾಳ್ಯದ ಐಯ್ಯಪ್ಪಸ್ವಾಮಿ ದೇವಸ್ಥಾನ ಸಮೀಪದ ನಿವಾಸಿಗಳಾದ ಮಂಗಳಮ (55), ಮಂಜಮ (75), ಸೋದರಮಾವ ಸತೀಶ್ (50) ಕೊಲೆಯಾದ ದುರ್ದೈವಿಗಳು. ಈ ಮೂವರನ್ನು ಕೊಂದು ಚಾಲಕ ಪ್ರಶಾಂತ್ (34) ಮನೆಯಲ್ಲಿ ಆತಹತ್ಯೆಗೆ ಶರಣಾಗಿದ್ದಾನೆ. ಹಾಗಾಗಿ ಒಂದೇ ಕುಟುಂಬದ ನಾಲ್ವರು ಸಾವನ್ನಪ್ಪಿದ್ದಾರೆ.

ಮೂಲತಃ ಮಾಗಡಿ ತಾಲ್ಲೂಕಿನ ಯಡಿಯೂರು ಹೋಬಳಿಯ ಬ್ಯಾಲದಕೆರೆ ಗ್ರಾಮದ ಈ ಕುಟುಂಬ ಕಳೆದ ಏಳೆಂಟು ವರ್ಷಗಳಿಂದ ಕೊಟ್ಟಿಗೆ ಪಾಳ್ಯದಲ್ಲಿ ಬಾಡಿಗೆ ಮನೆ ಮಾಡಿಕೊಂಡು ವಾಸವಾಗಿದ್ದರು. ಕಾರು ಚಾಲಕ ವೃತ್ತಿ ಮಾಡುತ್ತಿದ್ದ ಆರೋಪಿ ಪ್ರಶಾಂತ್‌ಗೆ ಮದುವೆಯಾಗಿರಲಿಲ್ಲ. ಈತನ ತಾಯಿ ಮಂಗಳಮ ಗಾರ್ಮೆಂಟ್ಸ್ ಗೆ ಹೋಗುತ್ತಿದ್ದರು. ಅಜ್ಜಿ ನಂಜಮ್ಮ ಸ್ವೀಪರ್ ಕೆಲಸ ಹಾಗೂ ಸೋದರ ಮಾವ ಪ್ಲಂಬರ್ ಕೆಲಸ ಮಾಡಿಕೊಂಡಿದ್ದರು. ಮನೆಯ ಯಜಮಾನ ಚಿಕ್ಕಣ್ಣ ಇಸ್ತ್ರಿಪೆಟ್ಟಿಗೆ ಅಂಗಡಿ ಇಟ್ಟುಕೊಂಡಿದ್ದು, ಇಂದು ಬೆಳಗ್ಗೆ 6 ಗಂಟೆಗೆ ಎದ್ದು ಅಂಗಡಿಗೆ ಹೋಗಿದ್ದಾರೆ. ಇಂದು ಬೆಳಗ್ಗೆ 7.30ರ ಸುಮಾರಿನಲ್ಲಿ ಪ್ರಶಾಂತ್ ಮನೆಯಲ್ಲಿ ಯಾವುದೋ ವಿಚಾರಕ್ಕೆ ಜಗಳವಾಗಿದೆ. ಜಗಳ ವಿಕೋಪಕ್ಕೆ ತಿರುಗಿದಾಗ ಪ್ರಶಾಂತ್ ಮಚ್ಚಿನಿಂದ ಮೊದಲು ಒಬ್ಬರ ಮೇಲೆ ಹಲ್ಲೆ ನಡೆಸಿದಾಗ ಅದನ್ನು ತಡೆಯಲು ಬಂದ ಮತ್ತೊಬ್ಬರ ಮೇಲೂ ಮಚ್ಚಿನಿಂದ ಹೊಡೆದಿದ್ದು, ಸೋದರ ಮಾವ ರೂಮ್‌ನಿಂದ ಹೊರಗೆ ಬರುತ್ತಿದ್ದಂತೆ ಅವರ ಮೇಲೂ ದಾಳಿ ಮಾಡಿದ್ದು, ಹೀಗೆ ಒಬ್ಬೊಬ್ಬರಂತೆ ಮೂವರನ್ನು ಮನಬಂದಂತೆ ಕೊಚ್ಚಿ ಭೀಕರವಾಗಿ ಕೊಲೆ ಮಾಡಿದ್ದಾನೆ.

ತಾಯಿ ಹಾಗೂ ಅಜ್ಜಿ ಮನೆ ಹೊಸಲಿನ ಬಳಿಯೇ ಬಿದ್ದು ಸಾವನ್ನಪ್ಪಿದ್ದರೇ, ಮಾವ ರೂಮಿನ ಬಾಗಿಲ ಬಳಿ ಕೊಲೆಯಾಗಿದ್ದಾರೆ. ಮಂಜಮ್ಮ ಅವರ ಮುಖ ಗುರುತು ಸಿಗದಂತೆ ಕೊಚ್ಚಿರುವುದು ಕಂಡು ಬಂದಿದೆ. ಮನೆಯ ಮೂವರನ್ನು ಕೊಲೆ ಮಾಡಿದ ನಂತರ ಮನೆಯಿಂದ ಹೊರಗೆ ಹೋಗಿ ತಪ್ಪಿಸಿಕೊಳ್ಳಲು ಯತ್ನಿಸಿದ್ದಾನೆ. ಆ ವೇಳೆ ಇವರ ಮನೆಯಲ್ಲಿ ಜೋರು ಗಲಾಟೆಯಾಗುತ್ತಿರುವುದನ್ನು ಗಮನಿಸಿದ ಮನೆ ಮಾಲೀಕ ಹಾಗೂ ನೆರೆಹೊರೆಯವರು ಇವರ ಮನೆ ಬಳಿ ಬರುತ್ತಿರುವುದನ್ನು ನೋಡಿದ ಆರೋಪಿ ಪ್ರಶಾಂತ್ ತಾನು ಸಿಕ್ಕಿ ಹಾಕಿಕೊಳ್ಳುವ ಭಯದಲ್ಲಿ ರೂಮ್‌ಗೆ ಹೋಗಿ ಬಾಗಿಲು ಸೀರೆಯಿಂದ ನೇಣು ಬಿಗಿದುಕೊಂಡು ಆತಹತ್ಯೆಗೆ ಶರಣಾಗಿದ್ದಾನೆ. ಸುದ್ದಿ ತಿಳಿದು ಪೊಲೀಸರು ಘಟನಾ ಸ್ಥಳಕ್ಕೆ ದಾವಿಸಿ ನೋಡಿದಾಗ ಆರೋಪಿ ಪ್ರಶಾಂತ್ ನೇಣು ಬಿಗಿದುಕೊಂಡು ಆತಹತ್ಯೆ ಮಾಡಿ ಕೊಂಡಿರುವುದು ಗೊತ್ತಾಗಿದೆ.

ಯಾವ ಕಾರಣಕ್ಕಾಗಿ ಪ್ರಶಾಂತ್ ಈ ಮೂವರನ್ನು ಕೊಲೆ ಮಾಡಿ ಆತಹತ್ಯೆ ಮಾಡಿಕೊಂಡ ಎಂಬುವುದು ನಿಗೂಢವಾಗಿದೆ. ಕೌಟುಂಬಿಕ ಕಲಹದಲ್ಲಿ ಈ ಭೀಕರ ಘಟನೆ ನಡೆದಿರಬಹುದೆಂದು ಪೊಲೀಸರು ಶಂಕಿಸಿದ್ದಾರೆ. ಈ ಬಗ್ಗೆ ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಗಾನ ಕೋಗಿಲೆ ಎಸ್.ಜಾನಕಿ ಅಗಲಿಕೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ



**ಶ್ರೀ ರಂಭಾಪುರಿ ಪೀಠ (ಬಾಳೆಹೊನ್ನೂರು) ಜುಲೈ 11.–** ಖ್ಯಾತ ಗಾಯಕಿ ಗಾನ ಕೋಗಿಲೆ ಎಸ್. ಜಾನಕಿ ಅವರ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

ಕನ್ನಡ ಸೇರಿದಂತೆ ಹಲವಾರು ಭಾಷೆಗಳ ಚಲನಚಿತ್ರಗಳಲ್ಲಿ ಅವರು ಹಾಡಿದ್ದು ಜನಪ್ರಿಯ ಗಾಯಕಿಯಾಗಿದ್ದರು. ಪದ್ಮಭೂಷಣ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳಿಗೆ ಅವರು ಭಾಜನರಾಗಿದ್ದರು. ತಮ್ಮ ಮಧುರ ಕಂಠದಿಂದ ಜನಮನ ಸೂರೆಗೊಂಡಿದ್ದರು. ಅವರ ನಿಧನದಿಂದಾಗಿ ದೇಶ ಒಬ್ಬ ಶ್ರೇಷ್ಠ ಗಾಯಕಿಯನ್ನು ಕಳೆದುಕೊಂಡಂತಾಗಿದೆ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.



ಚಿಕ್ಕಮಗಳೂರು ಬಳಿ ಶನಿವಾರ ಕಂಡುಬಂದ ಕೃಷಿ ಚಟುವಟಿಕೆಗಳು.

## ಕಲಬುರಗಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ,

# ಅಂಗನವಾಡಿ ಸ್ಕೀಮ್ ನೌಕರರಿಂದ ಕರಾಳ ದಿನಾಚರಣೆ

**ಕಲಬುರಗಿ, ಜು. 11:** ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಅಂಗನವಾಡಿ ಅಡುಗೆ ಸಹಾಯಕರು ಸ್ಕೀಮ್ ನೌಕರರು ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರಾಳ ದಿನಾಚರಣೆ ಆಚರಿಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನಾ ಪ್ರದರ್ಶನ ನಡೆಸಿದರು.

ಪ್ರತಿಭಟನೆಕಾರರು ನಂತರ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯ ಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಗೈರು ಹಾಜರಾತಿ ತಡೆಯಲು ಮತ್ತು ಮಕ್ಕಳ ಗ್ರಹಿಕೆಯ ಶಕ್ತಿಯನ್ನು ಹೆಚ್ಚಿಸಲು "ಅಕ್ಷರ ದಾಸೋಹ" ಯೋಜನೆ ಪ್ರಾರಂಭಿಸಿ 25 ವರ್ಷ ಗಳಾಗಿವೆ. ಬೆಲೆ ಏರಿಕೆಯಾಧಾರದಲ್ಲಿ ಯೋಜನೆಗೆ ಬೇಕಾದ ಅನುದಾನಗಳನ್ನು ಹೆಚ್ಚಳ ಮಾಡದೇ ಖಾಸಗಿ ಸಂಸ್ಥೆಗಳಿಗೆ ಕೊಡುವ ಮುಖಾಂತರ ಯೋಜನೆಯನ್ನು ಬಲಹೀನಗೊಳಿಸುತ್ತಿದೆ ಎಂದು ಟೀಕಿಸಿದರು.




2008ರಿಂದ ಕೇಂದ್ರ ಈ ಬಡ ಮಹಿಳೆಯರಿಗೆ ವೇತನ ಹೆಚ್ಚಳ ಮಾಡದೇ ಶೋಷಣೆ ಮಾಡುತ್ತಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಕೊಟ್ಟ ಆಶ್ವಾಸನೆಯಂತೆ ಈ ಮಹಿಳೆಯರಿಗೆ 7,000 ರೂಗಳ ತನಕ ವೇತನ ಹೆಚ್ಚಳ ಮಾಡಬೇಕು ಮತ್ತು ಇಸ್ಕಾನ್‌ಗೆ ಬಿಸಿಯೂಟ ಕೊಡುವ ಪ್ರಸ್ತಾಪವನ್ನು ಕೈಬಿಡುವಂತೆ, ಈಗಾಗಲೇ ಕೆಲಸ ಮಾಡುತ್ತಿರುವ 6 ಗಂಟೆ ಕೆಲಸದ ಅವಧಿಯ ಸುತ್ತೋಲೆ ಹೊರಡಿಸುವಂತೆ, ಆರೋಗ್ಯ ವಿಮೆ ಜಾರಿ ಮಾಡುವಂತೆ, ಸಾದಿಲ್ವಾರು ಜಂಟಿ ಖಾತೆ ಜವಾಬ್ದಾರಿಯನ್ನು ಮುಖ್ಯ ಅಡುಗೆ ನೌಕರರಿಂದ ವರ್ಗಾವಣೆ ಮಾಡಿರುವ ಕ್ರಮ ವಾಪಾಸ್ಸಾಗುವಂತೆ, ಸಾದಿಲ್ವಾರು ಖಾತೆ ಮೊದಲಿನಂತೆಯೇ ಬದಲಾಯಿಸಬೇಕು ಎಂದು ಅವರು ಒತ್ತಾಯಿಸಿದರು.

ಕೆಪಿಎಸ್ ಶಾಲೆ, ಇಸ್ಕಾನ್, ಮಠ, ಇನ್ನಿತರ ಸಂಘ ಸಂಸ್ಥೆಗಳಿಗಳ ಬಿಸಿಯೂಟ ನೌಕರರು ಕೆಲಸ ಕಳೆದುಕೊಳ್ಳುವ ಭೀತಿಯಲ್ಲಿದ್ದಾರೆ ಕೆಲಸದ ಭದ್ರತೆ ಒದಗಿಸಬೇಕು. ಬಿಸಿಯೂಟ ಯೋಜನೆಗೆ ಅನುದಾನ ಹೆಚ್ಚಿಸಬೇಕು. ಮಾಸಿಕ ಪಿಂಚಣಿ 10 ಸಾವಿರ ಕೊಡಬೇಕು. ಎಲ್ಲ ಜಿಲ್ಲೆಗಳಲ್ಲಿ ನಿವೃತ್ತಿ ಹೊಂದಿದ ನೌಕರರಿಗೆ ಇಡುಗಂಟು ತಕ್ಷಣ ಜಾರಿ ಮಾಡಬೇಕು. ಅಡುಗೆ ಕೇಂದ್ರಗಳು ಸುಸಜ್ಜಿತವಾಗಿ ಇಲ್ಲದ ಕಡೆ ಉತ್ತಮ ಅಡುಗೆ ಕೇಂದ್ರಗಳನ್ನು ನಿರ್ಮಿಸಬೇಕು. ಹಾಗೂ ಕ್ರಿಮಿ ಕೀಟಗಳು ಬರದ ರೀತಿಯಲ್ಲಿ ಅಡುಗೆ ಕೇಂದ್ರಗಳ ಸುತ್ತ ಮುತ್ತ ಸೂಕ್ತ ವಾತಾವರಣ ಸೃಷ್ಟಿಸಬೇಕು ಎಂದು ಅವರು ಆಗ್ರಹಿಸಿದರು.

ಉತ್ತರಪ್ರದೇಶ ಮತ್ತು ಪಂಜಾಬ್ ರಾಜ್ಯದ ಮಾನ್ಯ ಹೈಕೋರ್ಟ್ ತೀರ್ಮಾನಿಸಿದಂತೆ ವರ್ಷದ 12 ತಿಂಗಳು ಕೆಲಸ ಮತ್ತು ಕನಿಷ್ಠ ಕೂಲಿ ಜಾರಿ ಆಗಬೇಕು. ಅಕ್ಷರದಾಸೋಹ ಯೋಜನೆಯನ್ನು ಸಂಪೂರ್ಣವಾಗಿ ಶಿಕ್ಷಣ ಇಲಾಖೆಯಡಿಯಲ್ಲಿಯೇ ನಡೆಯಬೇಕು. ಬಿಸಿಯೂಟ ಯೋಜನೆಯನ್ನು ಯಾವುದೇ ಖಾಸಗಿ ಸಂಸ್ಥೆಗಳಿಗೆ ಯಾವುದೇ ಸ್ವರೂಪದ ಜವಾಬ್ದಾರಿ ಕೊಡಬಾರದು. ಬೇಸಿಗೆ ಮತ್ತು ದಸರಾ ರಜೆಗಳ ಮತ್ತು ಚುನಾವಣಾ ಸಂದರ್ಭದಲ್ಲಿ ವೇತನವನ್ನು ಕಡ್ಡಾಯವಾಗಿ ನೀಡಬೇಕು. ಶಾಲೆಗಳಲ್ಲಿ ಗ್ರೂಪ್ "ಡಿ" ನೌಕರರು ಇಲ್ಲದಿರುವುದರಿಂದ ಈ ನೌಕರರಿಂದಲೇ ಶಾಲಾ ಸ್ವಚ್ಛತೆ, ಕೈತೋಟ ನಿರ್ವಹಣೆ, ಶಾಲಾ ಸಮಯದ ಗಂಟೆ ಬಾರಿಸುವುದು ಇನ್ನಿತರ ಕೆಲಸ ನೀಡಿ ಈ ನೌಕರರಿಗೆ ಶಾಲಾ ಸಿಬ್ಬಂದಿಗಳೆಂದು ನೇಮಿಸಿ ನೇಮಕಾತಿ ಆದೇಶ ನೀಡಬೇಕು ಎಂದು ಅವರು ಒತ್ತಾಯಿಸಿದರು.

## ಎಸ್‌ಐಆರ್ ಪ್ರಕ್ರಿಯೆ ಯಶಸ್ವಿಗೊಳಿಸಲು ಮೀನಳ್ಳಿ ತಾಯಣ್ಣ ಕರೆ

**ಬಳ್ಳಾರಿ, ಜು.11.** ಗ್ರಾಮೀಣ ವಿಧಾನಸಭಾ ಕ್ಷೇತ್ರದ ಮೀನಳ್ಳಿ ಗ್ರಾಮದ ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರ ನಿವಾಸಕ್ಕೆ, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ ಐಆರ್) ಪ್ರಕ್ರಿಯೆ ಹಿನ್ನೆಲೆ ಬಿಎಲ್ ಒ ಅಧಿಕಾರಿಗಳು ಶನಿವಾರ ಭೇಟಿ ನೀಡಿ ನಮೂನೆಗಳನ್ನು ವಿತರಿಸಿದರು.




ಬಿಎಲ್ ಒ ಅಧಿಕಾರಿ ಶ್ರೀಲತಾ, ಸಹಾಯಕರಾದ ನೀಲಮ್ಮ ಅವರಿಗೆ, ಗಣತಿ ನಮೂನೆಗಳನ್ನು ಭರ್ತಿ ಮಾಡಿ, ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು, ಅಧಿಕಾರಿಗಳಿಗೆ ಮರಳಿ ಹಸ್ತಾಂತರಿಸಿದರು. ಜೊತೆಗೆ ಕುಟುಂಬದ ಸದಸ್ಯರ ಮಾಹಿತಿಗಳನ್ನು ಪಡೆದ ಅಧಿಕಾರಿಗಳು, ಪ್ರಕ್ರಿಯೆ ಪೂರ್ಣಗೊಳಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ಅವರು ಮಾತನಾಡಿ, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ ಐಆರ್) ಪ್ರಕ್ರಿಯೆ ರಾಜ್ಯ ಸೇರಿ ದೇಶಾದ್ಯಂತ ಪ್ರಾರಂಭಗೊಂಡಿದ್ದು, ಜು.29ರ ವರೆಗೆ ನಡೆಯಲಿದೆ. ಬೂತ್ ಮಟ್ಟದ ಅಧಿಕಾರಿಗಳು ಈಗಾಗಲೇ ಮನೆ ಮನೆಗೆ ಭೇಟಿ ನೀಡಿ ಗಣತಿ ನಮೂನೆಗಳನ್ನು ವಿತರಿಸಲು ಮುಂದಾಗಿದ್ದಾರೆ, ಪ್ರತಿಯೊಬ್ಬ ಅರ್ಹ ಮತದಾರರು ನಮೂನೆಗಳನ್ನು ಶೀಘ್ರದಲ್ಲೇ ಭರ್ತಿ ಮಾಡಿ ಮರಳಿ ಅಧಿಕಾರಿಗಳಿಗೆ ಹಸ್ತಾಂತರಿಸಿ ಈ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಬಳ್ಳಾರಿಯ ಕೌಲ್ ಬಜಾರ್ ಪ್ರದೇಶದಲ್ಲಿ ಸುಮಾರು ಜನ ಬಾಂಗ್ಲಾ ದೇಶದವರು ವಾಸವಾಗಿದ್ದು, ಈ ಕುರಿತು ಅಧಿಕಾರಿಗಳು ಹೆಚ್ಚು ಗಮನಹರಿಸಿ ಕೆಲಸ ಪೂರ್ಣಗೊಳಿಸಬೇಕು. ಈ ಕುರಿತು ಮಾಜಿ ಸಚಿವ ಬಿ.ಶ್ರೀರಾಮುಲು ಅವರು ಸಾಕಷ್ಟು ಬಾರಿ ಪ್ರಸ್ತಾಪಿಸಿ ಜಿಲ್ಲಾಡಳಿತದ ಗಮನಸೆಳೆದಿದ್ದಾರೆ. ಯಾವುದೇ ಕಾರಣಕ್ಕೂ ಅನರ್ಹರು ಸೇರ್ಪಡೆಯಾಗಬಾರದು, ಇದೊಂದು ಪ್ರಜಾಪ್ರಭುತ್ವದ ಹಬ್ಬವಿದ್ದಂತೆ, ಈ ಅಭಿಯಾನದಲ್ಲಿ ಪ್ರತಿಯೊಬ್ಬ ಅರ್ಹ ಮತದಾರರು ಭಾಗವಹಿಸಿ ಯಶಸ್ವಿಗೊಳಿಸಬೇಕು.

2022ರ ಮತದಾರರ ಪಟ್ಟಿಯಲ್ಲಿ ಮ್ಯಾಪಿಂಗ್ ಆಗದೇ ಇರುವವರ ಹೆಸರು, ಮತದಾರರ ಪಟ್ಟಿಯಲ್ಲಿ ಕೈತಪ್ಪುವ ಸಾಧ್ಯತೆ ಇರಲಿದೆ. ಈ ಕುರಿತು ಯಾವುದೇ ಸಂಶಯಗಳಿದ್ದಲ್ಲಿ ವ್ಯಾಪ್ತಿಯ ಬಿಎಲ್ ಒ ಅಧಿಕಾರಿಗಳು ಅಥವಾ ತಹಸೀಲ್ದಾರ್ ಕಚೇರಿಗೆ ಸಂಪರ್ಕಿಸಬಹುದು ಎಂದರು. ಪ್ರಕ್ರಿಯೆಗೆ ತೆರಳುವ ಅಧಿಕಾರಿಗಳು ಗ್ರಾಮೀಣ ಭಾಗದ ಜನರಿಗೆ ಈ ಕುರಿತು ಹೆಚ್ಚು ಪ್ರಚಾರ ಮಾಡಬೇಕು, ಮಾಹಿತಿ ನೀಡಲು ಮುಂದಾಗಬೇಕು, ಅವಿದ್ಯಾವಂತರಿದ್ದರೆ ಪೂರಕ ಮಾಹಿತಿ ನೀಡಿ ಪ್ರಕ್ರಿಯೆ ಪೂರ್ಣ ಗೊಳಿಸಬೇಕು, ಅರ್ಹರು ಈ ಪ್ರಕ್ರಿಯೆಯಿಂದ ಹೊರಗುಳಿಯಬಾರದು. ಚುನಾವಣಾ ಆಯೋಗದ ಈ ಅಭಿಯಾನದ ಯಶಸ್ವಿಗೆ ಅಧಿಕಾರಿಗಳೊಂದಿಗೆ ಕೈಜೋಡಿಸಿ ಎಂದರು.

## ಮತದಾರರ ಪಟ್ಟಿ ನಿಖರತೆಗೆ ಸಹಕರಿಸಿ: ಡಿ.ಸಿ ಪೂವಿತಾ



**ರಾಯಚೂರು, ಜು. 11:** ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಎಲ್ಲ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಸಕಾರಾತ್ಮಕವಾಗಿ ಸಹಕರಿಸುವ ಮೂಲಕ ನಿಖರ ಮಾಹಿತಿ ನೀಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.

ಜಿಲ್ಲೆಯಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಸಂಬಂಧ ಗಣತಿ ನಮೂನೆಗಳ ವಿತರಣೆಯ ಕಾರ್ಯವು ಪ್ರಗತಿಯಲ್ಲಿದ್ದು, ಈಗಾಗಲೇ ಜುಲೈ 10ರ ಮಧ್ಯಾಹ್ನ 12ರ ವೇಳೆಗೆ ಶೇ98.45ರಷ್ಟು ಪ್ರಗತಿ ಸಾಧಿಸಲಾಗಿದೆ. ಬಾಕಿ ಉಳಿದಿರುವ ಶೇ1.55ರಷ್ಟು ಪ್ರಕರಣಗಳಲ್ಲಿ ಮರಣ ಹೊಂದಿದವರು, ಸ್ಥಳಾಂತರಗೊಂಡವರು ಹಾಗೂ ಮನೆಗೆ ಬೀಗ ಹಾಕಿ ಬೇರೆಡೆ ವಾಸಿಸುತ್ತಿರುವವರ ವಿವರಗಳಿದ್ದು, ಇವುಗಳನ್ನು ಸರಿಪಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.

ಜುಲೈ 10ರ ಅಂಕಿ–ಅಂಶಗಳ ಪ್ರಕಾರ ಜಿಲ್ಲೆಯ 17,14,559 ಮತದಾರರ ಪೈಕಿ ಈಗಾಗಲೇ 16,88,008 ಮತದಾರರರನ್ನು (ಶೇ.98.45) ಮ್ಯಾಪಿಂಗ್ ಮಾಡಲಾಗಿದೆ. ಬಾಕಿ ಉಳಿದ ಮತದಾರರ ವಿಳಾಸ ಪತ್ತೆಯಾಗುತ್ತಿಲ್ಲ. ಮರಣ ಹೊಂದಿದವರ ಮರಣ ಪ್ರಮಾಣಪತ್ರ ಲಭ್ಯವಿದ್ದರೆ, ಅಂಥವರ ಹೆಸರನ್ನು ಪಟ್ಟಿಯಿಂದ ತೆಗೆಯಲು ಸುಲಭವಾಗುತ್ತದೆ.

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮತದಾರರನ್ನು ಗುರುತಿಸುವಲ್ಲಿ ಸ್ಥಳೀಯ ವಾರ್ಡ್ ಸದಸ್ಯರು, ಮಾಜಿ ಸದಸ್ಯರು ಹಾಗೂ ಗ್ರಾಮ ಪಂಚಾಯಿತಿ ಮಾಜಿ ಸದಸ್ಯರ ಪಾತ್ರ ದೊಡ್ಡದಾಗಿದೆ. ಆದ್ದರಿಂದ ತಕ್ಷಣವೇ ತಹಶೀಲ್ದಾರರು, ಇಒ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ ಅಧಿಕಾರಿಗಳ ನೇತೃತ್ವದಲ್ಲಿ ಸಭೆಗಳನ್ನು ಕರೆದು, ಮಹಜರು ಪ್ರಕ್ರಿಯೆಯ ಮೂಲಕ ನಿಖರ ಮಾಹಿತಿ ಪಡೆಯುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಜಿಲ್ಲೆಯಲ್ಲಿ ಅತ್ಯಂತ ಪಾರದರ್ಶಕ ಹಾಗೂ ದೋಷಮುಕ್ತ ಮತದಾರರ ಪಟ್ಟಿ ಸಿದ್ಧಪಡಿಸಲು ಎಲ್ಲ ರಾಜಕೀಯ ಪಕ್ಷಗಳು ಕೈಜೋಡಿಸಬೇಕು ಎಂದರು.

## ಪಾಕ್ ಮೂಲದ ಮಹಿಳೆ, ಆಕೆಯ ಪುತ್ರನ ಬಂಧನ



**ಬಾಗೇಪಲ್ಲಿ, ಜು.11:** ತಾಲ್ಲೂಕಿನ ದಾಸಗಾರಿಪಲ್ಲಿಯಲ್ಲಿ ಅಕ್ರಮವಾಗಿ ನೆಲೆಸಿದ್ದ ಪಾಕಿಸ್ತಾನ ಮೂಲದ ಮಹಿಳೆ ಹಾಗೂ ಆಕೆಯ ಪುತ್ರನನ್ನು ಪೊಲೀಸರು ಪತ್ತೆಹಚ್ಚಿ ಬಂಧಿಸಿದ್ದಾರೆ. ಬಂಧಿತರನ್ನು ಫರ್ಹಾನಾಜ್ ಮತ್ತು ಆಕೆಯ ಪುತ್ರ ಮೊಹಮದ್ ಫರ್ದಿನ್ ಖಾನ್ ಎಂದು ಗುರುತಿಸಲಾಗಿದೆ. ಇವರ ಬಳಿ ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್, ಪಾನ್ ಕಾರ್ಡ್ ಕೂಡ ಪತ್ತೆಯಾಗಿದೆ. ಆಯೂಬ್ ಖಾನ್ ದುಬೈನಲ್ಲಿ ಕೆಲಸ ಮಾಡುತ್ತಿದ್ದು, ಇವರು ಪಾಕಿಸ್ತಾನದ ಫರ್ಹಾನಾಜ್‌ಳನ್ನು ಹಲವು ವರ್ಷಗಳ ಹಿಂದೆ ಯುಎಇಯಲ್ಲಿ ಮದುವೆಯಾಗಿದ್ದ, ನಂತರ ಆಕೆಯನ್ನು ಭಾರತಕ್ಕೆ ಕರೆತಂದು ಅಕ್ರಮವಾಗಿ ನೆಲೆಸಿದ್ದರು ಎಂದು ಪ್ರಾಥಮಿಕ ಮಾಹಿತಿಯಲ್ಲಿ ತಿಳಿಸಲಾಗಿದೆ. ಇವರಿಗೆ ಈಗ ನಾಲ್ಕು ಮಕ್ಕಳಿದ್ದು, ಒಬ್ಬನನ್ನು ಮಾತ್ರ ಈಗ ಬಂಧಿಸಲಾಗಿದೆ. ಘಟನೆ ಕುರಿತಂತೆ ಕೇಂದ್ರ ಗೃಹ ಖಾತೆಯನ್ನು ಕೂಡ ಸಂಪರ್ಕಿಸಲಾಗಿದ್ದು, ಬಾಗೇಪಲ್ಲಿ ತಹಶೀಲ್ದಾರ್ ಅವರ ದೂರಿನ ಸಂಬಂಧ ಈಗ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಆಯೂಬ್‌ಖಾನ್ ಪಾಕಿಸ್ತಾನ ಮೂಲದ ಮಹಿಳೆಯನ್ನು ಮದುವೆಯಾದ ನಂತರ ಬೆಂಗಳೂರಿಗೆ ವಾಸಸ್ಥಾನವನ್ನು ಬದಲಾಯಿಸಿದ್ದು, ಒಬ್ಬ ಪುತ್ರ ಒಂದನೇ ತರಗತಿಯಿಂದ ಹತ್ತನೇ ತರಗತಿಯವರೆಗೆ ಇಲ್ಲಿಯೇ ವಿದ್ಯಾಭ್ಯಾಸ ಮಾಡಿದ್ದಾರೆ ಮತ್ತು ಪಿಯುಸಿ ಮತ್ತು ಬಿಎ ಪದವಿಯನ್ನು ಬಾಗೇಪಲ್ಲಿಯಲ್ಲಿ ಪೂರೈಸಿದ್ದಾನೆ. ಪ್ರಸ್ತುತ ಚಿಕ್ಕಬಳ್ಳಾಪುರ ಪೊಲೀಸರು ಜಿಲ್ಲಾಧಿಕಾರಿ ಕಚೇರಿಯನ್ನು ಸಂಪರ್ಕಿಸಿ ಇವರಿಗೆ ಯಾವ ಆಧಾರದ ಮೇಲೆ ರೇಷನ್ ಕಾರ್ಡ್ ಆಧಾರ್ ಮತ್ತು ಸರ್ಕಾರಿ ಗುರುತಿನ ಚೀಟಿಯನ್ನು ನೀಡಲಾಗಿತ್ತು ಎಂಬುದರ ಬಗ್ಗೆ ಮಾಹಿತಿ ಕೇಳಿ ರದ್ದು ಮಾಡಲಾಗಿದೆ. ಆಪರೇಷನ್ ಸಿಂಧೂರ್ ನಂತರ ಕೇಂದ್ರ ಗೃಹ ಸಚಿವಾಲಯ ದೀರ್ಘಕಾಲದ ವೀಸಾ ಪಡೆದು ದೇಶದಲ್ಲಿ ವಾಸಿಸುತ್ತಿರುವವರ ಬಗ್ಗೆ ಮಾಹಿತಿ ನೀಡುವಂತೆ ಸೂಚನೆ ನೀಡಲಾಗಿತ್ತು.ಮಾಹಿತಿಯನ್ನು ಅಪ್ಲೋಡ್ ಮಾಡುವಂತೆ ತಿಳಿಸಲಾಗಿತ್ತು. ನಂತರ ಇದನ್ನು ಪರಿಶೀಲಿಸುವ ವೇಳೆ ಬಾಗೇಪಲ್ಲಿಯಲ್ಲಿ ಅಕ್ರಮವಾಗಿ ಪಾಕ್ ಮೂಲದವರು ವಾಸಿಸುತ್ತಿರುವವರ ಬಗ್ಗೆ ಬಹಿರಂಗಗೊಂಡಿದೆ. ಪ್ರಸ್ತುತ ಫರ್ಹಾನಾಜ್, ಪುತ್ರ ಮೊಹಮದ್ ಫರ್ದಿನ್ಖಾನ್ ಪಾಕಿಸ್ತಾನ ಪ್ರಜೆಗಳು ಎಂದು ಪೊಲೀಸರು ತಿಳಿಸಿದ್ದಾರೆ.

## ಸುರತ್ಕಲ್ ಬಳಿ 8 ಮಂದಿ ಅಕ್ರಮ ಬಾಂಗ್ಲಾವಾಸಿಗಳ ಬಂಧನ

# ನಿರ್ಮಾಣ ಹಂತದ ಕಟ್ಟಡದಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರ ದಾಖಲೆಗಳ ಪರಿಶೀಲನೆ ವೇಳೆ ಪತ್ತೆ

**ಮಂಗಳೂರು, ಜು.11:** ಭಾರತ–ಬಾಂಗ್ಲಾ ಗಡಿ ದಾಟಿ ಮಂಗಳೂರು ಪ್ರವೇಶಿಸಿದ್ದ 8 ಮಂದಿ ಬಾಂಗ್ಲಾದೇಶದ ಪ್ರಜೆಗಳನ್ನು ಬಂಧಿಸಲಾಗಿದೆ. ಸುರತ್ಕಲ್ ಪೊಲೀಸರಿಂದ ಖಚಿತ ಮಾಹಿತಿಯ ಮೇರೆಗೆ ದಾಳಿ ನಡೆಸಲಾಗಿದೆ. ಸುರತ್ಕಲ್ ಪೊಲೀಸ್ ಠಾಣಾ ವ್ಯಾಪ್ತಿಯ ಮುಕ್ಕ ಎಂಬಲ್ಲಿ ನಿರ್ಮಾಣ ಹಂತದಲ್ಲಿದ್ದ ಕಟ್ಟಡದಲ್ಲಿ ಕೆಲಸ ಮಾಡುತ್ತಿದ್ದರು. ಕೆಲಸ ಮಾಡುತ್ತಿದ್ದ 54 ಕಾರ್ಮಿಕರ ದಾಖಲಾತಿಗಳ ತೀವ್ರ ಪರಿಶೀಲನೆ ನಡೆಸಲಾಯಿತು. ಇವರ ಪೈಕಿ ಎಂಟು ಜನ ಬಾಂಗ್ಲಾದೇಶದಿಂದ ಅಕ್ರಮವಾಗಿ ನುಸುಳಿ ಬಂದಿರುವುದು ಪತ್ತೆಯಾಗಿದೆ.

ಬಂಧಿತರೆಲ್ಲರೂ ಬಾಂಗ್ಲಾದೇಶದ ರಾಜಶಾಹಿ ವಿಭಾಗದ ಗೊಡಾಗರಿ ಉಪಜಿಲ್ಲೆಯ ನಿವಾಸಿಗಳು ಎಂದು ತಿಳಿದು ಬಂದಿದೆ. ಮೊಹಮ್ಮದ್ ಮುಕ್ತಾರ್ ಅಲಿ (36), ಮೊಹಮ್ಮದ್ ರಕೀಬುರ್ ಹೊಸೈನ್ (44), ಮೊಹಮ್ಮದ್ ಅಜರುಲ್ ಇಸ್ಲಾಂ (36), ಮೊಹಮ್ಮದ್ ಜಾಹಿದ್ ಹೊಸೈನ್ (18), ಮೊಹಮ್ಮದ್ ಬೇಲಾಲ್ ಹೊಸೈನ್ (36), ಮೊಹಮ್ಮದ್ ಹಸಿಬುಲ್ ಹಸನ್ ಶಾಂಟೋ (37), ಮೊಹಮ್ಮದ್ ಸಮೇವುಲ್ ಹಸನ್ (23) ಹಾಗೂ ಮೊಹಮ್ಮದ್ ಸೈಬುರ್ ರೆಹಮಾನ್ ಬಂಧಿತ ಆರೋಪಿಗಳು.

ಆರೋಪಿಗಳು ಸುಮಾರು ಮೂರು ತಿಂಗಳ ಹಿಂದೆ ಭಾರತ–ಬಾಂಗ್ಲಾ ಗಡಿ ದಾಟಿದ್ದರು. ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಮೂಲಕ ಭಾರತದೊಳಗೆ ನುಸುಳಿದ್ದರು. ಕಳೆದ ಎರಡು ತಿಂಗಳಿನಿಂದ ಮುಕ್ಕ ಭಾಗದಲ್ಲಿ ಕಟ್ಟಡ ಕಾರ್ಮಿಕರ ಸೋಗಿನಲ್ಲಿ ಕೆಲಸ ಮಾಡುತ್ತಾ ವಾಸವಿದ್ದರು. ಸಂಶಯದ ಮೇರೆಗೆ ಇವರನ್ನು ಠಾಣೆಗೆ ಕರೆತಂದು ತೀವ್ರ ವಿಚಾರಣೆ ನಡೆಸಲಾಯಿತು.

ಬಾಂಗ್ಲಾದೇಶದ ನ್ಯಾಷನಲ್ ಐಡಿ ಕಾರ್ಡ್, ಜನನ ಪ್ರಮಾಣ ಪತ್ರ ಹಾಗೂ ಇವರ ಕುಟುಂಬದ ಇತರ ದಾಖಲೆಗಳು ಪತ್ತೆಯಾಗಿದೆ. ಕೂಲಿ ಕೆಲಸಕ್ಕಾಗಿ ಮಂಗಳೂರಿಗೆ ಬಂದಿರುವುದು ದೃಢವಾಗಿದೆ. ಬೆಂಗಳೂರಿನ ವಿದೇಶಿಯರ ಪ್ರಾದೇಶಿಕ ನೋಂದಣಿ ಕಚೇರಿಗೆ ವರದಿ ಸಲ್ಲಿಕೆಯಾಗಿದೆ.

## ಮೌಲ್ಯಾಧಾರಿತ ಜೀವನದಿಂದ ಬದುಕಿಗೆ ಬೆಲೆ : ಶ್ರೀ ರಂಭಾಪುರಿ ಜಗದ್ಗುರುಗಳು

**ತರಿಕೆರೆ( ಚಿಕ್ಕಮಗಳೂರು ಜಿಲ್ಲೆ)–ಜುಲೈ–10.** ಶಾಂತಿ ಸಮೃದ್ಧಿಯ ಬದುಕಿಗೆ ಧರ್ಮ ಬೇಕು. ಸಂತೃಪ್ತಿ ಸಮೃದ್ಧಿಗಾಗಿ ಧರ್ಮಾಚರಣೆ ಬೇಕು. ಅರಿವುಳ್ಳ ಮಾನವ ಜನ್ಮದಲ್ಲಿ ಅರಿತು ಬಾಳಿದರೆ ಬದುಕು ಬಂಗಾರ. ಮೌಲ್ಯಾಧಾರಿತ ಜೀವನದಿಂದ ಬದುಕಿಗೆ ಬೆಲೆ ಬರುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯ ಪಟ್ಟರು.

ಮನುಷ್ಯನ ಬದುಕು ಇನ್ನೊಬ್ಬರಿಗೆ ಮಾದರಿಯಾಗಬೇಕಲ್ಲದೇ ಮಾರಕವಾಗಬಾರದು. ಸದಾಚಾರ ಸದ್ವರ್ತನೆ ಸೌಹಾರ್ದತೆ ಶಾಂತಿ ಸಮೃದ್ಧಿಗಳ ಸಫಲತೆಗೆ ಸೋಪಾನ. ಬಾಲ್ಯದಲ್ಲಿ ಜ್ಞಾನ ಯೌವನದಲ್ಲಿ ಸಂಪತ್ತು ಮತ್ತು



ವೃದ್ಧಾಪ್ಯದಲ್ಲಿ ಪುಣ್ಯ ಸಂಪಾದಿಸಿಕೊಂಡು ಬಾಳಬೇಕು. ಬಾಳಿನಲ್ಲಿ ಸಂಪತ್ತು ಗಳಿಸದಿದ್ದರೂ ಚಿಂತೆಯಿಲ್ಲ. ಸದ್ಗುಣವಂತನಾಗಿ ಬಾಳಬೇಕು. ಅಸತ್ಯದಿಂದ ಸತ್ಯ ಸಾಕ್ಷಾತ್ಕಾರದೆಡೆಗೆ ಕತ್ತಲೆಯಿಂದ ಬೆಳಕಿನೆಡೆಗೆ ಸಾವಿನಿಂದ ಸಾವಿಲ್ಲದೆಡೆಗೆ ಮುನ್ನಡೆಯುವುದೇ ಮನುಷ್ಯನ ಗುರಿಯಾಗಿರಬೇಕೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಭಾರತೀಯ ಸಂಸ್ಕೃತಿಗೆ ಮಹಿಳೆಯರ ಕೊಡುಗೆ ಅಪಾರ. ಶೀಲ ಮತ್ತು ಚಾರಿತ್ರ್ಯ ಬಹಳ ಬೆಲೆಯುಳ್ಳದ್ದು. ಸುಸಂಸ್ಕೃತ ಮಹಿಳೆ ಕುಟುಂಬವನ್ನು ಬೆಳಗಬಲ್ಲಳು. ಎಂ.ಬಿ.ಗಿರಿರಾಜ್ ಅವರ ಧರ್ಮಪತ್ನಿ ಶ್ರೀಮತಿ ಬಿ.ಎಂ.ರತ್ನಮ್ಮನವರು ಆದರ್ಶ ಗೃಹಸ್ಥ ಜೀವನ ಹೊಂದಿ ಮಹಿಳಾ ಸಂಕುಲಕ್ಕೆ ಮಾದರಿಯಾಗಿದ್ದರು. ಹುಟ್ಟು ಎಷ್ಟು ಸಹಜವೋ ಹುಟ್ಟಿದವನಿಗೆ ಮರಣ ಅಷ್ಟೇ ನಿಶ್ಚಿತ. ಹುಟ್ಟು ಸಾವುಗಳ ಮಧ್ಯದ ಬದುಕನ್ನು ಆದರ್ಶಮಯವಾಗಿ ಕಟ್ಟಿಕೊಂಡಿದ್ದರು ಎಂದರು.

## ದಂಡೋತಿ ಮೊರಾರ್ಜಿ ವಸತಿ ಶಾಲೆಯಲ್ಲಿ ನಡೆದ ಪ್ರಕರಣ

# ಹೊಟ್ಟೆನೋವಿನಿಂದ ಮಕ್ಕಳು ಆಸ್ಪತ್ರೆಗೆ ದಾಖಲು: ಡಿಸಿ ಭೇಟಿ

**ಕಲಬುರಗಿ, ಜು. 11:** ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ದಂಡೋತಿ ಗ್ರಾಮದಲ್ಲಿರುವ ಅಲ್ಪಸಂಖ್ಯಾತರ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ರಾತ್ರಿ ಊಟ ಸೇವಿಸಿದ ಬಳಿಕ ಸುಮಾರು 20ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಹೊಟ್ಟೆ ನೋವು ಮತ್ತು ಅಸ್ವಸ್ಥತೆಯಿಂದ ಬಳಲಿದ ಘಟನೆ ನಡೆದಿದೆ.

ಆರಂಭದಲ್ಲಿ ಕೆಲ ವಿದ್ಯಾರ್ಥಿಗಳಿಗೆ ಹೊಟ್ಟೆ ನೋವು ಕಾಣಿಸಿಕೊಂಡಿದ್ದು, ನಂತರ ಇನ್ನೂ ಹಲವರಿಗೆ ಇದೇ ರೀತಿಯ ಲಕ್ಷಣಗಳು ಕಂಡುಬಂದ ಹಿನ್ನೆಲೆಯಲ್ಲಿ ಶಾಲಾ ಆಡಳಿತ ತಕ್ಷಣವೇ ಅವರನ್ನು ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದು ಪ್ರಾಥಮಿಕ ಚಿಕಿತ್ಸೆ ನೀಡಿತು. ಬಳಿಕ ಹೆಚ್ಚಿನ ಚಿಕಿತ್ಸೆಗೆ ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಯಿತು.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಅಲ್ಪಸಂಖ್ಯಾತರ ಇಲಾಖೆಯ ಅಧಿಕಾರಿಗಳು ಹಾಗೂ ಕಂದಾಯ, ಶಿಕ್ಷಣ ಮತ್ತು ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳ ಚಿಕಿತ್ಸೆಗೆ ಅಗತ್ಯ ಕ್ರಮ ಕೈಗೊಂಡರು. ಆಂಬುಲೆನ್ಸ್ ವ್ಯವಸ್ಥೆ ಮಾಡಿ ಮಕ್ಕಳನ್ನು ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು.

ವಿದ್ಯಾರ್ಥಿಗಳ ಆರೋಗ್ಯದಲ್ಲಿ ಏಕಾಏಕಿ ಉಂಟಾದ ಸಮಸ್ಯೆಯಿಂದ ಪಾಲಕರಲ್ಲಿ ಆತಂಕ ಮನೆಮಾಡಿದೆ. ಆಹಾರ ಸೇವನೆಯ ನಂತರ ಅಸ್ವಸ್ಥತೆ ಕಾಣಿಸಿಕೊಂಡಿರುವುದರಿಂದ ಆಹಾರ ವಿಷಬಾಧೆ (ಫುಡ್ ಪಾಯಿಸನ್) ಸಂಭವಿಸಿರುವ ಶಂಕೆ ವ್ಯಕ್ತವಾಗಿದ್ದು, ನಿಖರ ಕಾರಣ ಪತ್ತೆಹಚ್ಚಲು ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಅಧಿಕಾರಿಗಳು, ಕೆಲ ವಿದ್ಯಾರ್ಥಿಗಳ ಆರೋಗ್ಯದಲ್ಲಿ ಏರುಪೇರಾಗಿದ್ದರೂ ಚಿಕಿತ್ಸೆ ಬಳಿಕ ಚೇತರಿಕೆ ಕಂಡುಬಂದಿದೆ. ಮುನ್ನೆಚ್ಚರಿಕೆ ಕ್ರಮವಾಗಿ ವಿದ್ಯಾರ್ಥಿಗಳ ಆರೋಗ್ಯದ ಮೇಲೆ ನಿರಂತರ ನಿಗಾ ವಹಿಸಲಾಗುತ್ತಿದ್ದು, ಘಟನೆಗೆ ಕಾರಣವಾದ ಅಂಶಗಳ ಕುರಿತು ಪರಿಶೀಲನೆ ಮುಂದುವರಿದಿದೆ ಎಂದು ತಿಳಿಸಿದ್ದಾರೆ.

ಮಾಹಿತಿ ತಿಳಿದ ಜಿಲ್ಲಾಧಿಕಾರಿ ಇಕ್ರಂ ಶರೀಫ್ ಅವರು ಆಸ್ಪತ್ರೆಗೆ ಭೇಟಿ ನೀಡಿ ವಿದ್ಯಾರ್ಥಿಗಳ ಆರೋಗ್ಯ ವಿಚಾರಿಸಿದರು.



ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳೂ ಸಹ ಉಪಸ್ಥಿತರಿದ್ದರು.

**ಮಣಿಕಂಠ ಆಕ್ರೋಶ:** ತಾಲ್ಲೂಕಿನ ದಂಡೋತಿ ಗ್ರಾಮದ ಮುರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಆಹಾರ ವಿಷಬಾಧೆ ಶಂಕೆಯಿಂದ 50–60 ವಿದ್ಯಾರ್ಥಿಗಳು ಅಸ್ವಸ್ಥರಾಗಿ ಆಸ್ಪತ್ರೆಗೆ ದಾಖಲಾಗಿರುವುದು ಅತ್ಯಂತ ದುರಂತಕರ ಮತ್ತು ಸರ್ಕಾರದ ಆಡಳಿತ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಬಿಜೆಪಿ ಮುಖಂಡ ಮಣಿಕಂಠ ರಾಠೋಡ್ ಆರೋಪಿಸಿದರು.

ಕ್ಷೇತ್ರದ ಶಾಸಕರೂ ಆಗಿರುವ ಜಿಲ್ಲಾ ಉಸ್ತುವರಿ ಮತ್ತು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರೇ, ನಿಮ್ಮ ಆದ್ಯತೆ ಏನು. ಕ್ಷೇತ್ರದ ಮಕ್ಕಳ ಜೀವವೇ, ಅಥವಾ ರಾಜಕೀಯವೇ. ವಿದ್ಯಾರ್ಥಿಗಳು ಆಸ್ಪತ್ರೆಯಲ್ಲಿ ನರಳುತ್ತಿರುವಾಗ ಜನರ ನೋವಿನ ನಡುವೆ ನಿಲ್ಲಬೇಕಾದ ನಿಮ್ಮ ನಾಯಕತ್ವ ಎಲ್ಲಿದೆ. ನೀವು ಬರೀ ಆರ್‌ಎಸ್‌ಎಸ್, ಮೋದಿ ಮತ್ತು ಅಮಿತ್ ಶಾ ಮುಂತಾದವರ ವಿರುದ್ಧ ಟೀಕೆಗಳನ್ನು ಮಾಡುತ್ತ ಪ್ರಚಾರ ಪಡೆಯುವುದರಲ್ಲಿ ತೊಡಗಿದ್ದೀರಿ. ನಿಮಗೆ ಪ್ರಚಾರ ಮುಖ್ಯವೋ. ನಿಮಗೆ ಮತಹಾಕಿ ಆಯ್ಕೆ ಮಾಡಿ ಕಳಿಸಿರುವ ನಿಮ್ಮ ಕ್ಷೇತ್ರದ ಜನ ಮುಖ್ಯವೇ.ನೀವು ಮಾಡುತ್ತಿರುದು ಸರಿಯೇ. ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ.

ಇಂತಹ ಘಟನೆಗಳು ನಡೆದಾಗ ಜನರೊಂದಿಗೆ ನಿಲ್ಲುವುದು ಜನಪ್ರತಿನಿಧಿಯ ಕರ್ತವ್ಯ. ಆದರೆ ನಿಮ್ಮ ನಡೆ ನೋಡಿದರೆ ಚಿತಾಪುರದ ಜನರ ಸಮಸ್ಯೆಗಳಿಗಿಂತ ರಾಜಕೀಯ ವಿಚಾರಗಳೇ ನಿಮಗೆ ಹೆಚ್ಚು ಮುಖ್ಯ ಎನ್ನುವ ಭಾವನೆ ಮೂಡುತ್ತಿದೆ. ಈ ಘಟನೆಗೆ ಸಂಬಂಧಿಸಿದಂತೆ ಕೂಡಲೇ ಉನ್ನತ ಮಟ್ಟದ ತನಿಖೆ ನಡೆಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಪ್ರತಿಯೊಬ್ಬ ವಿದ್ಯಾರ್ಥಿಗೂ ಅತ್ಯುತ್ತಮ ಚಿಕಿತ್ಸೆ ನೀಡಬೇಕು ಹಾಗೂ ಇಂತಹ ಘಟನೆಗಳು ಮತ್ತೆ ನಡೆಯದಂತೆ ಶಾಶ್ವತ ಕ್ರಮ ಜಾರಿಗೊಳಿಸಬೇಕು. ಕ್ಷೇತ್ರದ ಜನತೆ ಎಲ್ಲವನ್ನೂ ಗಮನಿಸುತ್ತಿದ್ದಾರೆ. ಮಕ್ಕಳ ಜೀವದ ಪ್ರಶ್ನೆಯಲ್ಲಿ ನಿರ್ಲಕ್ಷ್ಯವನ್ನು ಯಾವುದೇ ಕಾರಣಕ್ಕೂ ಒಪ್ಪಲಾಗದು. ಜನರ ವಿಶ್ವಾಸ ಕಾಪಾಡಬೇಕಾದರೆ ಮಾತಲ್ಲ, ಕೆಲಸ ಮಾಡಿ ತೋರಿಸಿ ಎಂದು ಅವರು ಗುಡುಗಿದ್ದಾರೆ.

ಸಚಿವ ಖರ್ಗೆ ವಿರುದ್ಧ ಬಿಜೆಪಿ ಕಿಡಿ: ದಂಡೋತಿ ಮೊರಾರ್ಜಿ ವಸತಿ ನಿಲಯದಲ್ಲಿ ಕಳಪೆ ಆಹಾರ ಮತ್ತು ಕಲುಷಿತ ನೀರು ಸೇವಿಸಿ 50ಕ್ಕೂ ಹೆಚ್ಚು ಮಕ್ಕಳು ಅಸ್ವಸ್ಥರಾಗಿ ಆಸ್ಪತ್ರೆ ಪಾಲಾಗಿರುವುದು ಇವರ ದುರಾಡಳಿತ ಮತ್ತು ನಿರ್ಲಕ್ಷ್ಯಕ್ಕೆ ಪ್ರತ್ಯಕ್ಷ ಸಾಕ್ಷಿ ಎಂದು ಬಿಜೆಪಿಯು ಉಗ್ರವಾಗಿ ಮಾಡಿ ಟೀಕಿಸಿದೆ. ತಮ್ಮದೇ ಕ್ಷೇತ್ರದ ಹಾಸ್ಟೆಲ್‌ನಲ್ಲಿ ಬಡ ವಿದ್ಯಾರ್ಥಿಗಳಿಗೆ ಕನಿಷ್ಠ ಶುದ್ಧ ನೀರು ಮತ್ತು ಯೋಗ್ಯವಾದ ಊಟ ಕೊಡಲು ಸಾಧ್ಯವಾಗದವರು ಇನ್ನು ಇಡೀ ಜಿಲ್ಲೆಯನ್ನು ಹೇಗೆ ಉದ್ಧಾರ ಮಾಡುತ್ತಾರೆ ನಿಮ್ಮ ಈ ಅಸಡ್ಡೆಗೆ ಮುಗ್ಧ ಮಕ್ಕಳ ಜೀವ ಬಲಿಯಾಗಬೇಕೆ ಬರೀ ಭಾಷಣ ಬಿಗಿಯುವುದು, ಟ್ವೀಟ್ ಮಾಡುವುದು ಬಿಟ್ಟು ಮೊದಲು ವಿದ್ಯಾರ್ಥಿಗಳ ಜೀವದ ಜೊತೆ ಚೆಲ್ಲಾಟವಾಡುವ ಭ್ರಷ್ಟ ಹಾಗೂ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ. ಅದಕ್ಕೂ ಮೊದಲು ನೀವು ಹೊಣೆ ಹೊತ್ತುಕೊಳ್ಳಿ ಎಂದು ಬಿಜೆಪಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರಿಗೆ ಆಗ್ರಹಿಸಿದ್ದಾರೆ.

ಮಾಹಿತಿ ಪಡೆದ ಸಚಿವ ಖರ್ಗೆ: ದಂಡೋತಿಯಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಊಟ ಸೇವಿಸಿದ ನಂತರ ಮಕ್ಕಳು ಅಸ್ವಸ್ಥರಾದ ಘಟನೆಗೆ ಸಂಬಂಧಿಸಿದಂತೆ ಜಿಲ್ಲಾಡಳಿತದೊಂದಿಗೆ ಮಾತನಾಡಿ ಮಾಹಿತಿ ಪಡೆಯಲಾಗಿದೆ ಎಂದು ರಾಜ್ಯದ ಗೃಹ, ಐಟಿಬಿಟಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದ್ದಾರೆ.

## ಸ್ಪರ್ಧಾತ್ಮಕ ಯುಗದಲ್ಲಿ, ಜ್ಞಾನದೊಂದಿಗೆ ಪ್ರಾಯೋಗಿಕ ಕೌಶಲ್ಯವೂ ಅಗತ್ಯ: ಸತ್ಯನಾರಾಯಣ

**ಕಲಬುರಗಿ, ಜು. 11:** ಇಂದಿನ ಆಧುನಿಕ ಸ್ಪರ್ಧಾತ್ಮಕ ಯುಗದಲ್ಲಿ ಜ್ಞಾನದ ಜೊತೆಗೆ ಪ್ರಾಯೋಗಿಕ ಕೌಶಲ್ಯ ಅತಿಮುಖ್ಯವಾದ ಅಗತ್ಯವಾಗಿದೆ. ಆದ್ದರಿಂದ ವಿದ್ಯಾರ್ಥಿಗಳು ವಿಶ್ವವಿದ್ಯಾಲಯದ ಲ್ಲಿರುವ ಅತ್ಯಾಧುನಿಕ ಸಂಶೋಧನಾ ಸೌಲಭ್ಯಗಳನ್ನು ಹಾಗೂ ಪ್ರಯೋಗಾಲಯಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು, ತಮ್ಮ ಸಂಶೋಧನಾ ಸಾಮರ್ಥ್ಯ ವೃದ್ಧಿಸಿಕೊಳ್ಳುವುದರಿಂದ "ವಿಕಸಿತ ಭಾರತ–2047" ನಿರ್ಮಾಣದ ಗುರಿ ಸಾಧನೆಗೆ ಇದು ಕೂಡ ಅತ್ಯಂತ ಸಹಕಾರಿಯಾಗಲಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಹೇಳಿದರು.




ವಿಶ್ವವಿದ್ಯಾಲಯದ ರಸಾಯನ ಶಾಸ್ತ್ರ ವಿಭಾಗವು 'ಮಾಸ್ ಪ್ರೆಸ್ಕೋಮೆಟ್ರಿ ಬೇಸ್ಡ್ ಪ್ರೋಟೋಮಿಕ್ಸ್' ಎಂಬ ವಿಷಯದ ಕುರಿತು ಎರಡು ದಿನಗಳ ಕಾರ್ಯಾಗಾರ ಹಾಗೂ ವಿಚಾರ ಸಂಕಿರಣ ಉದ್ಘಾಟಿಸಿ, ನೊಬೆಲ್ ಪ್ರಶಸ್ತಿ ಪುರಸ್ಕೃತ ಡಾ. ಸಿ.ವಿ.ರಾಮನ್ ಅವರನ್ನು ಉಲ್ಲೇಖಿಸಿ, ಸೀಮಿತ ಸಂಪನ್ಮೂಲಗಳನ್ನು ಬಳಸಿಕೊಂಡು ವಿಶ್ವಮಟ್ಟದ ಸಂಶೋಧನೆಗೆ ಸಾಧ್ಯವಾಯಿತು. ಇಂದು ವಿದ್ಯಾರ್ಥಿಗಳಿಗೆ ಲಭ್ಯವಿರುವ ವಿಶ್ವದರ್ಜೆಯ ಸಂಶೋಧನಾ ಮೂಲಸೌಕರ್ಯಗಳನ್ನು ಬಳಸಿಕೊಂಡು ಹೊಸ ಹೊಸ ಸಂಶೋ ಧನೆಯನ್ನು ಮಾಡಬೇಕೆಂದು ಕರೆ ನೀಡಿದರು.

ವಿದ್ಯಾರ್ಥಿಗಳು ಸಮಯ ನಿರ್ವಹಣೆ ಪಾಲಿಸಬೇಕು, ಪರಿಶ್ರಮ ಹಾಗೂ ನಿರಂತರ ಕಲಿಕೆಯನ್ನು ಮಾಡಬೇಕೆಂದು ಸಲಹೆ ನೀಡಿದ ಅವರು, ಕ್ಯಾಂಪಸ್ ವಿದ್ಯಾರ್ಥಿಗಳಿಗಾಗಿ ಶೀಘ್ರದಲ್ಲೇ ನೀಟ್ ತರಬೇತಿ ತರಗತಿಗಳನ್ನು ಆರಂಭಿಸುವ ಯೋಜನೆ ಇದೆ ಎಂದು ತಿಳಿಸಿದರು.

ಹೈದ್ರಾಬಾದ್‌ನ ಥರ್ಮೋ ಫಿಶರ್ ಸೈಂಟಿಫಿಕ್‌ನ ವಿಜ್ಞಾನಿ ಬಾಲಭಾವು ವಾರ್ಕಾಡ್, ಬೆಂಗಳೂರಿನ ಜೆಎನ್‌ಸಿಎಎಸ್‌ಆರ್‌ನ ಪ್ರೊ. ಹೇಮಲತಾ ಬಲರಾಮ್ ಹಾಗೂ ಪುಣೆಯ ಸಿಎಸ್‌ಐಆರ್–ನ್ಯಾಷನಲ್ ಕೆಮಿಕಲ್ ಲ್ಯಾಬೊರೇಟರಿಯ ಪ್ರೊ. ಮಹೇಶ್ ಜೆ. ಕುಲಕರ್ಣಿ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಸಂಶೋಧನಾ ವಿದ್ಯಾರ್ಥಿ ಗಳಿಗೆ ಹಾಗೂ ಪ್ರಾಧ್ಯಾಪಕರಿಗೆ ಮಾಸ್ ಸ್ಪೆಕ್ಟೋಮೆಟ್ರಿ, ಪ್ರೋಟಿಯೋ ಮಿಕ್ಸ್ ಡೇಟಾ ಸಂಗ್ರಹಣೆ, ಬಳಕೆ, ಹಾಗೂ ಡೇಟಾ ವಿಶ್ಲೇಷಣೆ ಕುರಿತು ಪ್ರಾಯೋಗಿಕ ತರಬೇತಿ ನೀಡಿದರು. ಸಮಾರೋಪ ಸಮಾರಂಭದಲ್ಲಿ ಕುಲಸಚಿವ ಪ್ರೊ. ಆರ್.ಆರ್. ಬಿರಾದಾರ್ ಮಾತನಾಡಿ, ಕಾರ್ಯಾ ಗಾರವನ್ನು ರಸಾಯನಶಾಸ್ತ್ರ ವಿಭಾಗವು ಯಶಸ್ವಿಯಾಗಿ ನಡೆಸಿದ್ದು, ಸಂಶೋ ಧನಾ ವಿದ್ಯಾರ್ಥಿಗಳುಹಾಗೂ ಪ್ರಾಧ್ಯಾಪಕರು ಈ ಕಾರ್ಯಾಗಾರವನ್ನು ಸದುಪಯೋಗ ಪಡೆದುಕೊಳ್ಳಬೇಕೆಂದು ಕರೆ ನೀಡಿದರು.

# ಉಪನ್ಯಾಸಕರ ಹೋರಾಟಕ್ಕೆ ಬೆಂಬಲ: ಧರಣಿಯಲ್ಲಿ ಭಾಗವಹಿಸಿದ ಶಶಿಲ್ ನಮೋಶಿ- ಬೇಡಿಕೆ ಈಡೇರಿಕೆಗೆ ಒತ್ತಾಯ



**ಕಲಬುರಗಿ, ಜು. 11:** ರಾಜ್ಯ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟವಾಗಿರುವ ಪದವಿಪೂರ್ವ ಉಪನ್ಯಾಸಕರಿಗೆ 9–10ನೇ ತರಗತಿಯ ಭೋದನೆ ವಿಸ್ತರಿಸುವ ಕರುಡು ಅಧಿಸೂಚನೆಯನ್ನು ತಕ್ಷಣವೇ ಹಿಂಪಡೆಯುವಂತೆ ಹಾಗೂ ಉಪನ್ಯಾಸಕರ ಇತರೆ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹಾಗೂ ಉಪನ್ಯಾಸಕರ ಸಂಘವು ನಡೆಸುತ್ತಿರುವ ಧರಣಿ ಸತ್ಯಗ್ರಹದಲ್ಲಿ ವಿಧಾನ ಪರಿಷತ್ ಸದಸ್ಯ ಶಶೀಲ್ ನಮೋಶಿ ಅವರೂ ಪಾಲ್ಗೊಂಡು ಹೋರಾಟಕ್ಕೆ ಬೆಂಬಲಿಸಿ, ಶಿಕ್ಷಕರ ಬೇಡಿಕೆಗಳು ನ್ಯಾಯಯುತವಾಗಿದ್ದು ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ ಈಡೇರಿಸಬೇಕೆಂದು ಆಗ್ರಹಿಸಿದರು.

ಉಪನ್ಯಾಸಕರೊಂದಿಗೆ ಸತ್ಯಗ್ರಹದಲ್ಲಿ ಭಾಗವಹಿಸಿದ ಪರಿಷತ್ ಸದಸ್ಯ ನಮೋಶಿ ಅವರು, ಉಪನ್ಯಾಸಕರ ನ್ಯಾಯೋಚಿತ ಬೇಡಿಕೆಗಳಿಗೆ ತಮ್ಮ ಸಂಪೂರ್ಣ ಬೆಂಬಲವಿದೆ. ಕರಡು ಪತ್ರದಲ್ಲಿ ಪ್ರಕರಟವಾಗಿರುವ ಪದವಿಪೂವ್ ಉಪನ್ಯಾಸಕರಿಗೆ 9–10ನೇ ತರಗತಿ ಬೋಧನೆ ಕಡ್ಡಾಯಗೊಳಿಸಿ ವಿಸ್ತರಿಸಿರುವ ಅಧಿಸೂಚನೆಯನ್ನು ತಾವು ಉಗ್ರವಾಗಿ ಖಂಡಿಸುವುದಾಗಿ ತಿಳಿಸಿದರು.

ಸರ್ಕಾರ ಪಿಯು ಕಾಲೇಜುಗಳಲ್ಲಿ ಕೆಲಸ ಮಾಡುತ್ತಿರುವ ಉಪನ್ಯಸಕರ ಕೆಲಸದ ಒತ್ತಡವನ್ನು ಗಮನಿಸಬೆಕು. ಎಲ್ಲವನ್ನೂ ಅವರ ತಲೆಯ ಮೇಲೆ ಹೇರಿದರೆ ಶಿಕ್ಷಣದ ಗುಣಮಟ್ಟ ಕುಸಿಯುತ್ತದೆ.

ಈಗಾಗಲೇ ಉಪನ್ಯಾಸಕರ ಕೊರತೆಯಿಂದ ಪಿಯು ಕಾಲೇಜುಗಳು ನರಳುತ್ತಿರುವಾಗ, ಅವರಿಗೆ ಮತ್ತಷ್ಟು ಕೆಲಸದ ಹೊರೆ ಹೇರುವುದು ಸರಿಯಲ್ಲ. ಇದು ಅತ್ಯಂತ ಅವೈಜ್ಞಾನಿಕ ನಿರ್ಧಾರವಾಗಿದೆ ಎಂದು ನಮೋಶಿ ಸರ್ಕಾರದ ಆದೇಶವನ್ನು ಖಂಡಿಸಿ, ಹಿಂಪಡೆಯುವಂತೆ ಆಗ್ರಹಿಸಿದರು.

ಸರ್ಕಾರ ಹೊರಡಿಸಿರುವ ಈ ಅಧಿಸೂಚನೆ ಯಾವುದೇ ಕಾರಣಕ್ಕೂ ನಡೆಯಬಾರದು. ಈ ಆದೇಶವನ್ನು ಶೇ. 100 ರಷ್ಟು ಹಿಂಪಡೆಯಲು ಒತ್ತಾಯಿಸುವುದಾಗಿ ಹೇಳಿದ ಅವರು, ಸರ್ಕಾರಕ್ಕೆ ಇಂಥ ಸಲಹೆಗಳನ್ನು ಯಾರು ನೀಡುತ್ತಾರೆ? ಇದು ಕೇವಲ ಉಳಿತಾಯದ ಪ್ರಶ್ನೆಯಲ್ಲ. ವಿದ್ಯಾರ್ಥಿಗಳ ಭವಿಷ್ಯವನ್ನು ಪರಿಗಣಿಸಿ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು.




ರಾಜಸ್ಥಾನ ಮತ್ತು ಪಶ್ಚಿಮ ಬಂಗಾಳದಲ್ಲಿ ಬಾಲಕಿಯರ ಮೇಲಿನ ಅತ್ಯಾಚಾರ ಮತ್ತು ಹತ್ಯೆಯನ್ನು ಖಂಡಿಸಿ ಅಖಿಲ ಭಾರತ ಮಹಿಳಾ ಸಾಂಸ್ಕೃತಿಕ ಸಂಘಟನೆ (ಎಐಎಂಎಸ್‌ಎಸ್) ಸದಸ್ಯರು ಶನಿವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

## ಶಿಕ್ಷಣದಲ್ಲಿ ಭಾರತೀಯ ಪರಂಪರೆ ಇರಲಿ: ಪ್ರೊ.ಬಸವರಾಜ ಡೋಣೂರ

**ಬೀದರ್, ಜು. 11:** ಶಿಕ್ಷಣದಲ್ಲಿ ಭಾರತೀಯ ಸಂಸ್ಕೃತಿ ಮತ್ತು ಪರಂಪರೆಯ ಅಸ್ಮಿತೆ ಇರಬೇಕು. ನಮ್ಮದೇ ಆದ ಸಂಸ್ಕೃತಿಮತ್ತು ಪರಂಪರೆ ಇಲ್ಲದಿರುವುದು ಶಿಕ್ಷಣ ಹೇಗಾದೀತು? ಮೊದಲು ನಮ್ಮ ದೇಶದ ಸಂಸ್ಕೃತಿ ಮತ್ತು ಪರಂಪರೆಯನ್ನು ನಾವು ಅರಿತುಕೊಂಡಾಗಲೇ ಅದರ ಶ್ರೇಷ್ಠತೆ ಅರಿಯಲು ಸಾಧ್ಯ ಎಂದು ಭಾರತೀಯ ಶಿಕ್ಷಣ ಮಂಡಲದ ಕರ್ನಟಕ ಉತ್ತರ ಪ್ರಾಂತ ಉಪಾಧ್ಯಕ್ಷರಾದ ಪ್ರೊ.ಬಸವರಾಜ ಡೋಣೂರ ಹೇಳಿದರು.

ಶಿಕ್ಷಣದಲ್ಲಿ ಭಾರತೀಯ ಸಂಸ್ಕೃತಿ ಹಾಗೂ ಪರಂಪರೆಯ ಅಸ್ಮಿತೆ ಇರುವುದು ಅತ್ಯಂತ ಅಗತ್ಯ ಯಾಕೆ ಎಂಬುದನ್ನು ವಿವರಿಸಿದ ಅವರು, ನಮ್ಮ ಯುವಕರು ಪಾಶ್ಚಾತ್ಯ ಸಂಸ್ಕೃತಿಗೆ ಮಾರುಹೋಗಲು ನಮ್ಮತನದ ಶಿಕ್ಷಣ ಇಲ್ಲದಿರುವುದೇ ಕಾರಣ ಎಂದರು.

ಶಿಕ್ಷಣ ಸಂಸ್ಥೆಗಳು, ಶಿಕ್ಷಕರು, ಸಾಮಾಜಿಕ ಸಂಘಟನೆಗಳು ಹಾಗೂ ಪಾಲಕರು ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಪೂರಕವಾಗಿ ಕಾರ್ಯ ನಿರ್ವಹಿಸಬೇಕು. ದೇಶದ ಎಲ್ಲರೂ ಭಾರತೀಯ ಸಂಸ್ಕೃತಿ ಅನುಸರಿಸಬೇಕು. ಸಾಂಸ್ಕೃತಿಕ ವೈಭವವನ್ನು ಎತ್ತಿ ಹಿಡಿಯಬೇಕು ಎಂದು ಸಲಹೆ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಬಸವರಾಜ ಕವಡೆ ಮಾತನಾಡಿ, ರಾಷ್ಟ್ರದ ಅಭಿವೃದ್ಧಿಯಲ್ಲಿ ಶಿಕ್ಷಕರ ಪಾತ್ರ ಅಮೂಲ್ಯವಾಗಿದೆ. ಶಿಕ್ಷಕರು ಕೇವಲ ವಿಷಯ ಶಿಕ್ಷಕರಾಗದೆ, ಗುರುವಾಗಬೇಕು ಎಂದು ತಿಳಿಸಿದರು.

ಡಾ.ಪಲ್ಲವಿ ಪಾಟೀಲ ಸೇಡಂ ಮಾತನಾಡಿ, ಇಂದು ಮಕ್ಕಳಿಗೆ ಶಿಕ್ಷಣ ಜೈಲಿನಂತೆ ಭಾಸವಾಗುತ್ತಿದೆ. ಆಟದ ಜತೆಗೆ ಶಿಕ್ಷಣ ನೀಡುವಂತಾಗಬೇಕು ಎಂದು ಹೇಳಿದರು.

### ಅಕ್ರಮ ವಲಸಿಗರಿಗೆ ಮತದಾನ ಹಕ್ಕು ನೀಡುವ ಹುನ್ನಾರ

## ಶಾಶ್ವತ ನಿವಾಸ ಪ್ರಮಾಣಪತ್ರ: ಸರ್ಕಾರಕ್ಕೆ ಸೋಮಶೇಖರ ರೆಡ್ಡಿ ತರಾಟೆ



**ಬಳ್ಳಾರಿ, ಜು.11.** ರಾಜ್ಯದ ಕಾಂಗ್ರೆಸ್ ಸರ್ಕಾರ ಎಸ್ ಐ ಆರ್ ಪ್ರಕ್ರಿಯೆಯಲ್ಲಿ ಅಕ್ರಮ ವಲಸಿಗರಿಗೆ ಮತದಾನ ಹಕ್ಕು ನೀಡುವ ಹುನ್ನಾರದಿಂದ ಶಾಶ್ವತ ನಿವಾಸ ಪ್ರಮಾಣ ಪತ್ರ ನೀಡಲು ಹೊರಟಿದೆ. ಇದು ಸರಿಯಾದ ಕ್ರಮವಲ್ಲ ಎಂದು ನಗರದ ಮಾಜಿ ಶಾಸಕ ಜಿ.ಸೋಮಶೇಖರ ರೆಡ್ಡಿ ಹೇಳಿದರು.

ಅವರು ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಕಾಂಗ್ರೆಸ್ ಸರ್ಕಾರ ಇರುವ ರಾಜ್ಯಗಳಲ್ಲಿ ಇದು ವಿನೂತನ ಪ್ರಯೋಗ ವಾಗಿದೆ.

ಎಸ್‌ಐಆರ್ ಪ್ರಕ್ರಿಯೆ ಯನ್ನು ಹಳ್ಳ ಹಿಡಿಸುವ ಉದೇಶದಿಂದ ಈ ಪ್ಲಾನ್ ಹಾಕಿಕೊಂಡು ಪಿಆರ್ಸಿ ಜಾರಿಗೆ ತಂದಿದೆ ಈಗಾಗಲೇ ಧೃಡಿಕರಣವಿದ್ರು ಪಿಆರ್ಸಿಯನ್ನು ಜಾರಿಗೆ ತಂದು ವಲಸಿಗರಿಗೆ ಪುನಃ ಅವಕಾಶ ಕಲ್ಪಿಸಲು ಹೊರಟಿದೆ. ಕೇಂದ್ರ ಸರ್ಕಾರ ದೇಶದಾ ದ್ಯಂತ ಭಾರತೀಯರನ್ನು ಹೊರತು ಪಡಿಸಿ ವಲಸಿಗರನ್ನು ಹೊರ ಹಾಕಲು ಎಸ್ ಐ ಆರ್ ಜಾರಿಗೆ ತಂದು ದೇಶ ಶುದ್ದಿಕರಣಕ್ಕೆ ಕೈ ಹಾಕಿದ್ದಾರೆ. ಆದ್ರೆ ಕಾಂಗ್ರೆಸ್ ಪಕ್ಷದವರು ತಮ್ಮ ಓಟ್ ಬ್ಯಾಂಕ್ ಕಳೆದುಕೊಳ್ಳುವ ಆತಂಕದಲ್ಲಿ ಇದ್ದು ಪಿಆರ್ ಸಿ ಜಾರಿಗೆ ತಂದು ವಲಸಿಗರಿಗೆ ಅವಕಾಶ ಕಲ್ಪಿಸಲು ಹೊರಟ್ಟಿದ್ದಾರೆ. ಇದು ಕಾಂಗ್ರೆಸ್ ಸರ್ಕಾರದ ದುರುದ್ದೇಶದ ಕೂಸಾಗಿದೆ. ನಮ್ಮ ದೇಶದ ಸ್ವಾಯತ್ತೆಗೆ ಧಕ್ಕೆ ತರಲು ಕಾಂಗ್ರೆಸ್ ಹೊರಟಿದೆ. ಎಸ್‌ಐಆರ್ ಉದ್ದೇಶವನ್ನು ಹಾಳು ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

## ಕೋಟ್ಯಂತರ ಖರ್ಚುಮಾಡಿ ನಡೆಸಿದ ಜಾತಿಗಣತಿ ವರದಿ ಮಂಡಿಸಲು ಹಿಂಜರಿತ ಏಕೆ: ಸರ್ಕಾರಕ್ಕೆ ಶಾಸಕ ಸುನೀಲ್‌ಕುಮಾರ್ ಪ್ರಶ್ನೆ



ದಾವಣಗೆರೆ, ಜು.11: ಸುಮಾರು 450 ಕೋಟಿ ಖರ್ಚುಮಾಡಿ ಜಾತಿಗಣತಿಗಾಗಿ ಆಯೋಗ ರಚಿಸಲಾಗಿತ್ತು. ಇಷ್ಟೊಂದು ಹಣವನ್ನು ಇದೊಂದು ಸಮೀಕ್ಷೆಗೆ ಬಳಸಿಕೊಂಡಿದ್ದರೂ ಕೂಡ ಏಕೆ ಸರ್ಕಾರ ವರದಿ ಮಂಡಿಸಲು ಹಿಂಜರಿಯುತ್ತಿದೆ ಎಂದು ಕಾರ್ಕಳ ಶಾಸಕ ವಿ. ಸುನೀಲ್ ಕುಮಾರ್ ಪ್ರಶ್ನಿಸಿದರು.

ಜಾತಿಗಣತಿ ಜಾರಿಗೊಳಿಸುವಂತೆ ಒತ್ತಾಯಿಸಿದ ಅವರು, ನೂತನ ಮುಖ್ಯಮಂತ್ರಿಗಳು ಇದರ ಬಗ್ಗೆ ಒಂದು ಶಬ್ದವನ್ನು ಮಾತನಾಡುತ್ತಿಲ್ಲ. ಹಿಂದುಳಿದ ವರ್ಗದವರ ಬಗ್ಗೆ ರಾಜ್ಯದ ಹಿಂದುಳಿದ ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ಏನಾಗಿತ್ತು ಎನ್ನುವುದರ ಬಗ್ಗೆ ತಿಳಿದುಕೊಳ್ಳುವ ಆಸಕ್ತಿಯೂ ಮಾನ್ಯ ಮುಖ್ಯಮಂತ್ರಿಗೆ ಇಲ್ಲವೇ? ಈ ಎಲ್ಲಾ ರೀತಿಯ ಅನುಮಾನಗಳು ದಟ್ಟವಾಗಿ ಕಂಡುಬರುತ್ತಿವೆ ಎಂದರು.

ಸರ್ಕಾರ ತಕ್ಷಣ ಈ ವರದಿಯನ್ನು ಬಿಡುಗಡೆ ಮಾಡಿ ವಿಧಾನಸಭೆಗೆ ಕಳಿಸಬೇಕು. ಸರ್ಕಾರದ ಕಾರ್ಯಕ್ರಮಗಳು ಇದರ ಅಂಕಿ–ಅಂಶ ಆಧರಿಸಿ ನಡೆಯಬೇಕು. ಅಂಕಿ ಅಂಶ ಸರಿ ಇಲ್ಲದೇ ಯಾವ ಕಾರ್ಯಕ್ರಮಗಳು ಸರಿಯಾಗಿ ನಡೆಯುವುದಿಲ್ಲ ಎಂದು ಸುನೀಲ್ ಕುಮಾರ್ ತಿಳಿಸದರು.

### ಬಿಳಿಯಾನೆಯಾಗಿರುವ ಎಸ್‌ಎಫ್ ರದ್ದುಪಡಿಸಿ

## ಮಾಜಿ ಡಿವೈಎಸ್‌ಪಿ ಅನುಪಮಾ ಶೆಣೈ ಆಗ್ರಹ



ಉಡುಪಿ, ಜು.11: ರಾಜ್ಯ ಸರ್ಕಾರ ರಚಿಸಿರುವ ಸ್ಪೆಷಲ್ ಆಕ್ಷನ್ ಫೋರ್ಸ್ ಕುರಿತು ಮಾಜಿ ಡಿವೈಎಸ್ಪಿ ಅನುಪಮಾ ಶೆಣೈ ಕೆಲವು ಪ್ರಶ್ನೆಗಳನ್ನು ಎತ್ತಿದ್ದಾರೆ. ಉಡುಪಿಯಲ್ಲಿ ಮಾತನಾಡಿದ ಅವರು, 'ಎಸ್‌ಎಎಫ್ ವಿಶೇಷ ಕಾರ್ಯಪಡೆ ಯಾಕೆ, ಈ ವಿಶೇಷ ಕಾರ್ಯಪಡೆಗೆ ಕಾನೂನಿನಲ್ಲಿ ಯಾವ ಮಾನ್ಯತೆ ಇದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಪ್ರಶ್ನಿಸಿದ್ದಾರೆ.

ಕಳೆದ ವರ್ಷದ ಜೂನ್ ತಿಂಗಳಲ್ಲಿ ಸರ್ಕಾರ ಸ್ಪೆಷಲ್ ಆಕ್ಷನ್ ಫೋರ್ಸ್ ರಚಿಸಿತ್ತು. ನಕ್ಸಲ್ ನಿಗ್ರಹಕ್ಕಾಗಿ ಕಾರ್ಯನಿರ್ವಹಿಸುತ್ತಿದ್ದ ಎಎನ್‌ಎಫ್ ಅಗತ್ಯವಿಲ್ಲ ಎಂದು ಹೇಳಿ, ಅದರ ಸಿಬ್ಬಂದಿಯನ್ನು ಕಡಿತಗೊಳಿಸಿ ಎಸ್‌ಎಎಫ್ ರಚಿಸ 'ಲಾಗಿತ್ತು. ಉಡುಪಿ, ದಕ್ಷಿಣ ಕನ್ನಡ ಹಾಗೂ ಶಿವಮೊಗ್ಗ ಜಿಲ್ಲೆಗಳಲ್ಲಿ ಎಸ್‌ಎಎಫ್ ಅನ್ನು ನಿಯೋಜಿಸಲಾಗಿತ್ತು. ಎಸ್‌ಎಎಫ್ ಸ್ಥಾಪನೆಯಾದ ಕೇವಲ 20 ದಿನಗಳಲ್ಲಿ ಚೆನ್ನಯ್ಯನನ್ನು ಬಂಧಿಸಲಾಗಿತ್ತು. ಬುರುಡೆ ಗ್ಯಾಂಗ್‌ಗೆ ವಿಶೇಷ ರಕ್ಷಣೆ ನೀಡಲು ಎಸ್‌ಎಎಫ್ ಸ್ಥಾಪಿಸಲಾಗಿತ್ತೇ ಎಂದು ಪ್ರಶ್ನಿಸಿದ್ದಾರೆ. ಈ ವಿಶೇಷ ಕಾರ್ಯಪಡೆ ಯನ್ನು ಬಿಳಿಯಾನೆಯಂತೆ ನಿರ್ವಹಿಸುವ ಬದಲು ರದ್ದುಪಡಿಸಿ, ಅದರ ಅನುದಾನವನ್ನು ಸರ್ಕಾರದ ಯೋಜನೆಗಳಿಗೆ ಬಳಸಬೇಕು ಎಂದು ಅನುಪಮಾ ಶೆಣೈ ಸರ್ಕಾರವನ್ನು ಆಗ್ರಹಿಸಿದರು.

## ಸಾರ್ವಜನಿಕರಿಗೆ ಶೀಘ್ರ, ಉಚಿತ, ಸೌಹಾರ್ದಯುತ ನ್ಯಾಯ ವ್ಯವಸ್ಥೆಗೆ ಲೋಕ ಅದಾಲತ್ ಸದುಪಯೋಗವಾಗಲಿ: ಜಿಲ್ಲಾ ನ್ಯಾಯಾಧೀಶ ಸಿದ್ದಲಿಂಗ ಪ್ರಭು




**ಬಳ್ಳಾರಿ,ಜು.11.**ಲೋಕ್ ಅದಾಲತ್ ಸಾರ್ವಜನಿಕರಿಗೆ ಶೀಘ್ರ, ಉಚಿತ ಮತ್ತು ಸೌಹಾರ್ದಯುತ ನ್ಯಾಯ ಒದಗಿಸುವ ವ್ಯವಸ್ಥೆಯಾಗಿದ್ದು, ವ್ಯಾಜ್ಯವಿರುವ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ದಲಿಂಗ ಪ್ರಭು ಅವರು ಹೇಳಿದರು.

ರಾಷ್ಟ್ರೀಯ ಲೋಕ್ ಅದಾಲತ್ ಉದ್ದೇಶಿಸಿ, ಭಾರತೀಯ ನ್ಯಾಯಾಂಗ ವ್ಯವಸ್ಥೆಯಲ್ಲಿ ಪರ್ಯಾಯ ವ್ಯಾಜ್ಯ ಪರಿಹಾರ ವ್ಯವಸ್ಥೆಯ ಅತ್ಯಂತ ಪ್ರಮುಖ ಹಾಗೂ ಜನಪ್ರಿಯ ವೇದಿಕೆಯಾಗಿ ಹೊರಹೊಮ್ಮಿರುವ "ರಾಷ್ಟ್ರೀಯ ಲೋಕ ಅದಾಲತ್" ದೇಶಾದ್ಯಂತ ನಡೆಯುತ್ತಿದೆ. ಎಲ್ಲರಿಗೂ ನ್ಯಾಯ, ಶೀಘ್ರ ನ್ಯಾಯ ಮತ್ತು ಉಚಿತ ನ್ಯಾಯ ಒದಗಿಸುವ ಉದಾತ್ತ ಧ್ಯೇಯದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಈ ವ್ಯವಸ್ಥೆಯು ಕಕ್ಷಿದಾರರಿಗೆ ಸುದೀರ್ಘ ಕೋರ್ಟ್ ಪ್ರಕ್ರಿಯೆಗಳಿಂದ ಮುಕ್ತಿ ನೀಡುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಸಾಮಾನ್ಯ ನ್ಯಾಯಾಲಯಗಳಲ್ಲಿ ವರ್ಷಾನುಗಟ್ಟಲೆ ನಡೆಯುವ ಪ್ರಕರಣಗಳಿಗೆ ಅದಾಲತ್ ನಲ್ಲಿ ಸುದೀರ್ಘ ವಾದ–ಪ್ರತಿವಾದಗಳಿಲ್ಲದೆ, ಉಭಯ ಪಕ್ಷಕಾರರ ಪರಸ್ಪರ ಒಪ್ಪಂದದೊಂದಿಗೆ ಒಂದೇ ದಿನದಲ್ಲಿ ಅತ್ಯಂತ ವೇಗವಾಗಿ ಶಾಶ್ವತ ಪರಿಹಾರ ಸಿಗುತ್ತದೆ ಎಂದರು.

ರಾಜಿಯಾಗಬಲ್ಲ ಕ್ರಿಮಿನಲ್ ಮೊಕದ್ದಮೆಗಳು, ಸಿವಿಲ್ ದಾವೆಗಳು, ಬ್ಯಾಂಕ್ ಸಾಲ ವಸೂಲಾತಿ ಪ್ರಕರಣಗಳು, ಮೋಟಾರು ವಾಹನ ಅಪಘಾತ ವಿಮೆ ಪ್ರಕರಣಗಳು, ಕೌಟುಂಬಿಕ ಕಲಹಗಳು ಹಾಗೂ ಭೂಸ್ವಾಧೀನ ಪರಿಹಾರ ಪ್ರಕರಣಗಳನ್ನು ಇಲ್ಲಿ ಬಗೆಹರಿಸಿ ಕೊಳ್ಳಬಹುದು. ಇಂದಿನ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಒಟ್ಟು 36,188 ಬಾಕಿ ಇರುವ ಪ್ರಕರಣಗಳ ಪೈಕಿ, 8,882 ಪ್ರಕರಣಗಳನ್ನು ಲೋಕ ಅದಾಲತ್‌ಗೆ ಉಲ್ಲೇಖಿಸಲಾಗಿದ್ದು, ಇದರಲ್ಲಿ 4,957 ಪ್ರಕರಣಗಳು ಸೌಹಾರ್ದಯುತ ರಾಜಿಗೆ ಸಂಪೂರ್ಣವಾಗಿ ಸಿದ್ಧಗೊಂಡಿವೆ ಎಂದು ಅವರು ಮಾಹಿತಿ ನೀಡಿದರು.

ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹೆಚ್.ಎ ಮೋಹನ್ ಅವರು ಮಾತನಾಡಿ, ಲೋಕ ಅದಾಲತ್‌ಗೆ ಯಾವುದೇ ನ್ಯಾಯಾಲಯದ ಶುಲ್ಕ ಇರುವುದಿಲ್ಲ. ಈಗಾಗಲೇ ಪಾವತಿಸಲಾದ ಕೋರ್ಟ್ ಫೀ ಇದ್ದಲ್ಲಿ, ಪ್ರಕರಣ ರಾಜಿಯಾದ ನಂತರ ಸಂಪೂರ್ಣ ಶುಲ್ಕವನ್ನು ಪಕ್ಷಕಾರರಿಗೆ ಮರುಪಾವತಿಸಲಾಗುತ್ತದೆ.

ಲೋಕ ಅದಾಲತ್ ನೀಡುವ ತೀರ್ಪು ಸಿವಿಲ್ ನ್ಯಾಯಾಲಯದ ತೀರ್ಪಿಗೆ ಸಮನಾಗಿರುತ್ತದೆ. ಇದರ ವಿರುದ್ಧ ಯಾವುದೇ ಉನ್ನತ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ, ಇದರಿಂದ ಪ್ರಕರಣಕ್ಕೆ ಅಲ್ಲಿಗೇ ಶಾಶ್ವತ ಮುಕ್ತಿ ಸಿಗುತ್ತದೆ ಎಂದು ಹೇಳಿದರು.

ಸಮಾಜದಲ್ಲಿ ಸೌಹಾರ್ದತೆ ಮೂಡಿಸಲು ಮತ್ತು ಸಾಮಾನ್ಯ ನ್ಯಾಯಾಲಯಗಳ ಮೇಲಿನ ಪ್ರಕರಣಗಳ ಹೊರೆಯನ್ನು ಗಣನೀಯವಾಗಿ ಕಡಿಮೆ ಮಾಡಲು ಲೋಕ ಅದಾಲತ್ ಅತ್ಯುತ್ತಮ ವೇದಿಕೆಯಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕಾಗಿದೆ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಮಾತನಾಡಿ, ಲೋಕ್ ಅದಾಲತ್‌ನಲ್ಲಿ ಯಾರದೇ ಸೋಲು–ಗೆಲುವಿರುವುದಿಲ್ಲ. ಇಬ್ಬರೂ ಒಟ್ಟಿಗೆ ಕುಳಿತು ಸಂಧಾನ ಮಾಡಿಕೊಳ್ಳುವುದರಿಂದ ಇಬ್ಬರಿಗೂ ಜಯ ಸಿಗುತ್ತದೆ. ಇದು ಸಮಾಜ ಮತ್ತು ಕುಟುಂಬಗಳಲ್ಲಿ ಸೌಹಾರ್ದತೆಯನ್ನು ಕಾಪಾಡಲು ನೆರವಾಗುತ್ತದೆ. ಇಲ್ಲಿ ಸಿವಿಲ್ ಪ್ರೊಸೀಜರ್ ಕೋಡ್ ಅಥವಾ ಸಾಕ್ಷ್ಯ ಕಾಯ್ದೆಯಂತಹ ಕಠಿಣ ಕಾನೂನು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕಾಗಿಲ್ಲ. ಪಕ್ಷಕಾರರು ಯಾವುದೇ ಭಯವಿಲ್ಲದೆ ನೇರವಾಗಿ ಸಂಧಾನಕಾರರೊಂದಿಗೆ ಮುಕ್ತವಾಗಿ ಮಾತನಾಡಬಹುದು ಎಂದು ಅವರು ವಿವರಿಸಿದರು.

ಈ ವೇಳೆ ಜಿಲ್ಲಾ ನ್ಯಾಯಾಲಯದ ಅಧಿಕಾರಿ– ಸಿಬ್ಬಂದಿ ಇದ್ದರು.

## ಅಹಂಕಾರ, ಪ್ರತಿಷ್ಠೆ – ಒಳಜಗಳಗಳಿಂದ ಹಿಂದೂ ಧರ್ಮ ವಿಭಜನೆ: ರಾಜೇಶ್ವರ ಶಿವಾಚಾರ್ಯ



**ಬೀದರ್, ಜು. 11:** 'ಅಹಂಕಾರ, ಪ್ರತಿಷ್ಠೆ ಹಾಗೂ ಒಳಜಗಳಗಳಿಂದ ಹಿಂದೂ ಧರ್ಮ ಮತ್ತು ಸಮಾಜ ವಿಭಜನೆಯಾಗುತ್ತಿದ್ದು, ಎಲ್ಲರನ್ನೂ ಒಗ್ಗೂಡಿಸುವ ಸನಾತನ ಸಂಸ್ಕೃತಿಯನ್ನು ಉಳಿಸಬೇಕಿದೆ' ಎಂದು ಜಿಲ್ಲಾ ಮಠಾಧೀಶರ ಒಕ್ಕೂಟದ ಅಧ್ಯಕ್ಷ ಮೆಹಕರ್–ತಡೋಳಾ ಸಂಸ್ಥಾನದ ರಾಜೇಶ್ವರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ಬೀದರ್ ಜಿಲ್ಲಾ ಘಟಕದ ವತಿಯಿಂದ' ಶಿವನಗರದ ರಾಮಕೃಷ್ಣ ವಿವೇಕಾನಂದ ಆಶ್ರಮದ ಬ್ರಹ್ಮಾನಂದ ಭವನದಲ್ಲಿ ಆಯೋಜಿಸಿದ್ದ ಸಂತರ ಚಿಂತನಗೋಷ್ಠಿ ಉದ್ಘಾಟಿಸಿ ಮಾತನಾಡಿದರು.

ಭಾಷಣ ಮತ್ತು ಪ್ರಚಾರಕ್ಕೆ ಸೀಮಿತವಾಗದೆ ಸಮಾಜದ ಸಮಸ್ಯೆಗಳ ಮೂಲಕ್ಕೆ ಹೋಗಿ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದರು.

ಭಾತಂಬ್ರಾದ ಶಿವಯೋಗೇಶ್ವರ ಸ್ವಾಮೀಜಿ ಮಾತನಾಡಿ, ಹಿಂದೂ ಸಮಾಜ ಸಂಘಟಿತವಾಗಬೇಕಾದ ಅನಿವಾರ್ಯತೆ ಎದುರಾಗಿದೆ. ಸಮಾಜದ ಆಂತರಿಕ ಭಿನ್ನಾಭಿಪ್ರಾಯಗಳನ್ನು ಬಿಟ್ಟು ಒಗ್ಗಟ್ಟಿನಿಂದ ಸವಾಲುಗಳನ್ನು ಎದುರಿಸಬೇಕು ಎಂದು ಹೇಳಿದರು.

ಮುಚಳಂಬದ ಪ್ರಣವಾನಂದ ಸ್ವಾಮೀಜಿ ಮಾತನಾಡಿ, ಜಾತಿ–ಉಪಜಾತಿಗಳ ಹೆಸರಿನಲ್ಲಿ ಸಮಾಜವನ್ನು ವಿಭಜಿಸುವ ಪ್ರವೃತ್ತಿ ಹಿಂದೂ ಸಮಾಜದ ದುರ್ಬಲತೆಗೆ ಕಾರಣವಾಗಿದೆ. ನಾವೆಲ್ಲರೂ ಹಿಂದೂ ಎಂಬ ವಿಶಾಲ ಮನೋಭಾವ ಬೆಳೆಸಿಕೊಂಡಾಗ ಸಮಸ್ಯೆಗಳಿಗೆ ಪರಿಹಾರ ಸಾಧ್ಯ ಎಂದು ಅಭಿಪ್ರಾಯಪಟ್ಟರು.

## ಚುನಾವಣಾ ಪ್ರಕ್ರಿಯೆ ಪಾರದರ್ಶಕತೆಗೆ ದೋಷಮುಕ್ತ ಮತದಾರರ ಪಟ್ಟಿ ಅಗತ್ಯ: ಬಳ್ಳಾರಿ ಪಾಲಿಕೆ ಆಯುಕ್ತ ಮಂಜುನಾಥ್



**ಬಳ್ಳಾರಿ,ಜು 11:** ಚುನಾವಣಾ ಪ್ರಕ್ರಿಯೆಯಲ್ಲಿ ಯಾವುದೇ ಲೋಪ ದೋಷಗಳಿಲ್ಲದ, ದೋಷಮುಕ್ತ ಮತದಾರರ ಪಟ್ಟಿಯನ್ನು ಸಿದ್ಧಪಡಿ ಸುವುದು ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಪಾಲಿಕೆ ಆಯುಕ್ತ ಮಂಜುನಾಥ್ ಹೇಳಿದ್ದಾರೆ.

ಶುಕ್ರವಾರ 'ಎಸ್‌ಐಆರ್' ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಮತ್ತು ಮುಂಬರುವ ಚುನಾವಣೆಗಳಲ್ಲಿ ಯುವಕರ ಪಾತ್ರವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಚುನಾವಣಾ ಆಯೋಗವು ಕಾಲೇಜು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು 'ವಿಶೇಷ ಸಮಗ್ರ ಪರಿಷ್ಕ ರಣೆ' ಅಭಿಯಾನವನ್ನು ಹಮ್ಮಿಕೊಳ್ಳ ಲಾಗಿದ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅರ್ಹತೆ ಪಡೆಯಲಿರುವ ಹೊಸ ಯುವ ಮತದಾರರನ್ನು ಗುರುತಿಸಿ ಪಟ್ಟಿಗೆ ಸೇರಿಸುವುದು. ಹಿಂದೆ ನಡೆದಿರುವಂತೆ ಒಬ್ಬರೇ ವ್ಯಕ್ತಿ ಹಲವು ಬಾರಿ ಮತದಾನ ಮಾಡುವುದು ಅಥವಾ ಮೃತಪಟ್ಟವರ ಹೆಸರಿನಲ್ಲಿ ಮತದಾನವಾಗುವುದನ್ನು ತಡೆಯಲು ಹಳೆಯ ಮತದಾರರ ವಿವರಗಳನ್ನು ಕಟ್ಟುನಿಟ್ಟಾಗಿ ಮರುಪರಿಶೀಲಿಸಲಾಗುತ್ತದೆ ಎಂದರು.

ಸದ್ಯದಲ್ಲೇ ಮತದಾನದ ವಯಸ್ಸನ್ನು ತಲುಪಲಿರುವ ಕಾಲೇಜು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಪ್ರತಿ ಕಾಲೇಜಿನಲ್ಲೂ 'ಮತದಾರರ ಸಾಕ್ಷರತಾ ಕ್ಲಬ್' ಅನ್ನು ಸ್ಥಾಪಿಸಲಾಗಿದೆ. ರಾಜಕೀಯ ವಿದ್ಯಮಾನಗಳು ಮತ್ತು ಚುನಾವಣಾ ಪ್ರಕ್ರಿಯೆಗಳಿಂದ ಯುವಕರು ದೂರ ಉಳಿಯಬಾರದು, ಬದಲಿಗೆ ಪ್ರಜಾಪ್ರಭುತ್ವದ ಸಕ್ರಿಯ ಪಾಲುದಾರರಾಗಬೇಕು ಎಂಬುದು ಈ ಕ್ಲಬ್‌ನ ಉದ್ದೇಶವಾಗಿದೆ. ವಿದ್ಯಾರ್ಥಿಗಳು ಕೇವಲ ತಾವಷ್ಟೇ ಜಾಗೃತರಾಗುವುದಲ್ಲದೆ, ತಮ್ಮ ಕುಟುಂಬದ ಯಾವುದೇ ಅರ್ಹ ಸದಸ್ಯರ ಹೆಸರು ಸೂಕ್ತ ದಾಖಲೆಗಳ ಕೊರತೆಯಿಂದಾಗಿ ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವ ಜವಾಬ್ದಾರಿಯನ್ನೂ ಹೊಂದಬೇಕು. ಒಂದು ವೇಳೆ ಬಿಎಲ್‌ಓ ನಿಮ್ಮ ಮನೆಗೆ ಭೇಟಿ ನೀಡದಿದ್ದರೆ, ಚುನಾವಣಾ ಆಯೋಗದ ಅಧಿಕೃತ ಮೊಬೈಲ್ ಆಪ್ ಆದ ಇಸಿಐ ನೆಟ್‌ಅನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡು, ಆನ್‌ಲೈನ್ ಮೂಲಕವೇ ಈ ಫಾರ್ಮ್ ಅನ್ನು ಸುಲಭವಾಗಿ ಸಲ್ಲಿಸಬಹುದು ಎಂದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ ದೇಶದ ಪ್ರತಿಯೊಬ್ಬ ನಾಗರಿಕನಿಗೂ ಮತದಾನದ ಹಕ್ಕು ಅತ್ಯಂತ ಪವಿತ್ರವಾದದ್ದು. ಈ ನಿಟ್ಟಿನಲ್ಲಿ ಅರ್ಹ ಮತದಾರರು ತಮ್ಮ ಹೆಸರನ್ನು ಮತದಾರರ ಪಟ್ಟಿಗೆ ಸೇರಿಸಲು ಜುಲೈ 29 ರಿಂದ ಫಾರ್ಮ್ ನಂಬರ್ 6 ವಿತರಣೆ ಆರಂಭವಾಗಲಿದ್ದು, ಸಾರ್ವಜನಿ ಕರು ಇದನ್ನು ಪಡೆದು ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ನೋಂದಾಯಿಸಿ ಕೊಳ್ಳಬಹುದು ಎಂದರು.

## ಕುಣಿಗಲ್ ಸರ್ಕಾರಿ ಶಾಲೆಯಲ್ಲಿ ಆರ್ಟ್ ಆಫ್ ಗಿವಿಂಗ್‌ನಿಂದ ಅಕ್ಷರಾಭ್ಯಾಸ ಕಾರ್ಯಕ್ರಮ



**ಕುಣಿಗಲ್, ಜು.11** ತಾಲೂಕಿನ ತರೇದಕುಪ್ಪೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆರ್ಟ್ ಆಫ್ ಗಿವಿಂಗ್ ವತಿಯಿಂದ ಸಾಮೂಹಿಕ ಅಕ್ಷರಾಭ್ಯಾಸ ಕಾರ್ಯಕ್ರಮ ಹಮ್ಮಿ ಕೊಳ್ಳಲಾಗಿತ್ತು.

ಸರ್ಕಾರಿ ಶಾಲೆಯಲ್ಲಿ ಮೊದಲ ಬಾರಿಗೆ ನಡೆದ ಈ ವಿನೂತನ ಕಾರ್ಯಕ್ರಮದಲ್ಲಿ 60 ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿ ಯಶಸ್ವಿ ಗೊಳಿಸಿದರು.

ಸಾಮಾನ್ಯವಾಗಿ ಅಕ್ಷರಾಭ್ಯಾಸವನ್ನು ಪೋಷಕರು ದೂರದೂರದ ಪ್ರಸಿದ್ಧ ದೇವಾಲಯಗಳಲ್ಲಿ ಮಕ್ಕಳನ್ನು ಕರೆದುಕೊಂಡು ಹೋಗಿ ಮಾಡಿಸುತ್ತಾರೆ. ನೂರಾರು ವರ್ಷಗಳಿಂದ ಈ ಸಂಪ್ರದಾಯ ನಡೆದುಕೊಂಡು ಬಂದಿದೆ. ಆದರೆ ತಮ್ಮ ಊರಿನ ಶಾಲೆಯಲ್ಲಿ ಅದೂ ಸಾಮೂಹಿಕವಾಗಿ ನಡೆದ ಅಕ್ಷರಾಭ್ಯಾಸ ಕಂಡು ಪೋಷಕರು ಅತೀವ ಸಂತಸ ವ್ಯಕ್ತಪಡಿಸಿದರು.


ದೂರದೂರದ ದೇವಾಲಯಗಳಿಗೆ ಹೋಗಿ ಅಕ್ಷರಾಭ್ಯಾಸ ಮಾಡಿಸುವುದು ಎಲ್ಲಾ ಪೋಷಕರಿಗೆ ಸಾಧ್ಯವಾಗುವುದಿಲ್ಲ. ಅದಕ್ಕೆಲ್ಲ ದುಡಿಮೆಯ ಒಂದಷ್ಟು ಹಣವನ್ನು ಇಡಬೇಕು. ಆದರೆ ಯಾವುದೇ ಖರ್ಚಿಲ್ಲದೆ ನಡೆದ ಈ ಸಾಮೂಹಿಕ ಅಕ್ಷರಾಭ್ಯಾಸ ಪೋಷಕರಲ್ಲಿ ಖುಷಿ ಮೂಡಿಸಿದ್ದಲ್ಲದೆ ಸಾರ್ಥಕತೆಯ ಭಾವ ತುಂಬಿತು.

**ಸಂಭ್ರಮದಿಂದ ಬಂದ ಪೋಷಕರು**

ಅಕ್ಷರಾಭ್ಯಾಸಕ್ಕೆ ಕಾರ್ಯಕ್ರಮಕ್ಕೆ ಪೋಷಕರು ತಮ್ಮ ಮಕ್ಕಳೊಂದಿಗೆ ಸಂಭ್ರಮದಿಂದ ಆಗಮಿಸಿ ಕಳೆ ಹೆಚ್ಚಿಸಿದರು. ಸಾಂಪ್ರದಾಯಿಕ ಉಡುಗೆ ತೊಟ್ಟ ತಂದೆ– ತಾಯಿಗಳು ಮಕ್ಕಳ ಖುಷಿಯಲ್ಲಿ ತಮ್ಮ ಖುಷಿ ಕಂಡು ಕೊಂಡರು. ಶಾಲಾ ಆವರಣವನ್ನು ಅಕ್ಷರಾಭ್ಯಾಸಕ್ಕೆ ಅಲಂಕಾರ ಮಾಡಲಾಗಿತ್ತು. ಎಂದೂ ಇರುವ ವಾತಾವರಣಕ್ಕೆ ಭಿನ್ನವಾಗಿದ್ದ ಶಾಲೆಯನ್ನು ಕಂಡು ಮಕ್ಕಳು ಪುಳಕಗೊಂಡರು. ಅರ್ಚಕರಾದ ಸರ್ಪಭೂಷಣ್ ಅವರು ಶಾಸ್ತ್ರೋಕ್ತವಾಗಿ ವಿನಾಯಕನ ಪೂಜೆ, ಸರಸ್ವತಿ ಪೂಜೆ ಮಾಡಿ ಅಕ್ಷರಾಭ್ಯಾಸದ ವಿಧಿ– ವಿಧಾನಗಳನ್ನು ಪೂರೈಸಿದರು.

**ಮಕ್ಕಳಿಗೂ ಪರಿಚಯವಾದ ಸಂಪ್ರದಾಯ:** ಅಕ್ಷರಾಭ್ಯಾಸದ ಕುರಿತು ಕೆಲವು ಪೋಷಕರಿಗೆ ತಿಳಿದಿರುತ್ತದೆ. ಕೆಲವರಿಗೆ ಗೊತ್ತಿರುವುದಿಲ್ಲ. ಆದರೆ ಶನಿವಾರ ನಡೆದ ಅಕ್ಷರಾಭ್ಯಾಸ ಎಲ್ಲರಿಗೂ ಈ ಸಂಪ್ರದಾಯದ ಬಗ್ಗೆ ತಿಳಿಯುವಂತೆ ಮಾಡಿತು. ತಮ್ಮ ಜೀವನದಲ್ಲಿ ಅವಶ್ಯಕವಾಗಿ ಮಾಡಬೇಕಾದ ಶಾಸ್ತ್ರವೊಂದರ ಬಗ್ಗೆ ಅವರೂ ಅರಿತು ಕೊಂಡರು.

## ತುಂಗಭದ್ರಾ ಜಲಾಶಯದ ಒಳಹರಿವು ಹೆಚ್ಚಳ: ರೈತರಲ್ಲಿ ಮೂಡಿದ ಸಂತಸ



**ರಾಯಚೂರು, ಜು.11:** ರಾಯಚೂರು, ಕೊಪ್ಪಳ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಎಲ್ಲೂ ಮಳೆಯಗದೇ ಬರಗಾಲ ತಾಂಡವ ವಾಡುತ್ತಿದೆ. ಆದರೆ ಈ ನಾಲ್ಕೂ ಜಿಲ್ಲೆಗಳ ಜೀವನಾಡಿ ಆಗಿರುವ ತುಂಗಭದ್ರಾ ಜಲಾಶಯನ ಪ್ರದೇಶ ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ವ್ಯಾಪಕ ಮಳೆ ಆಗುತ್ತಿರುವುದರಿಂದ ಜಲಾಶಯದ ಒಳ ಹರಿವಿನ ಪ್ರಮಾಣದಲ್ಲಿ ಏರಿಕೆ ಆಗುತ್ತಿರುವುದು ರೈತಾಪಿ ಸಮುದಾಯದಲ್ಲಿ ಸಂತಸ ಮೂಡುವಂತೆ ಮಾಡಿದೆ.

ಇತ್ತೀಚೆಗಷ್ಟೇ ತುಂಗಭದ್ರಾ ಜಲಾಶಯದ 36 ಗೇಟ್‌ಗಳನ್ನು ಹೊಸದಗಿ ಅಳವಡಿಸಿದ್ದರಿಂದ ಇನ್ಮುಂದೆ ನೀರು ಸೋರಿಕೆಯಾಗುವದಿಲ್ಲ ಎಂದು ರೈತಾಪಿ ವರ್ಗದವರು ಸಂತಸ ಪಟ್ಟಿದ್ದರು. ಆದರೆ ಜೂನ್ ಆರಂಭದಿಂದಲೂ ಮಳೆಯಗದೇ ಜಲಶಯದ ಒಳಹರಿವಿಲ್ಲದೇ ಕಂಗಾಲಾಗುವಂತೆ ಮಾಡಿತ್ತು. ಇದೀಗ ಜಲಾನಯನ ಪ್ರದೇಶದಲ್ಲಿ ಮಳೆಯಾಗುತ್ತಿರುವದರಿಂದ ತುಂಗಭದ್ರಾ ಜಲಾಶಯಕ್ಕೆ 44,782 ಕ್ಯೂಸೆಕ್ ನೀರು ಹರಿದು ಬರುತ್ತಿದೆ.

ಜಲಾಶಯದ ಗರಿಷ್ಠ ನೀರಿನ ಮಟ್ಟ 1,633.00 ಅಡಿ ಇದ್ದು. ನಿನ್ನೆ ಜಲಾಶಯದ ನೀರಿನ ಮಟ್ಟ 1,596.66 ಅಡಿ ತಲುಪಿದೆ. ಜಲಾಶಯದ ನೀರಿನ ಸಂಗ್ರಹ ಮಟ್ಟ 17.511 ಟಿಎಂಸಿ ಗೆ ಏರಿಕೆ ಆಗಿದೆ. ಜಲಾಶಯದ ಕಾಲುವೆಗಳ ಮೂಲಕ ಮಾತ್ರ 180 ಕ್ಯೂಸೆಕ್ ನೀರು ಹೊರ ಬಿಡಲಾಗುತ್ತಿದೆ. ಕಳೆದ ಮೂರು ದಿನದ ಅವಧಿಯಲ್ಲಿ ಜಲಾಶಯ ನೀರಿನ ಮಟ್ಟದಲ್ಲಿ 4 ಅಡಿ ನೀರು ಹೆಚ್ಚಳವಾಗಿದೆ.

ಕಳೆದ ಎರಡು ಮೂರು ದಿನಗಳಿಂದ ಜಲಾಶಯದ ಒಳ ಹರಿವಿನ ಪ್ರಮಾಣ ದಿನದಿಂದ ದಿನಕ್ಕೆ ಏರಿಕೆ ಆಗುತ್ತಿದ್ದು, ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆ ಆಗುತ್ತಿರುವುದರಿಂದ ಒಳ ಹರಿವಿನ ಪ್ರಮಾಣ ಇನ್ನು ಹೆಚ್ಚಳವಾಗಲಿದೆ ಎಂದು ತುಂಗಭದ್ರಾ ಮಂಡಳಿ ಅಧಿಕಾರಿಗಳು ತಿಳಿಸಿದ್ದಾರೆ.

ಸಂಪೂರ್ಣ ಬತ್ತಿಹೋಗಿದ್ದ ತುಂಗಭದ್ರಾ ಜಲಾಶಯಕ್ಕೆ ಹೊಸ ನೀರು ಹರಿದು ಬರುತ್ತಿರುವುದರಿಂದ ಹೊಸ ಗೇಟುಗಳನ್ನು ಅಳವಡಿಸಿರುವ ಜಲಾಶಯಕ್ಕೆ ಹೊಸ ಕಳೆ ಬಂದಂತಾಗಿದೆ.

# ಹಾರ್ಮುಜ್ ಜಲಸಂಧಿ ಮುಕ್ತ, ಯುರೇನಿಯಂ ಹಸ್ತಾಂತರ ಕಡ್ಡಾಯ

## ಇರಾನ್ ಮೇಲೆ ಅಮೆರಿಕ ಒತ್ತಡ: ಪ್ರಮುಖ ಜಲಮಾರ್ಗದ ಮೇಲಿನ ನಿಯಂತ್ರಣ ಬಿಟ್ಟುಕೊಡಲು ಒಪ್ಪದ ಟೆಹರಾನ್

**ವಾಷಿಂಗ್ಟನ್, ಜು.11:** ಇರಾನ್ – ಅಮೆರಿಕ ಸಂಘರ್ಷ ಮುಂದುವರೆದಿರುವಂತೆಯೇ ಹಾರ್ಮುಜ್ ಜಲಸಂಧಿ ಮುಕ್ತವಾಗಿರಬೇಕು, ಅಣು ಒಪ್ಪಂದಕ್ಕೆ ಯುರೇನಿಯಂ ಹಸ್ತಾಂತರ ಕಡ್ಡಾಯ ಎಂದು ಇರಾನ್‌ಗೆ ಅಮೆರಿಕ ಒತ್ತಾಯಿಸಿದೆ.

ಹೋರ್ಮುಜ್ ಜಲಸಂಧಿ ಮುಕ್ತವಾಗಿದೆ ಹಾಗೂ ಅಲ್ಲಿಂದ ಸಾಗುವ ಹಡಗುಗಳ ಮೇಲೆ ಇನ್ನು ಮುಂದೆ ಯಾವುದೇ ದಾಳಿ ನಡೆಯುವುದಿಲ್ಲ ಎಂದು ಇರಾನ್ ಸಾರ್ವಜನಿಕವಾಗಿ ಘೋಷಿಸಬೇಕೆಂದು ಅಮೆರಿಕದ ಹಿರಿಯ ಅಧಿಕಾರಿಗಳು ಒತ್ತಾಯಿಸಿದ್ದರು. ಆದರೆ, ಟೆಹರಾನ್ ಇದುವರೆಗೂ ಆ ನಿಟ್ಟಿನಲ್ಲಿ ಯಾವುದೇ ಘೋಷಣೆ ಮಾಡಿಲ್ಲ. ಬದಲಾಗಿ, ಹೋರ್ಮುಜ್ ಜಲಸಂಧಿ ತನ್ನ ನಿಯಂತ್ರಣದಲ್ಲೇ ಇರಬೇಕು ಮತ್ತು ಅಲ್ಲಿಂದ ಸಾಗುವ ಹಡಗುಗಳಿಂದ ಶುಲ್ಕ ವಸೂಲಿ ಮಾಡಲು ಅವಕಾಶ ನೀಡಬೇಕು ಎಂದು ಪಟ್ಟು ಹಿಡಿದಿದೆ. ಇದು ಜಲಸಂಧಿಯನ್ನು ಅಂತಾರಾಷ್ಟ್ರೀಯ ಜಲಮಾರ್ಗವೆಂದು ಪರಿಗಣಿಸುತ್ತಿರುವ ದಶಕಗಳ ಸಂಪ್ರದಾಯಕ್ಕೆ ವಿರುದ್ಧವಾಗಿದೆ.

ಈ ವಾರದ ಆರಂಭದಲ್ಲಿ ಹಾರ್ಮುಜ್ ಜಲಸಂಧಿಯಲ್ಲಿ ಇರಾನ್ ಮೂರು ಹಡಗುಗಳ ಮೇಲೆ ದಾಳಿ ನಡೆಸಿದ ನಂತರ ಅಮೆರಿಕ ಹಲವು ದಿನಗಳ ಕಾಲ ವೈಮಾನಿಕ ದಾಳಿ ನಡೆಸಿತ್ತು. ಇದಕ್ಕೆ ಪ್ರತಿಯಾಗಿ ಇರಾನ್ ಮಧ್ಯಪ್ರಾಚ್ಯದ ಹಲವು ರಾಷ್ಟ್ರಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿತ್ತು.

ಯುದ್ಧದ ಅವಧಿಯಲ್ಲೂ ಹಾಗೂ ಅಸ್ಥಿರ ಕದನ ವಿರಾಮದ ನಂತರವೂ ಟ್ರಂಪ್ ಅರೇಬಿಕ್ ಭಾಷೆಯಲ್ಲಿ ದೇವರ ಹೆಸರನ್ನು ಉಲ್ಲೇಖಿಸುತ್ತಾ, ಇರಾನ್ ನಾಗರಿಕತೆಯನ್ನೇ ನಾಶಮಾಡುವುದಾಗಿ ಹಲವು ಬಾರಿ ಬೆದರಿಕೆ ಹಾಕಿದ್ದರು. ಈ ಕುರಿತು ಅಮೆರಿಕದ ಕೌನ್ಸಿಲ್ ಆನ್ ಅಮೆರಿಕನ್–ಇಸ್ಲಾಮಿಕ್ ರಿಲೇಷನ್ಸ್ (ಸಿಎಐಆರ್) ಸಂಸ್ಥೆ, ಟ್ರಂಪ್ ಅವರ ಇಸ್ಲಾಂ ಕುರಿತ ವ್ಯಂಗ್ಯದ ಹೇಳಿಕೆಗಳನ್ನು ಹಿಂದೆ ಟೀಕಿಸಿತ್ತು.

ಅಣು ಒಪ್ಪಂದಕ್ಕೆ ಯುರೇನಿಯಂ ಹಸ್ತಾಂತರ ಕಡ್ಡಾಯ: ಅಮೆರಿಕದ ಅಧಿಕಾರಿಗಳ ಪ್ರಕಾರ,



ಯಾವುದೇ ಅಣು ಒಪ್ಪಂದದ ಭಾಗವಾಗಿ ಇರಾನ್ ತನ್ನ ಬಳಿ ಇರುವ ಹೆಚ್ಚಿನ ಪ್ರಮಾಣದಲ್ಲಿ ಸಂಸ್ಕರಿಸಿದ ಯುರೇನಿಯಂ ಸಂಗ್ರಹವನ್ನು ಹಸ್ತಾಂತರಿಸಬೇಕು. ಆದರೆ ಇದನ್ನು ಇರಾನ್ ಹಲವು ಬಾರಿ ತಿರಸ್ಕರಿಸಿದೆ. ಒಪ್ಪಂದದ ಮೂಲಕ ಯುರೇನಿಯಂ ಹಸ್ತಾಂತರ ಸಾಧ್ಯವಾಗದಿದ್ದರೆ, ಅದು ಶಾಶ್ವತವಾಗಿ ಭೂಗರ್ಭದಲ್ಲೇ ಉಳಿಯುವಂತೆ ಮಾಡುವ ಸೇನಾ ಆಯ್ಕೆಗಳು ಅಮೆರಿಕದ ಬಳಿ ಇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಶಸ್ತ್ರಾಸ್ತ್ರ ತಯಾರಿಕೆಗೆ ಸಮೀಪದ ಮಟ್ಟಿಗೆ ಸಂಸ್ಕರಿಸಲ್ಪಟ್ಟಿರುವ ಈ ಯುರೇನಿಯಂ 2025ರಲ್ಲಿ ಅಮೆರಿಕ ಬಾಂಬ್ ದಾಳಿ ನಡೆಸಿದ್ದ ಅಣು ಕೇಂದ್ರಗಳಲ್ಲೇ ಇದೆ ಎಂದು ನಂಬಲಾಗಿದೆ. ಇರಾನ್ ತನ್ನ ಅಣು ಕಾರ್ಯಕ್ರಮ ಶಾಂತಿಯುತ ಉದ್ದೇಶ ಹೊಂದಿದೆ ಎಂದು ನಿರಂತರವಾಗಿ ಹೇಳಿಕೊಂಡಿದ್ದರೂ, ಅಂತರರಾಷ್ಟ್ರೀಯ ಅಣುಶಕ್ತಿ ಸಂಸ್ಥೆ ಪ್ರಕಾರ, ಅಣ್ವಸ್ತ್ರ ಕಾರ್ಯಕ್ರಮವಿಲ್ಲದಿದ್ದರೂ ಇಷ್ಟೊಂದು ಹೆಚ್ಚಿನ ಮಟ್ಟಕ್ಕೆ ಯುರೇನಿಯಂ ಸಂಸ್ಕರಿಸುತ್ತಿರುವ ಏಕೈಕ ದೇಶ ಇರಾನ್ ಆಗಿದೆ.

ಹಾರ್ಮುಜ್ ಜಲಸಂಧಿಯಲ್ಲಿನ ಹಡಗುಗಳ ಮೇಲಿನ ದಾಳಿಯನ್ನು ಮೊದಲು ನಿಲ್ಲಿಸದೆ ಇರಾನ್ ಜೊತೆ ಯಾವುದೇ ಅಣು ಒಪ್ಪಂದಕ್ಕೆ ಅಮೆರಿಕ ಮುಂದಾಗುವುದಿಲ್ಲ ಎಂದೂ ಅಮೆರಿಕ ಅಧಿಕಾರಿಗಳು ಪುನರುಚ್ಚರಿಸಿದ್ದಾರೆ.

ಸಂಧಾನ ವಿಫಲವಾದರೆ ಮತ್ತಷ್ಟು ಕ್ರಮ

ಅಮೆರಿಕದ ಅಧಿಕಾರಿಗಳ ಪ್ರಕಾರ, ಟ್ರಂಪ್ ಇರಾನ್ ಜತೆ ಒಪ್ಪಂದ ಸಾಧಿಸಲು ಅಮೆರಿಕದ ಮಾತುಕತೆ ತಂಡಕ್ಕೆ ಸೀಮಿತ ಸಮಯ ನೀಡಿದ್ದಾರೆ. ಆದರೆ ಮಾತುಕತೆ ವಿಫಲವಾದರೆ ಅಧ್ಯಕ್ಷರ ಬಳಿ ಹಲವು ಪರ್ಯಾಯ ಕ್ರಮಗಳಿವೆ ಎಂದು ಸ್ಪಷ್ಟಪಡಿಸಿದ್ದಾರೆ. ಇದರ ಮಧ್ಯೆ ವಿಶ್ವಸಂಸ್ಥೆಯಲ್ಲಿರುವ ಇರಾನ್ ರಾಯಭಾರಿ, ಹಾರ್ಮುಜ್ ಜಲಸಂಧಿಯನ್ನು ತೆರೆಯುವುದು ಅಥವಾ ಅಲ್ಲಿ ಗಣಿಗಾರಿಕೆ ವಿರೋಧಿ ಕಾರ್ಯಾಚರಣೆ ನಡೆಸುವುದು ಸೇರಿ ಎಲ್ಲ ನಿರ್ಧಾರಗಳು ಸಂಪೂರ್ಣವಾಗಿ ಇರಾನ್ ವ್ಯಾಪ್ತಿಗೆ ಸೇರಿವೆ ಎಂದು ಹೇಳಿದ್ದಾರೆ. ಇರಾನ್ ಪ್ರಕಾರ, ಹಾರ್ಮುಜ್ ಜಲಸಂಧಿ ತನ್ನ ಏಕೈಕ ನಿಯಂತ್ರಣದಲ್ಲಿರಬೇಕು ಹಾಗೂ ಅಲ್ಲಿಂದ ಸಾಗುವ ಹಡಗುಗಳು ಟೆಹರಾನ್‌ಗೆ ಶುಲ್ಕ ಪಾವತಿಸಬೇಕು. ಯುದ್ಧ ಆರಂಭವಾಗುವ ಮೊದಲು ವಿಶ್ವದ ಒಟ್ಟು ತೈಲ ಹಾಗೂ ನೈಸರ್ಗಿಕ ಅನಿಲ ವ್ಯಾಪಾರದ ಸುಮಾರು ಐದನೇ ಒಂದು ಭಾಗ ಇದೇ ಜಲಸಂಧಿಯ ಮೂಲಕ ಸಾಗುತ್ತಿತ್ತು.

ಯುದ್ಧದ ವೇಳೆ ಈ ಜಲಸಂಧಿಯ ಮೇಲಿನ ಇರಾನ್‌ನ ನಿಯಂತ್ರಣ ಜಾಗತಿಕ ಇಂಧನ ಬಿಕ್ಕಟ್ಟಿಗೆ ಕಾರಣವಾಗಿತ್ತು. ಆದಾಗ್ಯೂ, ಯುದ್ಧದ ವೇಳೆಯ ಬ್ಯಾರೆಲ್‌ಗೆ 120 ಡಾಲರ್ ತಲುಪಿದ್ದ ತೈಲದ ಬೆಲೆ ಬಳಿಕ ಗಣನೀಯವಾಗಿ ಇಳಿಕೆಯಾಗಿದೆ.

## ನನ್ನನ್ನು ಹತ್ಯೆ ಮಾಡಿದರೆ ಇರಾನ್ ಸರ್ವನಾಶ: ಟ್ರಂಪ್

**ವಾಷಿಂಗ್ಟನ್, ಜು.11:** ತಮ್ಮನ್ನು ಹತ್ಯೆ ಮಾಡಲು ಯತ್ನಿಸಿದರೆ, ಇರಾನ್ ವಿರುದ್ಧ ಭಾರಿ ಪ್ರಮಾಣದ ಮಿಲಿಟರಿ ದಾಳಿ ನಡೆಸಲು ಅಮೆರಿಕ ಈಗಾಗಲೇ ಪೂರ್ವ–ಅನುಮೋದನೆ ನೀಡಿದ್ದು, ಇರಾನ್ ಕಡೆಗೆ 1,000 ಕ್ಷಿಪಣಿಗಳನ್ನು ಲೋಡ್ ಮಾಡಿ ಗುರಿ ಇಡಲಾಗಿದೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.



ತಮ್ಮ ಸಾಮಾಜಿಕ ಜಾಲತಾಣದಲ್ಲಿ ಈ ಬಗ್ಗೆ ಶನಿವಾರ ಮಾಹಿತಿ ಹಂಚಿಕೊಂಡಿರುವ ಅವರು, ತಮ್ಮ ವಿರುದ್ಧ ದೀರ್ಘಕಾಲದಿಂದ ಇರುವ ಬೆದರಿಕೆಯ ಮೇಲೆ ಇರಾನ್ ಕಾರ್ಯನಿರ್ವಹಿಸಿದರೆ, ಅದರ ವಿರುದ್ಧ ದಾಳಿ ನಡೆಸಲು ಈಗಾಗಲೇ ಆದೇಶ ಹೊರಡಿಸಿದ್ದು, ಆರಂಭಿಕ ದಾಳಿಯ ನಂತರ ಇನ್ನೂ ಸಾವಿರಾರು ಕ್ಷಿಪಣಿಗಳು ತಕ್ಷಣವೇ ದಾಳಿ ನಡೆಸಲಿವೆ. ಈಗಾಗಲೇ ಅಗತ್ಯ ಸೂಚನೆಗಳನ್ನು ಪಡೆದುಕೊಂಡಿದ್ದು, ಇರಾನ್‌ನ ಎಲ್ಲಾ ಪ್ರದೇಶಗಳನ್ನು ಸಂಪೂರ್ಣವಾಗಿ ನಾಶಪಡಿಸಲು ಯುಎಸ್ ಮಿಲಿಟರಿ ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಈ ಹೇಳಿಕೆಗಳು ಪತ್ರಿಕೆಯೊಂದಕ್ಕೆ ನೀಡಿದ ಸಂದರ್ಶನ ಮಾತುಗಳನ್ನು ಪ್ರತಿಧ್ವನಿಸಿದ್ದು, ತಮ್ಮನ್ನು ಹತ್ಯೆ ಮಾಡಿದರೆ ಹಿಂದೆಂದೂ ಕಾಣದ ರೀತಿಯಲ್ಲಿ ಮಿಲಿಟರಿ ಪ್ರತ್ಯುತ್ತರ ನೀಡಲು ನಿರಂತರ ಸೂಚನೆಗಳನ್ನು ನೀಡಿರುವುದಾಗಿ ಅವರು ಸಂದರ್ಶನದಲ್ಲಿ ಹೇಳಿದ್ದರು.

ತಮ್ಮನ್ನು ಗುರಿಯಾಗಿಸಿಕೊಂಡು ಇರಾನ್ ನಡೆಸಲು ಉದ್ದೇಶಿಸಿದೆ ಎನ್ನಲಾದ ಹೊಸ ಸಂಚಿನ ಬಗ್ಗೆ ಇಸ್ರೇಲ್ ಹೊಸ ಮಾಹಿತಿಯನ್ನು ಬಹಿರಂಗಪಡಿಸಿದೆ ಎಂಬ ವರದಿಗಳನ್ನು ತಳ್ಳಿಹಾಕಿದ ಟ್ರಂಪ್, ಯಾವುದೇ ಹೊಸ ಇಂಟೆಲಿಜೆನ್ಸ್ ಮಾಹಿತಿ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಈ ವಾರದ ಆರಂಭದಲ್ಲಿಯೂ ಟ್ರಂಪ್ ತಮ್ಮನ್ನು ಇರಾನ್‌ನ ನಂಬರ್ ಒನ್ ಟಾರ್ಗೆಟ್ ಎಂದು ಕರೆದುಕೊಂಡಿದ್ದರು. ಹಾಗೆಯೇ ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯಲು ಬಿಡಬಾರದು ಎಂದು ಪುನರುಚ್ಚರಿಸಿದ್ದರು. ಭವಿಷ್ಯದಲ್ಲಿ ಇರಾನ್ ಜೊತೆಗಿನ ಯಾವುದೇ ಸಂಘರ್ಷವು ದೀರ್ಘಕಾಲದ ಯುದ್ಧವಾಗಿ ಬದಲಾಗುವುದಿಲ್ಲ ಎಂದು ಅವರು ನಿರೀಕ್ಷಿಸುವುದಾಗಿ ಹೇಳಿದ್ದರು.

2020 ರಲ್ಲಿ ಟ್ರಂಪ್ ಆದೇಶ ದಂತೆ ಬಾಗ್ದಾದ್ ಬಳಿ ನಡೆದ ಯುಎಸ್ ಡ್ರೋನ್ ದಾಳಿಯಲ್ಲಿ ಇರಾನ್ನ ಉನ್ನತ ಮಿಲಿಟರಿ ಕಮಾಂಡರ್ ಖಾಸಿಮ್ ಸುಲೇಮಾನಿ ಕೊಲ್ಲಲ್ಪಟ್ಟಿದ್ದಕ್ಕೆ ಇರಾನ್ ಪದೇ ಪದೇ ಸೇಡು ತೀರಿಸಿಕೊಳ್ಳುವುದಾಗಿ ಶಪಥ ಮಾಡಿದೆ. ಅಂದಿನಿಂದ ಟ್ರಂಪ್ ಅವರನ್ನು ಗುರಿಯಾಗಿಸಿಕೊಂಡು ಇರಾನ್ ಜೊತೆ ಸಂಪರ್ಕ ಹೊಂದಿರುವ ಹಲವು ಹತ್ಯೆಯ ಸಂಚುಗಳನ್ನು ಯುಎಸ್ ಅಧಿಕಾರಿಗಳು ಬಹಿರಂಗಪಡಿಸಿದ್ದಾರೆ. ಆದರೆ ಇರಾನ್ ಈ ಆರೋಪಗಳಲ್ಲಿ ತನ್ನ ಪಾತ್ರವನ್ನು ನಿರಾಕರಿಸಿದೆ.

## ಸುದ್ದಿಗೋಷ್ಠಿ ನಡೆಸಲ್ಲ ಏಕೆ: ಪ್ರಧಾನಿಗೆ ನ್ಯೂಜಿಲೆಂಡ್‌ನಲ್ಲಿ ಪ್ರಶ್ನೆ

**ನವದೆಹಲಿ, ಜು.11:** ಪ್ರಧಾನಿ ನರೇಂದ್ರ ಮೋದಿ ಅವರು ಪತ್ರಿಕಾಗೋಷ್ಠಿಗಳನ್ನು ಏಕೆ ನಡೆಸುವುದಿಲ್ಲ ಎಂದು ನ್ಯೂಜಿಲೆಂಡ್‌ನ ಪತ್ರಕರ್ತರೊಬ್ಬರು ಕೇಳಿದ ಪ್ರಶ್ನೆಗೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಹಿರಿಯ ಅಧಿಕಾರಿ ರುದ್ರೇಂದ್ರ ಟಂಡನ್ ಪ್ರತಿಕ್ರಿಯಿಸಿದ್ದು, ಪ್ರಧಾನಿಯವರ ಸಂವಹನ ಶೈಲಿಯನ್ನು ಬಲವಾಗಿ ಸಮರ್ಥಿಸಿಕೊಂಡಿದ್ದಾರೆ.



ಪ್ರಧಾನಿ ಮೋದಿ ಅವರು ತಮ್ಮ ಮೂರು ರಾಷ್ಟ್ರಗಳ ಪ್ರವಾಸದ ಕೊನೆಯ ಚರಣವಾಗಿ ನ್ಯೂಜಿಲೆಂಡ್‌ಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ, ಭಾರತೀಯ ರಾಜತಾಂತ್ರಿಕ ಅಧಿಕಾರಿಗಳ ಜೊತೆಗಿನ ಸಂವಾದದ ವೇಳೆ ಪತ್ರಕರ್ತರು ಈ ಪ್ರಶ್ನೆ ಎತ್ತಿದ್ದರು.

ಮೋದಿ ಅವರು ಪತ್ರಿಕಾಗೋಷ್ಠಿಯನ್ನು ಏಕೆ ಮಾಡಿಲ್ಲ ಎಂಬ ನೇರ ಪ್ರಶ್ನೆಗೆ ಉತ್ತರಿಸಿದ ಅಧಿಕಾರಿ ರುದ್ರೇಂದ್ರ ಟಂಡನ್, ನಾನೊಬ್ಬ ಸರ್ಕಾರಿ ಅಧಿಕಾರಿಯಾಗಿ ಪ್ರಧಾನಿಯವರ ರಾಜಕೀಯ ವಿಧಾನವನ್ನು ಪ್ರಶ್ನಿಸುವುದು ಸರಿಯಲ್ಲ. ಅವರು ಅತ್ಯಂತ ಯಶಸ್ವಿ ರಾಜಕಾರಣಿ. ಮೋದಿಯವರು ಅಪ್ಪಟ ಭಾರತೀಯ ರಾಜಕಾರಣಿ. ಸಾಮಾನ್ಯವಾಗಿ ಭಾರತೀಯ ರಾಜಕಾರಣಿಗಳು ಮಧ್ಯವರ್ತಿಗಳ ಮೂಲಕ ಮಾತನಾಡುವುದಕ್ಕಿಂತ ಮತದಾರರೊಂದಿಗೆ ನೇರ ಸಂಪರ್ಕ ಹೊಂದಲು ಒಲವು ತೋರುತ್ತಾರೆ. ಅವರಿಗೆ ಬೇರೆಯವರ ಮೂಲಕ ಅಥವಾ ಮಧ್ಯವರ್ತಿಗಳ ಮೂಲಕ ಸಂವಹನ ನಡೆಸುವುದು ಇಷ್ಟವಾಗುವುದಿಲ್ಲ ಎಂದು ವಿವರಿಸಿದರು.

ಮೋದಿಯವರು ತಮ್ಮ ಮತದಾರರೊಂದಿಗೆ ನೇರ ಸಂಪರ್ಕ ಸಾಧಿಸುವ ಕಲೆಯನ್ನು ಕರಗತ ಮಾಡಿಕೊಂಡಿದ್ದಾರೆ. ಆ ನಿಟ್ಟಿನಲ್ಲಿ ಅವರು ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಹೀಗಾಗಿಯೇ ಅವರು ಸತತ ಮೂರನೇ ಅವಧಿಗೆ ಆಯ್ಕೆಯಾಗಿದ್ದು, ನಮ್ಮ ದೇಶದ ಅತಿ ಹೆಚ್ಚು ಕಾಲ ಸೇವೆ ಸಲ್ಲಿಸಿದ ಪ್ರಧಾನಿಗಳಲ್ಲಿ ಒಬ್ಬರಾಗಿದ್ದಾರೆ ಎಂದು ಟಂಡನ್ ಎದುರಾದ ಪ್ರಶ್ನೆಗೆ ಹಾರಿಕೆ ಉತ್ತರ ನೀಡಿದರು.

ಇದೇ ರೀತಿಯ ಪ್ರಶ್ನೆಯೊಂದು ಪ್ರಧಾನಿಯವರ ನಾರ್ವೆ ಭೇಟಿಯ ಸಂದರ್ಭದಲ್ಲಿಯೂ ಎದುರಾಗಿತ್ತು. ಮೇ ತಿಂಗಳಲ್ಲಿ ಓಸ್ಲೋದಲ್ಲಿ ನಾರ್ವೆ ಪ್ರಧಾನಿ ಜೊನಾಸ್ ಗಹರ್ ಸ್ಟೋರ್ ಅವರೊಂದಿಗಿನ ಜಂಟಿ ಮಾಧ್ಯಮಗೋಷ್ಠಿ ಮುಗಿಸಿ ತೆರಳುವ ವೇಳೆ, ಹೆಲ್ಲೆ ಲಿಂಗ್ ಎಂಬ ಪತ್ರಕರ್ತೆ ಪ್ರಧಾನಿ ಮೋದಿಯವರು ಪತ್ರಕರ್ತರ ಪ್ರಶ್ನೆಗಳಿಗೆ ಏಕೆ ಉತ್ತರಿಸುವುದಿಲ್ಲ ಎಂದು ಕೂಗಿ ಕೇಳಿದ್ದರು. ಆ ಸಂದರ್ಭದಲ್ಲಿ ಪ್ರಧಾನಿಯವರು ಯಾವುದೇ ಪ್ರತಿಕ್ರಿಯೆ ನೀಡಿರಲಿಲ್ಲ. ಈ ವಿಚಾರವು ತದನಂತರ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿತ್ತು.

## ವಿಯೆಟ್ನಾಂನಲ್ಲಿ ದೋಣಿ ದುರಂತ: 15 ಭಾರತೀಯರ ಜಲಸಮಾಧಿ

**ಹನೋಯ್, ಜು.11:** ಪುಕಾಕ್ ದ್ವೀಪದ ಬಳಿ ಭಾರತೀಯ ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಸ್ಪೀಡ್ ಬೋಟ್ ಮಗುಚಿಬಿದ್ದು 15 ಮಂದಿ ಮೃತಪಟ್ಟಿದ್ದಾರೆ ಎಂದು ಹನೋಯ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಶನಿವಾರ ವರದಿ ಮಾಡಿದೆ.



ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದ್ದು, ಭಾರತೀಯ ಮಿಷನ್ ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದೆ. ಘಟನೆಯ ಸಂಪೂರ್ಣ ವಿವರಗಳನ್ನು ಸ್ಥಳೀಯ ಅಧಿಕಾರಿಗಳು ಸಂಗ್ರಹಿಸುತ್ತಿದ್ದಾರೆ ಎಂದು ರಾಯಭಾರ ಕಚೇರಿ ತಿಳಿಸಿದೆ.

ದಕ್ಷಿಣ ವಿಯೆಟ್ನಾಂ ಅಧಿಕಾರಿಗಳು ಸ್ಪೀಡ್ಬೋಟ್ ಮಗುಚಿಬಿದ್ದ ಘಟನೆಯಲ್ಲಿ 15 ಭಾರತೀಯ ಪ್ರವಾಸಿಗರು ಸಾವನ್ನಪ್ಪಿದ್ದಾರೆ ಎಂದಿದ್ದಾರೆ. ವಿಯೆಟ್ನಾಂನ ಫುಕಾಕ್ ಬಳಿಯ ಹಾನ್ ಮಿ ರುಟ್ ದ್ವೀಪದಿಂದ ಆನ್ ಥೋಯ್ ಬಂದರಿಗೆ ಹೋಗುತ್ತಿದ್ದಾಗ ಸಮುದ್ರಕ್ಕೆ ಸುಮಾರು 400 ಮೀಟರ್ (440 ಗಜ) ದೂರದಲ್ಲಿ ದೋಣಿ ಮಗುಚಿ ಬಿದ್ದಿದೆ. ದೋಣಿಯಲ್ಲಿ 32 ಭಾರತೀಯ ಪ್ರವಾಸಿಗರು ಮತ್ತು ನಾಲ್ವರು ಸಿಬ್ಬಂದಿ ಹಡಗಿನಲ್ಲಿದ್ದರು. ಈ ಪೈಕಿ 21 ಜನರನ್ನು ರಕ್ಷಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಹಾಯವಾಣಿ: ಮೊದಲ ನಿಯಂತ್ರಣ ಕೊಠಡಿಯನ್ನು +84 36 281 7930, +84 91 552 37 14, ಮತ್ತು +84 33 452 0414 ನಲ್ಲಿ ಸಂಪರ್ಕಿಸಬಹುದು. ಹನೋಯ್‌ನಲ್ಲಿರುವ ಎರಡನೇ ನಿಯಂತ್ರಣ ಕೊಠಡಿಯನ್ನು +84 91 308 9165ನಲ್ಲಿ ಸಂಪರ್ಕಿಸಬಹುದು. ಯಾವುದೇ ಸಹಾಯ ಅಥವಾ ಪ್ರಶ್ನೆಗಳಿಗೆ ಲಭ್ಯವಿದೆ ಎಂದು ಭಾರತೀಯ ಮಿಷನ್ ತಿಳಿಸಿದೆ.

## ಬಲೂಚಿಸ್ತಾನ ಕಾರ್ಯಾಚರಣೆಯಲ್ಲಿ 88 ಉಗ್ರರ ಹತ್ಯೆ

**ಬಲೂಚಿಸ್ತಾನ, ಜು.11:** ಪಾಕಿಸ್ತಾನದ ಪ್ರಕ್ಷುಬ್ಧ ಬಲೂಚಿಸ್ತಾನ್ ಪ್ರಾಂತ್ಯದಲ್ಲಿ ಜುಲೈ 5ರಂದು ಆರಂಭವಾದ ಪ್ರಮುಖ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯಲ್ಲಿ ಇದುವರೆಗೆ ಕನಿಷ್ಠ 88 ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ ಎಂದು ಸರ್ಕಾರ ಶನಿವಾರ ತಿಳಿಸಿದೆ. ಕಳೆದ 24 ಗಂಟೆಗಳಲ್ಲಿ ಒಂಬತ್ತು ಭಯೋತ್ಪಾದಕರನ್ನು ಹೊಡೆದುರುಳಿಸಲಾಗಿದೆ ಎಂದು ಆಂತರಿಕ ಸಚಿವ ಮೊಹ್ಸಿನ್ ನಖ್ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಆಪರೇಷನ್ ಶಬಾನ್‌ನಲ್ಲಿ ಜುಲೈ 5 ರಿಂದ ಇದುವರೆಗೆ ಹತ್ಯೆಯಾದ ಒಟ್ಟು ಭಯೋತ್ಪಾದಕರ ಸಂಖ್ಯೆ 88ಕ್ಕೆ ತಲುಪಿದೆ" ಎಂದು ಹೇಳಿದ್ದಾರೆ.

ಸೇನೆ, ಅರೆಸೇನಾ ರೇಂಜರ್ಗಳು ಮತ್ತು ಫ್ರಾಂಟಿಯರ್ ಕಾರ್ಪ್ಸ್ ಈ ಉಗ್ರ ವಿರೋಧಿ ಕಾರ್ಯಾಚರಣೆಯಲ್ಲಿ ಭಾಗವಹಿಸುತ್ತಿದ್ದು, ಇದು ಉಗ್ರರ ವಿರುದ್ಧ ನೆಲ ಮತ್ತು ವಾಯು ದಾಳಿಗಳನ್ನು ಒಳಗೊಂಡಿದೆ.

ಜುಲೈ 5 ರಂದು ಬಲೂಚಿಸ್ತಾನದಾದ್ಯಂತ ದಂಗೆಕೋರರು ಹಲವಾರು ಸಂಘಟಿತ ದಾಳಿಗಳನ್ನು ನಡೆಸಿದ ನಂತರ ಪಾಕಿಸ್ತಾನ ಸರ್ಕಾರ ಈ ಕಾರ್ಯಾಚರಣೆಯನ್ನು ಪ್ರಾರಂಭಿಸಿತು.

ಜಿಯಾರತ್ ಜಿಲ್ಲೆಯ ಮಂಗಿ ಅಣೆಕಟ್ಟಿನ ಪೊಲೀಸ್ ಚೆಕ್ಪಾಯಿಂಟ್ ಅನ್ನು ಗುರಿಯಾಗಿಸಿಕೊಂಡು ಅತ್ಯಂತ ಭೀಕರ ಉಗ್ರ ದಾಳಿ ನಡೆಸಲಾಯಿತು. ಈ ದಾಳಿಯಲ್ಲಿ ಉಗ್ರರು, ಒಂಬತ್ತು ಪೊಲೀಸರನ್ನು ಕೊಂದು ಇತರ 18 ಜನರನ್ನು ಅಪಹರಿಸಿದ್ದರು.

## ಜಮ್ಮು–ಕಾಶ್ಮೀರ ಪಾಕ್‌ನ ಭಾಗ: ಬಾಂಗ್ಲಾದಿಂದ ನಕ್ಷೆ ಪ್ರದರ್ಶನ

ಢಾಕಾ, ಜು.11: ಸಾರ್ಕ್ ಪುನರುಜ್ಜೀವನಗೊಳಿಸುವ ಮಾರ್ಗಗಳು ಕುರಿತು ಢಾಕಾದ ಅಂತಾರಾಷ್ಟ್ರೀಯ ಮತ್ತು ಕಾರ್ಯತಂತ್ರ ಅಧ್ಯಯನ ಸಂಸ್ಥೆಯಲ್ಲಿ ಆಯೋಜಿಸಿದ್ದ ವಿಚಾರಸಂಕಿರಣದಲ್ಲಿ ತಪ್ಪು ರೀತಿಯಲ್ಲಿ ಭಾರತೀಯ ನಕ್ಷೆಯನ್ನು ಪ್ರದರ್ಶಿಸಿದ ಬಾಂಗ್ಲಾ ದೇಶದ ನಡೆದ ಭಾರತ ಆಕ್ಷೇಪ ವ್ಯಕ್ತಪಡಿಸಿದೆ




ಬಾಂಗ್ಲಾದೇಶದ ಮಾಜಿ ಹೈಕಮೀಷನರ್ ಅಹ್ಮದ್ ತಾರಿಕ್ ಕರೀಮ್ ಪ್ರಸ್ತುತಿ ಪಡಿಸುತ್ತಿದ್ದಾಗ ಜಮ್ಮು ಮತ್ತು ಕಾಶ್ಮೀರವನ್ನು ಪಾಕಿಸ್ತಾನದ ಭಾಗವಾಗಿ ಚಿತ್ರಿಸುವ ನಕ್ಷೆಯನ್ನು ಪ್ರದರ್ಶಿಸಿದರು. ಇದನ್ನು ನೋಡಿದ ಢಾಕಾದಲ್ಲಿರುವ ಭಾರತೀಯ ಹೈಕಮೀಷನ್‌ನ ಎರಡನೇ ಕಾರ್ಯದರ್ಶಿ ಪೂಜಾಕುಮಾರಿ ಝಾ ತಕ್ಷಣವೇ ಆಕ್ಷೇಪಿಸಿದರು. ನಕ್ಷೆ ತಪ್ಪಾಗಿದೆ ಮತ್ತು ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವಾಗಿದೆ ಎಂದು ಸ್ಪಷ್ಟವಾಗಿ ಹೇಳಿದರು. ನಕ್ಷೆಯನ್ನು ಸಾಂಕೇತಿಕವಾಗಿ ಮಾತ್ರ ಬಳಸಲಾಗಿದೆ. ನಿಜವಾದ ಗಡಿಗಳನ್ನು ಪ್ರತಿಬಿಂಬಿಸುವುದಿಲ್ಲ ಎಂದು ಕರೀಮ್ ಸ್ಪಷ್ಟಪಡಿಸಿದರು. ಇದಕ್ಕೆ ತೃಪ್ತರಾಗದ ಪೂಜಾ, ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವಾಗಿದೆ. ಅದನ್ನು ತಪ್ಪಾಗಿ ನಿರೂಪಿಸಲಾಗಿದೆ ಎಂದು ಪುನರುಚ್ಚರಿಸಿದರು. ನಂತರ ಕರೀಮ್, ಪೂಜಾರನ್ನು ಭಾರತದಿಂದ ಬಂದವರೇ ಎಂದು ಕೇಳಿದರು, ಅದಕ್ಕೆ ತಾನು ಭಾರತೀಯ ಹೈಕಮಿಷನ್ ಅಧಿಕಾರಿ ಎಂದು ಪರಿಚಯಿಸಿಕೊಂಡರು. ಕರೀಮ್ ಇದು ಗೊತ್ತಿದೆ ಎಂದು ತಮ್ಮ ಪ್ರಸ್ತುತಿಯನ್ನು ಮುಂದುವರೆಸಿದರು.

ಬಾಂಗ್ಲಾದೇಶದ ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವೆ ಶಮಾ ಒಬೈದ್ ಸೆಮಿನಾರ್‌ನಲ್ಲಿ ಮುಖ್ಯ ಅತಿಥಿಯಾಗಿದ್ದರು. ತಮ್ಮ ಭಾಷಣದಲ್ಲಿ, ದಕ್ಷಿಣ ಏಷ್ಯಾದಲ್ಲಿ ಹೆಚ್ಚಿನ ಸಹಕಾರದ ಅಗತ್ಯವನ್ನು ಒತ್ತಿ ಹೇಳಿದರು ಮತ್ತು ಸಾರ್ಕ್ ಅನ್ನು ಪುನರುಜ್ಜೀವನಗೊಳಿಸಲು ಹಲವಾರು ಸಲಹೆಗಳನ್ನು ನೀಡಿದರು. ಸಂಸ್ಥೆಗೆ ಸುಧಾರಿತ ಕಾರ್ಯಾಚರಣೆಯ ಸಾಮರ್ಥ್ಯ, ಬಲವಾದ ಆರ್ಥಿಕ ಸ್ಥಿತಿ ಮತ್ತು ಪರಿಣಾಮಕಾರಿ ಅನುಸರಣೆಯ ಅಗತ್ಯವಿದೆ ಎಂದು ಹೇಳಿದರು. ಮುಂಬರುವ ತಿಂಗಳುಗಳಲ್ಲಿ ಬಾಂಗ್ಲಾದೇಶವು ಸಾರ್ಕ್ ದೇಶಗಳೊಂದಿಗೆ ಹಲವಾರು ವಿಶ್ವಾಸ–ನಿರ್ಮಾಣ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ ಪರಿಗಣಿಸುತ್ತಿದೆ ಎಂದು ಹೇಳಿದರು. ಇದರಲ್ಲಿ ಢಾಕಾದಲ್ಲಿ ಸಾರ್ಕ್ ರಾಯಭಾರಿಗಳೊಂದಿಗೆ ಚರ್ಚೆಗಳು ಮತ್ತು ಕಠ್ಮಂಡುವಿನಲ್ಲಿ ಸಾರ್ಕ್ ಸಚಿವಾಲಯವನ್ನು ಸಂಪರ್ಕಿಸುವುದು ಸೇರಿವೆ. ಝಾ ಮತ್ತು ಕರೀಮ್ ನಡುವಿನ ಈ ಸಂಭಾಷಣೆಯ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೇಗವಾಗಿ ವೈರಲ್ ಆಗಿದೆ. ಅನೇಕ ಭಾರತೀಯ ಬಳಕೆದಾರರು ಝಾ ಅವರನ್ನು ಹೊಗಳಿದರು, ಯಾವುದೇ ವಿಳಂಬವಿಲ್ಲದೆ ತಪ್ಪು ನಕ್ಷೆಯನ್ನು ಆಕ್ಷೇಪಿಸುವ ಮೂಲಕ ಭಾರತದ ದೃಷ್ಟಿಕೋನವನ್ನು ಬಲವಾಗಿ ಪ್ರಸ್ತುತಪಡಿಸಿದ್ದಾರೆ ಎಂದು ಹೇಳಿದರು.

ಜುಲೈ 8 ರಂದು ನಡೆದ ಮತ್ತು USTR ವೆಬ್‌ಸೈಟ್‌ನಲ್ಲಿ ಪ್ರಕಟವಾದ ವಿಚಾರಣೆಯ ಲಿಖಿತ ಪ್ರತಿಲೇಖನದ ಪ್ರಕಾರ, ಗಖಖಿಖ ನಿರ್ಣಯವು ದೇಶಾದ್ಯಂತ ಸುಂಕಗಳಿಗೆ ತಾರ್ಕಿಕತೆಯನ್ನು ಒದಗಿಸುವುದಿಲ್ಲ ಮತ್ತು 46 ಆರ್ಥಿಕತೆಗಳನ್ನು (ಭಾರತ ಸೇರಿದಂತೆ) ಒಂದೇ ವರ್ಗಕ್ಕೆ ಸೇರಿಸುತ್ತದೆ ಎನ್ನಲಾಗಿದೆ.

ಯುಎಸ್‌ಟಿಆರ್ ಸೆಕ್ಷನ್ 301 ತನಿಖಾ ವರದಿಯು ಬಲವಂತದ ಕಾರ್ಮಿಕರಿಂದ ಉತ್ಪಾದಿಸಲ್ಪಟ್ಟ ಸರಕುಗಳ ಆಮದಿನ ಮೇಲೆ ನಿಷೇಧವನ್ನು ವಿಧಿಸಲು ಮತ್ತು ಪರಿಣಾಮಕಾರಿಯಾಗಿ ಜಾರಿಗೊಳಿಸಲು ವಿಫಲವಾಗಿದೆ ಎಂದು ಕಳವಳ ವ್ಯಕ್ತಪಡಿಸುತ್ತದೆ. ನಿರ್ಣಯವು ಬೆರಳೆಣಿಕೆಯಷ್ಟು ಆರ್ಥಿಕತೆಗಳ ಅಧ್ಯಯನಗಳನ್ನು ಆಧರಿಸಿದ್ದು, ವಿಶಾಲ ವ್ಯಾಪಾರ ಮಾದರಿಗಳನ್ನು ಅವಲಂಬಿಸಿಲ್ಲ. ಈ ವಿಧಾನವು ವಿಶೇಷವಾಗಿ ದೋಷಪೂರಿತವಾಗಿದೆ ಎಂದು ಭಾರತ ಹೇಳಿದೆ.

